ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಆಗಸ್ಟ್ 29 ಗುರುವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 134 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ತನಿಖೆಗೆ ರಾಜ್ಯಪಾಲರ ಅನುಮತಿ ವಿರುದ್ಧ ಸಿಎಂ ಸಿದ್ದರಾಮಯ್ಯ ಅರ್ಜಿ ವಿಚಾರಣೆ ಇಂದು

ದೇಶಾದ್ಯಂತ ತೀವ್ರ ಕುತೂಹಲ ಕೆರಳಿಸಿರುವ ಕೋರ್ಟ್ ನಿರ್ಧಾರ

● ಕಾಂಗ್ರೆಸ್ ವಲಯದಲ್ಲಿ ಆತಂಕ ಪರಿಸ್ಥಿತಿ ● ಘಟಾನುಘಟಿಗಳಿಂದ ವಾದ ಮಂಡನೆ



ಬೆಂಗಳೂರು, ಆ.28(ಕೆಎಂಶಿ)– ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ತಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿರುವ ಅರ್ಜಿಯ ಮುಂದುವರೆದ ವಿಚಾರಣೆಯನ್ನು ಹೈಕೋರ್ಟ್ ನಾಳೆ ಕೈಗೆತ್ತಿಕೊಳ್ಳಲಿದೆ.

ನ್ಯಾಯಾಲಯ ಯಾವ ತೀರ್ಪು ನೀಡಲಿದೆ ಎಂಬುದರ ಬಗ್ಗೆ ರಾಜ್ಯವೇ ಮಾತ್ರವಲ್ಲ ಇಡೀ ದೇಶವೇ ತೀವ್ರ ಕುತೂಹಲದಿಂದ ನೋಡುತ್ತಿದೆ. ಅದರಲ್ಲೂ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಏನಾಗುತ್ತದೆಯೋ ಎಂಬ ಆತಂಕ ಕಾಡಲಾರಂಭಿಸಿದೆ. ತೀರ್ಪು ಮುಖ್ಯಮಂತ್ರಿ ವಿರುದ್ಧ ಬಂದರೆ ಅದನ್ನು ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಸಿದ್ದರಾಮಯ್ಯ ಪರ ವಕೀಲರು ಸಿದ್ಧತೆ ಮಾಡಿಕೊಂಡಿದ್ದಾರಂತೆ.

ಮತ್ತೊಂದೆಡೆ ಕಾಂಗ್ರೆಸ್ ವರಿಷ್ಠರು ಪಕ್ಷದ ಸರ್ಕಾರವನ್ನು ಉಳಿಸಿಕೊಳ್ಳಲು ಒಂದೆಡೆ ಕಾನೂನು ಹೋರಾಟದ ಜೊತೆಗೆ ಪರ್ಯಾಯ ನಾಯಕತ್ವದ ಬಗ್ಗೆಯೂ ಕಸರತ್ತು ಆರಂಭಿಸಿದ್ದಾರೆ. ನ್ಯಾಯಾಲಯದ ಮುಂದುವರೆದ ವಿಚಾರಣೆಗೂ ಮುನ್ನವೇ ಎಐಸಿಸಿ ವರಿಷ್ಠರು ಮುಖ್ಯಮಂತ್ರಿ ಹಾಗೂ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರನ್ನು ಕರೆಸಿ ಸಮಾಲೋಚನೆ ಮಾಡಿದೆ. ನೀವು ನಡೆಸುವ ಕಾನೂನು ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದು ಹೇಳಿದೆಯಾದರೂ ಸಂಕಷ್ಟ ಸ್ಥಿತಿ ಎದುರಾದರೆ ಸರ್ಕಾರವನ್ನು ಉಳಿಸಿಕೊಳ್ಳಲು ಪರ್ಯಾಯ ಮಾರ್ಗದ ಬಗ್ಗೆ ಯೋಚನೆ ಮಾಡಿದೆ. ಈ ಉದ್ದೇಶದಿಂದಲೇ ಗೃಹಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ದೆಹಲಿಗೆ ಕರೆಸಿಕೊಂಡಿದ್ದ ವರಿಷ್ಠರು ಅವರೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ್ದಾರೆ. ದೆಹಲಿ ಭೇಟಿಯ ಬಗ್ಗೆ ಇಂದು ಸುದ್ದಿಗಾರರೊಂದಿಗೆ ಮಾಹಿತಿ ಹಂಚಿಕೊಂಡ ಡಾ.ಪರಮೇಶ್ವರ್, ಪಕ್ಷದ ಅಧಿನಾಯಕ ರಾಹುಲ್‌ಗಾಂಧಿ ಅವರು ಪ್ರತ್ಯೇಕವಾಗಿ ಹಲವು ವಿಚಾರಗಳ ಬಗ್ಗೆ ಮಾತನಾಡಿದ್ದಾರೆ. ಇದರಲ್ಲಿ ಪಕ್ಷ ಸಂಘಟನೆ ವಿಚಾರವೂ ಪ್ರಸ್ತಾಪವಾಗಿದೆ. ರಾಜ್ಯಪಾಲರ ನಿರ್ಣಯದ ವಿರುದ್ಧ ವರಿಷ್ಠರು ಮುಖ್ಯಮಂತ್ರಿ ಪರ ನಿಂತಿದ್ದಾರೆ. ನಾನು ಕಾಂಗ್ರೆಸ್‌ನ ಶಿಸ್ತಿನ ಸಿಪಾಯಿ. ಪಕ್ಷದಲ್ಲಿ ಯಾವುದೇ ಜವಾಬ್ದಾರಿ ವಹಿಸಿದರೂ ಪ್ರಾಮಾಣಿಕವಾಗಿ ಹಿಂದೆಲ್ಲಾ ಮಾಡಿದ್ದೇನೆ. ಮುಂದೆಯೂ ಮಾಡುತ್ತೇನೆ ಎಂದು ತಿಳಿಸಿದ್ದಾರೆ. ನಮ್ಮ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಮಾತನಾಡಿರುವ ಎಲ್ಲಾ ವಿಚಾರವನ್ನು ಬಹಿರಂಗವಾಗಿ ಹೇಳಲಾಗದು. ಅದು ಪಕ್ಷದ ಆಂತರಿಕ ವಿಚಾರ ಎಂದು ಹೇಳಿ, ಮುನ್ನಡೆದರು.



ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ — ಮುಖ್ಯಮಂತ್ರಿ ಸಿದ್ದರಾಮಯ್ಯ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ತಮ್ಮ ಕುಟುಂಬಕ್ಕೆ 14 ನಿವೇಶನ ಪಡೆದಿರುವುದು ಅಧಿಕಾರ ದುರುಪಯೋಗ. ಹಾಗಾಗಿ ಭ್ರಷ್ಟಾಚಾರ ಕಾಯ್ದೆಯಡಿ ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರು ನೀಡಿರುವ ಅಭಿಯೋಜನೆಯನ್ನು ಪ್ರಶ್ನಿಸಿರುವ ಅರ್ಜಿಯು ಹೈಕೋರ್ಟ್‌ನ ಜನಪ್ರತಿನಿಧಿಗಳ ನ್ಯಾಯಾಲಯದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಮುಂದಿದೆ. ಅರ್ಜಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್‌ನ ಹಿರಿಯ ವಕೀಲರ ಜೊತೆಗೆ ರಾಜ್ಯದ ಘಟಾನುಘಟಿ ನ್ಯಾಯವಾದಿಗಳು ಮುಖ್ಯಮಂತ್ರಿಗಳ ಪರ ಮತ್ತು ವಿರೋಧವಾಗಿ ವಾದ ಮಾಡಿದ್ದಾರೆ. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಪರವಾಗಿ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು ಇನ್ನೂ ವಾದ ಮಾಡಬೇಕಿದೆ. ಮುಖ್ಯಮಂತ್ರಿ ಅವರ ಪರ ಸುಪ್ರೀಂಕೋರ್ಟಿನ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ ಅವರು ತಮ್ಮ ಪ್ರಾಸ್ತಾವಿಕ ವಾದ ಮಂಡಿಸಿದ್ದಾರೆ. ಇವರ ಜೊತೆಗೆ ಅರ್ಜಿದಾರರ ಪರವಾಗಿ ಮಾಜಿ ಅಡ್ವೋಕೇಟ್ ಜನರಲ್ ■6ನೇ ಪುಟಕ್ಕೆ

ಮಂಡ್ಯ ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನ

ಎನ್‌ಡಿಎ ಪಾಲು!

ಅಧಿಕಾರ ಹಿಡಿಯುವ ಕನಸು ಕಂಡಿದ್ದ ಕಾಂಗ್ರೆಸ್‌ಗೆ ಮುಖಭಂಗ



ನೂತನ ಅಧ್ಯಕ್ಷ ಪ್ರಕಾಶ್, ಉಪಾಧ್ಯಕ್ಷ ಅರುಣ್‌ಕುಮಾರ್

● ಅಧ್ಯಕ್ಷರಾಗಿ ಜೆಡಿಎಸ್‌ನ ಪ್ರಕಾಶ್, ಉಪಾಧ್ಯಕ್ಷರಾಗಿ ಬಿಜೆಪಿಯ ಅರುಣ್‌ಕುಮಾರ್ ● ಮಾಜಿ ಮುಖ್ಯಮಂತ್ರಿಯೊಬ್ಬರ ಮತದಾನಕ್ಕೆ ಸಾಕ್ಷಿಯಾದ ಮಂಡ್ಯ ನಗರಸಭೆ ● ನಗರಸಭೆ ಇತಿಹಾಸದಲ್ಲೇ ಮೊದಲ ಬಾರಿಗೆ ಬಿಜೆಪಿಗೆ ಒಲಿದ ಉಪಾಧ್ಯಕ್ಷ ಸ್ಥಾನ

ಮಂಡ್ಯ, ಆ.28(ಮೋಹನ್‌ರಾಜ್)– ತೀವ್ರ ಕುತೂಹಲ ಕೆರಳಿಸಿದ್ದ ಮಂಡ್ಯ ನಗರಸಭೆಯ ಅಂತಿಮ 14 ತಿಂಗಳ ಅವಧಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಬುಧವಾರ ಚುನಾವಣೆ ನಡೆದು, ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ (ಎನ್‌ಡಿಎ) ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದ್ದು, ಕಾಂಗ್ರೆಸ್‌ಗೆ ತೀವ್ರ ಮುಖಭಂಗವಾಗಿದೆ.

ನಗರಸಭೆಯ ಆವರಣದಲ್ಲಿರುವ ಧರಣಪ್ಪ ಸಭಾಂಗಣದಲ್ಲಿ ನಡೆದ ಚುನಾವಣೆಯಲ್ಲಿ ಮಂಡ್ಯ ನಗರಸಭೆಯ ನೂತನ ಅಧ್ಯಕ್ಷರಾಗಿ ಜೆಡಿಎಸ್‌ನ 21ನೇ ವಾರ್ಡ್‌ನ ಸದಸ್ಯ ಎಂ.ವಿ.ಪ್ರಕಾಶ್ (ನಾಗೇಶ್) ಹಾಗೂ ಉಪಾಧ್ಯಕ್ಷರಾಗಿ 6ನೇ ವಾರ್ಡ್‌ನ ಸದಸ್ಯ ಬಿಜೆಪಿಯ ಎಂ.ಪಿ.ಅರುಣ್‌ಕುಮಾರ್ ಆಯ್ಕೆಯಾಗಿದ್ದು, ಅಧ್ಯಕ್ಷ ಸ್ಥಾನದ ಜೆಡಿಎಸ್‌ನ ಪ್ರಕಾಶ್, ಉಪಾಧ್ಯಕ್ಷ ಸ್ಥಾನದ ಬಿಜೆಪಿಯ ಎಂ.ಪಿ.ಅರುಣ್‌ಕುಮಾರ್ ಕ್ರಮವಾಗಿ ತಲಾ 19 ಮತ ಪಡೆದು ಜಯಭೇರಿ ಭಾರಿಸಿದರು. ಇತ್ತ ಕಾಂಗ್ರೆಸ್‌ನಿಂದ ಅಧ್ಯಕ್ಷ ಸ್ಥಾನದ ಅಭ್ಯರ್ಥಿಯಾಗಿದ್ದ ಜೆಡಿಎಸ್ ಬಂಡಾಯ ಸದಸ್ಯ 21ನೇ ವಾರ್ಡ್‌ನ ಎಚ್.ಎಸ್.ಮಂಜು, ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಪಕ್ಷೇತರ ಸದಸ್ಯ 26ನೇ ವಾರ್ಡ್‌ನ ಜಾಕೀರ್ ಪಾಷಾ ಕ್ರಮವಾಗಿ ತಲಾ 18 ಮತ ಪಡೆದರು. ಅಂತಿಮವಾಗಿ ಚುನಾವಣಾಧಿಕಾರಿಯೂ ಆದ ಉಪ ವಿಭಾಗಾಧಿಕಾರಿ ಎಂ.ಶಿವಮೂರ್ತಿ ಎಂ.ವಿ.ಪ್ರಕಾಶ್ ಅಧ್ಯಕ್ಷರಾಗಿ, ಎಂ.ಪಿ.ಅರುಣ್‌ಕುಮಾರ್ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆಂದು ಘೋಷಿಸಿದರು.

ಇದಕ್ಕೂ ಮುನ್ನ ಬೆಳಿಗ್ಗೆ 9 ಗಂಟೆಗೆ ಜೆಡಿಎಸ್‌ನ ಪ್ರಕಾಶ್ ಅಧ್ಯಕ್ಷ ಸ್ಥಾನಕ್ಕೆ, ಬಿಜೆಪಿಯ ಅರುಣ್ ಕುಮಾರ್ ಉಪಾಧ್ಯಕ್ಷ ■5ನೇ ಪುಟಕ್ಕೆ

ಜನೋಪಯೋಗಿ ಕೆಲಸ–ಕಾರ್ಯಕ್ಕೆ ಎಳ್ಳು–ನೀರು ಬಿಟ್ಟ ಮುಡಾ


50:50; 'ಸೆಕ್ಯೂರಿಟಿ ಬಾಂಡ್' ಆಯ್ತು, ಈಗ 'ಸೆಟಲ್‌ಮೆಂಟ್ ಡೀಡ್' ಮೂಲಕ ಧೋಕಾ!

● ದಟ್ಟಗಳ್ಳಿಯ ಖಾಸಗಿ ಬಡಾವಣೆ ಚರಂಡಿ ಜಾಗದ ಬದಲಿಗೆ ವಿಜಯನಗರ 4ನೇ ಹಂತದಲ್ಲಿ ಬೆಲೆಬಾಳುವ ನಿವೇಶನ ಮಂಜೂರು ● ಮಂಜೂರಾದ ದಿನವೇ ಎನ್.ಮಂಜುನಾಥ ಎಂಬುವರಿಗೆ ಕ್ರಯಪತ್ರದ ಮೂಲಕ ಸಂಪೂರ್ಣ ಮಾಲೀಕತ್ವ ವಹಿಸಿದ ಮುಡಾ ಅಧಿಕಾರಿಗಳು ● ಟೈಟಲ್ ಡೀಡ್ ನೋಂದಣಿಯಾದ ಹತ್ತೇ ದಿನದಲ್ಲಿ ಎಸ್.ಶಿವಣ್ಣ ಎಂಬುವರಿಗೆ 'ಸೆಟಲ್‌ಮೆಂಟ್ ಡೀಡ್' ಮೂಲಕ ನಿವೇಶನ ಮಾರಾಟ

ಎಸ್.ಟಿ.ರವಿಕುಮಾರ್

ಮೈಸೂರು, ಆ.28– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಏಕಸದಸ್ಯ ಆಯೋಗ ಬೆಂಗಳೂರಿನ ಕುಮಾರ ಕೃಪಾ ಅತಿಥಿ ಗೃಹದಲ್ಲಿ ತನಿಖೆ ನಡೆಸುತ್ತಿರುವ ಬೆನ್ನಲ್ಲೇ ನಿವೇಶನ ಹಂಚಿಕೆ ಬ್ರಹ್ಮಾಂಡ ಭ್ರಷ್ಟಾಚಾರದ ಮಜಲುಗಳು ಒಂದೊಂದಾಗಿ ಬಯಲಾಗುತ್ತಿವೆ.

ಸರ್ಕಾರದ ಆದೇಶ, ಹೈಕೋರ್ಟ್ ನಿರ್ದೇಶನ, ಪ್ರಾಧಿಕಾರದ ಸಭಾ ನಿರ್ಣಯಗಳು ಹಾಗೂ ಸುಪ್ರೀಂಕೋರ್ಟ್‌ನ ಕೆಲವು ಪ್ರಕರಣಗಳ ತೀರ್ಪುಗಳನ್ನು ನೆಪವಾಗಿರಿಸಿಕೊಂಡು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಅಧಿಕಾರಿಗಳು, ನಿಯಮ, ಕುಡಾ ಕಾಯ್ದೆಯನ್ನು ಗಾಳಿಗೆ ತೂರಿ ಅಕ್ರಮವಾಗಿ ಶೇ.50:50ರ ಅನುಪಾತದಡಿ, ಪ್ರೋತ್ಸಾಹದಾಯಕ ಹಾಗೂ 'ಬದಲಿ' ಯೋಜನೆಗಳಡಿ ಸರಿ ಸುಮಾರು 5000ಕ್ಕೂ ಹೆಚ್ಚು ನಿವೇಶನಗಳನ್ನು ಭೂ ಮಾಲೀಕರು, ಅವರ ಜಿಪಿಎ ಪ್ರತಿನಿಧಿಗಳೆನ್ನುವ ಬಿಲ್ಡರ್‌ಗಳು, ರಿಯಲ್ ಎಸ್ಟೇಟ್ ಉದ್ಯಮಿಗಳು, ಮಧ್ಯವರ್ತಿಗಳಿಗೆ ಹಂಚಿಕೆ ಮಾಡಿ ಪ್ರಾಧಿಕಾರ ಹಾಗೂ ಸರ್ಕಾರದ ಬೊಕ್ಕಸಕ್ಕೆ ಸಾವಿರಾರು ಕೋಟಿ ರೂ. ನಷ್ಟ ಉಂಟು ಮಾಡಿರುವುದು ಈಗಾಗಲೇ ಜಗಜ್ಜಾಹೀರಾಗಿದೆ. ■6ನೇ ಪುಟಕ್ಕೆ



SETTLEMENT DEED

This SETTLEMENT DEED is made on this the Twenty Second Day of May, Two Thousand and Twenty Four, (22.05.2024), at Mysore,

BY:

BETWEEN:

SRI.N.MANJUNATH,
Son of Late Sri. Nagaraja Rao,
Aged about 58 years,
Residing at No.252, 4th Cross, 7th Main, 4th Phase,
Dollors Colony, J. P. Nagar, Bangalore – 560 078.
PAN No.AIEPM3996P / Aadhar No. 2994 1031 7666

Hereinafter referred to as the SETTLOR

IN FAVOUR OF:

Sri. SHIVANNA.S.,
S/o. Late Savandayya,
Aged about 56 years,
Residing at No. 58, 2nd Cross, Kadkola Post,
Beeregowdanahundi, Mysore – 571311.
AADHAAR: 2787 9721 4289/ PAN No. HPAPS2636A.

Hereinafter referred to as the SETTLEE

(The expressions SETTLOR and SETTLEE shall mean and include his / her / their respective heirs, legal representatives, executors, administrators, agents, assigns, successors in office, nominee/s etc.)

WITNESSETH AS FOLLOWS:-

Whereas, the SETTLOR is the absolute owner of the Vacant Site bearing No.11809/A, Vijayanagar 4th Stage, 2nd Phase, Mysore, taking within the jurisdiction of the Mysore Urban Development Authority, morefully described in the Schedule given hereunder and hereinafter called as the 'Schedule Property'. The Vendor having acquired the same in pursuance of a registered Sale Deed dated 20.05.2024, registered as Document No. MDA-1-00150-2024-25, in Book 1,

ಸೆಟಲ್‌ಮೆಂಟ್ ಡೀಡ್




ಮುಡಾ ಕಚೇರಿ ಮುಂದಿರುವ ನಾಲ್ವಡಿ ಕೃಷ್ಣರಾಜ ಒಡೆಯರ್ ಪುತ್ಥಳಿ: ಮೈಸೂರಿನ ಜನರಿಗೆ ವಸತಿ ಕಲ್ಪಿಸಲೆಂದು ಮುಡಾ ಸ್ಥಾಪಿಸಿದ ಮಹಾರಾಜ ಕೃಷ್ಣರಾಜ ಒಡೆಯರ್–IV ಅವರ ಹೆಸರಿಗೆ ರಾಜಕಾರಣಿಗಳು ಮತ್ತು ಅಧಿಕಾರಿಗಳು ಈಗ ಮಹಾ ಕಳಂಕ ತಂದಿದ್ದಾರೆ.


ಸಿದ್ದರಾಮಯ್ಯರ ಪತ್ನಿ ಪಾರ್ವತಿ ವಿರುದ್ಧ ಪೊಲೀಸರಿಗೆ ದೂರು

ಮೂಲ ದಾಖಲಾತಿ ನಾಶಪಡಿಸಿ ಹೊಸ ದಾಖಲಾತಿ ಸೇರ್ಪಡೆ ಆರೋಪ

ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ದೂರುದಾರ

● ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಭಾಗಿ ಆರೋಪ ● ದಾಖಲೆಗಳಲ್ಲಿನ ಪಾರ್ವತಿ ಸಹಿಗಳಲ್ಲಿ ವ್ಯತ್ಯಾಸ ● ಅಕ್ಷರಗಳ ಮೇಲೆ ವೈಟ್ನರ್ ಹಾಕಿರುವುದು ಸ್ಪಷ್ಟ ● ಕೃತ್ಯಕ್ಕೆ ಸಹಕರಿಸಿದವರ ವಿರುದ್ಧ ಕ್ರಮಕ್ಕೆ ಆಗ್ರಹ





ಸಿಎಂ ಪತ್ನಿ ಪಾರ್ವತಿ ಅವರ ಸಹಿಯಲ್ಲಿನ ವ್ಯತ್ಯಾಸ

ಮೈಸೂರು, ಆ.28(ಬಿಎಲ್‌ಯು)– ಮುಡಾದಿಂದ 14 ನಿವೇಶನ ಪಡೆದಿರುವ ಸಂಬಂಧ ಸುಳ್ಳು ದಾಖಲೆ ಸೃಷ್ಟಿಸಿ, ಕಡತದಲ್ಲಿರುವ ನೈಜ ದಾಖಲೆ ನಾಶ ಮಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯರ ಪತ್ನಿ ಪಾರ್ವತಿ ಹಾಗೂ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆರ್‌ಟಿಐ ಕಾರ್ಯಕರ್ತ ಸ್ನೇಹಮಹಿ ಕೃಷ್ಣ, ಮೈಸೂರು ಲಕ್ಷ್ಮಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಸಂಬಂಧ ಹೈಕೋರ್ಟ್‌ನಲ್ಲಿ ನಾಳೆ (ಆಗಸ್ಟ್ 29) ವಿಚಾರಣೆ ನಡೆಯಲಿದ್ದು, ಇದಕ್ಕೂ ಮುನ್ನ ಪ್ರಕರಣ ಈಗ ಮತ್ತೊಂದು ಟ್ವಿಸ್ಟ್ ಪಡೆದಿದೆ.



ಸ್ನೇಹಮಯಿ ಕೃಷ್ಣ

ಪಾರಾಗಲು ಮತ್ತೆ ತಪ್ಪು!: ಪಾರ್ವತಿ ಅವರು 14 ನಿವೇಶನ ಪಡೆಯಲು ಸಿದ್ದರಾಮಯ್ಯ ಪ್ರಭಾವ ಬೀರಿದ್ದಾರೆಂದು ರಾಜ್ಯಪಾಲರಿಗೆ ದೂರು ನೀಡಿದ್ದ ಇದೇ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ, ಸಂಕಷ್ಟದಿಂದ ಪಾರಾಗಲು ಅವರು ಮತ್ತೊಂದು ತಪ್ಪೆಸಗಿದ್ದಾರೆ ಎಂದು ದಾಖಲಾತಿ ಸಮೇತ ಪೊಲೀಸರಿಗೆ ದೂರು ನೀಡಿದ್ದಾರೆ. ಯಾವ ರೀತಿ ನಕಲಿ ದಾಖಲೆ ಸೃಷ್ಟಿಸಿದ್ದಾರೆ, ■6ನೇ ಪುಟಕ್ಕೆ

ಸ್ನೇಹಮಯಿ ಕೃಷ್ಣ ಆಪ್ತರಿಂದ 100 ಕೋಟಿಗೆ ಬೇಡಿಕೆ

ಮೈಸೂರು, ಆ.28(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಮುಡಾದಿಂದ 14 ನಿವೇಶನ ಪಡೆದಿರುವ ಪ್ರಕರಣದಲ್ಲಿ ಕಾನೂನು ಹೋರಾಟದಿಂದ ಹಿಂದೆ ಸರಿಯಲು ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಪರವಾಗಿ ಆತನ ಆಪ್ತರೊಬ್ಬರು 100 ಕೋಟಿ ಬೇಡಿಕೆ ಇಟ್ಟಿದ್ದರು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪಿಸಿದರು. ನಗರದ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 15 ದಿನದ ಹಿಂದೆ ಸ್ನೇಹಮಯಿ ಕೃಷ್ಣನ ಆಪ್ತರೊಬ್ಬರು ನನ್ನನ್ನು ಭೇಟಿ ಮಾಡಿ 100 ಕೋಟಿ ರೂಪಾಯಿ ಕೇಳಿದ್ದರು ಎಂದು ಆಪಾದಿಸಿದರು.



ಎಂ.ಲಕ್ಷ್ಮಣ

ಸ್ನೇಹಮಯಿ ಕೃಷ್ಣ ಆರೋಪ ಮಾಡಿರುವಂತೆ ಪಾರ್ವತಿ ಅವರಾಗಲೀ, ನಾನಾಗಲೀ ಯಾವುದೇ ಸುಳ್ಳು ದಾಖಲೆ ಸೃಷ್ಟಿಸಿಲ್ಲ, ದಾಖಲೆಗಳನ್ನು ನಾಶ ಮಾಡಿಲ್ಲ. ಪಾರ್ವತಿ ಅವರ ಸಹಿಗಳಲ್ಲಿ ಕೂಡ ಯಾವುದೇ ವ್ಯತ್ಯಾಸವಿಲ್ಲ. ಸ್ನೇಹಮಯಿ ಕೃಷ್ಣನೇ ■5ನೇ ಪುಟಕ್ಕೆ

ಮೈಸೂರು ಮಿತ್ರ ಗುರುವಾರ 29 ಆಗಸ್ಟ್ 2024

ಮಹಿಳೆಯ ಮೇಲಿನ ದೌರ್ಜನ್ಯ ಖಂಡಿಸಿ ಪ್ರತಿಭಟನೆ

ಮೈಸೂರು, ಆ.28(ಜಿಎ)–ದೇಶದಲ್ಲಿ ಮಹಿಳೆಯರ ಮೇಲಿನ ಅತ್ಯಾಚಾರ, ಕೊಲೆ ಹಾಗೂ ಲೈಂಗಿಕ ಕಿರುಕುಳ ಪ್ರಕರಣಗಳನ್ನು ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ದೇಶದಲ್ಲಿ ಪ್ರತಿದಿನ ಮಹಿಳೆಯರ ಮೇಲೆ ಅತ್ಯಾಚಾರ, ಕೊಲೆ, ಲೈಂಗಿಕ ದೌರ್ಜನ್ಯದಂತಹ ಪ್ರಕರಣಗಳು ನಡೆಯುತ್ತಲೇ ಇವೆ. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ರೂಪಿಸಿದ್ದರೂ ಕಾರ್ಯ ನಿರ್ವಹಣೆಯಲ್ಲಿ ವಿಫಲವಾಗಿವೆ. ಕೆಲ ದಿನಗಳ ಹಿಂದೆ, ಪಶ್ಚಿಮ ಬಂಗಾಳದ ಕೊಲ್ಕತ್ತಾದಲ್ಲಿನ ಆರ್.ಜಿ.ಕರ್ ವೈದ್ಯಕೀಯ ಆಸ್ಪತ್ರೆಯಲ್ಲಿ ವೈದ್ಯ ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿ ಕೊಲೆಗೈದ ಪ್ರಕರಣ ನಾಗರಿಕ ಸಮಾಜವೇ ನಾಚಿಕೆಪಡುವಂತಾಗಿದೆ. ಜನಸೇವೆ ಮಾಡುತ್ತಿರುವ ವೇಳೆಯಲ್ಲಿ ವೈದ್ಯರ ಮೇಲೆ ಅತ್ಯಾಚಾರವೆಸಗಿ ಕೊಲೆಗೈದಿರುವುದು ಖಂಡನೀಯ. ಜತೆಗೆ ಉತ್ತರಾಖಂಡದ ಡೆಹ್ರಾಡೂನ್ ಬಸ್ ನಿಲ್ದಾಣದಲ್ಲಿ ಯುವತಿ ಮೇಲೆ ಸಾಮೂಹಿಕ ಅತ್ಯಾಚಾರ, ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಮಾಡಿರುವುದು ಹೇಯ ಕೃತ್ಯ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಕೊಲ್ಕತ್ತಾದ ವೈದ್ಯ ವಿದ್ಯಾರ್ಥಿನಿ ಮೇಲಿನ ಅತ್ಯಾಚಾರ ಮತ್ತು ಕೊಲೆ ಆರೋಪಿಗಳನ್ನು ಕೂಡಲೇ ಬಂಧಿಸಿ ಅವರಿಗೆ ಮರಣದಂಡನೆ ವಿಧಿಸಬೇಕು. ಮಹಿಳೆಯರ ಮೇಲಿನ ಹೀನಕೃತ್ಯ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷತೆಯ ವಾತಾವರಣ ನಿರ್ಮಿಸಬೇಕು. ಎಲ್ಲಾ ಹೆಣ್ಣುಮಕ್ಕಳ ವಸತಿ ನಿಲಯಗಳ ಬಳಿ ಸೂಕ್ತ ಭದ್ರತೆ ಒದಗಿಸಬೇಕು. ಮಹಿಳೆಯರ ವಿರುದ್ಧ ನಡೆಯುವ ಅಪರಾಧಗಳ ಕುರಿತು ರಾಜ್ಯ, ಕೇಂದ್ರ ಸರ್ಕಾರಗಳು ತುರ್ತಾಗಿ ಕ್ರಮ ಕೈಗೊಳ್ಳಬೇಕು. ಕೋರ್ಟ್‌ಗಳಲ್ಲಿ ಮಹಿಳೆಯರ ಮೇಲಿನ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ ತಪ್ಪಿತಸ್ಥರಿಗೆ ಶಿಕ್ಷೆ ನೀಡಬೇಕು. ಮಹಿಳೆಯರು ನಿರ್ಭೀತಿಯಿಂದ ಜೀವಿಸಲು ಕಾನೂನು ರೀತಿಯಲ್ಲಿ ಸೂಕ್ತ ರಕ್ಷಣೆ ನೀಡಬೇಕು. ಅತ್ಯಾಚಾರಿಗಳಿಗೆ ವಿಧಿಸುವ ಶಿಕ್ಷೆಯನ್ನು ಕಠಿಣಗೊಳಿಸಬೇಕು. ಈಗಿರುವ ಶಿಕ್ಷೆಯ ವಿಧಾನ ಬದಲಿಸಿ ಶೀಘ್ರದಲ್ಲಿ ತೀರ್ಪು ನೀಡಿ ಅತ್ಯಾಚಾರಿಗಳನ್ನು ಮಟ್ಟ ಹಾಕಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ವಲಯ ಸಂಯೋಜಕಿ ಆರೋಕ್ಯ ಮೇರಿ, ಸಾವಿತ್ರಿ, ಮೋಲಿ ಪೊಟಾಡೊ, ಪ್ರಕಾಶ್ ಮೇರಿ, ಮೇರಿ ಕ್ರಿಸ್ಟೀನಾ, ಸ್ಟೆಲ್ಲಾ ಮತ್ತಿತರರು ಪಾಲ್ಗೊಂಡಿದ್ದರು.



ಮಹಿಳೆಯರ ಮೇಲಿನ ಅತ್ಯಾಚಾರ, ಕೊಲೆ ಹಾಗೂ ಲೈಂಗಿಕ ಕಿರುಕುಳ ಪ್ರಕರಣಗಳನ್ನು ಖಂಡಿಸಿ ಮಹಿಳೋದಯ ಮಹಿಳಾ ಒಕ್ಕೂಟದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ 'ಗೋಕುಲಾಷ್ಟಮಿ' ಸಂಭ್ರಮ


ಮೈಸೂರಿನ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ ಬುಧವಾರ 'ಗೋಕುಲಾಷ್ಟಮಿ'ಯನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು.

ಮೈಸೂರು, ಆ.28–ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಯದುಗಿರಿ ಯತಿರಾಜ ಶಾಖಾ ಮಠದ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ 'ಗೋಕುಲಾಷ್ಟಮಿ'ಯನ್ನು ಸಂಭ್ರಮ, ಸಡಗರದಿಂದ ಆಚರಿಸಲಾಯಿತು.

ಕೆ.ಆರ್.ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಸ್ವಾಮಿಯ ದರ್ಶನ ಪಡೆದರು. ನಂತರ ಮಾತನಾಡಿ, ಈ ದೇವಸ್ಥಾನಕ್ಕೆ ತನ್ನದೇ ಆದ ಇತಿಹಾಸ, ವೈಶಿಷ್ಟ್ಯತೆ ಇದೆ. ಕೆ.ಆರ್. ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ಅವರ ನೇತೃತ್ವದಲ್ಲಿ ದೇವಸ್ಥಾನದಲ್ಲಿ ದಿನನಿತ್ಯ ಪೂಜಾ ಕೈಂಕರ್ಯಗಳು ಯಶಸ್ವಿಯಾಗಿ ನೆರವೇರುತ್ತಿರುವುದು ಸಂತಸದ ಸಂಗತಿ. ಇಲ್ಲಿನ ಮತ್ತೊಂದು ವಿಶೇಷ ಎಂದರೆ ಪ್ರತಿ ತಿಂಗಳು ಬರುವ 'ಸ್ವಾತಿ' ವಿಶೇಷ ಪೂಜೆ ಎಂದು ತಿಳಿಸಿದರು. ಮೇಲುಕೋಟೆ ಶ್ರೀ ಚೆಲುವನಾರಾಯಣಸ್ವಾಮಿ ದೇವಸ್ಥಾನದ ಪ್ರಥಮ ಸ್ಥಾನಿಕರಾದ ರಾಮಪ್ರಿಯ, ಕೈಗಾರಿಕೋದ್ಯಮಿ ಚಂದ್ರಶೇಖರ್, ಕೆ.ಆರ್. ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ಹಾಗೂ ನೂರಾರು ಮಂದಿ ಭಕ್ತಾದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಾಜಿ ಸೈನಿಕರಿಗೆ ಅಭಿನಂದನೆ; ಸಂಗೀತ ನಮನ


ಮೈಸೂರಿನ ಸರಸ್ವತಿಪುರಂನಲ್ಲಿರುವ ರೋಟರಿ ವೆಸ್ಟ್ ಸಭಾಂಗಣದಲ್ಲಿ ಕರ್ನಾಟಕ ಮಾಜಿ ಸೈನಿಕರ ಸಂಘ, ರೋಟರಿ ಮೈಸೂರು ಪಶ್ಚಿಮ ಹಾಗೂ ಸುಮಯ ಪ್ರಾಪರ್ಟೀಸ್ ಮತ್ತು ಮೀಡಿಯಾ ಟಿ.ವಿ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅಭಿನಂದನೆ ಹಾಗೂ ಸಂಗೀತ ನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ನಿವೃತ್ತ ಯೋಧರಾದ ಗಜಾನನ ಪಿ.ಭಟ್, ಪುಟ್ಟಸ್ವಾಮಿ, ಕೆ.ಪಿ.ದಿವಾಕರ್, ಡಾ.ಬಸವರಾಜು, ಸುಮಯ ಪ್ರಾಪರ್ಟೀಸ್‌ನ ಶಿವಬಾಬು, ಮಂಜುನಾಥ್, ಉಮೇಶ್, ನರಸಿಂಹ ಉಪಸ್ಥಿತರಿದ್ದರು.

ಕಳೆದ ಬಾರಿಯ ದಸರಾ ಟಿಕೆಟ್ ಮಾರಾಟ ಅವ್ಯವಹಾರದಿಂದ 2.63 ಕೋಟಿ ನಷ್ಟ

ವಾಯ್ಸ್ ಆಫ್ ಪೀಪಲ್ ಸಂಘಟನೆಯಿಂದ ರಾಜ್ಯಪಾಲರಿಗೆ ದೂರು

ಮೈಸೂರು, ಆ.28(ಜಿಎ)–2023ರ ದಸರಾ ಮಹೋತ್ಸವದಲ್ಲಿ ಟಿಕೆಟ್ ಮಾರಾಟದ ಅವ್ಯವಹಾರದಿಂದ ಸುಮಾರು 2.63 ಕೋಟಿ ರೂ. ರಾಜ್ಯದ ಬೊಕ್ಕಸಕ್ಕೆ ನಷ್ಟವಾಗಿದ್ದು ಸೂಕ್ತ ತನಿಖೆ ನಡೆಸುವಂತೆ ವಾಯ್ಸ್ ಆಫ್ ಪೀಪಲ್ ಸಂಘಟನೆಯು ರಾಜ್ಯಪಾಲರಿಗೆ ದೂರು ಸಲ್ಲಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಎ.ವಸಂತಕುಮಾರ್ ಚವಾಣ್ ಮಾತನಾಡಿ, ಕಳೆದ ಬಾರಿಯ ದಸರಾ ವೇಳೆ ಖರೀದಿ ಪಾಸ್‌ಗಳನ್ನು ಆನ್‌ಲೈನ್ ಮೂಲಕ ಮಾತ್ರವೇ ಮಾರಾಟ ಮಾಡಲಾಗುವುದು. ಆಫ್‌ಲೈನ್‌ನಲ್ಲಿ ಖರೀದಿಗೆ ಅವಕಾಶವಿಲ್ಲ ಎಂದು ಡಿಸಿ ತಿಳಿಸಿದ್ದರು. ಆದರೆ, ಸರ್ಕಾರದ ಅಧಿಕೃತ ವೆಬ್‌ಸೈಟ್‌ನಲ್ಲಿ ಆನ್‌ಲೈನ್ ಮಾರಾಟ ಶುರುವಾದ ಕೆಲವೇ ನಿಮಿಷಗಳಲ್ಲಿ ಸರ್ವರ್ ಸಮಸ್ಯೆ ಎಂದು ತೋರಿಸಿ, ರಾಜಕಾರಣಿಗಳು, ಅಧಿಕಾರಿ ವರ್ಗಕ್ಕೆ ನೀಡಲಾಗಿದೆ. ಇದರಿಂದಾಗಿ ಜನಸಾಮಾನ್ಯರು ಖರೀದಿ ಪಾಸ್ ಮೂಲಕ ದಸರಾ ನೋಡದಂತಾಯಿತು ಎಂದು ಕಿಡಿಕಾರಿದರು.


ಈ ಅವ್ಯವಹಾರದಿಂದಾಗಿ ಬೊಕ್ಕಸಕ್ಕೆ ಸುಮಾರು 2.63,38,000 ಕೋಟಿ ನಷ್ಟವಾಗಿದೆ. ಸಾರ್ವಜನಿಕರಿಗೆ ಗೋಲ್ಡ್ ಕಾರ್ಡ್, ಅರಮನೆ ಆವರಣ (2, 3 ಸಾವಿರ ರೂ.)ದ ಟಿಕೆಟ್ ಹಾಗೂ ಪಂಜಿನ ಕವಾಯತ್ ವೀಕ್ಷಿಸಲು 25,703 ಟಿಕೆಟ್ ಮೀಸಲಿಡಲಾಗಿತ್ತು. ಅದರೆ, ಇವುಗಳಲ್ಲಿ ಕೇವಲ (ಶೇ.6ರಷ್ಟು) 4,617 ಟಿಕೆಟ್ ಮಾತ್ರ ಸಾರ್ವಜನಿಕರಿಗೆ ನೀಡಲಾಗಿದೆ. ರಾಜಕಾರಣಿಗಳು ಹಾಗೂ ಅಧಿಕಾರಿ ವರ್ಗಕ್ಕೆ (ಶೇ.68ರಷ್ಟು) 54,157 ಟಿಕೆಟ್ ಮೀಸಲಿಡಲಾಗಿತ್ತು. ಆದರೆ ಅವರಿಗೆ ಸಾರ್ವಜನಿಕರ ಟಿಕೆಟ್‌ಗಳನ್ನು ಸೇರಿಸಿ, ಹೆಚ್ಚುವರಿಯಾಗಿ ಶೇ.94ರಷ್ಟು ಟಿಕೆಟ್ ನೀಡುವ ಮೂಲಕ ಸಾರ್ವಜನಿಕರು ಜಂಬೂಸವಾರಿ ವೀಕ್ಷಣೆ ಮಾಡದಂತೆ ವಂಚಿಸಿದ್ದಾರೆ ಎಂದರು.

ಈ ಸಂಬಂಧ ನಮ್ಮ ಸಂಘಟನೆಯು ಈಗಾಗಲೇ ರಾಜ್ಯಪಾಲರು, ಸರ್ಕಾರದ ಮುಖ್ಯ ಕಾರ್ಯದರ್ಶಿ, ಲೋಕಾಯುಕ್ತರು ಹಾಗೂ ಪ್ರಾದೇಶಿಕ ಆಯುಕ್ತರಿಗೆ ಕ್ರಮಕ್ಕಾಗಿ ದೂರು ನೀಡಿರುವುದಾಗಿ ತಿಳಿಸಿದರು. ಗೋಷ್ಠಿಯಲ್ಲಿ ಸುಜಯ್‌ಕುಮಾರ್ ಸಿಂಗ್, ರಾಕೇಶ್, ಅರ್ಜುನ್, ಪ್ರದೀಪ್ ಇದ್ದರು.

ಆ.31ರಂದು ಕೆ–ಸೆಟ್, ಯುಜಿಸಿ ನೆಟ್ ಪರೀಕ್ಷಾ ತರಬೇತಿ ಶಿಬಿರ

ಮೈಸೂರು,ಆ.28–ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರವು ಕೆ–ಸೆಟ್ ಮತ್ತು ಯುಜಿಸಿ–ನೆಟ್ ಪರೀಕ್ಷೆಗಳಿಗೆ 45 ದಿನಗಳ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭವನ್ನು ಆ.31ರಂದು ಬೆಳಗ್ಗೆ 11 ಗಂಟೆಗೆ ಕರಾಮುವಿವಿ ಆವರಣದಲ್ಲಿರುವ ಕಾವೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ರಾಣಿ ಚನ್ನಮ್ಮ ವಿವಿ ಕುಲಪತಿ ಪ್ರೊ.ಸಿ.ಎಂ.ತ್ಯಾಗರಾಜ, ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ್, ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾನಿಲಯದ ಪ್ರೊ.ಜಿ.ಆರ್.ಅಂಗಡಿ ಭಾಗವಹಿಸಲಿದ್ದು, ಕರಾಮುವಿವಿ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸಲಿದ್ದಾರೆ.

ವೀರಶೈವ ಲಿಂಗಾಯತ ರಾಜ್ಯ ಸಮಿತಿ ಸದಸ್ಯರಿಗೆ ಸನ್ಮಾನ


ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಜ್ಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಆಯ್ಕೆಯಾದ ಮೊತ್ತ ಬಸವರಾಜು ಅವರನ್ನು ಕೋಶಾಧ್ಯಕ್ಷ ವರುಣ ಮಹೇಶ್ ಸನ್ಮಾನಿಸಿದರು. ಚುನಾವಣೆಯಲ್ಲಿ ತಮ್ಮ ಪರ ಕಾರ್ಯನಿರ್ವಹಿಸಿದ ಮನುಗನಹಳ್ಳಿ ಎಂ.ಪಿ.ಮುಂಜುನಾಥ್, ಎನ್.ಲಿಖಿತ ಅವರನ್ನೂ ಈ ವೇಳೆ ಅಭಿನಂದಿಸಲಾಯಿತು. ಗುರೂರು ಮಲ್ಲೇಶ್, ಸುರೇಶ್, ಕಾಡಸೂರು ರಾಜಣ್ಣ, ಬೀರಿಹುಂಡಿ ಮಲ್ಲೇಶ್, ಹೆಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ರುದ್ರಪ್ಪ, ಚುಂಚುರಾಯನಹುಂಡಿ ಮರಪ್ಪ ಹಾಗೂ ಸಮಾಜದ ಇನ್ನಿತರ ಮುಖಂಡರು ಹಾಜರಿದ್ದರು.

ಅಭಿರುಚಿ ಶಿಕ್ಷಣ ರತ್ನ ಪ್ರಶಸ್ತಿ ಪ್ರದಾನ...


ಮೈಸೂರಿನ ಅಭಿರುಚಿ ಬಳಗ, ಅನುಭವಗಳ ಹಂಚಿಕೆ ವೇದಿಕೆ ವತಿಯಿಂದ ಯುವ ಸಾಹಿತಿ, ಕನ್ನಡ ಸಹಾಯಕ ಪ್ರಾಧ್ಯಾಪಕ ಡಾ. ಪರಮೇಶ ಕೆ.ಉತ್ತನಹಳ್ಳಿ ಅವರಿಗೆ ಕೃಷ್ಣಮೂರ್ತಿಪುರಂನಲ್ಲಿರುವ ನಮನ ಕಲಾಮಂಟಪದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ 2024ರ ಅಭಿರುಚಿ ಶಿಕ್ಷಣ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಅಭಿರುಚಿ ಬಳಗದ ಅಧ್ಯಕ್ಷ ಎನ್.ವಿ.ರಮೇಶ್, ಉಪಾಧ್ಯಕ್ಷೆ ಉಮಾ ರಮೇಶ್, ಸಂಸ್ಕೃತಿ ಚಿಂತಕ ರಘುರಾಂ ವಾಜಪೇಯಿ, ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯದರ್ಶಿ ಮ.ನ.ಲತಾ ಮೋಹನ್ ಮತ್ತಿತರರು ಉಪಸ್ಥಿತರಿದ್ದರು.

ಎನ್‌ಎಸ್‌ಜಿ ಮುಖ್ಯಸ್ಥರಾಗಿ ಹಿರಿಯ ಐಪಿಎಸ್ ಅಧಿಕಾರಿ ಬಿ.ಶ್ರೀನಿವಾಸನ್ ನೇಮಕ

ನವದೆಹಲಿ: ಹಿರಿಯ ಐಪಿಎಸ್ ಅಧಿಕಾರಿ ಬಿ.ಶ್ರೀನಿವಾಸನ್ ಅವರನ್ನು ರಾಷ್ಟ್ರೀಯ ಭದ್ರತಾ ಪಡೆಯ (ಎನ್‌ಎಸ್‌ಜಿ) ಮುಖ್ಯಸ್ಥರನ್ನಾಗಿ ನೇಮಿಸಲಾಗಿದೆ. ಅವರು ಬಿಹಾರ ಕೆಡರ್‌ನ 1992ರ ಬ್ಯಾಚ್ ಐಪಿಎಸ್ ಅಧಿಕಾರಿಯಾಗಿದ್ದಾರೆ.

ಶ್ರೀನಿವಾಸನ್ ಅವರನ್ನು ಎನ್‌ಎಸ್‌ಜಿ ಮಹಾ ನಿರ್ದೇಶಕರನ್ನಾಗಿ ನೇಮಿಸಲು ಕೇಂದ್ರ ಸಚಿವ ಸಂಪುಟದ ನೇಮಕಾತಿ ಸಮಿತಿಯು ಅನುಮೋದನೆ ನೀಡಿದೆ. ಅವರ ಅಧಿಕಾರ ಅವಧಿಯು 2027ರ ಆಗಸ್ಟ್ 31ರ ವರೆಗೆ ಇರಲಿದೆ ಎಂದು ಸಿಬ್ಬಂದಿ ಸಚಿವಾಲಯದ ಆದೇಶದಲ್ಲಿ ತಿಳಿಸಿದೆ.


ಬಿ.ಶ್ರೀನಿವಾಸನ್

ಕ್ಯಾಬಿನೆಟ್‌ನ ನೇಮಕಾತಿ ಸಮಿತಿಯು ಶ್ರೀನಿವಾಸನ್ ಅವರನ್ನು ಎನ್‌ಎಸ್‌ಜಿಯ ಮಹಾನಿರ್ದೇಶಕರಾಗಿ ನೇಮಕ ಮಾಡಲು ಅನುಮೋದನೆ ನೀಡಿದೆ, ಈ ಹುದ್ದೆಗೆ ಸೇರ್ಪಡೆಗೊಂಡ ದಿನಾಂಕದಿಂದ ಮತ್ತು ಆಗಸ್ಟ್ 31, 2027ರವರೆಗೆ ಶ್ರೀನಿವಾಸನ್ ಎನ್‌ಎಸ್‌ಜಿಯ ಮಹಾನಿರ್ದೇಶಕರಾಗಿರಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ. ಜಮ್ಮು ಮತ್ತು ಕಾಶ್ಮೀರದ ವಿಶೇಷ ಮಹಾನಿರ್ದೇಶಕರಾಗಿ ನಿಯೋಜಿಸಲಾದ ನಲಿನ್ ಪ್ರಭಾತ್ ನಿರ್ಗಮನದ ಬಳಿಕ ಎನ್‌ಎಸ್‌ಜಿ ಡೈರೆಕ್ಟರ್ ಜನರಲ್ ಆಗಿ ಬಿಹಾರ ಕೇಡರ್‌ನ 1992ರ ಬ್ಯಾಚ್ ಐಪಿಎಸ್ ಅಧಿಕಾರಿ ಶ್ರೀನಿವಾಸನ್ ಅವರನ್ನು ನೇಮಕ ಮಾಡಲಾಗಿದೆ.

ನಿಧನ

ಎನ್.ನಾರಾಯಣರಾವ್


ಮೈಸೂರು,ಆ.28–ಮೈಸೂರು ಗಾಯತ್ರಿಪುರಂ ನಿವಾಸಿ ಹಾಗೂ ಮರಾಠಿ ಸಮುದಾಯದ ಮುಖಂಡ ಎನ್.ನಾರಾಯಣರಾವ್ (93) ಅವರು ಮಂಗಳವಾರ ರಾತ್ರಿ ನಿಧನರಾದರು. ಮೃತರು ಮಕ್ಕಳಾದ ಸುನೀತಬಾಯಿ, ಸುಜಾತಬಾಯಿ, ಪತ್ರ ಬರಹಗಾರರಾದ ಕೆ.ಎನ್.ಸುಜೈ, ಎನ್.ಜಗನ್ನಾಥ್, ಸುಮತಿ ಬಾಯಿ, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಇಂದು (ಬುಧವಾರ) ಮಧ್ಯಾಹ್ನ 1.30 ಗಂಟೆಗೆ ಚಾಮುಂಡಿಬೆಟ್ಟದ ತಪ್ಪಲಿನ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರೇಖಾ ಕೆ.ಜೆ.


ನಂಜನಗೂಡು ಟೌನ್, ಅಶೋಕಪುರಂ ನಿವಾಸಿ ಹಾಗೂ ಸೊಪ್ಪಿನ ವ್ಯಾಪಾರಿ ರೇಖಾ ಕೆ.ಜೆ. (42) ಅನಾರೋಗ್ಯದಿಂದ ಮಂಗಳವಾರ ನಿಧನರಾದರು. ಮೃತರು ತಾಯಿ ಸೊಪ್ಪಿನ ವ್ಯಾಪಾರಿಗಳ ಸಂಘದ ಅಧ್ಯಕ್ಷೆ ಶ್ರೀಮತಿ ಮರಿಲಕ್ಷ್ಮಮ್ಮ, ಸಹೋದರರಾದ ಮಹದೇವ್, ದೇವರಾಜ್, ನಾಗೇಶ್, ಕೆಂಪರಾಜ್, ಪುಟ್ಟರಾಜು ಹಾಗೂ ಸಹೋದರಿಯರಾದ ಮಹಾಲಕ್ಷ್ಮಿ, ಪವಿತ್ರ, ಮಂಜುಳಾ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ ನಂಜನಗೂಡಿನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿ.ಗೀತಾ


ಮೈಸೂರಿನ ನ್ಯಾಯಾಂಗ ಬಡಾವಣೆ ನಿವಾಸಿ ಮತ್ತು ನ್ಯಾಯಾಂಗ ಇಲಾಖೆ ನಿವೃತ್ತ ಶಿರಸ್ತೇದಾರ್ ಶ್ರೀಮತಿ ಪಿ.ಗೀತಾ (64) ಮಂಗಳವಾರ ಹೃದಯಾಘಾತದಿಂದ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತಿ ನಾರಾಯಣ್, ಮಗ ಜೀವನ್ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆಯು ಮಂಗಳವಾರ ಸಂಜೆ ಚಾಮುಂಡಿಬೆಟ್ಟದ ಹರಿಶ್ಚಂದ್ರ ಘಾಟ್‌ನಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪ್ರೊ. ಚಂದ್ರಶೇಖರ ಅಡಿಗ


ಮೈಸೂರು ವಿಶ್ವವಿದ್ಯಾನಿಲಯದ ಗಣಿತಶಾಸ್ತ್ರ ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಾಪಕರು ಹಾಗೂ ದೀಪಾನಗರ ನಿವಾಸಿ ಪ್ರೊ.ಚಂದ್ರಶೇಖರ ಅಡಿಗ (67) ಬುಧವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ ಶಾಂತಿ ಶೇಖರ್, ಪುತ್ರರಾದ ನಿಖಿಲ್ ಶೇಖರ್ ಮತ್ತು ನಿರ್ಮಲ್ ಶೇಖರ್, ಸೊಸೆಯಂದಿರು ಸೇರಿದಂತೆ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಪ್ರೊ.ಚಂದ್ರಶೇಖರ್ ಅವರು ಖ್ಯಾತ ಗಣಿತಶಾಸ್ತ್ರಜ್ಞ ಶ್ರೀನಿವಾಸ ರಾಮಾನುಜಂ ಅವರ ಕೃತಿಗಳಲ್ಲಿ ಹಾಗೂ ಗ್ರಾಫ್ ಥಿಯರಿ ಮತ್ತು ನಂಬರ್ ಥಿಯರಿ ಕ್ಷೇತ್ರದಲ್ಲಿ ಪರಿಣತರಾಗಿದ್ದರು. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅಫ್ಜಲ್ ಪಾಷ


ಮೈಸೂರಿನ ಬನ್ನಿಮಂಟಪ ನಿವಾಸಿ ಅಫ್ಜಲ್ ಪಾಷ (53) ಬುಧವಾರ ಹೃದಯಾಘಾತದಿಂದ ನಿಧನರಾದರು.

ಮೃತರು ಪತ್ನಿ, ನಾಲ್ವರು ಪುತ್ರಿಯರು, ಇಬ್ಬರು ಪುತ್ರರು, ಮೊಮ್ಮಕ್ಕಳು, ಮಾವ ಮೊಹಮ್ಮದ್ ಶೊಯೇಬ್ ಹಾಗೂ ಅಪಾರ ಬಂಧು–ಬಳಗ, ಸ್ನೇಹಿತರನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಟಿಪ್ಪು ಸರ್ಕಲ್‌ನಲ್ಲಿರುವ ಮುಸ್ಲಿಮರ ರುದ್ರಭೂಮಿ ಗೇಟ್ ನಂ.8ರಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

29.08.2024 ಗುರುವಾರ, ಮಳೆ ನಕ್ಷತ್ರ: ಮಖ 17.08.2024 ರಿಂದ 30.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
ತಿಥಿ: ಏಕಾದಶಿ, ನಕ್ಷತ್ರ: ಆರ್ದ್ರಾ, ರಾಹುಕಾಲ : ಮಧ್ಯಾಹ್ನ 1.30 ರಿಂದ 3 ಗಂಟೆಯವರೆಗೆ

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಹೈಪೋಥೈರಾಯ್ಡಿಸಮ್ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ ಸಂಜೆ 4.30ರವರೆಗೆ

■ **ಸಂತ ಫಿಲೋಮಿನಾ ಕಾಲೇಜು :** ಹತ್ತನೇ ಘಟಿಕೋತ್ಸವ, ಮುಖ್ಯ ಅತಿಥಿಗಳು : ಚೆನ್ನೈನ ಕಾಲೇಜು ಕನೆಕ್ಟ್, ಲಾರ್ಸನ್ & ಟೊಬ್ರೋ ಎಜುಕೇಶನ್ ಟೆಕ್ನಾಲಜಿ ಮುಖ್ಯಸ್ಥರಾದ ಎಂ.ಎಫ್.ಫೆಬಿನ್, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಅಧ್ಯಕ್ಷತೆ : ಮೈಸೂರು ಧರ್ಮಪ್ರಾಂತ್ಯದ ಆಡಳಿತಾಧಿಕಾರಿ ಡಾ.ಬರ್ನಾರ್ಡ್ ಮೊರಾಸ್, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಪ್ರೀತಿ ಕ್ಯಾನ್ಸರ್ ಸೆಂಟರ್:** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಲಕ್ಷ್ಮೀಪುರಂ, ಬೆಳಗ್ಗೆ 10ರಿಂದ.

■ **ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ :** ಅಖಿಲ ಭಾರತ ರಸಪ್ರಶ್ನೆ ಸ್ಪರ್ಧೆ, ಸ್ಥಳ: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಬೆಳಗ್ಗೆ 10ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10 ರಿಂದ.

■ **ಮಹಾಜನ ಪ್ರಥಮ ದರ್ಜೆ ಕಾಲೇಜು :** ಪತ್ರಾಗಾರ ಪರಿಚಯ ಉಪನ್ಯಾಸ ಮಾಲೆ, ಚಾರಿತ್ರಿಕ ದಾಖಲೆಗಳ ಮಹತ್ವ ಮತ್ತು ಉಪಯೋಗ ಹಾಗೂ ಹಿರೋಷಿಮಾ ಮತ್ತು ನಾಗಾಸಾಕಿ ದುರಂತದ ಛಾಯಾಚಿತ್ರ ಪ್ರದರ್ಶನ, ಉದ್ಘಾಟನೆ: ವಿಭಾಗೀಯ ಪತ್ರಾಗಾರ ಕಚೇರಿ ಹಿರಿಯ ಸಹಾಯಕ ನಿರ್ದೇಶಕ ಎಚ್.ಎಲ್. ಮಂಜುನಾಥ್, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಡಾ.ಬಿ.ಆರ್.ಜಯಕುಮಾರಿ, ಉಪಸ್ಥಿತರು : ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆರ್.ರಮೇಶ್, ಸ್ಥಳ: ಎವಿಸಿ–3, ಬೆಳಗ್ಗೆ 10.45ಕ್ಕೆ.

■ **ಕೃಷ್ಣರಾಜ ಯುವ ಬಳಗ:** ಮಾಜಿ ಮುಖ್ಯಮಂತ್ರಿ ರಾಷ್ಟ್ರೀಯ ನೇತಾರ ರಾಮಕೃಷ್ಣ ಹೆಗಡೆ ಜನ್ಮ ದಿನಾಚರಣೆ, ಮುಖ್ಯ ಅತಿಥಿಗಳು: ಮಾಜಿ ಮೇಯರ್ ಸಂದೇಶ್ ಸ್ವಾಮಿ, ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಹಿರಿಯ ಸಮಾಜ ಸೇವಕ ರಘುರಾಂ ವಾಜಪೇಯಿ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್‌ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮಪ್ರಸಾದ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಜೆಡಿಎಸ್ ನಗರ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಸ್ಥಳ: #1149 ವಿಷ್ಣುವರ್ಧನ ರಸ್ತೆ, ಚಾಮರಾಜಪುರಂ ಕಚೇರಿ, ಬೆಳಗ್ಗೆ 11 ಗಂಟೆಗೆ

■ **ಜೆಎಸ್‌ಎಸ್ ವೃದ್ಧಾಶ್ರಮ, ಜೆಎಸ್‌ಎಸ್ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ:** ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 109ನೆಯ ಜಯಂತಿ, ಉದ್ಘಾಟನೆ: ಜೆಎಸ್‌ಎಸ್ ಮಹಾವಿದ್ಯಾಪೀಠ ತೋಟಗಾರಿಕೆ ವಿಭಾಗದ ನಿರ್ದೇಶಕ ಎನ್.ಎಂ.ಶಿವಶಂಕರಪ್ಪ, ಅಧ್ಯಕ್ಷತೆ: ಸಾಮಾನ್ಯ ಅಭಿವೃದ್ಧಿ ವಿಭಾಗದ ನಿರ್ದೇಶಕ ಕೆ.ಎಲ್.ರೇವಣ್ಣಸ್ವಾಮಿ, ಮುಖ್ಯ ಅತಿಥಿಗಳು: ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶಂಕರಗೌಡ ಪಾಟೀಲ್, ಡಾ.ಓಂ ಪ್ರಕಾಶ್, ಸ್ಥಳ: ಜೆಎಸ್‌ಎಸ್ ವೃದ್ಧಾಶ್ರಮ, ಅರವಿಂದನಗರ, ಬೆಳಗ್ಗೆ 11ಕ್ಕೆ

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ), ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ನಿವೃತ್ತ ಪ್ರಾಂಶುಪಾಲ ಡಾ. ಹೆಚ್. ಮುದ್ದುಮಲ್ಲೇಶ್ ಅವರಿಂದ ದೇವಲೋಕವೆಂಬುದು ಬೇರಿಲ್ಲ ಕಾಣಿರೋ–ಬಸವಣ್ಣ ಕುರಿತು ಉಪನ್ಯಾಸ, ಸ್ಥಳ: ಶ್ರೀಮತಿ ಶೋಭಾ ಶಿವಾನಂದ, ರಾಮಕೃಷ್ಣನಗರ, ಸಂಜೆ 5.30ಕ್ಕೆ.

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿದುಷಿ ಧರಿತ್ರಿ ಆನಂದರಾವ್ ಅವರಿಂದ ವಾಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಕೆ. ಅನಂತರಾಮು ಅವರಿಂದ ಪ್ರವಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

■ **ಮೈಸೂರು ವಿವಿ ಪ್ರತಿನಿಧಿಸಿರುವ ಕ್ರೀಡಾಪಟುಗಳ ಅಲ್ಯೂಮ್ನಿ ಅಸೋಸಿಯೇಷನ್ :** ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಬಾಲಕ ಮತ್ತು ಬಾಲಕಿಯರ ರಸ್ತೆ ಓಟ, ಬೆಳಗ್ಗೆ 7ಕ್ಕೆ ಉದ್ಘಾಟನಾ ಸಮಾರಂಭ, ಉಪಸ್ಥಿತರು : ಅಂತಾರಾಷ್ಟ್ರೀಯ ಈಜುಪಟು ಡಾ. ಅನ್ಯ ಸೈನಿ ಮಂಜ್ರೇಕರ್, ರಾಷ್ಟ್ರೀಯ ಕಬಡ್ಡಿ ಆಟಗಾರ ಸಿ. ಚನ್ನಯ್ಯ, ಬೆಳಗ್ಗೆ 8ಕ್ಕೆ ಸಮಾರೋಪ ಸಮಾರಂಭ, ಉಪಸ್ಥಿತರು : ನಿವೃತ್ತ ಪ್ರಾಂಶುಪಾಲ ಡಾ. ಬಿ. ಸದಾಶಿವ ಭಟ್, ಮೈಸೂರು ವಿವಿ ದೈಹಿಕ ಶಿಕ್ಷಣ ನಿರ್ದೇಶಕ ಡಾ. ಸಿ. ವೆಂಕಟೇಶ್, ಮೈಸೂರು ವಿವಿ ದೈಹಿಕ ನಿವೃತ್ತ ನಿರ್ದೇಶಕ ಡಾ. ಸಿ. ಕೃಷ್ಣ, ಸ್ಥಳ: ಮೈಸೂರು ವಿವಿ ಓವಲ್ ಗ್ರೌಂಡ್ ಆವರಣ.

■ **ಜಿಲ್ಲಾ ಮತ್ತು ತಾಲೂಕು ಶರಣ ಸಾಹಿತ್ಯ ಪರಿಷತ್ತು :** ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 109ನೆಯ ಜಯಂತಿ ಮಹೋತ್ಸವ, ದತ್ತಿ ಉಪನ್ಯಾಸ, ವಚನ ಗಾಯನ, ವಿದ್ಯಾರ್ಥಿಗಳಿಗೆ ಪುಸ್ತಕ ವಿತರಣೆ, ಸಸಿಗಳ ವಿತರಣಾ ಸಮಾರಂಭ, ಸಾನ್ನಿಧ್ಯ : ಕುದೇರು ಮಠದ ಶ್ರೀ ಗುರುಶಾಂತ ಸ್ವಾಮಿಗಳು, ಉದ್ಘಾಟನೆ : ಮಹಂತೇಶ್ವರ ಮಠದ ಶ್ರೀ ಪರಶಿವಮೂರ್ತಿ ಸ್ವಾಮಿಗಳು, ಸಮ್ಮುಖ : ಶ್ರೀ ಚನ್ನಬಸವ ಸ್ವಾಮಿಗಳು, ಶ್ರೀ ಶಿವಪ್ರಭುಸ್ವಾಮಿಗಳು, ಮರಿಸ್ವಾಮಿ, ಜಡೇಸ್ವಾಮಿ, ಗುರುಸ್ವಾಮಿ, ಬಸವರಾಜಸ್ವಾಮಿ, ಶಿವಕುಮಾರಸ್ವಾಮಿ, ಹಿರಿಯ ಸಾಹಿತಿ ಡಾ. ಪ್ರದೀಪ್ ಕುಮಾರ್ ಹೆಬ್ರಿ ಅವರಿಂದ ರಾಜೇಂದ್ರ ಶ್ರೀಗಳವರ ಜೀವನ–ಸಾಧನೆ ಕುರಿತು ಉಪನ್ಯಾಸ, ಅಧ್ಯಕ್ಷತೆ : ಜಿಲ್ಲಾ ಮತ್ತು ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ, ಸ್ಥಳ: ಗುರುಮಲ್ಲೇಶ್ವರ ದಾಸೋಹ ಮಠ, ಮೈಸೂರು ತಾ., ಸಂಜೆ 6.30ಕ್ಕೆ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಶ್ರೀ ಶ್ರೀ ದತ್ತವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರ ಆಗಮನ, ಬೆಳಗ್ಗೆ 6ರಿಂದ ಶ್ರೀ ಸ್ವಾಮೀಜಿಯವರ ಏಕಾದಶೀ ಮೌನವ್ರತ, ಸ್ಥಳ: ಆಶ್ರಮದ ಆವರಣ.

ಮೈಸೂರು ಆಕಾಶವಾಣಿ


ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 'ಸಂವಹನ ಸಮಾಚಾರ' ಬಾನುಲಿ ಸರಣಿ, ಪ್ರಸ್ತುತಿ : ಅಲಕಾ ಕಟ್ಟೆಮನೆ, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ.ಆರ್.ಸುಧಾ, ವ್ಯಾಖ್ಯಾನ–ಪ್ರೊ.ಮ.ವರದರಾಜು, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 9.00 ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರವೇಶಾತಿ ಹಾಗೂ ಅಧ್ಯಯನ ಅವಕಾಶಗಳನ್ನು ಕುರಿತ ನೇರ ಸಂವಾದ ಕಾರ್ಯಕ್ರಮ, ಭಾಗವಹಿಸುತ್ತಾರೆ–ಕುಲಪತಿಗಳಾದ ಪ್ರೊ.ಶರಣಪ್ಪ ವಿ. ಹಲಸೆ, ಪ್ರಸ್ತುತಿ: ಎನ್.ಕೇಶವಮೂರ್ತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಬಿ.ಎಸ್.ವಿಜಯರಾಘವನ್–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ–ಕಾಡಿನಲ್ಲಿನ ಕಥೆಗಳು. ಪ್ರಸ್ತುತಿ: ಜಿ.ಶಾಂತಕುಮಾರ್, **ಮಧ್ಯಾಹ್ನ:** 12.30 ದೇವರನಾಮ: ವಿದ್ಯಾಶ್ರೀ. ಬಿ.ಜಿ–ಹಾಡುಗಾರಿಕೆ, 12.45 ಚಿತ್ರಗೀತೆಗಳು, 1.20 ಭಾವಗೀತೆಗಳು, 4.00 ಜನಪದ ಸಂಗೀತ, 4.30 ಕನ್ನಡ ಭಾರತಿ, 6.10 'ಸಂವಹನ ಸಮಾಚಾರ' ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ –ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ ರೈತ ಉತ್ಪಾದಕ ಸಂಸ್ಥೆಗಳಿಂದ ಉತ್ಪನ್ನಗಳ ನೇರ ಖರೀದಿ ಕುರಿತು ಸಂವಾದ. ಭಾಗವಹಿಸುತ್ತಾರೆ: ಮಂಡ್ಯದ ವಿಕಸನ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ನಿರ್ದೇಶಕ ಮಹೇಶ್ ಚಂದ್ರಗುರು ಹಾಗೂ ಗ್ರೀನ್ ಆಬ್ಜೆಕ್ಟ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪುಷ್ಪಾದೇವಿ, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಯುವವಾಣಿ–ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಸಂದರ್ಭದಲ್ಲಿ ಯುವ ಕ್ರೀಡಾ ಪ್ರತಿಭೆ–ಹ್ಯಾಂಡ್‌ಬಾಲ್ ಟಾರ್ಗೆಟ್ ಬಾಲ್ ರಾಷ್ಟ್ರಮಟ್ಟದ ಕ್ರೀಡಾಪಟು ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕು ಬಾಬುರಾಯನಕೊಪ್ಪಲಿನ ಅನನ್ಯಾ. ಬಿ.ಸಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ನಾಟಕ 'ಆ ಭಾನುವಾರ', ರಚನೆ–ಸುಬ್ರಾಯ್. ಜಿ.ಭಟ್, ನಿರ್ಮಾಣ–ಉಮೇಶ್. ಎಸ್.ಎಸ್, 10.30–ಸವಿನೆನಪು

ಸೆ.9ವರೆಗೆ ದರ್ಶನ್‌ಗೆ ನ್ಯಾಯಾಂಗ ಬಂಧನ



ಬೆಂಗಳೂರು, ಆ.28– ಚಿತ್ರದುರ್ಗ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳಾದ ದರ್ಶನ್ ಮತ್ತು ಗ್ಯಾಂಗ್‌ಗೆ ಸೆಪ್ಟೆಂಬರ್ 9ರವರೆಗೆ ನ್ಯಾಯಾಂಗ ಬಂಧನ ವಿಸ್ತರಿಸಿ 24ನೇ ಎಸಿಎಂಎಂ ನ್ಯಾಯಾಲಯ ಆದೇಶ ಹೊರಡಿಸಿದೆ.

ನ್ಯಾಯಾಂಗ ಬಂಧನ ಅಂತ್ಯವಾಗಿದ್ದ ಹಿನ್ನೆಲೆಯಲ್ಲಿ ಇಂದು ವೀಡಿಯೋ ಕಾನ್ಫರೆನ್ಸ್ ಮೂಲಕ ಆರೋಪಿಗಳನ್ನು ಮತ್ತೆ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿತ್ತು. ಆರೋಪಿಗಳನ್ನು ಪುನಃ ನ್ಯಾಯಾಂಗ ಬಂಧನಕ್ಕೆ ನೀಡುವಂತೆ ಪೊಲೀಸರು ಮನವಿ ಮಾಡಿಕೊಂಡರು. ಮನವಿ ಪುರಸ್ಕರಿಸಿದ ನ್ಯಾಯಾಧೀಶರು ದರ್ಶನ್ ಮತ್ತು ಗ್ಯಾಂಗ್‌ನ ನ್ಯಾಯಾಂಗ ಬಂಧನ ಅವಧಿ ವಿಸ್ತರಿಸಿ ಮತ್ತೆ ಆದೇಶ ಹೊರಡಿಸಿದ್ದಾರೆ. ನ್ಯಾಯಾಂಗ ಬಂಧನ ವಿಸ್ತರಣೆಗೊಂಡ ಬೆನ್ನಲ್ಲೇ ದರ್ಶನ್ ಅವರನ್ನು ಇಂದು ಸಂಜೆ ಅಥವಾ ರಾತ್ರಿ ಬಳ್ಳಾರಿ ಜೈಲಿಗೆ ಶಿಫ್ಟ್ ಮಾಡಲಾಗುತ್ತದೆ.

ಬಳ್ಳಾರಿ ಜೈಲಿಗೆ ದರ್ಶನ್ ಶಿಫ್ಟ್: ಎಸ್‌ಪಿ ಶೋಭಾರಾಣಿ ಹೈವೋಲ್ಟೇಜ್ ಸಭೆ

ಬಳ್ಳಾರಿ, ಆ.28–ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿ ನಟ ದರ್ಶನ್ ಬಳ್ಳಾರಿ ಜೈಲಿಗೆ ಬರುವ ಹಿನ್ನೆಲೆಯಲ್ಲಿ ಬಳ್ಳಾರಿ ಜೈಲಿನಲ್ಲಿ ಎಸ್ಪಿ ಶೋಭಾರಾಣಿ ಅವರು ಇಂದು(ಬುಧವಾರ) ಹೈವೋಲ್ಟೇಜ್ ಸಭೆ ನಡೆಸಿದ್ದಾರೆ.

ಜೈಲಿನಲ್ಲಿ ಅಧಿಕಾರಿಗಳ ಜೊತೆ ಸಭೆ ಬಳಿಕ ಮಾತನಾಡಿದ ಅವರು, ನಮಗೆ ದರ್ಶನ್ ಶಿಫ್ಟಿಂಗ್ ಬಗ್ಗೆ ಇನ್ನೂ ಅಧಿಕೃತ ಮಾಹಿತಿ ಬಂದಿಲ್ಲ. ಆದರೂ ನಾವು ಎಲ್ಲಾ ರೀತಿಯ ತಯಾರಿ ಮಾಡಿಕೊಂಡಿದ್ದೇವೆ. ದರ್ಶನ್ ಬಂದರೆ ಪ್ರತ್ಯೇಕ ಬ್ಯಾರಕ್ ನಂಬರ್ 15ರಲ್ಲಿ ಇಡಲು ವ್ಯವಸ್ಥೆ ಮಾಡಲಾಗಿದೆ. ಪ್ರತ್ಯೇಕ ಸಿಬ್ಬಂದಿ ನಿಯೋಜನೆ ಮಾಡುತ್ತೇವೆ ಎಂದರು.



ದರ್ಶನ್ ಯಾವಾಗ ಶಿಫ್ಟ್ ಆಗ್ತಾರೆ ಎನ್ನುವ ಬಗ್ಗೆ ನಮಗೆ ಇನ್ನು ಮಾಹಿತಿ ಕೊಟ್ಟಿಲ್ಲ. ಭದ್ರತೆ ಹಾಗೂ ಕ್ರೌಡ್ ಕಂಟ್ರೋಲ್ ಪೊಲೀಸರಿಗೆ ಹೊಸ ಕೆಲಸ ಅಲ್ಲ ಎಂದು ತಿಳಿಸಿದ್ದಾರೆ. ಜೈಲಿನಲ್ಲಿ ಗಾಂಜಾ ಸಿಗುತ್ತೆ ಎಂಬ ಮಾಜಿ ಕೈದಿ ಆರೋಪ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಎಸ್‌ಪಿ ಶೋಭಾರಾಣಿ, ಇದೆಲ್ಲಾ ಸುಳ್ಳು. ಇಷ್ಟು ಜನ ಜೈಲಿನಲ್ಲಿದ್ದಾರೆ. ಇವರೊಬ್ಬರೇ ಆರೋಪ ಮಾಡಿದ್ದಾರೆ. ಪ್ರಚಾರಕ್ಕೆ ಈ ರೀತಿ ಹೇಳಿರಬಹುದು. ಏನೇ ಇರಲಿ, ಅವರನ್ನು ಕರೆದು ವಿಚಾರಣೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಆ.31ಕ್ಕೆ ಪವಿತ್ರಾಗೌಡ ಬೇಲ್ ಭವಿಷ್ಯ



ಬೆಂಗಳೂರು, ಆ.28– ರೇಣುಕಾಸ್ವಾಮಿ ಕೊಲೆ ಪ್ರಕರಣದ ಎ1 ಆರೋಪಿ ಪವಿತ್ರಾಗೌಡ ಅವರ ಜಾಮೀನು ಅರ್ಜಿ ವಿಚಾರಣೆಯನ್ನು ಸಿಟಿ ಸಿವಿಲ್ ಮತ್ತು ಸೆಷನ್ಸ್ ಕೋರ್ಟ್ ಆ.31ಕ್ಕೆ ಮುಂದೂಡಿದೆ. ಇದೇ ಆಗಸ್ಟ್ 19ರಂದು ಪವಿತ್ರಾಗೌಡ ಪರ ವಕೀಲರು ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಇಂದು (ಆ.28) ಸಿಟಿ ಸಿವಿಲ್ ಮತ್ತು ಸೆಷನ್ಸ್ ಕೋರ್ಟ್ ಅರ್ಜಿ ವಿಚಾರಣೆ ನಡೆಸಿತು. ಮುಚ್ಚಿದ ಲಕೋಟೆಯಲ್ಲಿ ವರದಿ ನೀಡಿದ ನಂತರ ಎಸ್‌ಪಿಪಿ ವಾದ ಮಂಡಿಸಿದರು. ಪವಿತ್ರಾಗೌಡ ಪರ ಟಾಮಿ ಸೆಬಾಸ್ಟಿಯನ್ ವಾದಿಸಿದರು. ಸುದೀರ್ಘ ವಿಚಾರಣೆ ಬಳಿಕ ಕೋರ್ಟ್ ಆ.31ಕ್ಕೆ ಆದೇಶ ಕಾಯ್ದಿರಿಸಿತು.

ಮನೆಗೆ ಅಕ್ರಮ ವಿದ್ಯುತ್ ಸಂಪರ್ಕ ಪಡೆದವನಿಗೆ 5000 ದಂಡ

ದಂಡ ತೆರಲು ತಪ್ಪಿದರೆ ಜೈಲು ಶಿಕ್ಷೆ

ಕೊಳ್ಳೇಗಾಲ, ಆ.28–ಮನೆಗೆ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿದ್ದ ವ್ಯಕ್ತಿಗೆ 5 ಸಾವಿರ ರೂ. ದಂಡ ವಿಧಿಸಿದ್ದು, ಅದನ್ನು ತೆರಲು ಅಸಮರ್ಥರಾದಲ್ಲಿ ಆರು ತಿಂಗಳ ಜೈಲು ಶಿಕ್ಷೆ ವಿಧಿಸಿ ಕೊಳ್ಳೇಗಾಲದ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರು ತೀರ್ಪು ನೀಡಿದ್ದಾರೆ. ಹನೂರು ತಾಲೂಕು ಕೀರೇಬೋರೆ ಗ್ರಾಮದ ಕುಪ್ಪುಸ್ವಾಮಿ ಶಿಕ್ಷೆಗೊಳಗಾದವನಾಗಿದ್ದು, ಈತ ಅಕ್ರಮವಾಗಿ ಮನೆಗೆ ಸಂಪರ್ಕ ಪಡೆದಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ ಬಾಲಕಿ ಸಾವನ್ನಪ್ಪಿದ್ದು, ಈ ಪ್ರಕರಣದಲ್ಲಿ ಬಾಲಕಿ ಸಾವಿಗೆ ಕಾರಣ (ಐಪಿಸಿ 304) ಆರೋಪದಿಂದ ಆತ ದೋಷಮುಕ್ತನಾಗಿದ್ದು, ವಿದ್ಯುತ್ ಕಳವು ಪ್ರಕರಣಕ್ಕೆ ಮಾತ್ರ ದಂಡ ವಿಧಿಸಲಾಗಿದೆ. ಈತ ತನ್ನ ಮನೆಗೆ ಅಕ್ರಮವಾಗಿ ವಿದ್ಯುತ್ ಸಂಪರ್ಕ ಪಡೆದಿದ್ದು, ವೈರ್ ಅನ್ನು ಓಣಿಯೊಂದರಲ್ಲಿ ಕೆಳ ಮಟ್ಟಕ್ಕೆ ಇಳಿಬಿಟ್ಟಿದ್ದಾನೆ. 2020ರ ಜುಲೈ 6ರಂದು ಹೀಗೆ ಓಣಿಯಲ್ಲಿ ಹಾದು ಹೋಗಿದ್ದ ವಿದ್ಯುತ್ ತಂತಿ ಬಾಲಕಿ ನಮಿತಾಶ್ರೀಗೆ ಸ್ಪರ್ಶಿಸಿ ಆಕೆ ಸಾವನ್ನಪ್ಪಿದ್ದಳು.

ಈ ಸಂಬಂಧ ರಾಮಪುರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಕುಪ್ಪುಸ್ವಾಮಿ ವಿರುದ್ಧ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶರು ಕುಪ್ಪುಸ್ವಾಮಿಗೆ ದಂಡ ವಿಧಿಸಿದ್ದು, ಮೃತ ಬಾಲಕಿ ಪೋಷಕರಿಗೆ ಪರಿಹಾರ ನೀಡಲು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕೆ ಸೂಚಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ಬಿ.ಪಿ.ಮಂಜುನಾಥ್ ವಾದ ಮಂಡಿಸಿದ್ದರು.

ಖಾಸಗಿ ಶಾಲಾ ಮಾನ್ಯತೆ ಇನ್ನು 10 ವರ್ಷಕ್ಕೆ ನವೀಕರಣ

ಕೊನೆಗೂ ಒತ್ತಡಕ್ಕೆ ಮಣಿದ ಸರ್ಕಾರ

ಬೆಂಗಳೂರು, ಆ.28– ರಾಜ್ಯದಲ್ಲಿ ಇನ್ನು ಮುಂದೆ ಖಾಸಗಿ ಶಾಲೆಗಳ ಮೊದಲ ಮಾನ್ಯತೆಯನ್ನು 10 ವರ್ಷಗಳ ಅವಧಿಗೆ ಅನ್ವಯಿಸಿ ನವೀಕರಿಸಲು ಹಾಗೂ ನಂತರ ನಿಬಂಧನೆಗಳನ್ನು ಅನುಸರಿಸಿ ಶಾಶ್ವತ ಮಾನ್ಯತೆ ನೀಡಲು ಅವಕಾಶ ಕಲ್ಪಿಸಿ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಇದರೊಂದಿಗೆ ರಾಜ್ಯದಲ್ಲಿ ಆರ್‌ಟಿಇ ಕಾಯ್ದೆ ಜಾರಿಗೂ ಮುನ್ನ ಇದ್ದಂತೆ ಮಾನ್ಯತೆ ನವೀಕರಣ ಮತ್ತು ಶಾಶ್ವತ ನವೀಕರಣಕ್ಕೆ ಅವಕಾಶ ನೀಡಬೇಕೆಂಬ ಖಾಸಗಿ ಶಾಲೆಗಳ ಒತ್ತಡಕ್ಕೆ ಸರ್ಕಾರ ಕೊನೆಗೂ ಮಣಿದಂತಾಗಿದೆ.

ಕರ್ನಾಟಕ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಾವಳಿಗಳಿಗೆ ಸರ್ಕಾರ ತಿದ್ದುಪಡಿ ಮಾಡಿದ್ದು, ರಾಜ್ಯದಲ್ಲಿ ಯಾವುದೇ ಖಾಸಗಿ ಶಾಲೆ ಆರಂಭಿಸಲು ನಿಯಮಾನುಸಾರ ಮೊದಲ ವರ್ಷ ಅನುಮತಿ ನೀಡಲಾಗುವುದು. ನಂತರ ನಿಬಂಧನೆಗಳನ್ನು ಅನುಸರಿಸಿ 10 ವರ್ಷಗಳಿಗೆ ಮಾನ್ಯತೆ ನವೀಕರಿಸುವುದು, ಬಳಿಕ ಶಾಶ್ವತ ಮಾನ್ಯತೆ ನೀಡಲು ಅವಕಾಶ ಮಾಡಿಕೊಟ್ಟಿದೆ.

ಈ ಹಿಂದೆ ಖಾಸಗಿ ಶಾಲೆ ಆರಂಭವಾದ ಒಂದು ವರ್ಷದ ನಂತರ 15 ವರ್ಷಗಳಿಗೆ ಅನ್ವಯಿಸಿ ಮಾನ್ಯತೆ ನವೀಕರಣ, ಬಳಿಕ ಶಾಶ್ವತ ನವೀಕರಣ ನೀಡಲು ಕರ್ನಾಟಕ ಶಿಕ್ಷಣ ಕಾಯ್ದೆಯಡಿ ಅವಕಾಶವಿತ್ತು. ಕೇಂದ್ರ ಸರ್ಕಾರದ ಶಿಕ್ಷಣ ಹಕ್ಕು ಕಾಯ್ದೆಯನ್ನು (ಆರ್‌ಟಿಇ) ರಾಜ್ಯದಲ್ಲಿ ಜಾರಿಗೊಳಿಸಿದ ಬಳಿಕ 2018ರಲ್ಲಿ ಮಾನ್ಯತೆ ನವೀಕರಣ ಅವಧಿಯನ್ನು 5 ವರ್ಷಗಳಿಗೆ ಇಳಿಸಿ, ಶಾಶ್ವತ ನವೀಕರಣದ ಅವಕಾಶವನ್ನು ರದ್ದುಪಡಿಸಲಾಗಿತ್ತು. ಪರಿಣಾಮ ಸಾಕಷ್ಟು ಖಾಸಗಿ ಶಾಲೆಗಳ ಶಾಶ್ವತ ಮಾನ್ಯತೆ ರದ್ದಾಗಿ ಪ್ರತೀ ವರ್ಷ ಮಾನ್ಯತೆ ನವೀಕರಿಸಿಕೊಳ್ಳಬೇಕಾಗಿ ಬಂತು. ಅಂದಿನಿಂದಲೂ ಖಾಸಗಿ ಶಾಲೆಗಳು ಇದನ್ನು ವಿರೋಧಿಸುತ್ತಲೇ ಬಂದಿದ್ದವು. ಕೆಲ ಖಾಸಗಿ ಶಾಲಾ ಸಂಘಟನೆಗಳು ಸರ್ಕಾರದ ಈ ಕ್ರಮದ ವಿರುದ್ಧ ನ್ಯಾಯಾಲಯಗಳ ಮೆಟ್ಟಿಲೇರಿದ್ದು ಅರ್ಜಿಗಳು ವಿಚಾರಣೆ ಹಂತದಲ್ಲಿವೆ. ಈಗ ಇದೆಲ್ಲದಕ್ಕೂ ಪರಿಹಾರ ಸಿಕ್ಕಂತಾಗಿದೆ.

ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ

ಮೈಸೂರು, ಆ.28(ಎಸ್‌ಪಿಎನ್)– 2024ರ ಲೋಕಸಭಾ ಚುನಾವಣೆ ವೇಳೆ ವರ್ಗಾವಣೆಗೊಂಡಿದ್ದ 15 ಮಂದಿ ಪೊಲೀಸ್ ಇನ್ಸ್‌ಪೆಕ್ಟರ್(ಸಿವಿಲ್)ಗಳನ್ನು ರಾಜ್ಯ ಸರ್ಕಾರ ಯಥಾ ಸ್ಥಳಕ್ಕೆ ವರ್ಗಾವಣೆಗೊಳಿಸಿ ಆದೇಶಿಸಿದೆ. ಪೊಲೀಸ್ ಸಿಬ್ಬಂದಿ ಮಂಡಳಿ ಸಭೆಯ ತೀರ್ಮಾನದಂತೆ ಪಿಐ ಎಂ.ವಿ.ಗೋವಿಂದರಾಜು ಅವರನ್ನು ಮೈಸೂರು ಜಿಲ್ಲೆ ಪಿರಿಯಾಪಟ್ಟಣ ಪೊಲೀಸ್ ಠಾಣೆಗೆ, ಪಿಐ ಜಿ.ಕೆ.ರಾಘವೇಂದ್ರ ಅವರನ್ನು ಪಿರಿಯಾಪಟ್ಟಣ ಠಾಣೆಯಿಂದ ಕೊಡಗು ಜಿಲ್ಲೆ ಸಿಇಎನ್ ಠಾಣೆಗೆ ವರ್ಗಾಯಿಸಿದ್ದು, ಇವರು ಸೇರಿದಂತೆ ರಾಜ್ಯದ ವಿವಿಧ ಠಾಣೆಯ 15 ಮಂದಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ಡಿಜಿ ಮತ್ತು ಐಜಿಪಿ ಅವರ ಪರವಾಗಿ ಸೌಮೇಂದು ಮುಖರ್ಜಿ ಆ.28ರಂದು ಆದೇಶ ಹೊರಡಿಸಿದ್ದಾರೆ.

ಗಜಪಡೆಯ ಶಕ್ತಿ ವರ್ಧನೆಗೆ ಪೌಷ್ಟಿಕ ಆಹಾರ

ಪ್ರತಿದಿನ ಆನೆಯೊಂದಕ್ಕೆ 12 ಕೆಜಿ ವಿಶೇಷ ಪಡಿತರ ಸೇರಿ ಕನಿಷ್ಠ 500 ಕೆಜಿ ಆಹಾರ ಪೂರೈಕೆ; ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ಮಾಹಿತಿ

ಮೈಸೂರು,ಆ.28(ಪಿಎಂ)– ದಸರಾ ಮಹೋತ್ಸವಕ್ಕಾಗಿ ಅರಮನೆ ಆವರಣದಲ್ಲಿ ವಾಸ್ತವ್ಯ ಹೂಡಿರುವ ಅಂಬಾರಿ ಆನೆ ಅಭಿಮನ್ಯು ಸೇರಿದಂತೆ ಮೊದಲ ತಂಡದ 9 ಆನೆಗಳಿಗೆ ಪೌಷ್ಟಿಕ ಆಹಾರ ನೀಡಿ ಜಂಬೂಸವಾರಿಗೆ ಸಜ್ಜುಗೊಳಿಸಲಾಗುತ್ತಿದೆ. ಪ್ರತಿವರ್ಷದಂತೆ ಗಜಪಡೆಯ ಸಾಮರ್ಥ್ಯಾಭಿವೃದ್ಧಿಗೆ ಪೂರಕವಾಗಿ ಆಹಾರ ಪಟ್ಟಿ ಸಿದ್ಧಪಡಿಸಿ ನಿತ್ಯ ಪೂರೈಸಲಾಗುತ್ತಿದೆ.

ಈ ಸಂಬಂಧ ಅರಮನೆ ಗಜಪಡೆ ಶಿಬಿರದ ಆವರಣದಲ್ಲಿ ಬುಧವಾರ ಮಾಧ್ಯಮದವರಿಗೆ ಮಾಹಿತಿ ನೀಡಿದ ಮೈಸೂರು ಉಪ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ ವಿಭಾಗ) ಡಾ.ಐ.ಬಿ. ಪ್ರಭುಗೌಡ, ಪ್ರತಿದಿನ ಆನೆಯೊಂದಕ್ಕೆ 12 ಕೆಜಿ ವಿಶೇಷ ಪಡಿತರ ಆಹಾರ ಸೇರಿದಂತೆ ಒಟ್ಟು ಕನಿಷ್ಠ 500 ಕೆಜಿಯಷ್ಟು ಆಹಾರ (ಮೇವು) ಪೂರೈಸುತ್ತಿದ್ದು, ಇದರಲ್ಲಿ ಗಂಡು ಮತ್ತು ಹೆಣ್ಣಾನೆಗಳ ಆಹಾರ ಪೂರೈಕೆ ಪ್ರಮಾಣದಲ್ಲಿ ಹೆಚ್ಚು ಕಡಿಮೆಯಾಗಲಿದೆ ಎಂದು ತಿಳಿಸಿದರು.

ವಿಶೇಷ ಆಹಾರದಿಂದ ಅವುಗಳಿಗೆ ಪ್ರೋಟಿನ್ ದೊರೆತು, ತೂಕ ಹೆಚ್ಚಳದೊಂದಿಗೆ ಅವುಗಳ ಮೂಳೆ ಗಟ್ಟಿಗೊಳ್ಳಲಿದೆ. ಗಜಪಡೆ ಶಕ್ತಿ–ಸಾಮರ್ಥ್ಯ ಹೆಚ್ಚಿಸಲು ಈ ವಿಶೇಷ ಪಡಿತರ ನೀಡಲಾಗುತ್ತದೆ. ಜೊತೆಗೆ ಆಲದ, ಅರಳಿ ಎಲೆಗಳನ್ನು ಎಂದಿನಂತೆ ನೀಡಲಾಗುತ್ತಿದೆ. ಹೆಸರುಕಾಳು, ಉದ್ದಿನಕಾಳು ಒಳಗೊಂಡ ವಿಶೇಷ ಪಡಿತರವನ್ನು ದಸರಾದಲ್ಲಿ ಮಾತ್ರ ಅವುಗಳಿಗೆ ಪೂರೈಸಲಾಗುತ್ತದೆ ಎಂದು ಹೇಳಿದರು.

ವಿಶೇಷ ಪಡಿತರವಾಗಿ ಭತ್ತ, ಹೆಸರುಕಾಳು, ಉದ್ದಿನಕಾಳು, ಗೋಧಿ, ತೆಂಗಿನಕಾಯಿ, ಬೆಣ್ಣೆ ಮೊದಲಾದವನ್ನು ಕೊಡಲಾಗುತ್ತಿದೆ. ಗಂಡಾನೆ ಹಾಗೂ ಹೆಣ್ಣಾನೆಗಳಿಗೆ ಈ ಆಹಾರ ನೀಡುವ ಪ್ರಮಾಣದಲ್ಲಿ ಹೆಚ್ಚು ಕಡಿಮೆ ಇರುತ್ತದೆ. ವಿಶೇಷ ಪಡಿತರ ಒಳಗೊಂಡಂತೆ ಗಂಡಾನೆಗಳಿಗೆ ಪ್ರತಿದಿನ 600ರಿಂದ 750 ಕೆಜಿ ಹಾಗೂ ಹೆಣ್ಣಾನೆಗಳಿಗೆ 450ರಿಂದ 550 ಕೆಜಿ ಆಹಾರ ನೀಡಲಾಗುತ್ತಿದೆ. ಗಂಡಾನೆಗಳು ಸರಾಸರಿ 5000 ಕೆಜಿ ಎಂದು ಇಟ್ಟುಕೊಂಡರೂ 500 ಕೆಜಿ ಕನಿಷ್ಠ ಆಹಾರ ಕೊಡಬೇಕಿದೆ. ಅದಕ್ಕೂ ಅಧಿಕವಾಗಿ ಆಹಾರ ಪೂರೈಸಲಾಗುತ್ತಿದೆ ಎಂದು ವಿವರಿಸಿದರು. ವಿಶೇಷ ಪಡಿತರವನ್ನು ಬೆಳಗ್ಗೆ ಮತ್ತು ಸಂಜೆ ನೀಡಲಾಗುತ್ತಿದೆ. ಪ್ರತಿ ಆನೆಗೆ ಬೆಳಗ್ಗೆ 6ರಿಂದ 7 ಕೆಜಿ, ಸಂಜೆ 6ರಿಂದ 7 ಕೆಜಿ ಸೇರಿದಂತೆ ಅಂದಾಜು 12ರಿಂದ 13 ಕೆಜಿ ವಿಶೇಷ ಪಡಿತರ ನೀಡಲಾಗುತ್ತಿದೆ. ಬೆಳಗ್ಗೆ ತಾಲೀಮಿಗೂ ಮುನ್ನ, ಸಂಜೆ ತಾಲೀಮಿನ ನಂತರ ವಿಶೇಷ ಪಡಿತರ ನೀಡಲಾಗುತ್ತಿದೆ ಎಂದು ಹೇಳಿದರು.

ಈ ವಿಶೇಷ ಪಡಿತರವು ಸೌತೆಕಾಯಿ, ನವಿಲುಕೋಸು, ಮೂಲಂಗಿ ಮೊದಲಾದ ಹಸಿ ತರಕಾರಿ ಹಾಗೂ ಬೇಯಿಸಿದ ಕಾಳುಗಳನ್ನು ಹೊಂದಿರುತ್ತದೆ. ನಾವು ತಿನ್ನುವ ಕಿಚಡಿ ಮಾದರಿಯ ಆಹಾರ ಇದಾಗಿದೆ. ಇದು ಹೆಚ್ಚು ಪ್ರೋಟಿನ್ ಅಂಶ ಒಳಗೊಂಡಿರುತ್ತದೆ. ದಸರಾ ಪೂರ್ಣಗೊಳ್ಳುವವರೆಗೆ ಈ ಮೆನು ಇರಲಿದ್ದು, ಆರೋಗ್ಯದಲ್ಲಿ ಏರುಪೇರು ಉಂಟಾಗುವ ಆನೆಗಳಿಗೆ ಮಾತ್ರವೇ ವೈದ್ಯರ ಸಲಹೆ ಮೇರೆಗೆ ವಿಶೇಷ ಪಡಿತರದಲ್ಲಿ ಹೆಚ್ಚು–ಕಡಿಮೆ ಮಾಡಲಾಗುವುದು ಎಂದರು.

ಕಂಜನ್ ಕಾಲಿಗೆ ಗಂಭೀರ ಸಮಸ್ಯೆ ಇಲ್ಲ: ಎಲ್ಲಾ ಆನೆಗಳ ಆರೋಗ್ಯ ಸುಸ್ಥಿತಿಯಲ್ಲಿದ್ದು, ತೂಕ ಪರೀಕ್ಷೆ ಸಂದರ್ಭದಲ್ಲಿ ಕಂಜನ್ ಆನೆ ಕಾಲಿಗೆ ಸ್ವಲ್ಪ ಮಟ್ಟಿನ ನೋವು ಉಂಟಾಗಿತ್ತು. ಈಗ ಬಹುತೇಕ ಗುಣವಾಗಿದೆ. ನಮ್ಮ ಪಶುವೈದ್ಯರು ಬೆಳಗ್ಗೆ ಮತ್ತು ಸಂಜೆ ಅದರ ಆರೋಗ್ಯ ತಪಾಸಣೆ ಮಾಡಿ ಸೂಕ್ತ ಚಿಕಿತ್ಸೆ ನೀಡುತ್ತಿದ್ದಾರೆ. ನಾವು ತಕ್ಷಣಕ್ಕೆ ಕಾಲಿಟ್ಟಾಗ ಟ್ವಿಸ್ಟ್ ಆಗುವಂತೆ ಅದಕ್ಕೆ ಆಗಿತ್ತು. ಅದರ ಹೊರತಾಗಿ ಗಂಭೀರ ಸಮಸ್ಯೆಯೇನಿಲ್ಲ. ಕಂಜನ್ ಇಂದಿನಿಂದಲೇ (ಬುಧವಾರ) ತಾಲೀಮಿನಲ್ಲಿ ಭಾಗಿಯಾಗುತ್ತಿದೆ ಎಂದು ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದರು.

ಎಲ್ಲಾ ಆನೆಗಳೂ, ಮಾವುತರು, ಕಾವಾಡಿಗಳು ಹಾಗೂ ಸಿಬ್ಬಂದಿಗೆ ವಿಮೆ ಮಾಡಿಸಲಾಗಿದೆ. ಸೆಪ್ಟೆಂಬರ್ ಮೊದಲ ವಾರದಲ್ಲಿ ಎರಡನೇ ತಂಡದ ಗಜಪಡೆ ಕರೆತರಲು ನಿರ್ಧರಿಸಿದ್ದು, ಶೀಘ್ರದಲ್ಲಿ ದಿನಾಂಕ ಪ್ರಕಟಿಸಲಾಗುವುದು ಎಂದು ಪ್ರತಿಕ್ರಿಯಿಸಿದರು. ಅಭಿಮನ್ಯು ಆನೆಗೆ ಹೆಚ್ಚಿನ ವಿಶೇಷ ಆಹಾರ ನೀಡಲಾಗುತ್ತಿದೆಯೇ? ಎಂಬುದಕ್ಕೆ ಪ್ರತಿಕ್ರಿಯಿಸಿ, ವಿಶೇಷ ಏನಿಲ್ಲ. ಆಹಾರ ಪ್ರಮಾಣದಲ್ಲಿ ಎಲ್ಲಾ ಆನೆಗಳಿಗಿಂತ ಇದಕ್ಕೆ ಹೆಚ್ಚು ನೀಡಲಾಗುತ್ತಿದೆ. ಅದಕ್ಕೆ ಹೆಚ್ಚಿನ ಆಹಾರ ಕೊಡುವ ಅಗತ್ಯವಿದೆ ಎಂದರಲ್ಲದೆ, ಇಂದು ಬೆಳಗ್ಗೆ ಬನ್ನಿಮಂಟಪವರೆಗೆ ತಾಲೀಮು ಮಾಡಿಸಿ, 10 ಕಿ.ಮೀ. ಪೂರ್ಣಗೊಳಿಸಲಾಗಿದೆ. ಬೆಳಗ್ಗೆ ಹೆಚ್ಚು ದೂರ ಕ್ರಮಿಸಿದರೆ ಸಂಜೆ ಕಡಿಮೆ ಮಾಡುತ್ತೇವೆ ಎಂದು ಮತ್ತೊಂದು ಪ್ರಶ್ನೆಗೆ ಉತ್ತರಿಸಿದರು.

ಭರವಸೆ ಮೂಡಿಸಿದ ಏಕಲವ್ಯ: ಏಕಲವ್ಯ ಆನೆ ಅಂಬಾರಿ ಹೊರಲು ಸೂಕ್ತವಾಗುತ್ತಿದೆಯೇ? ಎಂಬುದಕ್ಕೆ ಪ್ರತಿಕ್ರಿಯಿಸಿ, ಮೊದಲ ಬಾರಿಗೆ ಬಂದಿದ್ದರೂ 10 ದಸರಾ ಮಹೋತ್ಸವದಲ್ಲಿ ಭಾಗವಹಿಸಿರುವಂತೆ ಅದರ ವರ್ತನೆ ಇದೆ. ಭವಿಷ್ಯದಲ್ಲಿ ಅಂಬಾರಿ ಹೊರಲು ಸೂಕ್ತ ಆನೆಯಾಗುವ ಭರವಸೆ ಮೂಡಿಸಿದೆ ಎಂದು ಹೇಳಿದರು.




ಅರಮನೆಯ ಗಜಪಡೆ ಶಿಬಿರದ ಆವರಣದಲ್ಲಿ ಬುಧವಾರ ಏಕಲವ್ಯ, ಭೀಮ ಆನೆಗಳಿಗೆ ಡಿಸಿಎಫ್ ಡಾ.ಐ.ಬಿ.ಪ್ರಭುಗೌಡ ಕಿಚಡಿ ಮಾದರಿಯ ವಿಶೇಷ ಪಡಿತರ ತಿನ್ನಿಸಿದರು.

ಗಜಪಡೆಗೆ ನೀಡುವ ವಿಶೇಷ ಪಡಿತರದ ವಿವರ...

ಈರುಳ್ಳಿ ಒಳಗೊಂಡಂತೆ ಹೆಸರುಕಾಳು, ಉದ್ದಿನಕಾಳು, ಗೋಧಿ, ಕುಸಬಲಕ್ಕಿ (4 ವಿಧದ ಧಾನ್ಯ) ಬೇಯಿಸಿ, ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಸಿದ್ಧಪಡಿಸಲಾಗುತ್ತದೆ. ಅದರೊಂದಿಗೆ ಗೆಡ್ಡೆಕೋಸು, ಬೀಟ್‌ರೂಟ್, ಕ್ಯಾರೆಟ್, ಮೂಲಂಗಿ ಮತ್ತು ಸೌತೆಕಾಯಿ (ಹಸಿಯಾಗಿ) ಮಿಶ್ರಣ ಮಾಡಿ ಕಿಚಡಿ ಮಾದರಿಯ ವಿಶೇಷ ಆಹಾರ ಸಿದ್ಧಪಡಿಸಿ ಬೆಳಗ್ಗೆ ಮತ್ತು ಸಂಜೆ ಕೊಡಲಾಗುತ್ತದೆ. ಇದನ್ನು ಪೂರೈಸಿದ ಬಳಿಕ ಎರಡನೇ ವಿಶೇಷ ಪಡಿತರ ನೀಡಲಾಗುತ್ತದೆ. ಅದೆಂದರೆ ಭತ್ತದ ಹುಲ್ಲಿನಲ್ಲಿ ಭತ್ತ, ಬೆಲ್ಲ, ತೆಂಗಿನಕಾಯಿ, ಹಿಂಡಿ ಮತ್ತು ಉಪ್ಪು ಸೇರಿಸಿ ಕುಸರೆ ಕಟ್ಟಿ ತಿನ್ನಲು ನೀಡಲಾಗುತ್ತದೆ. ಇದರೊಂದಿಗೆ ಭತ್ತದ ಹುಲ್ಲು, ವಿವಿಧ ಮರಗಳ ಎಲೆ ಹಾಗೂ ಕೊಂಬೆಗಳನ್ನು ಕೊಡಲಾಗುತ್ತದೆ. ಇನ್ನು ಕೆಲವೇ ದಿನಗಳಲ್ಲಿ ಇವುಗಳಿಗೆ ಕಬ್ಬು ಸಹ ನೀಡಲಾಗುತ್ತದೆ.

ಕಾಂಗ್ರೆಸ್–ಬಿಜೆಪಿ ನಾಯಕರ ಮಕ್ಕಳ ನಿಶ್ಚಿತಾರ್ಥದಲ್ಲಿ ಒಟ್ಟಾಗಿ ಊಟ ಸವಿದ ಡಿಸಿಎಂ ಡಿಕೆಶಿ, ರಾಜ್ಯಪಾಲರು!

ತಡವಾಗಿ ಬಂದ ಸಿಎಂ ಸಿದ್ದರಾಮಯ್ಯ



ನಗರಾಭಿವೃದ್ಧಿ ಸಚಿವರೂ ಆದ ಕಾಂಗ್ರೆಸ್ ಮುಖಂಡ ಭೈರತಿ ಸುರೇಶ್ ಪುತ್ರ ಸಂಜಯ್ ಮತ್ತು ಯಲಹಂಕ ಶಾಸಕ, ಬಿಜೆಪಿ ಮುಖಂಡ ಎಸ್.ಆರ್.ವಿಶ್ವನಾಥ್ ಪುತ್ರಿ ಅಪೂರ್ವ ಅವರ ನಿಶ್ಚಿತಾರ್ಥ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಭಾಗವಹಿಸಿದ್ದು, ಇಬ್ಬರು ಒಟ್ಟಿಗೆ ಕುಳಿತು ಊಟ ಮಾಡಿದರು.

ಬೆಂಗಳೂರು, ಆ.28– ರಾಜಕೀಯ ಜೀವನವೇ ಬೇರೆ, ವೈಯಕ್ತಿಕ ಜೀವನವೇ ಬೇರೆ ಎಂಬುದನ್ನು ಕರ್ನಾಟಕ ಬಿಜೆಪಿ ಹಾಗೂ ಕಾಂಗ್ರೆಸ್‌ನ ನಾಯಕರ ಕುಟುಂಬಗಳು ಮತ್ತೆ ಸಾಬೀತುಪಡಿಸಿದೆ. ಕಾಂಗ್ರೆಸ್ ನಾಯಕ, ನಗರಾಭಿವೃದ್ಧಿ ಖಾತೆ ಸಚಿವ ಬೈರತಿ ಸುರೇಶ್ ಹಾಗೂ ಬಿಜೆಪಿ ಶಾಸಕ ಎಸ್‌ಆರ್ ವಿಶ್ವನಾಥ್ ಅವರ ಕುಟುಂಬಗಳ ನಡುವೆ ನೆಂಟಸ್ತನವಾಗಿದ್ದು, ಇಬ್ಬರ ಮಕ್ಕಳು ಇಂದು ಹಿರಿಯರ ಸಮ್ಮುಖದಲ್ಲಿ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ.

ಕಾಂಗ್ರೆಸ್ ನಾಯಕ ಬೈರತಿ ಸುರೇಶ್ ಅವರ ಪುತ್ರ ಸಂಜಯ್ ಹಾಗೂ ಬಿಜೆಪಿ ಶಾಸಕ ಎಸ್‌ಆರ್ ವಿಶ್ವನಾಥ್ ಅವರ ಪುತ್ರಿ ಅಪೂರ್ವ ಅವರ ನಿಶ್ಚಿತಾರ್ಥ ನಗರದ ತಾಜ್ ವೆಸ್ಟ್‌ಎಂಡ್ ಹೋಟೆಲ್‌ನಲ್ಲಿ ನಡೆದಿದೆ. ಕಾರ್ಯಕ್ರಮದಲ್ಲಿ ಉಭಯ ಪಕ್ಷಗಳ ನಾಯಕರು ಕುಟುಂಬ ಸಮೇತರಾಗಿ ಕಾಣಿಸಿಕೊಂಡಿದ್ದು, ಜೋಡಿಗಳಿಗೆ ಶುಭಹಾರೈಸಿದ್ದಾರೆ.

ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಪತ್ನಿ ಉಷಾ, ಸಚಿವ ಡಾ. ಎಂ.ಸಿ. ಸುಧಾಕರ್, ಶಾಸಕ ಶರತ್ ಬಚ್ಚೇಗೌಡ, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ರಾಜಕೀಯ ನಾಯಕರ ಕುಟುಂಬದ ಕಾರ್ಯಕ್ರಮದಲ್ಲಿ ಇನ್ನೊಂದು ವಿಚಾರ ಗಮನ ಸೆಳೆದಿದೆ. ಇತ್ತೀಚೆಗೆ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಕಾಂಗ್ರೆಸ್ ಕೆಂಗಣ್ಣಿಗೆ ಕಾರಣವಾಗಿದ್ದರು. ಈ ನಡುವೆಯೂ ಅವರು ಇಂದು ನಿಶ್ಚಿತಾರ್ಥ ಕಾರ್ಯಕ್ರಮದಲ್ಲಿ ಡಿಕೆ ಶಿವಕುಮಾರ್ ಅವರೊಂದಿಗೆ ಜೊತೆಯಾಗಿ ಕಾಣಿಸಿಕೊಂಡಿದ್ದಾರೆ. ಒಟ್ಟಿಗೆ ಊಟ ಮಾಡಿ, ಫೋಟೋ ಕ್ಲಿಕ್ಕಿಸಿಕೊಂಡು ಸುದ್ದಿಯಾಗಿದ್ದಾರೆ.

ತಡವಾಗಿ ಬಂದ ಸಿಎಂ: ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಬಂದು ಹೋದ ನಂತರ ಕೆಲ ನಿಮಿಷಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಿ, ನೂತನ ಜೋಡಿಗಳನ್ನು ಆಶೀರ್ವದಿಸಿದರು.

ವಿಹೆಚ್‌ಪಿ ವತಿಯಿಂದ ಅಯೋಧ್ಯೆ ಪ್ರಸಾದ, ಸಪ್ತನದಿ ತೀರ್ಥ ವಿತರಣೆ



ವಿಶ್ವ ಹಿಂದೂ ಪರಿಷದ್ ವತಿಯಿಂದ ಗಣೇಶ್‌ನಗರದಲ್ಲಿ ರಾಮಮಂದಿರ ಪ್ರಸಾದ, ಸಪ್ತನದಿ ತೀರ್ಥ ವಿತರಿಸಲಾಯಿತು

ಮೈಸೂರು, ಆ.28(ಎಂಕೆ)– ಮೈಸೂರಿನ ಎನ್.ಆರ್.ಮೊಹಲ್ಲಾ ಗಣೇಶ ನಗರದಲ್ಲಿ ವಿಶ್ವ ಹಿಂದೂ ಪರಿಷದ್‌ನ ಷಷ್ಠಿಪೂರ್ತಿ ಹಾಗೂ ಸಂಸ್ಥಾಪನೆ ದಿನಾಚರಣೆ ಅಂಗವಾಗಿ ಅಯೋಧ್ಯೆ ಶ್ರೀರಾಮ ಮಂದಿರ ಪ್ರಸಾದ ಹಾಗೂ ಸಪ್ತನದಿಗಳ ಪವಿತ್ರ ತೀರ್ಥ ವಿತರಣೆ ಮಾಡಲಾಯಿತು.

ಇಲ್ಲಿನ 'ಎ' ಬ್ಲಾಕ್‌ನಲ್ಲಿರುವ 40ಕ್ಕೂ ಹೆಚ್ಚು ಮನೆ ಮನೆಗೆ ತೆರಳಿದ ಪರಿಷದ್ ಕಾರ್ಯಕರ್ತರು ತೀರ್ಥ, ಪ್ರಸಾದ ವಿತರಿಸಿದರು. ಬಳಿಕ ಪರಿಷತ್ ಜಿಲ್ಲಾ ಅಧ್ಯಕ್ಷ ಮಹೇಶ್ ಕಾಮತ್ ಮಾತನಾಡಿ, ವಿಶ್ವ ಹಿಂದೂ ಪರಿಷದ್ 60 ವರ್ಷ ಪೂರೈಸಿದರ ಅಂಗವಾಗಿ ಅಯೋಧ್ಯೆ ಶ್ರೀ ರಾಮಮಂದಿರ ಪ್ರಸಾದ ಹಾಗೂ ಸಪ್ತನದಿಗಳ ಪವಿತ್ರ ತೀರ್ಥ ವಿತರಣೆ ಮಾಡಲಾಗುತ್ತಿದೆ. ದೇಶದ ಸನಾತನ ಸಂಸ್ಕೃತಿಯನ್ನು ಮನೆ ಮನೆಗೆ ತಿಳಿಸುವ ಕಾರ್ಯ ಇದಾಗಿದೆ ಎಂದು ತಿಳಿಸಿದರು.

ಸೆ.3ರವರೆಗೆ ನಗರದ ವಿವಿಧೆಡೆ ಕಾರ್ಯಕ್ರಮಗಳು ನಡೆಯಲಿವೆ. ಹಿಂದೂ ಸಮಾಜ ಸ್ಥಾಪನೆ, ಹಿಂದೂ ತತ್ವ ಸಿದ್ಧಾಂತ, ಜ್ಞಾನ, ಆಚರಣೆ, ಅಧ್ಯಾತ್ಮ ಪಸರಿಸುವುದು ಹಾಗೂ ವಿದೇಶದಲ್ಲಿರುವ ಹಿಂದೂಗಳ ಸಂಪರ್ಕ ಸಾಧಿಸುವುದು ಪರಿಷದ್ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು. ಮೇಲುಕೋಟೆ ನಂಬಿಮಠದ ಇಳೈಆಳ್ವಾರ್ ಸ್ವಾಮೀಜಿ, ಜಿಲ್ಲಾ ಉಪಾಧ್ಯಕ್ಷ ಜಗದೀಶ್ ಹೆಬ್ಬಾರ್, ಕಾರ್ಯದರ್ಶಿ ಎಂ.ಪಿ.ಮಧುಶಂಕರ್ ಮತ್ತಿತರರಿದ್ದರು.

ಭೌಗೋಳಿಕ ವಿಜ್ಞಾನ, ತಂತ್ರಜ್ಞಾನ ಕಂಪನಿಗಳಲ್ಲಿ ಮೈಸೂರಿನ 42 ವಿದ್ಯಾರ್ಥಿಗಳಿಗೆ ಉದ್ಯೋಗ ಭಾಗ್ಯ



ಮೈಸೂರಿನ ಮಾನಸಗಂಗೋತ್ರಿಯ ಭೂಗೋಳ ಅಧ್ಯಯನ ವಿಭಾಗದಲ್ಲಿ ಬುಧವಾರ ನಡೆದ ಪೂಲ್ ಕ್ಯಾಂಪಸ್ ಡ್ರೈವ್ ಸಂದರ್ಶನ ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಉದ್ಘಾಟಿಸಿದರು.

ಮೈಸೂರು, ಆ.28(ಬಿಎಲ್‌ಯು)– ಪ್ರತಿಭೆ ಇದ್ದರೆ ಉದ್ಯೋಗ ಖಚಿತ ಎಂಬಂತೆ ಭೌಗೋಳಿಕ ವಿಜ್ಞಾನ ಮತ್ತು ತಂತ್ರಜ್ಞಾನ ಕಂಪನಿಗಳಿಗೆ ಮೈಸೂರಿನ 42 ವಿದ್ಯಾರ್ಥಿಗಳು ಆಯ್ಕೆಯಾಗಿದ್ದಾರೆ.

ನಗರದ ಮಾನಸ ಗಂಗೋತ್ರಿಯ ಭೂಗೋಳ ಅಧ್ಯಯನ ವಿಭಾಗ ಹಾಗೂ ಜಿಐಎಸ್ ಸಂಯುಕ್ತವಾಗಿ ಆಯೋಜಿಸಿದ್ದ ಪೂಲ್ ಕ್ಯಾಂಪಸ್ ಡ್ರೈವ್ ಸಂದರ್ಭದಲ್ಲಿ ಭೌಗೋಳಿಕ ವಿಜ್ಞಾನ ಮತ್ತು ತಂತ್ರಜ್ಞಾನ ಕಂಪನಿಗಳಿಗೆ ಈ ವಿದ್ಯಾರ್ಥಿಗಳು ಆಯ್ಕೆಯಾದರು. ಯೂನಿವರ್ಸಲ್, ವ್ಯಾಪ್ಸ್, ಸ್ಪೇಷಿಯಲ್ ಹಾಕ್, ಅಟ್ಲಾಸ್ ಶೈಲ್, ಮ್ಯಾಪ್ ಐಟಿ, ಆಟಂ ಜಿಯೋ ಕಂಪನಿಗಳು ಭಾಗವಹಿಸಿದ್ದವು. ಇದರಲ್ಲಿ ಭೂಗೋಳ ಅಧ್ಯಯನ ವಿಭಾಗದ 24 ಅಭ್ಯರ್ಥಿಗಳು ಹಾಗೂ ಜಿಐಎಸ್‌ನ 18 ಅಭ್ಯರ್ಥಿಗಳು ಆಯ್ಕೆಗೊಂಡರು.

ಪೂಲ್ ಕ್ಯಾಂಪಸ್ ಡ್ರೈವ್ ಉದ್ಘಾಟಿಸಿ ಮಾತನಾಡಿದ ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಭೌಗೋಳಿಕ ಮಾಹಿತಿ ತಂತ್ರಜ್ಞಾನವು ಹಲವು ವಿಸ್ತೃತ ತಂತ್ರಜ್ಞಾನದಿಂದ ಕೂಡಿದ್ದು, ಹಲವು ಕ್ಷೇತ್ರಗಳಿಗೆ ಉಪಯುಕ್ತವಾಗಿದೆ ಎಂದು ಅಭಿಪ್ರಾಯಪಟ್ಟರು.

ಅದರಲ್ಲೂ ಭೌಗೋಳಿಕ ತಂತ್ರಜ್ಞಾನದಲ್ಲಿ ರಿಮೋಟ್ ಸೈನ್ಸ್, ಜಿಪಿಎಸ್, ಮ್ಯಾಪಿಂಗ್, ಸ್ಥಳ ಆಧಾರಿತ ಸೇವೆ ಒದಗಿಸುತ್ತದೆ. ಇತ್ತೀಚಿನ ತಂತ್ರಜ್ಞಾನದಲ್ಲಿ ಈ ರೀತಿಯ ಭೌಗೋಳಿಕ ಮಾಹಿತಿ ವ್ಯವಸ್ಥೆಗೆ ಹೆಚ್ಚಿನ ಬೇಡಿಕೆ ಇದೆ ಎಂದು ಹೇಳಿದರು.

ಭೌಗೋಳಿಕ ಮಾಹಿತಿಯನ್ನು ತಂತ್ರಾಂಶದೊಂದಿಗೆ ವಿಲೀನಗೊಳಿಸಿದರೆ ಇನ್ನು ಹಲವು ಕ್ಷೇತ್ರಗಳಿಗೆ ಉಪಯುಕ್ತವಾಗುತ್ತದೆ. ಬಹುಮುಖ್ಯವಾಗಿ ಭೌಗೋಳಿಕ ಮಾಹಿತಿ ವ್ಯವಸ್ಥೆ ಕಸದ ಉತ್ಪಾದನೆಯನ್ನು ಗಣನೀಯವಾಗಿ ಕಡಿಮೆಗೊಳಿಸುತ್ತದೆ ಎಂದು ಪ್ರೊ.ಲೋಕನಾಥ್ ತಿಳಿಸಿದರು. ಭೂಗೋಳ ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಎಸ್.ಅರುಣ್ ದಾಸ್, ಜಿಐಎಸ್ ಸಂಯೋಜಕಿ ಪ್ರೊ.ಪಿ. ಜಯಶ್ರೀ, ಪ್ರೊ.ರಾಮು, ಪ್ರೊ.ಹೆಚ್.ವಿ. ರೇಖಾ, ಅಟ್ಲಾಸ್ ಶೈನ್ ನಿರ್ದೇಶಕ ಸುರೇಶ್, ಸಿಇಒ ರಘುನಾಥ್ ಶರ್ಮ, ಆಟಂ ಜಿಯೋ ನಿರ್ದೇಶಕ ಮೋಹನ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರೇವಣ್ಣಗೆ ಬಿಗ್ ರಿಲೀಫ್; ಜಾಮೀನು ರದ್ದುಪಡಿಸಲು ಹೈಕೋರ್ಟ್ ನಕಾರ



ಬೆಂಗಳೂರು, ಆ.28– ಮಹಿಳೆಯ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಶಾಸಕ, ಮಾಜಿ ಸಚಿವ ಎಚ್.ಡಿ ರೇವಣ್ಣ ಅವರಿಗೆ ನೀಡಿರುವ ಜಾಮೀನು ರದ್ದುಗೊಳಿಸುವಂತೆ ಕೋರಿ ವಿಶೇಷ ತನಿಖಾ ತಂಡ(ಎಸ್‌ಐಟಿ) ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ಬುಧವಾರ ವಜಾಗೊಳಿಸಿದೆ. ಇದರಿಂದ ರೇವಣ್ಣಗೆ ಬಿಗ್ ರಿಲೀಫ್ ಸಿಕ್ಕಂತಾಗಿದೆ.

ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸೆಕ್ಸ್ ವಿಡಿಯೋ ಪ್ರಕರಣದ ಸಂತ್ರಸ್ತೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ರೇವಣ್ಣ ಅವರಿಗೆ ಜನಪ್ರತಿನಿಧಿಗಳ ಕೋರ್ಟ್ ನೀಡಿದ್ದ ಜಾಮೀನು ರದ್ದು ಕೋರಿ ಎಸ್‌ಐಟಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ನ್ಯಾಯಪೀಠ, ರೇವಣ್ಣ ಜಾಮೀನು ರದ್ದುಗೊಳಿಸಲು ನಿರಾಕರಿಸಿದೆ. ಅಲ್ಲದೆ ಪ್ರಕರಣದ ಎಲ್ಲಾ ಆರೋಪಿಗಳಿಗೂ ಜಾಮೀನು ಮಂಜೂರು ಮಾಡಿದೆ.

ಆರೋಪಿಗಳಾದ ಸತೀಶ್ ಬಾಬು, ಮಧುಗೌಡ, ಕೆ.ಎ.ರಾಜಗೋಪಾಲ್, ಹೆಚ್.ಕೆ.ಸುಜಯ್, ಹೆಚ್.ಎನ್.ಮಧು, ಎಸ್.ಟಿ.ಕೀರ್ತಿಗೆ ಜಾಮೀನು ನೀಡಿ ನ್ಯಾಯಮೂರ್ತಿ ಎಂ.ನಾಗಪ್ರಸನ್ನರಿದ್ದ ಪೀಠ ಆದೇಶ ಹೊರಡಿಸಿದೆ. ಇದೇ ಪ್ರಕರಣದಲ್ಲಿ ಆರೋಪಿಯಾಗಿರುವ ರೇವಣ್ಣ ಪತ್ನಿ ಭವಾನಿ ಈಗಾಗಲೇ ಜಾಮೀನು ಪಡೆದುಕೊಂಡಿದ್ದಾರೆ. ಮೇ 13 ರಂದು, ಶಾಸಕರು, ಸಂಸದರ ವಿಶೇಷ ನ್ಯಾಯಾಲಯ ರೇವಣ್ಣ ಅವರಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ನಂತರ ಎಸ್‌ಐಟಿ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

ನಕ್ಕರೆ ಅದೇ ಸ್ವರ್ಗ

ಟೀಚರ್ : 1983ರ ವಿಶ್ವಕಪ್ ಯಾರಿಗೆ ಸಿಕ್ತು?

ವಿದ್ಯಾರ್ಥಿ : ಗೆದ್ದವರಿಗೆ!

ಮೈಸೂರು ಮಿತ್ರ

ಗುರುವಾರ, 29 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಜೀವನ ಅನ್ನೋದು ಸೋಲು–ಗೆಲುವಿನ ಆಟ, ಗೆದ್ದವನಿಗೆ ಸೋಲಬಾರದೆಂಬ ಭಯ ಇದ್ದರೆ, ಸೋತವನಿಗೆ ಗೆಲ್ಲಲೇಬೇಕೆಂಬ ಛಲವಿರುತ್ತದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಭಾಷೆ ತಿಳಿಯದಿದ್ದರೂ ಹಾಸ್ಯಕ್ಕೆ ಕಡಿಮೆಯಿಲ್ಲ.

ನಿಮ್ಮ ಪತ್ರಗಳು

■ ಇನ್ನಾವ ಪುರುಷಾರ್ಥಕ್ಕಾಗಿ ಈ ಮುಡಾ

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಸ್ಥಾಪನೆಯ ಮೂಲ ಉದ್ದೇಶ ನಿವೇಶನ ರಹಿತ ನಾಗರಿಕರಿಗೆ ನಿವೇಶನವನ್ನು ನೀಡುವುದಾಗಿತ್ತು. ಆದರೆ ಇಲ್ಲಿ ಬೇರೆಯದೇ ಆಗಿದೆ. ಪ್ರಾಧಿಕಾರದಿಂದ ನಿವೇಶನವನ್ನು ಕೋರಿ ಸಾವಿರಾರು ಮಂದಿ ಅರ್ಜಿ ಸಲ್ಲಿಸಿ ಚಾತಕ ಪಕ್ಷಿಗಳಂತೆ ಕಾಯುತ್ತಾ ಕುಳಿತಿದ್ದಾರೆ. ಆದರೆ ಆ ಬಗ್ಗೆ ಮುಡಾ ಎಂದೂ ತಲೆಕೆಡಿಸಿಕೊಂಡಿಲ್ಲ. ಅಲ್ಲದೆ ಈಗಾಗಲೇ ಪ್ರಾಧಿಕಾರದಿಂದ ಕೆಲವೊಂದು ಬಡಾವಣೆಗಳನ್ನು ಅಭಿವೃದ್ಧಿಪಡಿಸಿ ನಿವೇಶನವನ್ನು ಮಂಜೂರು ಮಾಡಿ ಸುಮಾರು 15 ವರ್ಷಗಳಾಗಿದ್ದರೂ ಸಹ ನಿಯಮದಂತೆ ಸಂಬಂಧಪಟ್ಟ ಮಂಜೂರುದಾರರಿಗೆ "ಟೈಟಲ್ ಡೀಡ್" ಅನ್ನು ವಿತರಿಸುವ ಬಗ್ಗೆ ಎಂದೂ ಕೂಡ ಆಲೋಚನೆ ಮಾಡಿರುವುದಿಲ್ಲ ಮತ್ತು ಪ್ರಾಧಿಕಾರದಿಂದ ಅಭಿವೃದ್ಧಿಗೊಂಡಿರುವ ಬಡಾವಣೆಗಳ ಮೂಲಸೌಕರ್ಯ, ನಿರ್ವಹಣೆಯ ಜವಾಬ್ದಾರಿಯು ಇದ್ದರೂ ಇಲ್ಲದಂತೆ ವರ್ತಿಸುವ ಅಧಿಕಾರಿ ವರ್ಗ, ಇನ್ನು ಪ್ರಾಧಿಕಾರದಿಂದ ಭೂ ಸ್ವಾಧೀನ ಪಡಿಸಿಕೊಂಡ ಜಮೀನಿನ ಭೂಮಾಲೀಕರಿಗೆ ಸರ್ಕಾರದ ನಿಯಮದಂತೆ ಶೇಕಡ 50: 50 ರ ಅನುಪಾತದಲ್ಲಿ ನಿವೇಶನಗಳನ್ನು ಮಂಜೂರು ಮಾಡುವ ಪ್ರಕ್ರಿಯೆಯಲ್ಲಿ ಭೂಮಿ ಕಳೆದುಕೊಂಡ ನಿಜವಾದ ಭೂಮಾಲೀಕರಿಗೆ ದೊರಕಬೇಕಾದ ನಿವೇಶನಗಳು ನೀಡಿಲ್ಲ. ಆತನ ಹೆಸರಿನಲ್ಲಿ ಮಹನೀಯರಾದ ಜನಪ್ರತಿನಿಧಿಗಳು, ಅಧಿಕಾರಿಗಳು ಮತ್ತು ಡೆವಲಪರ್ಸ್‌ಗಳ ಹೆಸರುಗಳಿಗೆ ಮಂಜೂರಾಗಿರುತ್ತವೆ ಎಂಬುದು ಜಗಜ್ಜಾಹೀರಾಗಿದೆ. ಹೀಗಿರಬೇಕಾದರೆ ಕೇವಲ ಕೆಲವೊಂದು ಮಂದಿಗಳ ಅಭಿವೃದ್ಧಿಗಾಗಿ ಕಾಯ ವಾಚಾ ಶ್ರಮಿಸುತ್ತಿರುವ ಈ 'ಮುಡಾ'ಬೇಕೆ?

–ಶಿವಪ್ರಕಾಶ್ ಎ ಎಸ್, ವಕೀಲರು, ಮೈಸೂರು

■ ವಿಪರ್ಯಾಸ

ಮಾನ್ಯರೆ,

ಕೃತಕ ಬುದ್ಧಿಮತ್ತೆಯ ಕ್ಯಾಮರಾ ಕಣ್ಣುಗಳು ಸೆರೆಹಿಡಿದ ದೃಶ್ಯಗಳನ್ನಾಧರಿಸಿ ಸಣ್ಣಪುಟ್ಟ ಸಂಚಾರ ನಿಯಮಗಳನ್ನು ಉಲ್ಲಂಘಿಸಿದ ವಾಹನ ಸವಾರ, ಚಾಲಕರಿಂದ ಕೋಟ್ಯಂತರ ರೂಪಾಯಿಗಳ ದಂಡವನ್ನು ವಸೂಲು ಮಾಡಲಾಗಿದೆ ಎಂದು ಪೊಲೀಸರು ಬೀಗುತ್ತಿದ್ದಾರೆ! ವಿಪರ್ಯಾಸವೆಂದರೆ ಸರಕಾರದ ಸಹಸ್ರಾರು ಕೋಟಿ ರೂಪಾಯಿಗಳಷ್ಟು ಭಾರಿ ಮೊತ್ತವನ್ನು ನುಂಗಿ ನೀರು ಕುಡಿದ ಒಬ್ಬನೇ ಒಬ್ಬ ಪುಡಾರಿಯಿಂದ ಒಂದೇ ಒಂದು ರೂಪಾಯಿಯನ್ನು ವಸೂಲು ಮಾಡಲು ಯಾವುದೇ ಸಹಜ ಬುದ್ಧಿಮತ್ತೆಯ ಪೊಲೀಸರಿಂದಲೂ ಸಾಧ್ಯವಾಗಿಲ್ಲ!

ಇದನ್ನು ನೋಡಿ ಈ ನಾಣ್ಣುಡಿ ನೆನಪಾಯಿತು....

"ಗೊಬ್ಬಳಿ ಕಡಿಯೋಕೆ ನನ್ನ ಗಂಡ ತಬ್ಬಲಿ
ಬಾಳೆ ಕಡಿಯೋಕೆ ನನ್ನ ಗಂಡ ಗೂಳಿ"

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

■ ಎಚ್‌ಐವಿ, ಏಡ್ಸ್ ಬಗ್ಗೆ ಎಚ್ಚರ ಇರಲಿ....!

ಮಾನ್ಯರೆ,

ಕಳೆದ ಒಂದು ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ 68,450 ಮಂದಿಯಲ್ಲಿ ಹೊಸದಾಗಿ ಹೆಚ್‌ಐವಿ ಸೋಂಕು ಕಾಣಿಸಿಕೊಂಡಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳುವುದರೊಂದಿಗೆ, ಎಚ್‌ಐವಿ ಮುಕ್ತ ಕರ್ನಾಟಕದ ಕನಸು ನನಸಾಗಲು ಇನ್ನೂ ಹಲವು ವರ್ಷಗಳೇ ಬೇಕಾದಂತೆ ಕಾಣುತ್ತದೆ. 1986ರಲ್ಲಿ ದೇಶದಲ್ಲಿ ಮೊದಲ ಹೆಚ್‌ಐವಿ ಅಥವಾ ಏಡ್ಸ್ ಪ್ರಕರಣ ಪತ್ತೆಯಾಗಿತ್ತು. ಕರ್ನಾಟಕದಲ್ಲಿ ಆ ಸೋಂಕು ನಿರ್ಮೂಲನೆಗೆ ಸರ್ಕಾರಗಳು ಏನೆಲ್ಲಾ ಪ್ರಯತ್ನ ಮಾಡಿದರೂ ಸಂಪೂರ್ಣ ಯಶಸ್ಸು ಸಿಗುತ್ತಲೇ ಇಲ್ಲ. ಇವತ್ತಿಗೂ ಈ ವಿಷಯದಲ್ಲಿ ಭಾರತ ಎಚ್‌ಐವಿ ಅಥವಾ ಏಡ್ಸ್ ಸೋಂಕಿನಲ್ಲಿ ಮೂರನೇ ಸ್ಥಾನದಲ್ಲಿದೆ. ಕರ್ನಾಟಕದಲ್ಲಿ 2.28 ಲಕ್ಷ ಮಂದಿ ಸೋಂಕಿತರಿದ್ದಾರೆ.

ಎಚ್‌ಐವಿ, ಏಡ್ಸ್ ಪ್ರಕರಣಗಳ ಹೆಚ್ಚಳಕ್ಕೆ ಸ್ವೇಚ್ಛಾಚಾರದ ಲೈಂಗಿಕ ಕ್ರಿಯೆ ಕಾರಣ ಎಂಬುವುದರಲ್ಲಿ ಎರಡು ಮಾತಿಲ್ಲ. ಸಿನಿಮಾ, ವೆಬ್ ಸೀರೀಸ್, ಸೋಶಿಯಲ್ ಮೀಡಿಯಾ, ವೆಬ್‌ಸೈಟ್‌ಗಳ ಮೂಲಕ ಯುವಕರು ಬಹುಬೇಗನೆ ಲೈಂಗಿಕತೆಯ ಆಸಕ್ತಿ ಬೆಳೆಸಿಕೊಳ್ಳುತ್ತಿದ್ದಾರೆ. ಬಹು ಸಂಗಾತಿಗಳ ಜೊತೆ ಲೈಂಗಿಕ ಕ್ರಿಯೆಯಲ್ಲಿ ತೊಡಗುತ್ತಿದ್ದಾರೆ. ಇದರಿಂದಾಗಿ ಸೋಂಕು ವ್ಯಾಪಕವಾಗಿ ಹರಡುತ್ತಿದೆ ಎಂದು ತಜ್ಞರು ಹೇಳುತ್ತಾರೆ. ಲೈಂಗಿಕ ಕ್ರಿಯೆ ವೇಳೆ ಸುರಕ್ಷತಾ ಕ್ರಮ ಕೈಗೊಂಡರೆ ಸೋಂಕು ತಡೆಗಟ್ಟಬಹುದು. ಆದರೆ ಜನರು ಆ ಬಗ್ಗೆ ಗಮನ ಹರಿಸುತ್ತಿಲ್ಲ. ಅಸುರಕ್ಷಿತ ಲೈಂಗಿಕ ಕ್ರಿಯೆಯಿಂದಾಗಿ ಔಷಧವಿಲ್ಲದ ಕಾಯಿಲೆ ಎಂದು ಕರೆಯಲ್ಪಡುವ ಎಚ್‌ಐವಿಗೆ ಗುರಿಯಾಗುತ್ತಿದ್ದಾರೆ. ಸರ್ಕಾರ ನಿಯಂತ್ರಣಕ್ಕೆ ಸಾಕಷ್ಟು ಖರ್ಚು ಮಾಡುತ್ತಿದೆ. ಜನಜಾಗೃತಿಯನ್ನು ನಡೆಸುತ್ತಿದೆ. ಸರ್ಕಾರ ಏನೇ ಜಾಗೃತಿ ಮೂಡಿಸಿದರು ಎಚ್ಚೆತ್ತುಕೊಳ್ಳಬೇಕಾದವರು ಜನರೇ.

–ಹೊ.ನಂ.ಅಂಕರಾಜು, ಮೈಸೂರು

■ ಮುಖ್ಯಮಂತ್ರಿಗಳೇ ಈಗ 'ನಿರ್ಮಲ ಮುಡಾ ಭಾಗ್ಯ' ನೀಡಿ

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಶುದ್ಧೀಕರಣಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಗೆ ಆಶಾಮಂದಿರ ಯೋಜನೆಯ ರೂವಾರಿ ಮನೆ ಮಾದೇಗೌಡರು ಬಹಿರಂಗ ಪತ್ರ ಬರೆದಿರುವುದು ಸ್ವಾಗತಾರ್ಹ. ಮಾದೇಗೌಡರ ಪತ್ರದಲ್ಲಿ ಕೆಲವು ಉತ್ತಮವಾದ ಸಂಗತಿಗಳಿವೆ. ಅವುಗಳಲ್ಲಿ ಕೆಲವು ಸಿದ್ದರಾಮಯ್ಯನವರೇ 1) ನಿಮ್ಮ ಕೊನೆ ಅಧಿಕಾರಾವಧಿಯಲ್ಲಿ ಮುಡಾ ವಿಷಯದಲ್ಲಿ ಜನತೆ ನಿಮ್ಮನ್ನು ಶಾಶ್ವತವಾಗಿ ನೆನಪಿಸಿಕೊಳ್ಳುವ ಕೆಲಸ ಮಾಡಿ. 2) ಮುಡಾ ಹಗರಣದಲ್ಲಿ ಭೂಮಿ ಕಬಳಿಸಿ ಏನು ಹಾಗೇ ಇಲ್ಲ ಎನ್ನುವ ಮಂದಿಗೆ ಬಿಸಿ ಮುಟ್ಟಿಸುವ ಶಕ್ತಿ ನಿಮಗಿದೆ. 3) ಸಾಧ್ವಿಮಣಿ ನಿಮ್ಮ ಶ್ರೀಮತಿಯವರ ಹೆಸರು ಮುಡಾ ಹಗರಣದಲ್ಲಿ ಸಿಲುಕಿದ್ದು ನನಗೆ ಬಹಳ ನೋವು ತಂದಿದೆ. ನಗರಾಭಿವೃದ್ಧಿ ಪ್ರಾಧಿಕಾರದ ಕೊಳೆ ತೊಳೆಯುವ ಕೆಲಸವನ್ನು ಮಾಡಿ, ಎಲ್ಲಾ ಲೋಪದೋಷಗಳನ್ನು ಸರಿಪಡಿಸಿ. 84 ಸಾವಿರ ನಿವೇಶನಾಕಾಂಕ್ಷಿಗಳಿಗೆ ನ್ಯಾಯ ಒದಗಿಸಿಕೊಡುವ ಮೂಲಕ ನಿವೇಶನಗಳನ್ನು ನೀಡಿ, ಅವರು ನೆಮ್ಮದಿಯಿಂದ ಬದುಕಲು ಅವಕಾಶ ಕಲ್ಪಿಸಿಕೊಟ್ಟು, ಮೈಸೂರು ನಗರಾಭಿವದ್ದಿ ಪ್ರಾಧಿಕಾರವನ್ನು ಶುದ್ಧೀಕರಿಸಿ ಉಳಿಸಿ ಬೆಳೆಸಿ ಪುಣ್ಯಕಟ್ಟಿಕೊಳ್ಳುವ ಕೆಲಸ ಮಾಡಿ. ಮಹಾರಾಜರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಸ್ಥಾಪಿಸಿದ ಮೈಸೂರು ನಗರಾಭಿವೃದ್ಧಿ ಸಂಸ್ಥೆ ಜನಸ್ನೇಹಿ ಕೆಲಸ ಮಾಡಿ, ನಾಲ್ವಡಿ ಕೃಷ್ಣರಾಜ ಒಡೆಯರ್ ನಾಡಿಗೆ ಮಾಡಿದ ಉಪಕಾರ ನೆನೆದು ಜನ ಈಗಲೂ ಕೃಷ್ಣರಾಜ ಭೂಪ – ಮನೆ ಮನೆ ದೀಪ ಅಂತ ಹಾಡಿ ಹೊಗಳುತ್ತಾರೆ. ನಿತ್ಯ ದೇವರಂತೆ ಪೂಜಿಸುತ್ತಾರೆ. ನೀವು ನಾಡಿನ ಬಡ ಜನತೆಗೆ ಹಲವಾರು ಭಾಗ್ಯಗಳನ್ನು ನೀಡಿದ್ದೀರಿ. ಅವುಗಳ ಜೊತೆಗೆ ನಿರ್ಮಲ ಮುಡಾ ಭಾಗ್ಯ ನೀಡಿ ಶುದ್ಧೀಕರಿಸಿ ಮಹಾಜನತೆಯು ಶಾಶ್ವತವಾಗಿ ನಿಮ್ಮನ್ನು ನೆನಪಿಸಿಕೊಳ್ಳುವ ಕೆಲಸ ಮಾಡಿ ಎಂದು ಬಹಿರಂಗವಾಗಿ ಪತ್ರ ಬರೆದಿರುವುದು ಸ್ವಾಗತಾರ್ಹ.


–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.


ಮಂಥನ




ನಿವೇದಿತ ಹೆಚ್.
ಇಂಗ್ಲಿಷ್ ಉಪನ್ಯಾಸಕಿ
ಯುವರಾಜ ಕಾಲೇಜು
ಮೈಸೂರು.


ಜೀವನ ಶಿಲ್ಪಿಗಳಿಗೆ ಶಿರಸಾ ನಮಾಮಿ











**ಗುರು ಗೋವಿಂದ್ ದೋಹೂ ಖಡೇ
ಕಾಕೇ ಲಾಗೂ ಪಾಯ್
ಬಲಿಹಾರೀ ಗುರು ಅಪ್ನೇ
ಗೋವಿಂದ್ ದಿಯೇ ಬತಾಯೇ**

ಎಂದು ಕಬೀರರು ಹಾಡಿದರೆ, ನಮ್ಮ ಪುರಂದರ ದಾಸರು, 'ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ..' ಎಂದು ಸಾರಿ ಬಿಟ್ಟಿದ್ದಾರೆ.

ಗುರು ಎಂದಾಕ್ಷಣ ಈ ಇಬ್ಬರು ಮಹಾತ್ಮರ ಸಾಲುಗಳು ನಮಗೆ ನೆನಪಾಗದೇ ಇರಲು ಸಾಧ್ಯವೇ ಇಲ್ಲ. ಮತ್ತೆ ಸೆಪ್ಟೆಂಬರ್ 5 ಬರುತ್ತಿದೆ. ನಮ್ಮ ಜೀವನವನ್ನು ಹಸನು ಮಾಡಿದ ಗುರುವರ್ಯರನ್ನು ನೆನಪುಮಾಡಿಕೊಳ್ಳಲು ಅವರಿಗೆ ವಂದನೆ ಸಲ್ಲಿಸಲು ಇದೊಂದು ಸುಸಂದರ್ಭ. ವರ್ಣಮಾತ್ರಂ ಕಲಿಸಿದಾತಂ ಗುರುಂ ಎನ್ನುವ ನಾವು, ಗುರುಪೂರ್ಣಿಮೆಯನ್ನೂ ಆಚರಿಸುತ್ತೇವೆ ಮತ್ತು ಸೆಪ್ಟೆಂಬರ್ 5 ಅನ್ನು ಶಿಕ್ಷಕರ ದಿನಾಚರಣೆ ಎಂದು ಸಂಭ್ರಮಿಸುತ್ತೇವೆ. ಅಲ್ಲದೇ ಅಕ್ಟೋಬರ್ 5, ವಿಶ್ವ ಶಿಕ್ಷಕರ ದಿನಾಚರಣೆ. ನಮ್ಮನ್ನು ರೂಪಿಸಿದವರನ್ನು ಮೂರು ಮೂರು ಬಾರಿ ನೆನೆಯುವ, ಕೃತಜ್ಞತೆ ಸಲ್ಲಿಸುವ ಅವಕಾಶ!

ಭಾರತದಲ್ಲಿ ಮಾತ್ರವಲ್ಲ, ಇಡೀ ಪ್ರಪಂಚದ ಯಾವುದೇ ಮೂಲೆಗೆ ಹೋದರೂ, ಎಲ್ಲೆಡೆ ಗುರು–ಶಿಷ್ಯರ ಬಾಂಧವ್ಯದ ಸಾವಿರಾರು ಕತೆಗಳು ನಮ್ಮ ಕಿವಿಗೆ ಬಿದ್ದೇ ಬೀಳುತ್ತವೆ. ಸಾಕ್ರಟಿಸ್, ಪ್ಲೇಟೋ, ಅರಿಸ್ಟಾಟಲ್, ಹೆಲೆನ್ ಕೆಲರ್–ಮೇರಿ ಆನ್ ಸಲ್ಲಿವಾನ್, ಚಂದ್ರಗುಪ್ತ ಮೌರ್ಯ–ಚಾಣಕ್ಯ, ವಿವೇಕಾನಂದರು–ರಾಮಕೃಷ್ಣ ಪರಮಹಂಸರು, ಶಿಶುನಾಳ ಷರೀಫ–ಗೋವಿಂದಭಟ್ಟರು, ಗಾಂಧೀಜಿ–ಗೋಖಲೆ, ಸಚಿನ್ ತೆಂಡುಲ್ಕರ್–ಅಚ್ರೇಕರ್ ಇವರೆಲ್ಲಾ ದಂತಕತೆಗಳೇ ಆಗಿಬಿಟ್ಟಿದ್ದಾರೆ.

ಇನ್ನು ನಮ್ಮ ಪುರಾಣಗಳಲ್ಲಿ ಇಣುಕಿದರೆ, ದೇವಕಿ ಕಂದನಾದ ದೇವರ ದೇವನಾದ ಕೃಷ್ಣ ತನ್ನ ಗುರು ಸಾಂದೀಪನಿಗೆ ಗುರುದಕ್ಷಿಣೆ ನೀಡಲು, ಅವರ ಸತ್ತ ಮಗನನ್ನು ಬದುಕಿಸಿ, ಅವರನ್ನು ಶೋಕಮುಕ್ತ ಗೊಳಿಸಿ ಅನುಗ್ರಹಿತನಾದ. ಆದರೆ ಗುರು ಪರಶುರಾಮರ ನಿದ್ರೆಗೆ ಭಂಗ ತರ ಬಾರದೆಂದು ಯತ್ನಿಸಿದ ಕರ್ಣ ಅವರ ಕೋಪಕ್ಕೆ ಗುರಿಯಾಗಿ ಶಪಿತನಾದ. ವಿಶ್ವಾಮಿತ್ರರ ಬಡಶಿಷ್ಯ ಗಾಲವ ಗುರುದಕ್ಷಿಣೆ ಕೊಡಬೇಕೆಂಬ ಹಠಕ್ಕೆ ಬಿದ್ದಿದ್ದರಿಂದ ಮಾಧವಿಯ ಜೀವನ ನರಕಸದೃಶವಾಯಿತು. ಅದೇ ವಿಶ್ವಾಮಿತ್ರನ ಶಿಷ್ಯ ನಕ್ಷತ್ರಿಕ ಗುರುಗಳ ಮಾತಿನ ಪಾಲನೆಗಾಗಿ ಹರಿಶ್ಚಂದ್ರನನ್ನು ಇನ್ನಿಲ್ಲದಂತೆ ಕಾಡಿ ನುಡಿಗಟ್ಟಾಗಿ ಅಮರನಾಗಿ ಬಿಟ್ಟ! ದ್ರೋಣರಿಗೆ ಅತ್ಯಂತ ಪ್ರಿಯನಾದ ಅರ್ಜುನ ಬಿಲ್ಗಾರನಾಗಿ ಅಜೇಯನೆನಿಸಿದರೆ, ಅವರನ್ನು ಮಾನಸ ಗುರುಗಳೆಂದೆಣಿಸಿದ ಏಕಲವ್ಯ ಹೆಬ್ಬೆರಳನ್ನು ಕಳೆದುಕೊಳ್ಳಬೇಕಾಯಿತು. ವಸಿಷ್ಠರ ಮಾತನ್ನು ಮೀರಿ ಸಶರೀರನಾಗಿ ಸ್ವರ್ಗಾರೋಹಣ ಮಾಡಬೇಕೆಂಬ ಹಠಕ್ಕೆ ಬಿದ್ದ ತ್ರಿಶಂಕು ಎಲ್ಲಿಯೂ ಸಲ್ಲದವರಿಗೆ ಇಂದಿಗೂ ಅತ್ಯುತ್ತಮ ಉದಾಹರಣೆಯಾಗಿದ್ದಾನೆ! ತಾಯಿಯನ್ನೇ ಗುರುವೆಂದು ಭಾವಿಸಿ ತಪಗೈದ ಧ್ರುವ ಅಜರಾಮರನಾಗಿದ್ದಾನೆ. ಪಾಣಿನಿಯ ಗುರುಗಳು, ಅವನ ಕೈಲಿ ವಿದ್ಯಾ ರೇಖೆಯಿಲ್ಲವೆಂದು ಹೀಯ್ಯಾಳಿಸಿದ್ದಕ್ಕೆ, ವಿದ್ಯಾ ರೇಖೆಯನ್ನು ತಾನೇ ಕೊರೆದುಕೊಂಡು ಸಂಸ್ಕೃತ ವ್ಯಾಕರಣದ ಪಿತಾಮಹನಾಗಿ ಬೆಳೆದ.

ಹೀಗೆ ಗುರುವಿನ ಆಶೀರ್ವಾದ, ಬೈಗುಳು, ತಿರಸ್ಕಾರ, ಮಾರ್ಗದರ್ಶನ ಎಲ್ಲವೂ ಶಿಷ್ಯನಿಗೆ ಅಭ್ಯುದಯವನ್ನೇ ಉಂಟುಮಾಡುತ್ತದೆ ಎಂಬುದನ್ನು ನಂಬಲು ಇವಕ್ಕಿಂತಾ ನಿದರ್ಶನಗಳು ಬೇಕೇ?

ನಮ್ಮ ಕನ್ನಡ ಸಾಹಿತ್ಯಲೋಕವಂತೂ ಗುರು–ಶಿಷ್ಯ ಪರಂಪರೆಯನ್ನು ಅತ್ಯಂತ ಪ್ರೀತಿಯಿಂದ ತನ್ನದಾಗಿಸಿಕೊಂಡಿದೆ. ರಾಷ್ಟ್ರಕವಿ ಕುವೆಂಪು ತಮ್ಮ ಮಹಾಕಾವ್ಯ ಶ್ರೀ ರಾಮಾಯಣದರ್ಶನಂ ಅನ್ನು ತಮ್ಮ ಗುರುಗಳಾದ ಟಿ.ಎಸ್.ವೆಂಕಣ್ಣಯ್ಯನವರ ಪದಕಮಲಕ್ಕೆ

**ಇದೊ ಮುಗಿಸಿ ತಂದಿಹೆನ್ ಈ ಬೃಹದ್
ಗಾನಮಂ ನಿಮ್ಮ ಸಿರಿಯಡಿಗೊಪ್ಪಿಸಲ್ಕೆ,
ಓ ಪ್ರಿಯ ಗುರುವೆ?**

ಎಂದು ಅರ್ಪಿಸಿ ಧನ್ಯತಾಭಾವವನ್ನು ಅನುಭವಿಸಿದ್ದಾರೆ. ಕನ್ನಡದ ಪ್ರಥಮ ಪ್ರಾಧ್ಯಾಪಕರಾದ ಟಿ.ಎಸ್. ವೆಂಕಣ್ಣಯ್ಯನವರ ಮೇರು ವ್ಯಕ್ತಿತ್ವ ಕನ್ನಡ ಸಾಹಿತ್ಯ ಲೋಕಕ್ಕೆ ಸುವರ್ಣಯುಗವನ್ನು ನೀಡಿತೆಂದರೆ ಅತಿಶಯೋಕ್ತಿಯಲ್ಲ. ವೆಂಕಣ್ಣಯ್ಯನವರ ತಮ್ಮ ತಸು. ಶಾಮರಾಯರೂ ತಮ್ಮ ಅಣ್ಣ ಹಾಕಿಕೊಟ್ಟ ದಾರಿಯಲ್ಲಿಯೇ ನಡೆದು ಹಲವರಿಗೆ ದಾರಿದೀಪವಾದರು. ಜಿ.ಎಸ್.ಶಿವರುದ್ರಪ್ಪನವರು, ಎನ್.ಎಸ್. ಲಕ್ಷ್ಮೀ ನಾರಾಯಣಭಟ್ಟರೂ ಸೇರಿದಂತೆ ಹಲವರು ಶಾಮರಾಯರ ಅಕ್ಕರೆಯ ಸವಿಯನ್ನುಂಡವರು. ಎದೆತುಂಬಿ ಹಾಡಿದೆನು ಅಂದು ನಾನು... ಎಂದು ಜಿ.ಎಸ್.ಎಸ್ ಬರೆದದ್ದು ಶಾಮರಾಯರ ನಿಸ್ಪೃಹತೆಯನ್ನು ಕುರಿ ತಾಗಿಯೇ. ಎಸ್.ಎಲ್.ಭೈರಪ್ಪ ಅವರು ತಮ್ಮ ಗುರುಗಳಾದ ಯಾಮುನಾಚಾರ್ಯರ ಔದಾರ್ಯವನ್ನು ಅದೆಷ್ಟು ಭಕ್ತಿ ಮತ್ತು ಪ್ರೀತ್ಯದರಗಳಿಂದ ನೆನೆದಿದ್ದಾರೆ ಎಂಬುದನ್ನು ಭಿತ್ತಿ ಓದಿಯೇ ತಿಳಿಯಬೇಕು. ಕುವೆಂಪು, ಬೇಂದ್ರೆ, ಗೋಕಾಕರು, ಮಾಸ್ತಿ, ವಿ.ಸೀತಾರಾಮಯ್ಯ, ಲಂಕೇಶ್, ಅಡಿಗರು ಇವರೆಲ್ಲರೂ ಹಲವರಿಗೆ ಮಾರ್ಗದರ್ಶಕರಾಗಿ ಗುರುವಿನ ಸ್ಥಾನ ತುಂಬಿದವರೇ. ಬೇರೆ ಊರಿಗೆ ವರ್ಗವಾದ ರಾಧಾಕೃಷ್ಣನ್ ಅವರನ್ನು ಮಹಾರಾಜ ಕಾಲೇಜಿನಿಂದ ರೈಲ್ವೇ ಸ್ಟೇಷನ್ ವರೆಗೆ ವಿದ್ಯಾರ್ಥಿಗಳೇ ಕುದುರೆಗಾಡಿಯಲ್ಲಿ ಕೂರಿಸಿ ಸ್ವತಃ, ತಾವೇ ಗಾಡಿಯನ್ನು ಎಳೆದು ರೈಲು ಹತ್ತಿಸಿದಂತಹ ಘಟನೆ ಬಹುಶಃ First of its Kind ಅನ್ನುತ್ತಾರಲ್ಲ ಹಾಗೆ. ಎಚ್.ನರಸಿಂಹಯ್ಯನವರು ಆದರ್ಶ ಗುರುವಾಗಿ ಬಾಳಿ ತೋರಿಸಿದವರು.

ಈಗಲೂ ಹಲವು ಹಿರಿಯ ಸಾಹಿತಿಗಳು ಕಿರಿಯ ಹೊಸ ಸಾಹಿತಿಗಳಿಗೆ ಮಾರ್ಗದರ್ಶಕರಾಗಿ ಗುರುವಿನ ಸ್ಥಾನದಲ್ಲಿ ನಿಂತಿದ್ದಾರೆ. ಕನ್ನಡ ಚಿತ್ರರಂಗ ಕೂಡ ಗುರು–ಶಿಷ್ಯರ ಸಂಬಂಧವನ್ನು ಬಿಂಬಿಸುವ ಹಲವು ಚಿತ್ರಗಳನ್ನು ನಿರ್ಮಿಸಿದೆ. ತ.ರಾ.ಸು ಅವರ ಕಾದಂಬರಿ ಆಧರಿಸಿದ, ಕಣಗಾಲರ 'ನಾಗರಹಾವು' ಚಿತ್ರದ ಚಾಮಯ್ಯ ಮೇಷ್ಟ್ರು–ರಾಮಾಚಾರಿ ಅಜರಾಮರ. ಸ್ಕೂಲ್ ಮಾಸ್ಟರ್ ಚಿತ್ರದಲ್ಲಿ ಶಿಕ್ಷಕನಿಗೆ ಮನೆ ನಿರ್ಮಿಸಿ ಕೊಡುವುದು ಹೃದಯಸ್ಪರ್ಶಿ ದೃಶ್ಯ. ಆಗಿನ ಕಾಲದಲ್ಲಿ ಅಂತಹ ಗುರುಭಕ್ತಿ ಎಲ್ಲರಲ್ಲೂ ಇತ್ತು.

ತಂದೆ–ತಾಯಿಯ ನಂತರ ಮಗು ಹತ್ತಿರವಾಗುವುದೇ ತನ್ನ ಶಿಕ್ಷಕ ಅಥವಾ ಶಿಕ್ಷಕಿಗೆ. ಮನೆಯ ಬೆಚ್ಚನೆಯ ವಾತಾವರಣದ ನಂತರ ಶಾಲೆಗೆ ಹೋಗುವ ಮಗು ಅಲ್ಲಿ ತನ್ನ ಟೀಚರ್, ಮಿಸ್, ಸರ್ ಅನ್ನು ಸರ್ವಾಂತರ್ಯಾಮಿ, ಸರ್ವಜ್ಞ ಎಂದುಕೊಂಡೇ ಇರುತ್ತದೆ. ಅವರು ಹೇಳಿದ್ದೇ ವೇದವಾಕ್ಯ. ಅವರ ಸಲಹೆ ಸೂಚನೆಗಳನ್ನು ಚಾಚೂ ತಪ್ಪದೆ ಅನುಸರಿಸುತ್ತದೆ. ಮಣ್ಣಿನ ಹಸಿಮುದ್ದೆಯಂತಹ ಮನಸ್ಸಿನಲ್ಲಿ ಅದರ ಮಿಸ್ ಹೇಳಿದ್ದುದು ಅಚ್ಚೊತ್ತಿ ಬಿಡುತ್ತದೆ. ಹಾಗಾಗಿಯೇ ಮಗುವಿನ ಪ್ರಾಥಮಿಕ ಶಾಲಾ ವಿದ್ಯಾಭ್ಯಾಸದ ಸಮಯದಲ್ಲಿನ ಶಿಕ್ಷಕವೃಂದ ಅತೀ ಉತ್ತಮವಾಗಿದ್ದರೆ ಮತ್ತು ಮಮತಾಮಯಿಗಳಾಗಿದ್ದರೆ ಮಗುವಿನ ಭವಿಷ್ಯವೇ ಭದ್ರವಾದಂತೆ.

> ❝ ಇಂದು ಶಿಕ್ಷಣದ ಮಹತ್ವವನ್ನು ಎಲ್ಲರೂ ಅರಿತಿರುವುದರಿಂದ, ಶಿಕ್ಷಣ ವ್ಯವಸ್ಥೆಯನ್ನು ಉತ್ತಮಪಡಿಸುವುದಕ್ಕೆಂದೇ ಹಲವಾರು ಸಂಶೋಧನೆಗಳು ನಡೆಯುತ್ತಿವೆ. ವಿದ್ಯಾರ್ಹತೆ ಮತ್ತು ವಿಷಯ ಪರಿಣತಿಯ ಜೊತೆಗೆ, ಮನೋವೈಜ್ಞಾನಿಕ ನೆಲೆಗಟ್ಟಿನಿಂದಲೂ ವಿದ್ಯಾರ್ಥಿಯನ್ನು ಅರ್ಥಮಾಡಿಕೊಳ್ಳುವ ಕೌಶಲವನ್ನು ಶಿಕ್ಷಕರಿಗೆ ಕಲಿಸುವ ಪ್ರಯತ್ನಗಳಾಗುತ್ತಿವೆ. ಈ ನಿಟ್ಟಿನಲ್ಲಿ ಅನೌಪಚಾರಿಕ ಶಿಕ್ಷಣದ ಅಳವಡಿಕೆಯು ಹೊಸ ಸಾಧ್ಯತೆಗಳನ್ನು ಹುಟ್ಟು ಹಾಕಿದೆ. ಇವೆಲ್ಲವೂ ಒಂದು ಉತ್ತಮ ನಾಳೆಯನ್ನು ನಮ್ಮ ಮಕ್ಕಳಿಗೆ ಶಿಕ್ಷಣದ ಮೂಲಕ ದೊರಕಿಸಿ ಕೊಟ್ಟೇ ಕೊಡುತ್ತವೆ ಎಂಬುದು ನಮ್ಮೆಲ್ಲರ ನಿರೀಕ್ಷೆ ಮತ್ತು ಆಶಯ.

ಕೆಲವೇ ವರ್ಷಗಳ ಹಿಂದೆ ಶಿಕ್ಷಕರಿಗೆ ಆ ಹುದ್ದೆ ಕೇವಲ ಹುದ್ದೆಯಾಗಿರಲಿಲ್ಲ. ಇಚ್ಛೆಪಟ್ಟು ಆಯ್ದುಕೊಂಡ ಸೇವೆಯಾಗಿತ್ತು. ವಿದ್ಯಾರ್ಥಿಗಳನ್ನು ತಮ್ಮ ಮಕ್ಕಳಂತೆಯೇ ನೋಡಿಕೊಳ್ಳುತ್ತಿದ್ದರು, ಪ್ರೀತಿಸುತ್ತಿದ್ದರು, ಕಾಳಜಿ ಮಾಡುತ್ತಿದ್ದರು. ಶಿಕ್ಷಕರು ಎಂದರೆ, ಊರಿನ ನ್ಯಾಯಾಧೀಶರಂತಿದ್ದರು. ಶಾಲೆಯಿದ್ದ ಊರಿ ನಲ್ಲಿಯೇ ವಾಸ ಮಾಡುತ್ತಿದ್ದ ಅವರ ಬಳಿಗೆ, ಊರಿನವರು ತಮ್ಮ ಸಮಸ್ಯೆಗಳನ್ನೆಲ್ಲಾ ಕೊಂಡೊಯ್ಯುತ್ತಿದ್ದರು. ಪರಿಹಾರ ಪಡೆಯುತ್ತಿದ್ದರು. ಮಕ್ಕಳನ್ನು ಅವರ ಉಡಿಗೆ ಹಾಕಿ ನೆಮ್ಮದಿಯಾಗಿರುತ್ತಿದ್ದರು. ತಮ್ಮ ಮಕ್ಕಳನ್ನು ಅವರ ಉಡಿಗೆ ಅಕ್ಷರಶಃ ಹಾಕಿಬಿಡುತ್ತಿದ್ದರು. ಮಕ್ಕಳಿಗೆ ಉಚಿತ ಶಿಕ್ಷೆ–ಶಿಕ್ಷಣ ಎರಡನ್ನೂ ನೀಡುತ್ತಿದ್ದ ಶಿಕ್ಷಕರು ಆದರ್ಶಪ್ರಾಯರಾಗಿದ್ದರು. ಬಡ ಮೇಷ್ಟ್ರು ಎಂದು ಕರೆಸಿಕೊಂಡರೂ ಅವರ ಹೃದಯ ಶ್ರೀಮಂತಿಕೆಗೆ ಬೇರೆ ಯಾರೂ ಸರಿಸಾಟಿಯಾಗುತ್ತಿರಲಿಲ್ಲ.

ಬದಲಾವಣೆಯ ನಾಗಾಲೋಟ ಪ್ರಾರಂಭವಾದ ಮೇಲೆ ಹಲವು ಬದಲಾವಣೆಗಳಾದವು. ಇಂಗ್ಲಿಷ್ ಶಿಕ್ಷಣ ಮುನ್ನೆಲೆಗೆ ಬಂತು. ಹೃದಯಗಳನ್ನು ಬೆಸೆಯು ತ್ತಿದ್ದ ಮಾತೃಭಾಷೆ ಶಿಕ್ಷಣದ ಮಾಧ್ಯಮವಾಗಿ ಯಾವಾಗ ಉಳಿಯಲಿಲ್ಲವೋ, ವಿದ್ಯಾರ್ಥಿ ಮತ್ತು ಶಿಕ್ಷಕರ ನಡುವಿನ ಸಂಬಂಧವೂ ಯಾಂತ್ರಿಕವಾಗತೊಡಗಿತು. ಖಾಸಗಿ ಶಾಲೆಗಳು ಹೆಚ್ಚಾಗತೊಡಗಿದವು. ಬಹುತೇಕ ಶಾಲೆಗಳು ಮಗುವಿನ ಸರ್ವತೋಮುಖ ಬೆಳವಣಿಗೆ ಗಿಂತ ಹೆಚ್ಚಾಗಿ, ಅಂಕ ಗಳಿಕೆಯ ಕಡೆಗೆ ನೋಡತೊಡ ಗಿದ್ದರಿಂದ ಸಂಬಂಧ ವ್ಯಾವಹಾರಿಕವಾಯಿತು. ಕೇಳುವುದಕ್ಕೆ ಕಠಿಣ ಎನಿಸಿದರೂ, ಇದೇ ವಾಸ್ತವ.

ಮನೆಯಲ್ಲಿ ಒಬ್ಬರು ಅಥವಾ ಇಬ್ಬರು ಸಂತಾನ ಇರುವ ಇಂದಿನ ಮಕ್ಕಳನ್ನು ದಂಡಿಸುವವರೇ ಇಲ್ಲ ವಾಗಿದ್ದಾರೆ. ಕಾನೂನಿನಲ್ಲಾದ ಬದಲಾವಣೆಗಳೂ ಸಹ ದಂಡನಾರಹಿತವಾದ ಶಿಕ್ಷಣಕ್ಕೆ ಒತ್ತುಕೊಡುವುದರಿಂದ, ಅನಿವಾರ್ಯ ಸಂದರ್ಭಗಳಲ್ಲೂ ಮಕ್ಕಳನ್ನು ದಂಡಿಸುವ ಹಕ್ಕು ಶಿಕ್ಷಕರಿಗೆ ಇಲ್ಲವಾಗಿದೆ. ಅತಿಹೆಚ್ಚು ಖರ್ಚು ಮಾಡಿ ಶಾಲೆಗೆ ಸೇರಿಸುವ ಪೋಷಕರಿಗೂ ಇದು ಸಮ್ಮತವಲ್ಲ. ಹಾಗಾಗಿ ಇಂದು ವೈಯಕ್ತಿಕ ನೆಲೆಯಲ್ಲಿ ಬಾಂಧವ್ಯ ರೂಪುಗೊಳ್ಳುವ ಅವಕಾಶ ಕಡಿಮೆ.

ಮಕ್ಕಳಿಗೆ ತಮ್ಮ ಅಪ್ಪ–ಅಮ್ಮ ಖರ್ಚು ಮಾಡಿರುವ ಮೊತ್ತದ ಅರಿವು ಇರುತ್ತದೆಯಾದ್ದರಿಂದ, ಅವು ಗಳಲ್ಲಿ ಒಂದು ರೀತಿಯ ಅಹಂಭಾವ ಬೆಳೆದು, ಶಿಕ್ಷಕರಿಗೆ ಗೌರವ ನೀಡುವುದಕ್ಕೂ ಚೌಕಾಸಿ ಮಾಡುತ್ತಾರೆ. ಬಹಳಷ್ಟು ಮಕ್ಕಳು ಶಿಕ್ಷಕರ ಬೆನ್ನಹಿಂದೆ ಆಡಿಕೊಳ್ಳುವುದು, ಏಕವಚನದಲ್ಲಿ ಕರೆಯುವುದನ್ನು ಮಾಡುತ್ತಾರೆ.

ಇನ್ನು ಹಲವಷ್ಟು ಸರ್ಕಾರೀ ಶಾಲೆಗಳಲ್ಲಿ ಶಿಕ್ಷಕರಿಗೆ ಬೇರೆ ಕೆಲಸಗಳ ಒತ್ತಡ ಅತೀ ಹೆಚ್ಚು ಇದ್ದು, ಪಾಠ ಮಾಡುವುದಕ್ಕೆ ಸಮಯ ಹೊಂದಿಸಿಕೊಂಡರೆ ಸಾಕಾಗಿರುತ್ತದೆ. ನಿರುಮ್ಮಳ ಮನಸ್ಸಿನಿಂದ ಮಕ್ಕಳ ಜೊತೆ ಬೆರೆಯುವುದಕ್ಕೆ ಅವಕಾಶವೇ ಆಗುವುದಿಲ್ಲ.

ಈ ಎಲ್ಲವೂ ಇಂದು ಗುರುಶಿಷ್ಯ ಸಂಬಂಧವನ್ನು ಜಾಳಾಗಿಸುತ್ತಿದೆ. ಎಷ್ಟೋ ಕಡೆ ಮಕ್ಕಳ ನಿಜ ಸಾಮರ್ಥ್ಯವೇ ಶಿಕ್ಷಕರಿಗೆ ತಿಳಿದಿರುವುದಿಲ್ಲ. ಇದಕ್ಕೆ ಪರಿಹಾರವೇನೋ ತಿಳಿದಿಲ್ಲ!

ಶಿಕ್ಷಕ ರಾಗುವವರಿಗೆ ಶೈಕ್ಷಣಿಕ ಅರ್ಹತೆ ಇದ್ದರೆ ಮಾತ್ರ ಸಾಲದು, ಸಹೃದಯತೆಯೂ ಇರಬೇಕು, 'ನನ್ನ ಕೈಲಿ ಏನೂ ಆಗುವುದಿಲ್ಲ' ಎಂದು ಕೊಳ್ಳುವ ಮಗುವನ್ನೂ ದಡ ಸೇರಿಸುವ ಶ್ರದ್ಧೆ ಪರಿಶ್ರಮ, ಎಲ್ಲಕ್ಕಿಂತ ಹೆಚ್ಚಾಗಿ ಅಂತಃಕರಣವಿರಬೇಕು.

ಇಂದು ಶಿಕ್ಷಣದ ಮಹತ್ವವನ್ನು ಎಲ್ಲರೂ ಅರಿ ತಿರುವುದರಿಂದ, ಶಿಕ್ಷಣ ವ್ಯವಸ್ಥೆಯನ್ನು ಉತ್ತಮ ಪಡಿಸುವುದಕ್ಕೆಂದೇ ಹಲವಾರು ಸಂಶೋಧನೆಗಳು ನಡೆಯುತ್ತಿವೆ. ವಿದ್ಯಾರ್ಹತೆ ಮತ್ತು ವಿಷಯ ಪರಿ ಣತಿಯ ಜೊತೆಗೆ, ಮನೋವೈಜ್ಞಾನಿಕ ನೆಲೆಗಟ್ಟಿ ನಿಂದಲೂ ವಿದ್ಯಾರ್ಥಿಯನ್ನು ಅರ್ಥಮಾಡಿಕೊಳ್ಳುವ ಕೌಶಲವನ್ನು ಶಿಕ್ಷಕರಿಗೆ ಕಲಿಸುವ ಪ್ರಯತ್ನಗಳಾಗುತ್ತಿವೆ. ಈ ನಿಟ್ಟಿನಲ್ಲಿ ಅನೌಪಚಾರಿಕ ಶಿಕ್ಷಣದ ಅಳವಡಿಕೆಯು ಹೊಸ ಸಾಧ್ಯತೆಗಳನ್ನು ಹುಟ್ಟು ಹಾಕಿದೆ. ಇವೆಲ್ಲವೂ ಒಂದು ಉತ್ತಮ ನಾಳೆಯನ್ನು ನಮ್ಮ ಮಕ್ಕಳಿಗೆ ಶಿಕ್ಷಣದ ಮೂಲಕ ದೊರಕಿಸಿ ಕೊಟ್ಟೇ ಕೊಡುತ್ತವೆ ಎಂಬುದು ನಮ್ಮೆಲ್ಲರ ನಿರೀಕ್ಷೆ ಮತ್ತು ಆಶಯ. ಎಲ್ಲ ಹೃದಯವಂತ ಶಿಕ್ಷಕರಿಗೂ ಶಿಕ್ಷಕ ದಿನಾಚರಣೆಯ ಶುಭ ಹಾರೈಕೆಗಳು.

ಒಳ ಮೀಸಲಾತಿ ಜಾರಿ ಸಂಬಂಧ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ

ಮಾದಿಗ ಸಮುದಾಯದ ಸಚಿವರು ಸೇರಿದಂತೆ ಮುಖಂಡರು ಭಾಗಿ



ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದಲ್ಲಿ ಬುಧವಾರ ಒಳ ಮೀಸಲಾತಿ ಜಾರಿಯ ಕುರಿತು ಗೃಹ ಕಚೇರಿ ಕಾವೇರಿಯಲ್ಲಿ ಸಭೆ ನಡೆಯಿತು.

ಬೆಂಗಳೂರು, ಆ.28(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವ ದಲ್ಲಿ ಒಳ ಮೀಸಲಾತಿ ಜಾರಿಯ ಕುರಿತು ಗೃಹ ಕಚೇರಿ ಕಾವೇರಿಯಲ್ಲಿ ಸಭೆ ನಡೆಸಿದರು. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಹಾಗೂ ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಉಪಸ್ಥಿತಿಯಲ್ಲಿ ಮಾದಿಗ ಸಮುದಾಯದ ಮಾಜಿ ಸಚಿವರು, ಶಾಸಕರ ಸಮ್ಮುಖದಲ್ಲಿ ಸಭೆ ನಡೆಯಿತು.

ಒಳ ಮೀಸಲಾತಿ ಜಾರಿಯ ವಿಚಾರದಲ್ಲಿ ನಾನು ಬದ್ಧನಾಗಿದ್ದೇನೆ. ಈ ಕುರಿತು ಹೈಕಮಾಂಡ್ ಮಟ್ಟದಲ್ಲಿ ಚರ್ಚೆ ನಡೆಸಿ ನಂತರ ಕ್ಯಾಬಿನೆಟ್ ಮೂಲಕ ಇದರ ಬಗ್ಗೆ ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಸಭೆಯಲ್ಲಿ ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ರಾಜ್ಯ ಸಭಾ ಸದಸ್ಯ ಎಲ್.ಹನುಮಂತಯ್ಯ, ಶಾಸಕರಾದ ಎನ್.ಶ್ರೀನಿವಾಸ, ಬಸವಂತಪ್ಪ ಡಾ.ತಿಮ್ಮಯ್ಯ, ಎಂ.ಶಿವಣ್ಣ ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

ಹೊಲಿಗೆ ಯಂತ್ರ ವಿತರಣೆ



ಮೈಸೂರಿನ ಲಯನ್ಸ್ ಅಂಬಾಸಿಡರಸ್ ಸಂಸ್ಥೆಯ ವತಿಯಿಂದ ಮಾಸಿಕ ಸೇವಾ ಕಾರ್ಯಕ್ರಮದ ಅಡಿಯಲ್ಲಿ ಸ್ವ ಉದ್ಯೋಗವನ್ನು ಮಾಡುವ ಉದ್ದೇಶದಿಂದ ಮೂವರು ಆರ್ಥಿಕವಾಗಿ ಹಿಂದುಳಿದ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ನೀಡಲಾಯಿತು. ಈ ವೇಳೆ ಮಾಜಿ ಜಿಲ್ಲಾ ರಾಜ್ಯಪಾಲರಾದ ಲಯನ್ ಕೆ.ದೇವೆಗೌಡ, ಲಯನ್ ಎಸ್. ರಾಮಚಂದ್ರನ್, ಜಿಲ್ಲಾ ಅಧ್ಯಕ್ಷರಾದ ಲಯನ್ ಸಿ.ಆರ್.ದಿನೇಶ್, ಭೌತಶಾಸ್ತ್ರ ಉಪನ್ಯಾಸಕರಾದ ಹೆಚ್ .ಎಸ್ ರಾಮಾನುಜ, ಸಂಸ್ಥೆಯ ಅಧ್ಯಕ್ಷ ವಿ.ಶ್ರೀಧರ್, ಕಾರ್ಯದರ್ಶಿ ಪಿ.ಮಲ್ಲಿಕಾರ್ಜುನಪ್ಪ, ಖಜಾಂಚಿ ಹೆಚ್.ಆರ್ .ರವಿಚಂದ್ರ, ಪ್ರಾಂತೀಯ ಅಧ್ಯಕ್ಷ ಕೆ.ಆರ್.ಭಾಸ್ಕರಾನಂದ, ವಲಯ ಅಧ್ಯಕ್ಷ ಹೆಚ್ .ಸಿ. ಕಾಂತಾರಾಜು ಮತ್ತು ಲಯನ್ ವಾಸು ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ ಗುರುವಾರ 29 ಆಗಸ್ಟ್ 2024

ಕರ್ನಾಟಕ ಸಂಭ್ರಮ–50; ಸೆ.1ರವರೆಗೆ ವಿಸ್ತರಣೆ

ಮೈಸೂರು, ಆ.28– ಸಾರ್ವಜನಿಕರ ಒತ್ತಾಯದ ಮೇರೆಗೆ ಮೈಸೂರಿನ ದಸರಾ ವಸ್ತುಪ್ರದರ್ಶನ ಮೈದಾನದಲ್ಲಿ ನಡೆಯುತ್ತಿರುವ 'ಕರ್ನಾಟಕ ಸಂಭ್ರಮ 50'ರ ಬೃಹತ್ ಗ್ರಾಹಕ ಮೇಳವನ್ನು ಸೆಪ್ಟೆಂಬರ್ 1ರವರೆಗೆ ವಿಸ್ತರಣೆ ಮಾಡಲಾಗಿದೆ.

ಜುಲೈ 25ರಿಂದ ಶುರುವಾಗಿರುವ ಈ ಬೃಹತ್ ಗ್ರಾಹಕ ಮೇಳಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಒತ್ತಾಯಕ್ಕೆ ಮಣಿದು ಮೇಳವನ್ನು ಭಾನುವಾರ 'ದವರೆಗೆ ವಿಸ್ತರಣೆ ಮಾಡಲಾಗಿದೆ.

ನವೆಂಬರ್ 1, 1973 ರಂದು ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರು ನಾಮಕರಣ ಮಾಡಲಾಗಿದೆ. ಈ ಸುವರ್ಣ ಮಹೋತ್ಸವದ ಕರ್ನಾಟಕ ಸಂಭ್ರಮ–50ರ ನೆನಪಿಗಾಗಿ ಮೈಸೂರಿನಲ್ಲಿ ಇದೇ ಮೊದಲ ಬಾರಿಗೆ, ಸೈಮನ್ ಎಕ್ಸಿಬಿಟರ್ಸ್ ಜುಲೈ 25ರಿಂದ ದಸರಾ ವಸ್ತು ಪ್ರದರ್ಶನ ಮೈದಾನದಲ್ಲಿ ಅತಿದೊಡ್ಡ ಗ್ರಾಹಕ ಮೇಳವನ್ನು ನಡೆಸುತ್ತಿದ್ದಾರೆ. 1973ರಿಂದ ಇಲ್ಲಿಯವರೆಗೆ ಕರ್ನಾಟಕದ ವಿವಿಧ ಕ್ಷೇತ್ರಗಳ ಮಹೋನ್ನತ ವ್ಯಕ್ತಿಗಳ ಮಾಹಿತಿಯನ್ನು ಒಳಗೊಂಡಿರುವ ಜ್ಞಾನದ ಮನೆಯು ಈ ಮೇಳದಲ್ಲಿ ಸಾಕಷ್ಟು ಜನಮನ್ನಣೆ ಗಳಿಸಿದೆ.

ನಾಲ್ಕು ಪರಿಕಲ್ಪನೆಗಳೊಂದಿಗೆ ಮೇಳ; ರೋಬೋಟಿಕ್ ಬಟರ್ ಫ್ಲೈ, ರೋಬೋಟಿಕ್ ಅನಿಮಲ್ ಕಿಂಗ್ಡಮ್, ಹಿಮಾಲಯನ್ ಅನಿಮಲ್ಸ್ ಮತ್ತು ಅವತಾರ್ ಎಂಬ ನಾಲ್ಕು ಪರಿಕಲ್ಪನೆಗಳೊಂದಿಗೆ ಗ್ರಾಹಕ ಮೇಳ ನಡೆಯುತ್ತಿದ್ದು, ಜನರನ್ನು ದೊಡ್ಡ ಮಟ್ಟದಲ್ಲಿ ಆಕರ್ಷಿಸಿದೆ. ಮೇಳದಲ್ಲಿ ಗೃಹೋಪಯೋಗಿ ವಸ್ತುಗಳು, ಡ್ರೆಸ್ ಮೆಟೀರಿಯಲ್‌ಗಳು, ರೆಡಿಮೇಡ್ ಬಟ್ಟೆ, ಸೀರೆ, ಕುರ್ತಾ ಪೈಜಾಮ, ಶರ್ಟಿಂಗ್ ಮತ್ತು ಸೂಟಿಂಗ್‌ಗಳು ದೊರೆಯುತ್ತಿವೆ. ವ್ಯಾಪಕ ಶ್ರೇಣಿಯ ಮಸಾಲಾ ಪುಡಿಗಳು, ಜೇನುತುಪ್ಪ, ಚಾಕೊಲೇಟ್‌ಗಳು, ಚಟ್ನಿ ಪುಡಿ, ಉಪ್ಪಿನಕಾಯಿ, ಒಣ ಹಣ್ಣುಗಳು ಸಹ ಮಾರಾಟಕ್ಕೆ ಲಭ್ಯವಿವೆ. ಎಕ್ಸ್ಪೋ ಸಾರ್ವಜನಿಕರಿಗೆ ಸಂಜೆ 4 ರಿಂದ ರಾತ್ರಿ 9.30 ರವರೆಗೆ ತೆರೆದಿರುತ್ತದೆ.

ಒಂದನೇ ಪುಟದಿಂದ

ಎನ್‌ಡಿಎ ಪಾಲು!

ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದರೆ, ಇತ್ತ ಕಾಂಗ್ರೆಸ್‌ನಿಂದಲೂ ಎಚ್.ಎಸ್.ಮಂಜು ಅಧ್ಯಕ್ಷ ಸ್ಥಾನಕ್ಕೆ, ಉಪಾಧ್ಯಕ್ಷ ಸ್ಥಾನಕ್ಕೆ ಜಾಕೀರ್ ಪಾಷಾ ಹಾಗೂ ಜಿ.ಕೆ.ಶ್ರೀನಿವಾಸ್ ನಾಮಪತ್ರ ಸಲ್ಲಿಸಿದ್ದರು. ಅಂತಿಮವಾಗಿ ಶ್ರೀನಿವಾಸ್ ನಾಮಪತ್ರ ವಾಪಸ್ ಪಡೆದರು. ಮಧ್ಯಾಹ್ನ 12 ಗಂಟೆಗೆ ಮತದಾನ ಪ್ರಕ್ರಿಯೆ ಆರಂಭವಾಯಿತು. 1 ಗಂಟೆ ವೇಳೆಗೆ ಎಲ್ಲಾ ಪ್ರಕ್ರಿಯೆ ಅಂತಿಮಗೊಂಡವು. ಎಲ್ಲಾ ಸದಸ್ಯರು ತಮ್ಮ ಪಕ್ಷ ಸೂಚಿಸಿದ ಅಭ್ಯರ್ಥಿಗಳ ಪರ ಕೈ ಎತ್ತುವ ಮೂಲಕ ಸಹಮತಿಸಿದರು. ಅಂತಿಮವಾಗಿ ಅಭ್ಯರ್ಥಿಗಳ ಹೆಸರಿನ ಮುಂದೆ ತಮ್ಮ ಸಹಿ ಮಾಡಿದರು.

ಒಂದು ಮತದ ಗೆಲುವು: ಮಂಡ್ಯ ನಗರಸಭೆಯಲ್ಲಿ ಬಹುಮತ ಹೊಂದಿರುವ ಜೆಡಿಎಸ್ 18 ಸದಸ್ಯ ಬಲ ಹೊಂದಿದೆ. ಕಳೆದ ಬಾರಿ ಜೆಡಿಎಸ್‌ನ ಎಚ್.ಎಸ್.ಮಂಜು ಅಧ್ಯಕ್ಷರಾಗಿ, ಇಶ್ರತ್ ಫಾತೀಮಾ ಉಪಾಧ್ಯಕ್ಷರಾಗಿದ್ದರು. ಇತ್ತೀಚೆಗೆ ಮುಂದಿನ ಅವಧಿಯ ಅಧ್ಯಕ್ಷ–ಉಪಾಧ್ಯಕ್ಷರ ಮೀಸಲು ಪ್ರಕಟವಾಗಿದ್ದು, ಮತ್ತೆ ಅಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾದರೆ, ಉಪಾಧ್ಯಕ್ಷ ಸ್ಥಾನ ಹಿಂದುಳಿದ ವರ್ಗಕ್ಕೆ ಖಾತ್ರಿಯಾಗಿತ್ತು.

ಎಚ್.ಎಸ್.ಮಂಜು ಮತ್ತೆ ಅಧ್ಯಕ್ಷರಾಗಲು ಬಯಸಿದ್ದರು. ಈಗಾಗಲೇ ಎರಡೂವರೆ ವರ್ಷ ಅಧಿಕಾರ ಪೂರೈಸಿರುವುದರಿಂದ ಮತ್ತೊಮ್ಮೆ ಅವಕಾಶ ಕಲ್ಪಿಸಲು ಜೆಡಿಎಸ್ ನಾಯಕರು ನಿರಾಕರಿಸಿ, ಬೇರೆಯವರಿಗೆ ಅವಕಾಶ ಕೊಡುವುದಾಗಿ ಹೇಳಿದ್ದರು. ಇದರಿಂದ ಕೆರಳಿದ ಮಂಜು, ಕಾಂಗ್ರೆಸ್ ಪಾಳಯದಲ್ಲಿ ಗುರುತಿಸಿಕೊಂಡು ತನ್ನ ಬೆಂಬಲಿತ ಜೆಡಿಎಸ್ ಸದಸ್ಯರಾದ ರಜನಿ, ಭಾರತೀಶ್‌ರನ್ನು ಸೆಳೆದಿದ್ದರು.

ಇದರಿಂದ 18 ಸದಸ್ಯ ಬಲ ಹೊಂದಿದ್ದ ಜೆಡಿಎಸ್‌ನ ಸಂಖ್ಯೆ 15ಕ್ಕೆ ಕುಸಿದಿತ್ತು. ಎಚ್ಚೆತ್ತ ದಳಪತಿಗಳು ಉಳಿದ 15 ಸದಸ್ಯರನ್ನು ತಿಂಗಳ ಹಿಂದೆಯೇ ರೆಸಾರ್ಟ್‌ಗೆ ಶಿಫ್ಟ್ ಮಾಡಿದ್ದರು. ಇವರೊಂದಿಗೆ ಬಿಜೆಪಿಯ ಇಬ್ಬರು ಸದಸ್ಯರು ಹಾಗೂ ಕಾಂಗ್ರೆಸ್‌ನಲ್ಲಿ ಬಂಡೆದ್ದ 27ನೇ ವಾರ್ಡ್‌ನ ಟಿ.ಕೆ.ರಾಮಲಿಂಗಯ್ಯ ಅವರು ಸೇರಿ 18 ಸದಸ್ಯರು ಹಲವು ದಿನಗಳ ಹಿಂದೆಯೇ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ, ಮನ್‌ಮುಲ್ ಮಾಜಿ ಅಧ್ಯಕ್ಷ ಬಿ.ಆರ್.ರಾಮಚಂದ್ರು ನೇತೃತ್ವದಲ್ಲಿ ಒಗ್ಗಟ್ಟು ಪ್ರದರ್ಶಿಸಿದ್ದರು. ಕೇರಳದ ರೆಸಾರ್ಟ್‌ನಲ್ಲಿ ಬೀಡು ಬಿಟ್ಟಿದ್ದ ಇವರು ಇಂದು 11.30ರ ಸಮಯದಲ್ಲಿ ನಗರಸಭೆಗೆ ಟಿಟಿ ವಾಹನದಲ್ಲಿ ಆಗಮಿಸಿದರು. ಇವರೊಂದಿಗೆ ಸಂಸದ ಹೆಚ್.ಡಿ. ಕುಮಾರಸ್ವಾಮಿ ಸೇರಿ 19 ಮಂದಿ ಮತ ಚಲಾಯಿಸಿ ಗೆದ್ದು ಬೀಗಿದರು.

ಒಂದು ಮತದಿಂದ ಸೋತ ಕಾಂಗ್ರೆಸ್: ಇತ್ತ ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಅಧಿಕಾರ ಹಿಡಿಯಲು ಶತಪ್ರಯತ್ನ ನಡೆಸಿತ್ತು. ಚುನಾವಣೆಯನ್ನು ಪ್ರತಿಷ್ಠೆಯಾಗಿ ತೆಗೆದುಕೊಂಡ ಶಾಸಕ ಗಣಿಗ ರವಿಕುಮಾರ್, ಜೆಡಿಎಸ್‌ನ ಮಾಜಿ ಅಧ್ಯಕ್ಷ ಎಚ್.ಎಸ್.ಮಂಜು, ಮತ್ತಿಬ್ಬರ ಕಾಂಗ್ರೆಸ್‌ಗೆ ಸೆಳೆಯುವಲ್ಲಿ ಯಶಸ್ವಿಯಾದರು. 12 ಮಂದಿ ಕಾಂಗ್ರೆಸ್ ಬೆಂಬಲಿತರ ಜೊತೆಗೆ 5 ಮಂದಿ ಪಕ್ಷೇತರರು ಸೇರಿ ಕಾಂಗ್ರೆಸ್ ಬಲ 17ಕ್ಕೇರಿತ್ತು. ಈ 17 ಮಂದಿಯೂ ಖಾಸಗಿ ರೆಸಾರ್ಟ್‌ನಲ್ಲಿದ್ದು, ಇಂದು ಬೆಳಿಗ್ಗೆ 11 ಗಂಟೆಗೆ ನೇರವಾಗಿ ನಗರಸಭೆ ಆವರಣಕ್ಕೆ ಮಿನಿ ಬಸ್‌ನಲ್ಲಿ ಆಗಮಿಸಿದರು. ಇವರೊಂದಿಗೆ ಶಾಸಕ ಗಣಿಗ ರವಿಕುಮಾರ್ ಸೇರಿ ಕಾಂಗ್ರೆಸ್ ಸೂಚಿಸಿದ ಅಭ್ಯರ್ಥಿಗೆ 18 ಮತಗಳು ಬಿದ್ದವು. ಈ ಮೂಲಕ ಕೇವಲ ಒಂದೇ ಒಂದು ಮತದ ಅಂತರದಲ್ಲಿ ಕಾಂಗ್ರೆಸ್‌ಗೆ ಅಧಿಕಾರ ಕೈತಪ್ಪಿತು.

ಎರಡೂ ಪಕ್ಷದ ಸದಸ್ಯರಿಂದ ವ್ಹಿಪ್ ಉಲ್ಲಂಘನೆ: ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಹಿನ್ನಲೆಯಲ್ಲಿ ಎರಡು ಪಕ್ಷಗಳ ಜಿಲ್ಲಾಧ್ಯಕ್ಷರು ತಮ್ಮ ತಮ್ಮ ಸದಸ್ಯರಿಗೆ ವ್ಹಿಪ್ ಜಾರಿ ಮಾಡಿದ್ದರು. ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಪಕ್ಷದ 18 ಮಂದಿ ಸದಸ್ಯರಿಗೆ ವ್ಹಿಪ್ ಜಾರಿ ಮಾಡಿದ್ದರೆ, ಅತ್ತ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್, ತಮ್ಮ ಪಕ್ಷದ 10 ಸದಸ್ಯರಿಗೆ ವ್ಹಿಪ್ ಕೊಟ್ಟಿದ್ದರು. ಬಿಜೆಪಿ ಜಿಲ್ಲಾಧ್ಯಕ್ಷ ಡಾ. ಇಂದ್ರೇಶ್ ಸಹ ಪಕ್ಷದ ಇಬ್ಬರು ಸದಸ್ಯರು ಜೆಡಿಎಸ್ ಬೆಂಬಲಿಸುವಂತೆ ವ್ಹಿಪ್ ನೀಡಿದ್ದರು.

ಸ್ವತಃ ಜೆಡಿಎಸ್ ಜಿಲ್ಲಾಧ್ಯಕ್ಷ ಡಿ. ರಮೇಶ್, ಬಂಡಾಯ ಸಾರಿದ್ದ ಸದಸ್ಯರು ಸೇರಿದಂತೆ ಪ್ರತಿ ಸದಸ್ಯರ ಮನೆಗೆ ಹೋಗಿ ಗೋಡೆಗಳ ಮೇಲೆ ವ್ಹಿಪ್ ಅಂಟಿಸಿ ಬಂದಿದ್ದರು. ಅದರಂತೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ಸಹ ಬಂಡಾಯ ಸದಸ್ಯರು ಸೇರಿದಂತೆ ಎಲ್ಲಾ ಹತ್ತು ಸದಸ್ಯರ ಮನೆಗಳಿಗೆ ವ್ಹಿಪ್ ತಲುಪಿಸಿದ್ದರು. ಅದಾಗಿಯೂ ಜೆಡಿಎಸ್‌ನ ಎಚ್.ಎಸ್.ಮಂಜು, ರಜನಿ ಹಾಗೂ ಭಾರತೀಶ್ ವ್ಹಿಪ್ ಉಲ್ಲಂಘಿಸಿದರೆ, ಅತ್ತ ಕಾಂಗ್ರೆಸ್‌ನ ಟಿ.ಕೆ.ರಾಮಲಿಂಗಯ್ಯ ಸಹ ಅದನ್ನು ಉಲ್ಲಂಘಿಸಿದ್ದಾರೆ. ವ್ಹಿಪ್ ಉಲ್ಲಂಘಿಸಿದ ಸದಸ್ಯರ ವಿರುದ್ಧ ಉಭಯ ಪಕ್ಷದ ಜಿಲ್ಲಾಧ್ಯಕ್ಷರು ಕಾನೂನು ಹೋರಾಟಕ್ಕೆ ಮುಂದಾಗುತ್ತಾರೆಯೇ ಕಾದು ನೋಡಬೇಕಿದೆ.

ಮಾಜಿ ಸಿಎಂ ಮತದಾನಕ್ಕೆ ಸಾಕ್ಷಿಯಾದ ನಗರಸಭೆ: ಮಂಡ್ಯ ನಗರಸಭೆಯ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆಯಲ್ಲಿ ಮೊದಲ ಬಾರಿಗೆ ಮಾಜಿ ಮುಖ್ಯಮಂತ್ರಿಯೊಬ್ಬರು ಮತದಾನ ಮಾಡಿದ್ದಾರೆ. ಮಾಜಿ ಸಿಎಂ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಂಡ್ಯ ಸಂಸದರಾಗಿ ಮತದಾನದ ಹಕ್ಕು ಹೊಂದಿದ್ದರು. ಅವರ ಮತ ಜೆಡಿಎಸ್ ಅಧಿಕಾರ ಹಿಡಿಯುವಲ್ಲಿ ನಿರ್ಣಾಯಕವಾಗಿದ್ದರಿಂದ ಇಂದು ಕೇಂದ್ರ ಸಂಪುಟ ಸಭೆಗೂ ಗೈರಾಗಿ ಮತದಾನ ಮಾಡಿದರು.

ನಗರಸಭೆಯಲ್ಲಿ ಜೆಡಿಎಸ್‌ಗೆ ಬಹುಮತವಿದ್ದರೂ ಅಧಿಕಾರ ಕೈತಪ್ಪಿ ಹೋಗುವ ಸಾಧ್ಯತೆ ಇದ್ದಿದ್ದರಿಂದ ಸ್ವತಃ ಹೆಚ್ಡಿಕೆ ಅಖಾಡಕ್ಕಿಳಿದಿದ್ದರು. ರಣತಂತ್ರ ಹೆಣೆದು ಅಂತಿಮವಾಗಿ, ಪಕ್ಷದ ಅಭ್ಯರ್ಥಿಗೆ ಮತದಾನ ಮಾಡಿ, ಅಧಿಕಾರ ಹಿಡಿಯುವ ಮೂಲಕ ಮುಖಭಂಗ ತಪ್ಪಿಸಿಕೊಂಡಿದ್ದಾರೆ.

ಬಿಜೆಪಿಗೆ ಒಲಿದ ಉಪಾಧ್ಯಕ್ಷ ಸ್ಥಾನ: ಮಂಡ್ಯ ನಗರಸಭೆಯಲ್ಲಿ ಈವರೆಗೆ ಒಮ್ಮೆಯೂ ಬಿಜೆಪಿಗೆ ಅಧಿಕಾರ ಸಿಕ್ಕಿರಲಿಲ್ಲ. ಜೆಡಿಎಸ್ ಮತ್ತು ಕಾಂಗ್ರೆಸ್‌ನ ಪಾರುಪತ್ಯಕ್ಕೆ ಸಾಕ್ಷಿಯಾಗಿದ್ದ ನಗರಸಭೆಯಲ್ಲಿ ಬಿಜೆಪಿ ಪ್ರತಿ ಬಾರಿಯೂ ಒಂದಂಕಿ ಸಾಧನೆಗಷ್ಟೇ ಸೀಮಿತವಾಗಿತ್ತು. ಆದರೆ ಈ ಬಾರಿ ಜೆಡಿಎಸ್‌ನೊಂದಿಗೆ ಮೈತ್ರಿ ಪರಿಣಾಮ ಬಿಜೆಪಿಗೆ ಅದೃಷ್ಟ ಖುಲಾಯಿಸಿದ್ದು, ಕೇವಲ ಇಬ್ಬರು ಸದಸ್ಯರು ಇದ್ದರೂ ಮೈತ್ರಿ ಧರ್ಮ ಪಾಲಿಸುವ ನಿಟ್ಟಿನಲ್ಲಿ ಜೆಡಿಎಸ್ ಉಪಾಧ್ಯಕ್ಷ ಸ್ಥಾನವನ್ನು ಬಿಜೆಪಿಗೆ ಬಿಟ್ಟು ಕೊಟ್ಟಿತು.

ಅದರ ಫಲವಾಗಿ ಬಿಜೆಪಿಯ 11ನೇ ವಾರ್ಡ್ ಸದಸ್ಯ ಎಂ.ಪಿ.ಅರುಣ್ ಕುಮಾರ್ ಉಪಾಧ್ಯಕ್ಷರಾಗಿ ಬೀಗಿದ್ದಾರೆ. ಜೆಡಿಎಸ್‌ನಲ್ಲಿದ್ದ ಎಂ.ಪಿ.ಅರುಣ್‌ಕುಮಾರ್ ಹತ್ತು ವರ್ಷಗಳ ಹಿಂದೆ ಮೂರು ವರ್ಷಗಳ ಅವಧಿಗೆ ಮಂಡ್ಯ ನಗರಸಭೆಯ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದರು.

ಕೃಷ್ಣ ಆಪ್ತರಿಂದ 100 ಕೋಟಿಗೆ ಬೇಡಿಕೆ

ದಾಖಲಾತಿ ವಿಡಿಯೋ ಮಾಡಿದ್ದಾರೆ. ಜೊತೆಗೆ ಮಾಹಿತಿ ಹಕ್ಕು ಕಾಯ್ದೆಯಲ್ಲಿ ಪಡೆದಿರುವ ದಾಖಲಾತಿ ಕೂಡ ನಕಲಿಯಾಗಿದ್ದು, ಸೀಲ್ ಅನ್ನು ಅವರೇ ಹಾಕಿಕೊಂಡಿದ್ದಾರೆ ಎಂದರು. ಮೈಸೂರು ಸೇರಿದಂತೆ ರಾಜ್ಯದಾದ್ಯಂತ ಸ್ನೇಹಮಯಿ ಕೃಷ್ಣ ವಿರುದ್ಧ 44 ಪ್ರಕರಣ ದಾಖಲಾಗಿವೆ. ಕೊಲೆ ಬೆದರಿಕೆ, ಬ್ಲ್ಯಾಕ್ ಮೇಲ್ ಸೇರಿದಂತೆ ಹಲವು ಆರೋಪವಿರುವ ಈತ ರೌಡಿ ಶೀಟರ್ ಆಗಿದ್ದು, ನಗರದ ಕೆ.ಆರ್.ಪೊಲೀಸ್ ಠಾಣೆಯಲ್ಲಿ ರೌಡಿ ಹಾಳೆ ತೆರೆಯಲಾಗಿದೆ ಎಂದು ಲಕ್ಷ್ಮಣ್ ತಿಳಿಸಿದರು. ಆತನ ಮನೆ ಮೇಲೆ ಪೊಲೀಸರು ದಾಳಿ ಮಾಡಿದರೆ ಮುಡಾಗೆ ಸಂಬಂಧಿಸಿದಂತೆ ನಕಲಿ ದಾಖಲಾತಿ ಹಾಗೂ ಸೀಲ್‌ಗಳು ದೊರೆಯುತ್ತವೆ ಎಂದು ಹೇಳಿದರು. ಈತನ ಬಗ್ಗೆ ಪೊಲೀಸರೇ ಹೆದರುತ್ತಾರೆ. ಹಲವು ಆರೋಪ ಹೊತ್ತಿರುವ ಸ್ನೇಹಮಯಿ ಕೃಷ್ಣನ ವಿರುದ್ಧ ಪೊಲೀಸರಿಗೆ ದೂರು ನೀಡಿದರೆ ಅವನ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ. ಆದರೆ ನಮ್ಮ ವಿರುದ್ಧ ಆತ ದೂರು ನೀಡಿದರೆ ಪೊಲೀಸರು ಪ್ರಕರಣ ದಾಖಲಿಸುತ್ತಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ನಮ್ಮ ಪಕ್ಷದ ಸರ್ಕಾರ ಅಧಿಕಾರದಲ್ಲಿದೆ. ಆದರೂ ಆತನ ವಿರುದ್ಧ ಪೊಲೀಸರು ಯಾವುದೇ ಕ್ರಮ ಕೈಗೊಳ್ಳುವುದಿಲ್ಲ. ಇದನ್ನು ಗಮನಸಿದರೆ ಸ್ನೇಹಮಯಿ ಕೃಷ್ಣ ಎಷ್ಟು ಪ್ರಭಾವಿ ಎಂಬುದು ತಿಳಿಯುತ್ತದೆ ಎಂದರು. ಈಗ ನಮ್ಮ ವಿರುದ್ಧ ನೀಡಿರುವ ದೂರಿಗೆ ಪ್ರತಿಯಾಗಿ ನಾವು ಕೂಡ ಸ್ನೇಹಮಯಿ ಕೃಷ್ಣನ ವಿರುದ್ಧ ಪೊಲೀಸರಿಗೆ ಪ್ರತಿ ದೂರು ನೀಡುತ್ತೇವೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮುಖಂಡರಾದ ಭಾಸ್ಕರ್, ವಾಸು, ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕೆನೆಪದರ ನೀತಿ ವಿರೋಧಿಸಿ ರೈಲ್ವೆ ಇಲಾಖೆಯ ಎಸ್‌ಸಿ, ಎಸ್‌ಟಿ ಎಂಪ್ಲಾಯೀಸ್ ಪ್ರತಿಭಟನೆ



ಕೆನೆಪದರ ನೀತಿ ಅಳವಡಿಸುವಂತೆ ನೀಡಿರುವ ತೀರ್ಪನ್ನು ವಿರೋಧಿಸಿ ರೈಲ್ವೆ ಇಲಾಖೆಯ ಎಸ್‌ಸಿ, ಎಸ್‌ಟಿ ರೈಲ್ವೆ ಎಂಪ್ಲಾಯೀಸ್ ಅಸೋಸಿಯೇಷನ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು,ಆ.28(ಜಿಎ)–ಇತ್ತೀಚೆಗೆ ಸುಪ್ರೀಂ ಕೋರ್ಟ್ ಪರಿಶಿಷ್ಟ ಜಾತಿಯವರಿಗೆ ಕೆನೆಪದರ ನೀತಿ ಅಳವಡಿಸುವಂತೆ ನೀಡಿರುವ ತೀರ್ಪನ್ನು ವಿರೋಧಿಸಿ ರೈಲ್ವೆ ಇಲಾಖೆಯ ಎಸ್‌ಸಿ, ಎಸ್‌ಟಿ ರೈಲ್ವೆ ಎಂಪ್ಲಾಯೀಸ್ ಅಸೋಸಿಯೇಷನ್ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಪರಿಶಿಷ್ಟ ಜಾತಿಯವರಿಗೆ ಒಳಮೀಸಲಾತಿ ನೀಡಬೇಕೆಂಬ ಸುಪ್ರೀಂ ಕೋರ್ಟ್ ತೀರ್ಪು ಸ್ವಾಗತಾರ್ಹ. ಆದರೆ, ಕೆನೆಪದರ ನೀತಿ ಅಳವಡಿಸಬೇಕೆಂಬುದು ಸರಿಯಲ್ಲ. ರಾಜ್ಯದ ಸೇವೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯ ಇನ್ನೂ ಅಗತ್ಯ ಮಟ್ಟ ತಲುಪಿಲ್ಲ. ಆರ್ಥಿಕ ಮಾನದಂಡ ಮತ್ತು ಕೆನೆಪದರ ಅಭ್ಯರ್ಥಿಗಳ ಲಭ್ಯತೆಯ ಮೇಲೆ ಪರಿಣಾಮ ಬೀರಬಹುದು. ಈಗಲೂ ತುಳಿತಕ್ಕೊಳಗಾದ ಜಾತಿಗಳ ಜನರ ವಿರುದ್ಧದ ತಾರತಮ್ಯದಿಂದಾಗಿ ಅನೇಕ ಸಂಸ್ಥೆಗಳ ಮೀಸಲು ಹುದ್ದೆಗಳು ಖಾಲಿ ಇವೆ. ಕೆನೆಪದರ ಪರಿಕಲ್ಪನೆ ಮೀಸಲಾತಿ ಅನುಷ್ಠಾನಕ್ಕೆ ಪ್ರಯೋಜನಕ್ಕಿಂತ ಹೆಚ್ಚು ಹಾನಿಯನ್ನುಂಟು ಮಾಡುತ್ತದೆ. ಇದರಿಂದ ಶತಮಾನದಿಂದ ಆಚರಣೆಯಲ್ಲಿರುವ ಆರ್ಥಿಕ ಅಸಮಾನತೆ, ಸಾಮಾಜಿಕ ತಾರತಮ್ಯ ಸರಿದೂಗುವುದಿಲ್ಲ ಎಂದು ಬೇಸರಿಸಿದರು. ಕೂಡಲೇ ನ್ಯಾಯಾಲಯ ತನ್ನ ತೀರ್ಪನ್ನು ಪರಾಮರ್ಶೆ ಮಾಡಬೇಕು. ಕೆನೆಪದರ ನೀತಿ ಅಳವಡಿಕೆಯನ್ನು ಕೈಬಿಡುವ ಮೂಲಕ ತುಳಿತಕ್ಕೊಳಗಾದವರಿಗೆ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದರು.

ಮೈಸೂರಿನ ಡಿಆರ್‌ಎಂ ಕಚೇರಿಯಿಂದ ಡಾ.ಬಾಬು ಜಗಜೀವನ್ ರಾಮ್ ವೃತ್ತದವರೆಗೆ ಮೆರವಣಿಗೆ ನಡೆಸಿ ನಂತರ ವಿಭಾಗೀಯ ವ್ಯವಸ್ಥಾಪಕಿ ಶಿಲ್ಪಿ ಅಗರವಾಲ್ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ವಲಯ ಅಧ್ಯಕ್ಷ ಕೆ.ಎಸ್.ದ್ಯಾಮಣ್ಣನವರ್, ಕಾರ್ಯದರ್ಶಿ ಎಂ.ಮೋಹನ್, ವೆಂಕಟರಾಜು ಮತ್ತಿತರರು ಪಾಲ್ಗೊಂಡಿದ್ದರು.

ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ

ಮೈಸೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2023ನೇ ಸಾಲಿನ ಹಿರಿಯ ಕ್ರೀಡಾಪಟುಗಳು, ತರಬೇತುದಾರರಾಗಿ ಸಾಧನೆ ಮಾಡಿರುವ ಕರ್ನಾಟಕದ ಹಿರಿಯ ಕ್ರೀಡಾಪಟುಗಳು, ತರಬೇತುದಾರರಿಂದ ಜೀಮಾನ ಸಾಧನೆ ಪ್ರಶಸ್ತಿಗಾಗಿ ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಲು ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಖೋ–ಖೋ, ಥ್ರೋಬಾಲ್, ಅಟ್ಯಾ ಪಾಟ್ಯಾ, ಮಲ್ಲಕಂಬ, ಯೋಗ, ಕುಸ್ತಿ ಮತ್ತು ಕಬಡ್ಡಿ ಕ್ರೀಡೆಗಳಿಗೆ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡುವ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಲಾಗುವುದು. ಅಂಗೀಕೃತ ಕ್ರೀಡಾ ಫೆಡರೇಷನ್‌ಗಳಿಲ್ಲದ ಗ್ರಾಮೀಣ ಕ್ರೀಡೆಗಳು, ಭಿನ್ನ ಸಾಮರ್ಥ್ಯದ ಕ್ರೀಡಾಪಟುಗಳು ಕಳೆದ 5 ವರ್ಷಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿ ರಾಷ್ಟ್ರೀಯ, ಅಂತರರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡುವ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಲಾಗುವುದು. ಆಸಕ್ತರು https://sevasindhu services.karnataka.gov.in ಮೂಲಕ ಸೆ.20ರೊಳಗೆ ಅರ್ಜಿ ಸಲ್ಲಿಸಬಹುದು. ಮಾಹಿತಿಗೆ ದೂ.ಸಂ: 0821–2564179 ಸಂಪರ್ಕಿಸಬಹುದು.

ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಪೂರ್ಣ ಗುಣಮುಖ

ಆಸ್ಪತ್ರೆಯಿಂದ ಮನೆಗೆ ಮರಳಿದ ಮುತ್ಸದ್ದಿ; ಸದ್ಯಕ್ಕೆ ಸಾರ್ವಜನಿಕರ ಭೇಟಿಗೆ ಅವಕಾಶ ಇಲ್ಲ

ಬೆಂಗಳೂರು, ಆ.28(ಕೆಎಂಶಿ)– ಶ್ವಾಸಕೋಶ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿದ್ದ ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರದ ಮಾಜಿ ಸಚಿವರಾದ ಎಸ್.ಎಂ.ಕೃಷ್ಣ ಅವರ ಆರೋಗ್ಯ ಸಂಪೂರ್ಣ ಸುಧಾರಿಸಿದೆ. ವೈದ್ಯರ ಸಲಹೆಯಂತೆ ಆಸ್ಪತ್ರೆಯಿಂದ ಮನೆಗೆ ಆಗಮಿಸಿದ್ದಾರೆ ಎಂದು ಶಾಸಕರಾದ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಆರೋಗ್ಯದಲ್ಲಿ ಸುಧಾರಣೆ ಕಂಡು ಬಂದಿದ್ದು, ಶ್ವಾಸಕೋಶದ ಸೋಂಕು ನಿವಾರಣೆ ಆದ ಹಿನ್ನೆಲೆಯಲ್ಲಿ ಆಸ್ಪತ್ರೆಯಿಂದ ಬಿಡುಗಡೆಗೊಳಿಸಿರುವುದಾಗಿ ಮಣಿಪಾಲ ಆಸ್ಪತ್ರೆ ವೈದ್ಯರು ತಿಳಿಸಿದ್ದು,



ಭಗವಂತನ ಕೃಪೆ ಮತ್ತು ವೈದ್ಯರ ಪರಿಶ್ರಮದಿಂದ ಎಸ್.ಎಂ. ಕೃಷ್ಣ ಅವರು ಗುಣಮುಖರಾಗಿದ್ದಾರೆ. ಆದರೆ ಎರಡು ವಾರಗಳ ಕಾಲ ಮನೆಯಲ್ಲಿ ವಿಶ್ರಾಂತಿ ಪಡೆಯುವಂತೆ ವೈದ್ಯರು ಸಲಹೆ ನೀಡಿದ್ದು ಯಾವುದೇ ಸಾರ್ವಜನಿಕ ಭೇಟಿ ಮತ್ತು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳದಂತೆ ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಅವರ ಹಿತೈಷಿಗಳು, ಅಭಿಮಾನಿಗಳು ಕೆಲವು ದಿನಗಳ ಕಾಲ ಅವರನ್ನು ಭೇಟಿ ಮಾಡದಂತೆ ಕುಟುಂಬ ವರ್ಗದವರಿಗೆ ವೈದ್ಯರು ಸಲಹೆ ಮಾಡಿದ್ದಾರೆ. ಹೀಗಾಗಿ ಯಾರೂ ಸಹ ಅನ್ಯಥಾಃ ಭಾವಿಸದೇ ಹಿರಿಯ ಮುತ್ಸದ್ದಿ ಎಸ್.ಎಂ.ಕೃಷ್ಣ. ಅವರು ವಿಶ್ರಾಂತಿ ಪಡೆಯಲು ಸಹಕರಿಸಬೇಕಾಗಿದೆ. ಅವರು ಸಂಪೂರ್ಣವಾಗಿ ಗುಣಮುಖರಾದ ನಂತರ ಎಲ್ಲರನ್ನೂ ಭೇಟಿ ಮಾಡಲಿದ್ದಾರೆ. ಚಿಕಿತ್ಸೆ ನೀಡಿದ ಮಣಿಪಾಲ ವೈದ್ಯರ ತಂಡ ಹಾಗೂ ಸಿಬ್ಬಂದಿಗೆ ಎಸ್.ಎಂ.ಕೃಷ್ಣ ಅವರು ಧನ್ಯವಾದ ತಿಳಿಸಿದ್ದಾರೆ ಎಂದು ಶಾಸಕ ದಿನೇಶ್ ಗೂಳಿಗೌಡ ಇದೇ ವೇಳೆ ಹೇಳಿದ್ದಾರೆ.

ಸಂಸದ ಯದುವೀರ್ ಒಡೆಯರ್‌ರಿಂದ ಪುಸ್ತಕ ಬಿಡುಗಡೆ...



ಅದ್ವೈತ ಶ್ರೀಕ್ಷೇತ್ರ ಶೃಂಗೇರಿ ಪುಸ್ತಕದ 2ನೇ ಆವೃತ್ತಿಯನ್ನು ಸಂಸದ ಯದುವೀರ ಒಡೆಯರ್ ಬಿಡುಗಡೆಗೊಳಿಸಿದರು. ಮೈಸೂರಿನ ಶ್ರೀ ಶಂಕರಮಠದ ಧರ್ಮಾಧಿಕಾರಿ ಹೆಚ್.ರಾಮಚಂದ್ರ, ಅಂಕಣಕಾರ ಡಾ.ವಿ.ರಂಗನಾಥ್, ಕಲ್ಪನಾ, ಎಸ್.ಮಂಜುಳಾ, ಡಾ.ಕರುಣಾಲಕ್ಷ್ಮೀ, ವೆಂಕಟೇಶ್, ಲೇಖಕ ನಂ.ಶ್ರೀಕಂಠ ಕುಮಾರ್ ಉಪಸ್ಥಿತರಿದ್ದರು.

ಮಹಿಳೆಯರ ಮೇಲಿನ ದೌರ್ಜನ್ಯ ಖಂಡಿಸಿ ಟೆರಿಷಿಯನ್ ವಿದ್ಯಾರ್ಥಿನಿಯರ ಪ್ರತಿಭಟನೆ



ಹೆಣ್ಣು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಹಾಗೂ ಶೋಷಣೆ ಖಂಡಿಸಿ ಬುಧವಾರ ಟೆರಿಷಿಯನ್ ಕಾಲೇಜು ವತಿಯಿಂದ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಮೈಸೂರು, ಆ.28(ಜಿಎ)–ದೇಶದಲ್ಲಿ ಹೆಣ್ಣು ಮಕ್ಕಳ ಮೇಲೆ ಆಗುತ್ತಿರುವ ಲೈಂಗಿಕ ದೌರ್ಜನ್ಯ ಹಾಗೂ ಶೋಷಣೆ ಖಂಡಿಸಿ ಟೆರಿಷಿಯನ್ ಕಾಲೇಜು ವತಿಯಿಂದ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಕಾಲೇಜು ಆವರಣದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿದ ವಿದ್ಯಾರ್ಥಿನಿಯರು, ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.

ದೇಶದಲ್ಲಿ ಹಾಗೂ ಕರ್ನಾಟದಲ್ಲಿ ದಿನ ದಿಂದ ದಿನಕ್ಕೆ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ, ಹತ್ಯೆ, ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿವೆ. ಇದು ನಾಗರಿಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ. ಅಲ್ಲದೆ ಸಮಾಜದಲ್ಲಿ ಮಹಿಳೆ ಎಷ್ಟು ಸುರಕ್ಷಿತ ಎಂಬ ಪ್ರಶ್ನೆ ಹುಟ್ಟು ಹಾಕಿದೆ. ಮಹಿಳೆಯರ ಕೆಲಸದ ಸ್ಥಳಗಳಲ್ಲಿ ಉತ್ತಮ ಭದ್ರತೆಯ ವಾತಾವರಣ ಇಲ್ಲದಂತಾಗಿದೆ ಎಂದು ಕಿಡಿಕಾರಿದರು.

ಮಹಿಳೆಯರ ಮೇಲೆ ದೌರ್ಜನ್ಯ ನಡೆಸುವವರ ವಿರುದ್ಧ ಸರ್ಕಾರಗಳು ಕಠಿಣ ಕಾನೂನು ಜಾರಿಗೊಳಿಸಿ ಶಿಕ್ಷೆಗೆ ಒಳಪಡಿಸಬೇಕು. ಫಾಸ್ಟ್‌ಟ್ರ್ಯಾಕ್ ಕೋರ್ಟ್ ಸ್ಥಾಪಿಸಿ ಅತ್ಯಾಚಾರಿಗಳಿಗೆ ಶೀಘ್ರವಾಗಿ ಶಿಕ್ಷೆ ನೀಡಬೇಕು. ಸಂತ್ರಸ್ತರಿಗೆ ಸರ್ಕಾರಗಳು ಸೂಕ್ತ ರಕ್ಷಣೆಯೊಂದಿಗೆ ಎಲ್ಲಾ ಸೌಲಭ್ಯಗಳನ್ನು ನೀಡಬೇಕು. ಮಹಿಳಾ ಸಮಾನತೆ, ಅತ್ಯಾಚಾರ, ದೌರ್ಜನ್ಯದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಿ ಅಪರಾಧ ಪ್ರಮಾಣ ಕಡಿಮೆ ಮಾಡಬೇಕು. ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರನ್ನು ನಿಯೋಜಿಸಿ ಭದ್ರತೆ ಹೆಚ್ಚಿಸಬೇಕು ಎಂದು ಒತ್ತಾಯಿಸಿದರು. ಬಳಿಕ ಎಡಿಸಿ ಶಿವರಾಜು ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಕಾಲೇಜಿನ ಪ್ರಾಂಶುಪಾಲೆ ಡಾ.ಸಿ.ಜಯಂತಿ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರಾಜ್ಯದ ಕಲಾವಿದರ ವೇತನ ಮಂಜೂರು ಮಾಡುವಂತೆ ಆಗ್ರಹ

ಕನ್ನಡ–ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಧರಣಿದೇವಿ ಅವರಿಗೆ ಬಿಜೆಪಿಯ ಕಲೆ–ಸಾಂಸ್ಕೃತಿಕ ಪ್ರಕೋಷ್ಠ ರಾಜ್ಯ ಸಂಚಾಲಕಿ ರೂಪ ಅಯ್ಯರ್ ಮನವಿ



ರಾಜ್ಯದ ಕಲಾವಿದರ ವೇತನ ಮಂಜೂರು ಮಾಡುವಂತೆ ಕನ್ನಡ–ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಧರಣಿದೇವಿ ಅವರಿಗೆ ರೂಪ ಅಯ್ಯರ್ ಮನವಿ ಸಲ್ಲಿಸಿದರು.

ಮೈಸೂರು, ಆ. 28– ರಾಜ್ಯದ ಕಲಾವಿದರ ವೇತನ ಮಂಜೂರು ಮಾಡುವಂತೆ ಬಿಜೆಪಿಯ ಕಲೆ ಮತ್ತು ಸಾಂಸ್ಕೃತಿಕ ಪ್ರಕೋಷ್ಠದ ರಾಜ್ಯ ಸಂಚಾಲಕರಾದ ರೂಪ ಅಯ್ಯರ್ ಆಗ್ರಹಿಸಿದ್ದಾರೆ.

ಬಿಜೆಪಿಯ ಕಲೆ ಮತ್ತು ಸಾಂಸ್ಕೃತಿಕ ಪ್ರಕೋಷ್ಠದ ವತಿಯಿಂದ ಬೆಂಗಳೂರಿನ ಕನ್ನಡ ಭವನದಲ್ಲಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕಿ ಡಾ.ಕೆಧರಣಿ ದೇವಿ ಅವರಿಗೆ ಕಲೆ ಮತ್ತು ಸಂಸ್ಕೃತಿ ಪ್ರಕೋಷ್ಠ ರಾಜ್ಯ ಸಂಚಾಲಕಿ ರೂಪ ಅಯ್ಯರ್ ಹಾಗೂ ಸಹ ಸಂಚಾಲಕ ಆತ್ಮಾನಂದ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ ರಾಜ್ಯದ ಕಲೆ, ಸಂಸ್ಕೃತಿ ಮತ್ತು ಭಾಷೆಗೆ ಸರ್ಕಾರದಿಂದ ಸಿಗುವ ಅನುದಾನವನ್ನು ಕಲಾವಿದರಿಗೆ ಬಳಸಬೇಕಾದ ಇಲಾಖೆ ಅಸಡ್ಡೆ ತೋರುತ್ತಿರುವುದು ದುಃಖಕರ ಸಂಗತಿ. ಈಗಾಗಲೇ ಕಲಾಸಂಸ್ಥೆಗಳು ನಿರಂತರವಾಗಿ ಕಾರ್ಯಕ್ರಮಗಳನ್ನು ತಮ್ಮ ಖರ್ಚಿನಲ್ಲೇ ನಿರ್ವಹಿಸಿ ತೊಂದರೆಗೆ ಒಳಗಾಗಿದ್ದಾರೆ. ಈಗಾಗಲೇ 2023–24ನೇ ಸಾಲಿನ ಧನ ಸಹಾಯ ಮಂಜೂರಾಗಿದ್ದು 30% ಹಾಗೂ 40%ರಂತೆ ಬಿಡುಗಡೆ ಮಾಡಿದೆ. ಇನ್ನು ಉಳಿದ ಧನಸಹಾಯವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದ್ದಾರೆ.

ಕಲಾತಂಡಗಳಿಗೆ ನೀಡುವ ಅನುದಾನವನ್ನು ಒಬ್ಬನೇ ವ್ಯಕ್ತಿಗೆ ಕೊಡುತ್ತಿದ್ದು, ಇದರಿಂದ ಜನಪದ ಕಲಾತಂಡಗಳಿಗೆ ಪ್ರೋತ್ಸಾಹ ದೊರಕದಂತಾಗಿದೆ. ಇಲಾಖೆ ಅಧಿಕಾರಿಗಳ ನಿರಂತರ ಸಂಪರ್ಕದಲ್ಲಿರುವಂತಹ ನಗರ ಪ್ರದೇಶದ ವ್ಯಕ್ತಿಗಳಿಗೆ ಪ್ರಯೋಜನ ನೀಡುವುದನ್ನು ಕೂಡಲೇ ನಿಲ್ಲಿಸಬೇಕೆಂದು ಆಗ್ರಹಿಸಿದೆ. ತಪ್ಪಿದಲ್ಲಿ ನಿರಂತರ ಹೋರಾಟದ ಎಚ್ಚರಿಕೆ ನೀಡಲಾಗಿದೆ.

ಸಿ.ಹೆಚ್.ವಿಜಯಶಂಕರ್‌ಗೆ ಅಭಿನಂದನೆ...



ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಮೇಘಾಲಯದ ರಾಜ್ಯಪಾಲ ಸಿ.ಹೆಚ್.ವಿಜಯಶಂಕರ್ ಅವರನ್ನು ಅವರ ಸ್ವಗೃಹದಲ್ಲಿ ಗೌರವಿಸಲಾಯಿತು. ಈ ವೇಳೆ ಕಸಾಪ ಜಿಲ್ಲಾಧ್ಯಕ್ಷ ಮಡ್ಡಿಕೆರೆ ಗೋಪಾಲ್, ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ, ಉಪಾಧ್ಯಕ್ಷ ಎನ್.ಅನಂತ, ಸುಂಯೋಗ್ ಆಸ್ಪತ್ರೆ ಅಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ವಿಶ್ರಾಂತ ಕುಲಪತಿ ಡಾ.ಎನ್.ಎಸ್.ರಾಮೇಗೌಡ ಮತ್ತಿತರರು ಉಪಸ್ಥಿತರಿದ್ದರು.

ವಿಹೆಚ್‌ಪಿಯಿಂದ ಅರ್ಥಪೂರ್ಣ ಶ್ರೀಕೃಷ್ಣ ಜನ್ಮಾಷ್ಟಮಿ ಆಚರಣೆ

ಮೈಸೂರು, ಆ. 28– ಷಷ್ಠಿ ಪೂರ್ತಿ, ಸಂಸ್ಥಾಪನಾ ದಿನಾಚರಣೆ ಹಾಗೂ ಕೃಷ್ಣ ಜನ್ಮಾಷ್ಟಮಿ, ಮೈಸೂರಿನ ಶ್ರೀರಾಂಪುರ ಸಂಕಷ್ಟಹರ ಗಣಪತಿ ದೇವಸ್ಥಾನದಲ್ಲಿ ಪ್ರಶಸ್ತಿ ಪ್ರದಾನ, ಅಯೋಧ್ಯಾ ಶ್ರೀರಾಮಮಂದಿರದ ಪ್ರಸಾದ ಹಾಗೂ ಸಪ್ತನದಿಗಳ ತೀರ್ಥ ವಿತರಣೆ ಕಾರ್ಯಕ್ರಮವನ್ನು ವಿಶ್ವ ಹಿಂದೂ ಪರಿಷತ್‌ನಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ವಹಿಸಿದ್ದ ರಾಮಕೃಷ್ಣ ಆಶ್ರಮದ ಶ್ರೀ ಸ್ವಾಮಿ ಸರ್ವ ಜಯಾನಂದ ಮಹಾರಾಜ್ ಜ್ಯೋತಿ ಬೆಳಗಿಸಿ, ಭಾರತಮಾತೆಗೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸನಾತನ ಹಿಂದೂ ಧರ್ಮದ ಆದರ್ಶ ಗಳಿಸಿರುವುದು ನಮ್ಮ ರಾಮಾಯಣ, ಮಹಾಭಾರತ ಕಥೆಗಳಲ್ಲಿ ಅದನ್ನು ಇಂದು ನಮ್ಮ ಮಕ್ಕಳಿಗೆ ಕಲಿಸದಿದ್ದರೆ ಮುಂದೆ ರಾಮಕೃಷ್ಣರನ್ನೇ ಮರೆಯಬಹುದು. ನಾವು ಇಂದು ಪ್ರಾಪಂಚಿಕ ವಸ್ತುಗಳ ಮೇಲೆ ಪ್ರೀತಿಯನ್ನು ಹೊಂದುತ್ತಿದ್ದೇವೆ. ಆದರೆ ನಾವು ಪ್ರೀತಿಸಬೇಕಾದುದು ದೇವರನ್ನು ಎಂದು ತಿಳಿಸಿದರು.



ಶ್ಲೋಕ, ಸಂಸ್ಕಾರ, ಪುರಾಣದ ಕಥೆಗಳ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಶಂಸಾ ಪತ್ರ, ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅಧ್ಯಕ್ಷತೆ ವಹಿಸಿದ್ದ ಆದರ್ಶ ಸೇವಾ ಸಂಘದ ಅಧ್ಯಕ್ಷ ಜಿ.ಆರ್.ನಾಗರಾಜ್ ಮಾತನಾಡಿ, ಅಯೋಧ್ಯಾ ರಾಮಮಂದಿರದ ಹೋರಾಟದ ನೇತೃತ್ವವನ್ನು ವಹಿಸಿದ್ದ ವಿಶ್ವ ಹಿಂದೂ ಪರಿಷತ್ ರಾಮಮಂದಿರ ಲೋಕಾರ್ಪಣೆ ಮಾಡಿಸುವುದರಲ್ಲಿ ಪರಿಷತ್‌ನ ಪರಿಶ್ರಮ ಅವಿಸ್ಮರಣೀಯ. ಅಯೋಧ್ಯೆ ಶ್ರೀರಾಮ ಮಂದಿರ ನಿರ್ಮಾಣದ ನಿರ್ಧಾರದಿಂದ ರಥಯಾತ್ರೆ, ಇಟ್ಟಿಗೆ ಸಂಗ್ರಹ, ಕಾಣಿಕೆ ಸ್ವೀಕಾರ, ಮನೆ ಮನೆಗೆ ಮಂತ್ರಾಕ್ಷತೆ ತಲುಪಿಸಿದರು. ಆದರೆ ಇಂದು ಸಹ ಲಕ್ಷಾಂತರ ಜನ ರಾಮ ಮಂದಿರ ನೋಡಲು ಸಾಧ್ಯವಾಗಿಲ್ಲ. ಆ ಕೊರತೆ ನಿವಾರಿಸಲು ಮೈಸೂರಿನಲ್ಲಿ ಅಯೋಧ್ಯಾ ಶ್ರೀರಾಮ ಮಂದಿರದ ಪ್ರಸಾದ ಹಾಗೂ ಸಪ್ತನದಿಗಳ ತೀರ್ಥ ವಿತರಣೆ ಮಾಡಿ ಮೈಸೂರಿನ ಜನತೆಗೆ ಶ್ರೀರಾಮನ ಅನುಗ್ರಹ ಕೊಡಿಸುವ ಕಾರ್ಯವನ್ನು ವಿಶ್ವ ಹಿಂದೂ ಪರಿಷತ್ ಮಾಡುತ್ತಿದೆ ಎಂದರು.

ವಿಶ್ವ ಹಿಂದೂ ಪರಿಷತ್‌ನ ವಿಭಾಗ ಕಾರ್ಯದರ್ಶಿ ವೆಂಕಟರಾಮ್ ಮಾತನಾಡಿದರು. ಸುಮಾರು 75 ಮಕ್ಕಳಿಗೆ ಶ್ಲೋಕ, ಸಂಸ್ಕಾರ, ಪುರಾಣದ ಕಥೆಗಳ ಒಂದು ತಿಂಗಳ ಶಿಬಿರ ಮಾಡಲಾಗಿತ್ತು. ಶಿಬಿರದಲ್ಲಿ ಭಾಗವಹಿಸಿ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರಶಂಸಾ ಪತ್ರ ಹಾಗೂ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮೂಕಾಂಬಿಕಾ ಸತ್ಸಂಗದ ಸದಸ್ಯರು ಭಜನೆ ಹಾಗೂ ದೇವರ ನಾಮಗಳನ್ನು ಹಾಡಿದರು. ರಾಷ್ಟ್ರೀಯ ಸ್ವಯಂಸೇವಕ ಸಂಘದ ಕುವೆಂಪುನಗರ ವಸತಿ ಸಂಘಚಾಲಕರಾದ ಗಣೇಶ್ ಗಣ್ಯರಿಗೆ ರಕ್ಷಾ ಬಂಧನ ಕಟ್ಟಿದರು.

ವಿಶ್ವ ಹಿಂದೂ ಪರಿಷತ್‌ನ ಜಿಲ್ಲಾಧ್ಯಕ್ಷ ಮಹೇಶ್ ಕಾಮತ್, ಮಹಾಗಣಪತಿ ದೇವಸ್ಥಾನ ಸಮಿತಿ ಅಧ್ಯಕ್ಷರಾದ ಶಿವಪ್ಪ, ಮುರಳಿ, ಜಯರಾಂ, ಕೂಡ್ಲೂರು ಗುಂಡಪ್ಪ ಪ್ರತಿಷ್ಠಾನದ ಅಧ್ಯಕ್ಷ ಕೆ.ಆರ್.ಗಣೇಶ್, ವಿಶ್ವ ಹಿಂದೂ ಪರಿಷತ್ ಕಾರ್ಯದರ್ಶಿ ಮಧುಶಂಕರ್, ಸಹಕಾರ್ಯದರ್ಶಿ ಪುನೀತ್ ಕೂಡ್ಲೂರು, ಜಯಶ್ರೀ ಶಿವರಾಂ, ಅಂಬಿಕಾ ಜೀವನ್, ಜನಾರ್ಧನ್ ರಾವ್, ಮಮತಾ, ಶೈಲಜಾ ನಾಗಸುದೀಂದ್ರ, ಜ್ಯೋತಿ ಮತ್ತಿತರರು ಉಪಸ್ಥಿತರಿದ್ದರು.

ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ವೇಳೆ ವಾಗ್ಯುದ್ಧ; ಕೆಲ ಕಾಲ ಪರಿಸ್ಥಿತಿ ಉದ್ವಿಗ್ನ




ಮಂಡ್ಯ ನಗರಸಭೆಗೆ ಆಗಮಿಸಿದ ಕೇಂದ್ರ ಸಚಿವ ಕುಮಾರಸ್ವಾಮಿ ಮತ್ತು ಶಾಸಕ ಗಣಿಗ ರವಿಕುಮಾರ್ ಮಂದೆಯೇ ಎರಡೂ ಪಕ್ಷಗಳ ಕಾರ್ಯಕರ್ತರು ವಾಗ್ವಾದ ನಡೆಸುತ್ತಿರುವುದು.

ಮಂಡ್ಯ ಆ.28(ಮೋಹನ್‌ರಾಜ್)– ಮಂಡ್ಯ ನಗರಸಭೆ ಚುನಾವಣೆ ದಿನವಾದ ಇಂದು ಬೆಳಗ್ಗೆ ಎರಡೂ ತಂಡಗಳು ನಗರ ಸಭೆ ಕಚೇರಿಗೆ ಆಗಮಿಸಿದವು. ಈ ವೇಳೆ ಜೆಡಿಎಸ್–ಬಿಜೆಪಿ ಸದಸ್ಯರಿದ್ದ ಟಿಟಿ ವಾಹನಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಮುತ್ತಿಗೆ ಹಾಕಿದ ಪರಿಣಾಮ ನಗರ ಸಭೆ ಆವರಣದಲ್ಲಿ ಕೆಲ ಕಾಲ ಪ್ರಕ್ಷುಬ್ಧ ವಾತಾವರಣ ನಿರ್ಮಾಣವಾಗಿತ್ತು.

ಬೆಳಿಗ್ಗೆ 11 ಗಂಟೆಗೆ ಶಾಸಕ ಗಣಿಗ ರವಿಕುಮಾರ್ ನೇತೃತ್ವದಲ್ಲಿ ಮಿನಿ ಬಸ್‌ನಲ್ಲಿ ಆಗಮಿಸಿದ ಕಾಂಗ್ರೆಸ್‌ನ 17 ಮಂದಿ ಸದಸ್ಯರನ್ನು ನಗರಸಭೆ ಆವರಣದ ಗೇಟ್ ಬಳಿ ಇಳಿಸಿ, ಬಸ್ ವಾಪಸ್ಸಾಯಿತು. ಕಾಂಗ್ರೆಸ್ ಬೆಂಬಲಿತ ಸದಸ್ಯರೆಲ್ಲರೂ ನಗರಸಭೆ ಒಳ ಪ್ರವೇಶಿಸಿ, ಮಾಧ್ಯಮಗಳ ಮುಂದೆ ಒಗ್ಗಟ್ಟು ಪ್ರದರ್ಶಿಸಿದರು.

ಅದಾದ 15 ನಿಮಿಷಕ್ಕೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಜೆಡಿಎಸ್–ಬಿಜೆಪಿಯ 18 ಮಂದಿ ಸದಸ್ಯರು ನಗರಸಭೆ ಗೇಟ್ ಬಳಿಗೆ ಆಗಮಿಸಿದರು. ಕುಮಾರಸ್ವಾಮಿ ಅವರಿದ್ದ ಕಾರು ಮತ್ತು ಬೆಂಗಾವಲು ಪಡೆಯನ್ನು ಪೊಲೀಸರು ಗೇಟ್ ತೆಗೆದು ನೇರವಾಗಿ ಒಳಬಿಟ್ಟರು. ಆದರೆ ಸದಸ್ಯರಿದ್ದ ಟಿಟಿ ವಾಹನವನ್ನು ಮಾತ್ರ ಗೇಟ್ ಒಳಗೆ ಬಿಡಲಿಲ್ಲ. ಎಲ್ಲಾ ಸದಸ್ಯರು ನಡೆದುಕೊಂಡೇ ಹೋಗಬೇಕೆಂದು ಪೊಲೀಸರು ಸೂಚಿಸಿದರು.

ಆದರೆ ಯಾವೊಬ್ಬ ಸದಸ್ಯನು ಟಿಟಿಯಿಂದ ಕೆಳಗಿಳಿಯಲೇ ಇಲ್ಲ. ಅಷ್ಟೊತ್ತಿಗಾಗಲೇ ಕಾಂಗ್ರೆಸ್‌ನಿಂದ ಜೆಡಿಎಸ್ ತೆಕ್ಕೆಗೆ ಹಾರಿದ್ದ ನಗರಸಭಾ ಸದಸ್ಯ ಟಿ.ಕೆ.ರಾಮಲಿಂಗಯ್ಯ ಪ್ರತಿನಿಧಿಸುತ್ತಿರುವ 27ನೇ ವಾರ್ಡ್‌ನ ಕಾಂಗ್ರೆಸ್ ಕಾರ್ಯಕರ್ತರು ಟಿಟಿಗೆ ಮುತ್ತಿಗೆ ಹಾಕಿ, ರಾಮಲಿಂಗಯ್ಯ ಕಾಂಗ್ರೆಸ್‌ಗೆ ಮರಳಬೇಕೆಂದು ಘೋಷಣೆ ಕೂಗಿದರು. ಈ ವೇಳೆ ಕಾಂಗ್ರೆಸ್ ಹಾಗೂ ಜೆಡಿಎಸ್ ಕಾರ್ಯಕರ್ತರ ನಡುವೆ ವಾಕ್ಸಮರ ನಡೆದು ಪರಿಸ್ಥಿತಿ ಉದ್ವಿಗ್ನಗೊಂಡಿತು.

ಈ ವೇಳೆ ಹೆಚ್.ಡಿ.ಕುಮಾರಸ್ವಾಮಿಯವರು ನಮ್ಮ ಸದಸ್ಯರಿಗೆ ಬೆದರಿಕೆ ಇರುವುದರಿಂದ ಅವರಿರುವ ವಾಹನವನ್ನು ಒಳಗೆ ಬಿಡುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದ ಕಾರಣ ಪೊಲೀಸರು ಬಿಜೆಪಿ–ಜೆಡಿಎಸ್ ಸದಸ್ಯರಿದ್ದ ಟಿಟಿ ವಾಹನವನ್ನು ನಗರಸಭೆ ಆವರಣದೊಳಗೆ ಕಳುಹಿಸಿದರು.

ಕಾಂಗ್ರೆಸ್‌ನ ರಾಮಲಿಂಗಯ್ಯ ಮತ್ತು ಕಾಂಗ್ರೆಸ್ಸಿಗರು ಸೆಳೆಯಲು ಪ್ರಯತ್ನಿಸಿದ್ದ ಜೆಡಿಎಸ್ ಸದಸ್ಯ ಮಹದೇವು ಅವರನ್ನು ಹೆಚ್.ಡಿ.ಕುಮಾರಸ್ವಾಮಿ ತಮ್ಮ ಕಾರಿನಲ್ಲೇ ನಗರ ಸಭೆಗೆ ಕರೆತಂದದ್ದು ವಿಶೇಷವಾಗಿತ್ತು.

ಜೆಡಿಎಸ್‌ನಿಂದ ಗೂಂಡಾಗಿರಿ: ಚುನಾವಣೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಗಣಿಗ ರವಿಕುಮಾರ್, ನಮ್ಮ ಪಕ್ಷದ ಸದಸ್ಯ ರಾಮಲಿಂಗಯ್ಯ ಅವರನ್ನು ಜೆಡಿಎಸ್ ಹೈಜಾಕ್ ಮಾಡಿದೆ. ನಮ್ಮ ಸದಸ್ಯರಿರುವ ವಾಹನವನ್ನು ಗೇಟ್ ಬಳಿಯೇ ನಿಲ್ಲಿಸಿ, ಜೆಡಿಎಸ್ ಸದಸ್ಯರಿದ್ದ ವಾಹನವನ್ನು ಒಳಗೆ ಬಿಡುತ್ತಾರೆ. ಇದು ಯಾವ ನ್ಯಾಯ. ಇಂದು ಅಧಿಕಾರ ಹಿಡಿಯಲು ಜೆಡಿಎಸ್‌ನವರು ಗೂಂಡಾಗಿರಿ ಪ್ರದರ್ಶಿಸಿದ್ದಾರೆ ಎಂದು ಆರೋಪಿಸಿದರು.

ನಮಗೆ ಬಹುಮತವಿಲ್ಲದ ಕಾರಣ ನಾವು ಜೆಡಿಎಸ್‌ನಿಂದ ನಮ್ಮ ಪಕ್ಷಕ್ಕೆ ಬಂದ ಸದಸ್ಯರಿಗೆ ಅಧ್ಯಕ್ಷ ಸ್ಥಾನ, ಪಕ್ಷೇತರ ಸದಸ್ಯನಿಗೆ ಉಪಾಧ್ಯಕ್ಷ ಸ್ಥಾನ ಕಲ್ಪಿಸಬೇಕೆಂದಿದ್ದೆವು. ನಾವು ಯಾರನ್ನು ಜೆಡಿಎಸ್‌ನಿಂದ ಕರೆದಿರಲಿಲ್ಲ. ನಮ್ಮ ಸರ್ಕಾರದ ಕಾರ್ಯ ಮೆಚ್ಚಿ ಅವರೇ ನಮ್ಮ ಜೊತೆಗೆ ಬಂದಿದ್ದಾರೆ. ಆದರೆ ಜೆಡಿಎಸ್ ಮುಖಂಡರ ವಿರುದ್ಧ ನಗರ ಸಭಾ ಸದಸ್ಯ ಮಹದೇವು ಅವರ ಪುತ್ರ ಕಿಡ್ನಾಪ್ ಪ್ರಕರಣವನ್ನು ಪೊಲೀಸ್ ಠಾಣೆಯಲ್ಲಿ ದಾಖಲಿಸಿದ್ದಾರೆ ಎಂದು ಹೇಳಿದರು.

ನಮ್ಮ ಸದಸ್ಯರು ಆಮಿಷಕ್ಕೆ ಒಳಗಾಗಲಿಲ್ಲ: ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ, ಮಂಡ್ಯ ನಗರ ಸಭೆ ಚುನಾವಣೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿಷ್ಠೆಯಾಗಿ ತೆಗೆದುಕೊಂಡಿದ್ದರು. ನಾವು ಆ ಸವಾಲು ಸ್ವೀಕಾರ ಮಾಡಿ ಗೆಲುವು ಸಾಧಿಸಿದೆವು. ನಮ್ಮ ಸದಸ್ಯರು ಯಾವುದೇ ಆಮಿಷಕ್ಕೆ ಒಳಗಾಗಲಿಲ್ಲ ರಾಜಕೀಯ ಅಂದರೆ ಅಮಿಷ ಸಹಜ. ಅಂತಿಮವಾಗಿ ನಂಬರ್ ಮುಖ್ಯ, ನಾವು ಆ ನಂಬರ್ ಅನ್ನು ಮುಟ್ಟಿದ್ದೇವೆ ಮುಂದಿನ ದಿನಗಳಲ್ಲಿ ಇತರೆ ಚುನಾವಣೆಗಳಲ್ಲಿ ಎನ್‌ಡಿಎ ಗೆಲ್ಲುತ್ತೆ ಎಂದರು.

ಶಾಸಕ ಗಣಿಗ ವಿರುದ್ಧ ಆಮಿಷವೊಡ್ಡಿದ ಆರೋಪ

ನಗರಸಭೆ ಚುನಾವಣೆ ಮತದಾನದ ವೇಳೆಯಲ್ಲೇ ಚುನಾವಣಾಧಿಕಾರಿ ಸಮಕ್ಷಮದಲ್ಲಿಯೇ ಸ್ಥಳೀಯ ಶಾಸಕರು ನಮ್ಮ ಪಕ್ಷದ ಸದಸ್ಯರಿಗೆ ಅಡ್ಡ ಮತದಾನಕ್ಕೆ ಕುಮ್ಮಕ್ಕು ನೀಡಿ ಕಣ್ಸನ್ನೇ, ಕೈಸನ್ನೇ ಮೂಲಕ ಹಣದ ಆಮಿಷ ಒಡ್ಡಿದರು ಎಂದು ಹೆಚ್.ಡಿ. ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು. ನಮ್ಮ ವಿರುದ್ಧ ವಾಮಮಾರ್ಗದ ಆರೋಪ ಮಾಡಿದ್ದಾರೆ. ಶಾಸಕರ ಪ್ರಕಾರ ವಾಮ ಮಾರ್ಗದ ಅರ್ಥವೇನು? ಮತದಾನದ ವೇಳೆಯಲ್ಲಿಯೂ ಕಣ್ಸನ್ನೇ, ಕೈಸನ್ನೇ ಮೂಲಕ ನಮ್ಮ ಸದಸ್ಯರಿಗೆ ಹಣದ ಆಮೀಷ ಒಡ್ಡಿದ್ದು ವಾಮಮಾರ್ಗ ಅಲ್ಲದೆ ಮತ್ತೇನು ಎಂದು ಪ್ರಶ್ನಿಸಿದರು. ನನ್ನ ಜೀವನದಲ್ಲಿ ಮೊದಲ ಬಾರಿಗೆ ಸ್ಥಳೀಯ ಸಂಸ್ಥೆ ಚುನಾವಣೆಗೆ ಮತ ಹಾಕಲು ಬಂದಿದ್ದೇನೆ. ಕಳೆದ 20 ದಿನಗಳಿಂದ ನಡೆದ ರಾಜಕೀಯ ಬೆಳವಣಿಗೆ ಗಮನಿಸಿ ನಾನು ಬರಲೇಬೇಕಾಯಿತು. ದೆಹಲಿಯಲ್ಲಿ ಸಚಿವ ಸಂಪುಟದ ಸಭೆ ನಿಗದಿ ಆಗಿತ್ತು. ನಾನು ಪ್ರಧಾನಮಂತ್ರಿಗಳ ಕಚೇರಿಯ ಅನುಮತಿ ಪಡೆದು ಮತದಾನದಲ್ಲಿ ಭಾಗವಹಿಸಿದೆ. ಕಾಂಗ್ರೆಸ್ ಈ ಜಿಲ್ಲೆಯಲ್ಲಿ ಅಷ್ಟರ ಮಟ್ಟಿಗೆ ಕೆಟ್ಟ ರಾಜಕೀಯ ಮಾಡುತ್ತಿದೆ ಎಂದು ಟೀಕಾಪ್ರಹಾರ ನಡೆಸಿದರು.

ಚುನಾವಣೆ ಸೋಲಿನ ಭಯದಲ್ಲಿ ಚುನಾವಣೆ ಮುಂದೂಡುವುದರಲ್ಲಿ ಕಾಂಗ್ರೆಸ್ ಎಕ್ಸ್‌ಪರ್ಟ್. ಶಾಂತಿಯುತವಾಗಿ ಚುನಾವಣೆ ನಡೆಯಲು ಅಧಿಕಾರಿಗಳು ಸಹಕರಿಸಿದ್ದಾರೆ. ಆದರೆ, ಏನಾದರೂ ಕಿತಾಪತಿ ಮಾಡುವುದಕ್ಕೆ ಕಾಂಗ್ರೆಸ್ ನಾಯಕರು ಪ್ರಯತ್ನ ಮಾಡಿದರು. ಕಳೆದ ಲೋಕಸಭೆ ಚುನಾವಣೆಯಲ್ಲಿ ಹಿಂದಿನ ಅಧ್ಯಕ್ಷರು ವ್ಯಾಪಾರ ಶುರು ಮಾಡಿದರು. ನಮ್ಮ ಪಕ್ಷದಿಂದ ಗೆದ್ದು ಯಾವ ರೀತಿ ನಡೆದುಕೊಂಡರು ಎನ್ನುವುದು ಗೊತ್ತಿದೆ. ನಮ್ಮ ಪಕ್ಷದ ಸದಸ್ಯ ಮಹದೇವು ನಿಷ್ಠಾವಂತ ಜೆಡಿಎಸ್ ಸದಸ್ಯರು. ಪಕ್ಷ ನಿಷ್ಠೆಗೆ ಬೆಲೆ ಕೊಟ್ಟು ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಲಿಲ್ಲ. ಕಾಂಗ್ರೆಸ್ ನಾಯಕರು ಇವರ ಕುಟುಂಬದ ಸದಸ್ಯರನ್ನು ಬ್ಲಾಕ್‌ಮೇಲ್ ಮಾಡಿದರು. ಮಹದೇವು ಅವರು ತೆಗೆದುಕೊಂಡ ನಿರ್ಧಾರ ಪಕ್ಷನಿಷ್ಠೆಗೆ ಮಾದರಿಯಾಗಿದೆ ಎಂದರು.

ಕಲುಷಿತ ನೀರು ಸೇವಿಸಿ ಇಬ್ಬರು ವೃದ್ಧೆಯರು ಸಾವನ್ನಪ್ಪಿದ ಪ್ರಕರಣ

ಮಾರೇನಹಳ್ಳಿ ಜನರ ಹಿತ ಕಾಪಾಡಲು ಬದ್ಧ

ಕೆ.ಆರ್.ಪೇಟೆ, ಆ.28– ಮಾರೇನಹಳ್ಳಿ ಗ್ರಾಮದ ಜನತೆ ಭಯಪಡುವ ಅಗತ್ಯವಿಲ್ಲ. ನಿಮ್ಮ ಹಿತ ಕಾಪಾಡಲು ಮಂಡ್ಯ ಜಿಲ್ಲಾ ಮತ್ತು ಕೆ.ಆರ್.ಪೇಟೆ ತಾಲೂಕು ಆಡಳಿತ ಸದಾ ಸಿದ್ಧವಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ತಾಲೂಕು ಸಂತೆಬಾಚಹಳ್ಳಿ ಹೋಬಳಿಯ ಭಾರತಿಪುರ ಕ್ರಾಸ್ ಗ್ರಾ.ಪಂ. ವ್ಯಾಪ್ತಿಗೆ ಬರುವ ಮಾರೇನಹಳ್ಳಿ ಗ್ರಾಮದಲ್ಲಿ ಕಳೆದ ನಾಲ್ಕು ದಿನಗಳ ಹಿಂದೆ ಕಲುಷಿತ ನೀರು ಸೇವಿಸಿ ತೀವ್ರ ವಾಂತಿ ಭೇದಿಯಿಂದ ಇಬ್ಬರು ವಯೋವೃದ್ಧರು ಮೃತಪಟ್ಟು, ಉಳಿದವರು ಹಾಸನ, ಚನ್ನರಾಯಪಟ್ಟಣ, ಶ್ರಾವಣಬೆಳಗೊಳ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು ಜಿಲ್ಲಾಡಳಿತ ಸೂಕ್ತ ಕ್ರಮಕೈಗೊಂಡಿಲ್ಲ ಎಂದು ಗ್ರಾಮಸ್ಥರ ಆರೋಪದ ಹಿನ್ನೆಲೆಯಲ್ಲಿ ಮಾರೇನಹಳ್ಳಿ ಗ್ರಾಮಕ್ಕೆ ಜಿಲ್ಲಾಧಿಕಾರಿ ಡಾ.ಕುಮಾರ, ಸಿಇಒ ಶೇಕ್ ತನ್ವೀರ್ ಆಸಿಫ್, ಡಿಹೆಚ್‌ಓ ಡಾ.ಮೋಹನ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಭೇಟಿ ನೀಡಿ ಸ್ಥಳ ಪರಿಶೀಲಿಸಿ ರೋಗಿಗಳು ಗ್ರಾಮಸ್ಥರ ಆರೋಗ್ಯ ವಿಚಾರಿಸಿದರು. ಬಳಿಕ ಮಾತನಾಡಿದ ಜಿಲ್ಲಾಧಿಕಾರಿ, ಮಾರೇನ ಹಳ್ಳಿ ಗ್ರಾಮದಲ್ಲಿ ಕಳೆದ ಆರು ಏಳು ದಿನಗಳ ಹಿಂದೆ ಗ್ರಾಮದ 17 ಜನ ತೀವ್ರ ವಾಂತಿಭೇದಿಯಿಂದ ಅನಾರೋಗ್ಯಕ್ಕೆ ಸಿಲುಕಿದ್ದಾರೆ ಎಂದು ತಿಳಿದ ದಿನದಿಂದಲೂ ಜಿಲ್ಲಾ ಮತ್ತು ತಾಲೂಕು ಆರೋಗ್ಯ ಇಲಾಖೆ ಪ್ರತಿನಿತ್ಯ ಗುಣಮಟ್ಟದ ಚಿಕಿತ್ಸೆಯ ಮೂಲಕ ರೋಗಿಗಳ ಸಂಪರ್ಕದಲ್ಲಿದ್ದು ಅದರಲ್ಲಿ 13 ಜನ ಗುಣಮುಖರಾಗಿದ್ದಾರೆ. ಉಳಿದವರ ಆರೋಗ್ಯದ ಕಡೆ ಗಮನ ಹರಿಸಲಾಗುವುದು ಎಂದರು.



ಉಪ ನೋಂದಣಾಧಿಕಾರಿಯಿಂದ ಅಕ್ರಮ ನೋಂದಣಿ ಆರೋಪ

ಜಿಲ್ಲಾಧಿಕಾರಿಗಳಿಂದ ತನಿಖಾ ಸಮಿತಿ ನೇಮಕ

ಶ್ರೀರಂಗಪಟ್ಟಣ, ಆ.28–ಶ್ರೀರಂಗಪಟ್ಟಣ ಉಪ ನೋಂದಣಾಧಿಕಾರಿಗಳು ಕೆಲ ಆಸ್ತಿಗಳನ್ನು ಅಕ್ರಮವಾಗಿ ನೋಂದಣಿ ಮಾಡಿರುವುದಲ್ಲದೇ, ಸರ್ಕಾರಕ್ಕೆ ಮುದ್ರಾಂಕ ಶುಲ್ಕ ಮೋಸ ಮಾಡಿದ್ದಾರೆ ಎಂಬ ದೂರಿನ ಬಗ್ಗೆ ತನಿಖೆ ನಡೆಸಲು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರ ಅಧ್ಯಕ್ಷತೆಯಲ್ಲಿ ತನಿಖಾ ಸಮಿತಿ ನೇಮಕ ಮಾಡಿದ್ದಾರೆ.

ಈ ಸಮಿತಿಗೆ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅಧ್ಯಕ್ಷರಾಗಿದ್ದು ಮಂಡ್ಯ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿ ಹಾಗೂ ಜಿಲ್ಲಾಧಿಕಾರಿಗಳ ತಾಂತ್ರಿಕ ಸಹಾಯಕರು, ಸಹಾಯಕ ಜಿಲ್ಲಾಧಿಕಾರಿ ಕಚೇರಿ ಸಹಾಯಕರು, ಮಂಡ್ಯ ಜಿಲ್ಲಾ ನೋಂದಣಾಧಿಕಾರಿ ಕಚೇರಿಯ ಲೆಕ್ಕಾಧಿಕಾರಿ, ಜಿಲ್ಲಾಧಿಕಾರಿ ಕಚೇರಿಯ ಕಾನೂನು ಕೋಶದ ಶಿರಸ್ತೇದಾರ್ ಅವರನ್ನು ಸದಸ್ಯರಾಗಿ ನೇಮಿಸಲಾಗಿದೆ.

ಈ ಸಮಿತಿಗೆ ಶ್ರೀರಂಗಪಟ್ಟಣ ತಾಲೂಕು ಬೆಳಗೊಳ ಹೋಬಳಿ ಕೃಷ್ಣರಾಜಸಾಗರ ಸರ್ವೆ ನಂಬರ್ 6/1 ಮತ್ತು ಹೊಸಹಳ್ಳಿ ಗ್ರಾಮದ ಸರ್ವೆ ನಂಬರ್ 60/1ರ ಜಮೀನಿಗೆ ಸಂಬಂಧಿಸಿದ ದೃಢೀಕೃತ ದಾಖಲೆಗಳನ್ನು ನೀಡಬೇಕೆಂದು ಜಿಲ್ಲಾಧಿಕಾರಿಗಳು ಶ್ರೀರಂಗಪಟ್ಟಣ ತಾಲೂಕು ತಹಶೀಲ್ದಾರರಿಗೆ ಸೂಚನೆ ನೀಡಿದ್ದಾರೆ.

ವಿವರ: ಶ್ರೀರಂಗಪಟ್ಟಣ ಉಪ ನೋಂದಣಾಧಿಕಾರಿಗಳು ಕೆಲ ಆಸ್ತಿಗಳನ್ನು ಅಕ್ರಮವಾಗಿ ನೋಂದಣಿ ಮಾಡಿದ್ದಾರೆ. ಕೆಲ ಆಸ್ತಿಗಳಿಗೆ ಕ್ರಯದ ಒಪ್ಪಂದ ಕರಾರು ಪತ್ರದಲ್ಲಿ ನಮೂದಿಸಿರುವ ಮೊತ್ತಕ್ಕಿಂತ ಕಡಿಮೆ ಮೊತ್ತಕ್ಕೆ ಕ್ರಯಪತ್ರ ನೋಂದಣಿ ಮಾಡಿದ್ದು, ಇದರಿಂದ ಸರ್ಕಾರಕ್ಕೆ ಮುದ್ರಾಂಕ ಶುಲ್ಕ ಮೋಸ ಮಾಡಲಾಗಿದೆ. ಉಪ ನೋಂದಣಾಧಿಕಾರಿಗಳಿಗೆ ಕಚೇರಿಯ ಕಂಪ್ಯೂಟರ್ ಆಪರೇಟರ್ ಸೌಮ್ಯಶ್ರೀ ಎಂಬುವರು ಸಹಕರಿಸಿದ್ದಾರೆ. ಆದ್ದರಿಂದ ಅವರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ತೂಬಿನಕೆರೆ ಗ್ರಾಮದ ಟಿ.ಎಲ್.ಶ್ರೀಧರ್ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರು. ಈ ದೂರಿನ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ತನಿಖಾ ಸಮಿತಿ ನೇಮಕ ಮಾಡಿದ್ದಾರೆ.

ಸಿಎ ಸೈಟ್ ಹಗರಣ: ದೇಶಕ್ಕೆ ಉಪದೇಶ ಕೊಡುವ ಪ್ರಿಯಾಂಕ ಖರ್ಗೆ ಉತ್ತರ ಕೊಡಲಿ

ಮಂಡ್ಯ,ಆ.28– ಸಚಿವ ಪ್ರಿಯಾಂಕ ಖರ್ಗೆ ಮಾತಿಗೆ ಮುಂಚೆ ಊರಿಗೆಲ್ಲ ಬುದ್ಧಿ ಹೇಳುತ್ತಿದ್ದರು. ಈಗ ಅವರೇ ಬುದ್ಧಿ ಹೇಳಿಸಿಕೊಳ್ಳುವ ಸ್ಥಿತಿಗೆ ಬಂದು ತಲುಪಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಅವರ ಕುಟುಂಬ ಕೆಐಡಿಬಿಯಿಂದ ಸಿಎ ಸೈಟ್ ಪಡೆದಿರುವ ಆರೋಪ ಕೇಳಿ ಬಂದಿದೆ. ಹಲವಾರು ಜನರಿಗೆ ಈ ರೀತಿಯಲ್ಲಿ ಜಾಗ ಕೊಟ್ಟಿದ್ದಾರೆ. ಬೇಕಾದಷ್ಟು ಪ್ರಕರಣಗಳು ನಡೆದಿವೆ. ಖರ್ಗೆ ಅವರು ದೇಶಕ್ಕೆ, ನಾಡಿಗೆಲ್ಲ ಬುದ್ಧಿ ಹೇಳುವವರು, ಉಪದೇಶ ಮಾಡುವವರು. ಯಾವ ಆಧಾರದ ಮೇಲೆ ಈ ಜಾಗವನ್ನು ಇವರು ತೆಗೆದುಕೊಂಡಿದ್ದಾರೆ? ಎಂದು ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಪ್ರಶ್ನಿಸಿದರು.

ನಗರದ ನಗರಸಭೆ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದುಡ್ಡು ಕೊಟ್ಟು ಖರೀದಿಸಲು ಆಗುತ್ತಿರಲಿಲ್ಲವಾ? ಖಾಸಗಿ ಜಮೀನು ಖರೀದಿ ಮಾಡಬಹುದಿತ್ತು ಕೆಐಎಡಿಬಿ ಜಾಗವೇ ಬೇಕಿತ್ತಾ? ಇದು ಅಧಿಕಾರ ದುರಪಯೋಗ. ದೇಶಕ್ಕೆ ಬುದ್ಧಿ ಹೇಳುವವರು ಇದಕ್ಕೆ ಉತ್ತರ ಹೇಳಬೇಕು ಎಂದು ಟೀಕಿಸಿದರು.

ಸಚಿವರ ವ್ಯಂಗ್ಯ: ಕಾಂಗ್ರೆಸ್ ನಾಯಕರು 31ನೇ ತಾರೀಕು ರಾಜಭವನ ಚಲೋ ಮಾಡುತ್ತಿರುವುದಕ್ಕೆ ಬಹಳ ಸಂತೋಷ. ಅವರು ರಾಜಭವನದ ಜೊತೆಗೆ ರಾಷ್ಟ್ರಪತಿ ಭವನ ಚಲೋ ಕೂಡ ಮಾಡಲಿ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮನೆಗೆ ಕೂಡ ಹೋಗಲಿ. ಸತ್ತಿರುವ ವಿಚಾರ ಇಟ್ಟುಕೊಂಡು ನನ್ನ ಬಗ್ಗೆ ಮಾತನಾಡುತ್ತಿದ್ದಾರೆ. ಮಹಾನ್ ಅಪರಾಧ ಮಾಡಿದ್ದಾರೆ ಎನ್ನುತ್ತಿದ್ದಾರೆ. ನಾನೇ ಕೈ ಜೋಡಿಸಿ ಮನವಿ ಮಾಡುತ್ತೇನೆ. ರಾಜ್ಯಪಾಲರ ಅನುಮತಿ ಪಡೆದು ತನಿಖೆ ಮಾಡಲಿ ಎಂದು ಸವಾಲು ಹಾಕಿದರು. ಕಾನೂನು ಪ್ರಕಾರ ಎಷ್ಟು ಸೈಟ್ ಬೇಕಾದರೂ ಪಡೆಯಿರಿ. ಇದಕ್ಕೆ ನಮ್ಮ ವಿರೋಧವಿಲ್ಲ. ಸುಳ್ಳು ದಾಖಲೆ ಸೃಷ್ಟಿಮಾಡಿ, ಅಧಿಕಾರಿಗಳನ್ನು ದುರುಪಯೋಗ ಮಾಡಿಕೊಂಡು ಇಂಥ ಕೆಲಸ ಮಾಡಿದ್ದಾರೆ.

ಅಭಿನಂದನೆ...



ಸಪ್ತರ್ಷಿ ಸೌಹಾರ್ದ ಪತ್ತಿನ ಸಹಕಾರ ಸಂಘದ ರಜತ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಸಮಾಜ ಸೇವಕ ಎಸ್.ಶ್ರೀಕಾಂತ್ ಅವರನ್ನು ಸಂಘದ ವತಿಯಿಂದ ಶಾಸಕ ಟಿ.ಎಸ್.ಶ್ರೀವತ್ಸ ಆತ್ಮೀಯವಾಗಿ ಅಭಿನಂದಿಸಿದರು.

ಹುಟ್ಟುಹಬ್ಬದ ಶುಭಾಶಯ...



ಹುಟ್ಟುಹಬ್ಬ ಆಚರಿಸಿಕೊಂಡ ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗ ಅಧ್ಯಕ್ಷ ಪ್ರದೀಪ್ ಕೃಷ್ಣೇಗೌಡ ಅವರಿಗೆ ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಸಿ.ಮಾದೇಶ್ ಶುಭಕೋರಿದರು. ಈ ವೇಳೆ ಕೃಷ್ಣ, ಪಡುವಾರಳ್ಳಿ ಪಾಪಣ್ಣ, ಲೋಕೇಶ್, ಕೆ.ರಾಜು, ಡೆಲ್ಲಿ ರವಿ, ಪವನ್, ಸುಬ್ರಮಣ್ಯ, ಸೋಮ ಇತರರಿದ್ದರು.

ಮೇಕೆದಾಟು ಯೋಜನೆ ಬಗ್ಗೆ ಮಧ್ಯಸ್ಥಿಕೆ ವಹಿಸಲ್ಲ ಎಂದ ಕೇಂದ್ರ ಸರ್ಕಾರ

ನವದೆಹಲಿ, ಆ.28– ಮೇಕೆದಾಟು ಜಲವಿವಾದವನ್ನು ಕಾವೇರಿ ನೀರು ನಿಯಂತ್ರಣ ಸಮಿತಿ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮೂಲಕವೇ ಕರ್ನಾಟಕ ಹಾಗೂ ತಮಿಳುನಾಡು ಸರ್ಕಾರಗಳು ಇತ್ಯರ್ಥ ಪಡಿಸಿಕೊಳ್ಳಬೇಕು ಎಂದು ಕೇಂದ್ರ ಸರ್ಕಾರ ಪುನರುಚ್ಚರಿಸಿದೆ. ಉಭಯ ರಾಜ್ಯಗಳ ನಡುವೆ ಮಧ್ಯಸ್ಥಿಕೆ ವಹಿಸಿ ಮೇಕೆದಾಟು ವಿವಾದ ಬಗೆಹರಿಸಬೇಕು ಎಂಬ ಕರ್ನಾಟಕದ ಬೇಡಿಕೆಯನ್ನು ಕೇಂದ್ರ ಸರ್ಕಾರವು ತಳ್ಳಿ ಹಾಕಿದೆ.

ಅಂತರರಾಜ್ಯ ಜಲವಿವಾದ ಕಾಯ್ದೆ 1956ರ ಸೆಕ್ಷನ್ 6ರ ಅನ್ವಯ ಹಾಗೂ ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ, ಕೇಂದ್ರ ಸರ್ಕಾರವು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿಯನ್ನು 2018ರಲ್ಲಿ ಸ್ಥಾಪಿಸಿದೆ. ಈ ಸಮಿತಿಯಲ್ಲಿ ಕರ್ನಾಟಕ, ತಮಿಳುನಾಡು, ಕೇರಳ ಹಾಗೂ ಪುದುಚೆರಿ ಪ್ರತಿನಿಧಿಗಳಿದ್ದಾರೆ. ಕಾವೇರಿ ಕಣಿವೆಯ ವಾಸ್ತವಾಂಶ ಪರಿಗಣಿಸಿ ಪ್ರಾಧಿಕಾರ ಹಾಗೂ ಸಮಿತಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತವೆ ಎಂದು ಕೇಂದ್ರ ಜಲಶಕ್ತಿ ಸಚಿವಾಲಯ ಸ್ಪಷ್ಟಪಡಿಸಿದೆ.

ಮೇಕೆದಾಟು ವಿವಾದದ ವಿಷಯದಲ್ಲಿ ತಮಿಳುನಾಡಿನ ಮನವೊಲಿಸಲು ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಅವರು ಪ್ರಧಾನಿ ಹಾಗೂ ಜಲಶಕ್ತಿ ಸಚಿವರಿಗೆ ಈಚೆಗೆ ಮನವಿ ಮಾಡಿದ್ದರು. ಕಾವೇರಿ ಜಲವಿವಾದ ಬಗೆಹರಿಸಲು ಸಂಧಾನ ನಡೆಸಲು ಕೇಂದ್ರ ಸರ್ಕಾರ ಮುಂದಾಗಿದೆಯೇ ಎಂದು ಪ್ರಶ್ನಿಸಿ ತಮಿಳುನಾಡು ಸಂಸದ ಡಾ.ಡಿ. ರವಿಕುಮಾರ್ ಅವರು ಜಲಶಕ್ತಿ ಸಚಿವರಿಗೆ ಪತ್ರ ಬರೆದಿದ್ದರು. ಈ ಬಗ್ಗೆ ಕಾವೇರಿ ಪ್ರಾಧಿಕಾರವೇ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಸಚಿವರು ಪ್ರತಿಕ್ರಿಯಿಸಿದ್ದರು.

ಈ ವರ್ಷದ ಫೆಬ್ರುವರಿ 1ರಂದು ನಡೆದ ಪ್ರಾಧಿಕಾರದ ಸಭೆಯಲ್ಲಿ ಯೋಜನೆಯ ಕುರಿತು ವಿಸ್ತೃತ ಚರ್ಚೆ ನಡೆಸಿ ಡಿಪಿಆರ್ ಅನ್ನು ಜಲ ಆಯೋಗಕ್ಕೆ ಮರಳಿಸಲು ತೀರ್ಮಾನಿಸಲಾಗಿತ್ತು. ಈ ಯೋಜನೆಯ ಕಾರ್ಯಸಾಧ್ಯತೆ, ವಿವಿಧ ತಾಂತ್ರಿಕ ಹಾಗೂ ಆರ್ಥಿಕ ಅಂಶಗಳ ಬಗ್ಗೆ ಜಲ ಆಯೋಗ ಪರಿಶೀಲನೆ ನಡೆಸಬೇಕು ಎಂದು ಪ್ರಾಧಿಕಾರ ಅಭಿಪ್ರಾಯಪಟ್ಟಿತ್ತು.

ಒಂದನೇ ಪುಟದಿಂದ

ಹೊಸ ದಾಖಲಾತಿ ಸೇರ್ಪಡೆ ಆರೋಪ

ಕೆಲ ದಾಖಲೆಗಳನ್ನು ಯಾವ ರೀತಿ ನಾಶ ಮಾಡಲು ಯತ್ನಿಸಿದ್ದಾರೆ, ಪಾರ್ವತಿ ಅವರ ಸಹಿಗಳಲ್ಲಿ ಯಾವ ರೀತಿ ವ್ಯತ್ಯಾಸವಿದೆ ಎಂಬ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದ್ದಾರೆ. ಸಿದ್ದರಾಮಯ್ಯ ಬಿಡುಗಡೆ ಮಾಡಿರುವ ದಾಖಲಾತಿಯ ವಿಡಿಯೋ ಹಾಗೂ ಮಾಹಿತಿ ಹಕ್ಕು ಕಾಯ್ದೆಯಲ್ಲಿ ಮುಡಾದಿಂದ ತಾವು ಪಡೆದಿರುವ ಮೂಲ ದಾಖಲಾತಿಯಲ್ಲಿ ಏನೇನು ವ್ಯತ್ಯಾಸವಿದೆ ಎಂಬುದನ್ನು ವಿವರಿಸಿದ್ದಾರೆ.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಸಿದ್ದರಾಮಯ್ಯ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದಾರೆ. ಇದರ ಮಧ್ಯೆ ಜುಲೈ 26 ರಂದು ವಿಧಾನಸಭೆಯಲ್ಲಿ ಪತ್ರಿಕಾಗೋಷ್ಠಿ ನಡೆಸಿದ ಸಿದ್ದರಾಮಯ್ಯ, ತಮ್ಮ ಪತ್ನಿ ಪಾರ್ವತಿ ಜೂನ್ 23, 2014 ರಂದು ಮುಡಾ ಆಯುಕ್ತರಿಗೆ ಬರೆದಿರುವ ಪತ್ರವನ್ನು ಬಿಡುಗಡೆ ಮಾಡಿದ್ದರು. ಸದರಿ ಪತ್ರದ ಎರಡನೇ ಪುಟದಲ್ಲಿ ಕೆಲವು ಪದಗಳ ಮೇಲೆ ವೈಟ್ನರ್ ಹಾಕಿ ಸತ್ಯ ಮುಚ್ಚಿಟ್ಟಿದ್ದಾರೆ ಎಂಬ ಅನುಮಾನ ವ್ಯಕ್ತಪಡಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಮೊನ್ನೆ (ಆಗಸ್ಟ್ 26) ಸಿದ್ದರಾಮಯ್ಯ ತಮ್ಮ ಎಕ್ಸ್ ಖಾತೆಯಲ್ಲಿ ಒಂದು ವಿಡಿಯೋ ತುಣುಕಿನೊಂದಿಗೆ ಟ್ವೀಟ್ ಮಾಡಿದ್ದರು. ಈ ವಿಡಿಯೋವನ್ನು ಸೂಕ್ಷ್ಮವಾಗಿ ಪರಿಶೀಲಿಸಿದಾಗ ಮಾಹಿತಿ ಹಕ್ಕು ಕಾಯ್ದೆಯಲ್ಲಿ ನಾನು ಪಡೆದಿರುವ ದಾಖಲೆಯಲ್ಲಿರುವ ಪಾರ್ವತಿಯವರ ಸಹಿಗೂ, ವಿಡಿಯೋದಲ್ಲಿ ಕಂಡು ಬರುವ ದಾಖಲೆಯಲ್ಲಿರುವ ಸಹಿಗೂ ಸಾಕಷ್ಟು ವ್ಯತ್ಯಾಸವಿದೆ ಎಂದು, ಸಹಿಗಳಲ್ಲಿರುವ ವ್ಯತ್ಯಾಸವನ್ನು ಹಲವು ವಿಚಾರ ಉಲ್ಲೇಖಿಸಿ ವಿವರಿಸಿದ್ದಾರೆ.

- ಸಹಿಗಳ ಪಕ್ಕದಲ್ಲಿರುವ 'ಎಕ್ಸ್' ಗುರುತುಗಳಲ್ಲಿ ವ್ಯತ್ಯಾಸ ಕಂಡು ಬರುತ್ತದೆ.
- ನನ್ನ ಬಳಿ ಇರುವ ದಾಖಲೆಯಲ್ಲಿರುವ ಸಹಿಗೂ ಮತ್ತು ಪಕ್ಕದಲ್ಲಿರುವ 'ಎಕ್ಸ್' ಗುರುತಿಗೂ ಅಂತರ ಕಡಿಮೆ ಇದೆ. ವಿಡಿಯೋದಲ್ಲಿ ಕಂಡು ಬರುವ ದಾಖಲೆಯ ಸಹಿಗೂ ಮತ್ತು ಪಕ್ಕದಲ್ಲಿರುವ 'ಎಕ್ಸ್' ಗುರುತಿಗೂ ಅಂತರ ಹೆಚ್ಚು ಇದೆ.
- ನನ್ನ ದಾಖಲೆಯಲ್ಲಿ 'ತ' ಅಕ್ಷರದಲ್ಲಿ 'ಪಿ' ಅಕ್ಷರದ ಕೆಳಭಾಗದ ಗೆರೆ ಬಂದಿರುವುದು ಕಂಡು ಬರುತ್ತದೆ. ವಿಡಿಯೋದಲ್ಲಿ ಕಂಡು ಬರುವ ದಾಖಲೆಯಲ್ಲಿ 'ತ' ಅಕ್ಷರದ ಮೇಲೆ ಪಿ ಅಕ್ಷರದ ಗೆರೆ ಇರುವುದು ಕಂಡು ಬರುತ್ತದೆ.
- ನನ್ನ ದಾಖಲೆಯಲ್ಲಿ 'ಪಿ' ಅಕ್ಷರದ ಉದ್ದಗೆರೆಯ ಮೇಲ್ಭಾಗದಲ್ಲಿ ಮುಂದೆ ಅಡ್ಡಗೆರೆ ಬಂದಿರುವುದಿಲ್ಲ. ವಿಡಿಯೋದಲ್ಲಿ ಕಂಡು ಬರುವ ದಾಖಲೆಯಲ್ಲಿ 'ಪಿ' ಅಕ್ಷರದ ಉದ್ದಗೆರೆಯ ಮೇಲ್ಭಾಗದಲ್ಲಿ ಅಡ್ಡಗೆರೆ ಬಂದಿರುತ್ತದೆ.
- ನನ್ನ ದಾಖಲೆಯಲ್ಲಿರುವ 'ಆರ್' ಅಕ್ಷರಕ್ಕೂ, ವಿಡಿಯೋದಲ್ಲಿನ ದಾಖಲೆಯಲ್ಲಿರುವ 'ಆರ್' ಅಕ್ಷರಕ್ಕೂ ಸಾಕಷ್ಟು ವ್ಯತ್ಯಾಸವಿದೆ.
- ನನ್ನ ದಾಖಲೆಯಲ್ಲಿರುವ 'ವಿ' ಅಕ್ಷರಕ್ಕೂ, ವಿಡಿಯೋದ ದಾಖಲೆಯಲ್ಲಿರುವ 'ವಿ' ಅಕ್ಷರಕ್ಕೂ ವ್ಯತ್ಯಾಸವಿದೆ.
- ನನ್ನ ದಾಖಲೆಯಲ್ಲಿ 'ಟಿ' ಅಕ್ಷರದ ಮೇಲ್ಭಾಗದಲ್ಲಿ ಎರಡು ಗೆರೆಗಳ ಮಧ್ಯೆ ಅಂತರ ಕಂಡು ಬರುವುದಿಲ್ಲ. ವಿಡಿಯೋದಲ್ಲಿ ಕಂಡು ಬರುವ ದಾಖಲೆಯಲ್ಲಿ 'ಟಿ' ಅಕ್ಷರದ ಮೇಲ್ಭಾಗದಲ್ಲಿ ಎರಡು ಗೆರೆಗಳ ನಡುವೆ ಅಂತರ ಕಾಣಿಸುತ್ತದೆ.
- ನನ್ನ ಬಳಿಯ ದಾಖಲೆಯಲ್ಲಿರುವ 'ಐ' ಅಕ್ಷರದ ಮೇಲ್ಭಾಗದಲ್ಲಿ ಚುಕ್ಕಿ ಇರುವುದು ಕಂಡು ಬರುವುದಿಲ್ಲ. ಆದರೆ ವಿಡಿಯೋದಲ್ಲಿ ಕಂಡು ಬರುವ ದಾಖಲೆಯಲ್ಲಿರುವ 'ಐ' ಅಕ್ಷರದ ಮೇಲ್ಭಾಗದಲ್ಲಿ ಚುಕ್ಕಿ ಇದೆ.
- ನನ್ನ ದಾಖಲೆಯಲ್ಲಿನ ಎರಡನೇ ಪುಟದ ಎಡ ಭಾಗದಲ್ಲಿ ಟ್ಯಾಗ್ ಹಾಕಿರುವ ಗುರುತು ಕಾಣಿಸಿದರೆ, ಸೃಷ್ಟಿಸಿರುವ ದಾಖಲೆಯ ಬಲ ಭಾಗದಲ್ಲಿ ಟ್ಯಾಗ್ ಗುರುತು ಕಾಣಿಸುತ್ತದೆ.

ಹೀಗೆ ಸಹಿಯಲ್ಲೇ ಒಟ್ಟು 9 ಪ್ರಮುಖ ವ್ಯತ್ಯಾಸಗಳು ಕಂಡು ಬರುತ್ತವೆ. ಇವುಗಳನ್ನು ಗಮನಿಸಿದಾಗ ನೈಜ ದಾಖಲೆಯ ಬದಲಿಗೆ, ಬೇರೆಯದೆ ಸುಳ್ಳು ದಾಖಲೆಯನ್ನು ಸೃಷ್ಟಿಸಿರುವುದು ಕಂಡು ಬರುತ್ತದೆ ಎಂದು ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ. ಸಿದ್ದರಾಮಯ್ಯ ಬಿಡುಗಡೆ ಮಾಡಿರುವ ದಾಖಲಾತಿಯ ವಿಡಿಯೋದಲ್ಲಿ ಕೆಪಿಸಿಸಿ ವಕ್ತಾರ ಎಂ. ಲಕ್ಷ್ಮಣ್ ಮಾತು ಕೇಳಿಸುತ್ತದೆ ಎಂದು ಆಪಾದಿಸಿದ್ದಾರೆ. ಪಾರ್ವತಿ ಅವರು ಬರೆದಿರುವ ಪತ್ರದಲ್ಲಿ ವಿಜಯನಗರ ಬಡಾವಣೆಯಲ್ಲಿ ನಿವೇಶನ ಕೋರಿದ ವಿಚಾರವನ್ನು ಮುಚ್ಚಿಟ್ಟು 'ದೇವನೂರು ಮೂರನೇ ಹಂತದ ಬಡಾವಣೆಯಲ್ಲಿ ಅಥವಾ ನಂತರ...' ಎಂಬ ಪದಗಳ ಮೇಲೆ ವೈಟ್ನರ್ ಹಾಕಲಾಗಿದೆ ಎಂಬಂತೆ ಬಿಂಬಿಸುವ ಸಲುವಾಗಿ ಲಕ್ಷ್ಮಣ್ ಮತ್ತು ಪಾರ್ವತಿ ಸಂಚು ರೂಪಿಸಿದ್ದಾರೆ ಎಂದು ದೂರಿದ್ದಾರೆ. ನನ್ನ ಉತ್ತಮ ಮತ್ತು ನೈಜ ಸಾಕ್ಷ್ಯಾಧಾರವಾಗಿದ್ದ ಮೂಲ ಪತ್ರವನ್ನು ನಾಶಪಡಿಸಿ, ಇತ್ತೀಚಿಗೆ ಸೃಷ್ಟಿಸಿರುವ ದಾಖಲೆಯನ್ನು ಮುಡಾ ಕಡತದಲ್ಲಿ ಸೇರಿಸಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಆರೋಪ ಮಾಡಿದ್ದಾರೆ. ಈ ದಾಖಲೆ ಇಟ್ಟುಕೊಂಡು ವಿಡಿಯೋ ಮಾಡಲಾಗಿದೆ. ಮೂಲ ದಾಖಲಾತಿಯಲ್ಲಿ ಮಾತ್ರ ಈ ರೀತಿ ಬೆಳಕು ಹಿಡಿದಾಗ, ಅಕ್ಷರಗಳು ಕಾಣಿಸುತ್ತದೆ. ಆದರೆ ಜೆರಾಕ್ಸ್ ದಾಖಲೆಯಲ್ಲಿ ಕಾಣಿಸುವುದಿಲ್ಲ. ಅದೇ ನೈಜ ದಾಖಲೆ ಎಂಬಂತೆ ವಿಡಿಯೋ ಮಾಡಿರುವ ಲಕ್ಷ್ಮಣ, ಪಾರ್ವತಿ ಹಾಗೂ ಇವರಿಗೆ ಮೂಲ ಕಡತ ನೀಡಿ ಕೃತ್ಯಕ್ಕೆ ಸಹಕರಿಸಿದವರ ವಿರುದ್ಧ ಮೊಕದ್ದಮೆ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಸ್ನೇಹಮಯಿ ಕೃಷ್ಣ ಪೊಲೀಸರನ್ನು ಕೋರಿದ್ದಾರೆ. ದೂರನ್ನು ಸ್ವೀಕರಿಸಿರುವ ಲಕ್ಷ್ಮಿಪುರಂ ಪೊಲೀಸ್ ಠಾಣೆಯ ಎಎಸ್‌ಐ ಶ್ರೀನಿವಾಸ್, ಹಿಂಬರಹ ನೀಡಿದ್ದಾರೆ.

ನ್ಯಾಯಾಲಯದ ಗಮನಕ್ಕೆ ತರುತ್ತೇನೆ

ಸುಳ್ಳು ದಾಖಲೆ ಸೃಷ್ಟಿಸಿ, ಕಡತದಲ್ಲಿರುವ ನೈಜ ದಾಖಲೆ ನಾಶ ಮಾಡಿರುವುದನ್ನು ನ್ಯಾಯಾಲಯದ ಗಮನಕ್ಕೆ ತರುತ್ತೇನೆ ಎಂದು ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ತಿಳಿಸಿದ್ದಾರೆ. ಪೊಲೀಸರಿಗೆ ದೂರು ನೀಡಿದ ನಂತರ ಪತ್ರಕರ್ತರಿಗೆ ಈ ವಿಚಾರ ತಿಳಿಸಿದ ಅವರು, ನಕಲಿ ದಾಖಲೆ ಸೃಷ್ಟಿ ಮಾಡಿ, ನೈಜ ದಾಖಲೆ ನಾಶ ಮಾಡುವುದರ ಜೊತೆಗೆ ಪಾರ್ವತಿ ಅವರ ಸಹಿ ಯಾವ ರೀತಿ ವ್ಯತ್ಯಾಸವಾಗಿದೆ ಎಂಬುದನ್ನು ನ್ಯಾಯಾಲಯಕ್ಕೆ ವಿವರಿಸುವುದಾಗಿ ಹೇಳಿದರು.

ಈ ಮೂಲಕ ದಾಖಲೆಗಳ ವ್ಯತ್ಯಾಸವನ್ನು ನ್ಯಾಯಾಲಯಕ್ಕೆ ಮನದಟ್ಟು ಮಾಡಲಾಗುವುದು ಎಂದು ಸ್ನೇಹಮಯಿ ಕೃಷ್ಣ ತಿಳಿಸಿದರು.

ಕೋರ್ಟ್ ನಿರ್ಧಾರ

ಪ್ರಭುಲಿಂಗ ನಾವಡಗಿ, ಲಕ್ಷ್ಮೀ ಅಯ್ಯಂಗಾರ್, ರಂಗನಾಥರೆಡ್ಡಿ ವಾದ ಮಾಡಬೇಕಿದೆ. ವಾದ ಮತ್ತು ಪ್ರತಿ ವಾದವು ನಾಳಿನ ವಿಚಾರಣೆ ಸಂದರ್ಭ ದಲ್ಲಿ ಮುಗಿದರೆ ನ್ಯಾಯಮೂರ್ತಿಗಳು ನಾಳೆಯೇ ತೀರ್ಪು ಪ್ರಕಟಿಸಲಿದ್ದಾರೆಯೇ ಎಂಬುದನ್ನು ಕಾದು ನೋಡಬೇಕಿದೆ. ಒಂದು ವೇಳೆ ವಾದ ಮತ್ತು ಪ್ರತಿವಾದಗಳು ಮುಗಿಯದಿದ್ದರೆ, ನ್ಯಾಯ ಮೂರ್ತಿಗಳು ಮತ್ತೆ ವಿಚಾರಣೆ ಮುಂದೂಡುವ ಸಾಧ್ಯತೆ ಇರುತ್ತದೆ. ತೀರ್ಪು ಹೊರ ಬರುವ ಮುನ್ನವೇ ಪ್ರದೇಶ ಕಾಂಗ್ರೆಸ್ ತಮ್ಮ ಪಕ್ಷದ ಶಾಸಕರು, ಸಂಸದರು, ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ನೇತೃತ್ವದಲ್ಲಿ ಆ.31ಕ್ಕೆ ರಾಜಭವನ ಚಲೋ ಕಾರ್ಯಕ್ರಮ ಹಮ್ಮಿಕೊಂಡಿದೆ.

'ಸೆಟಲ್‌ಮೆಂಟ್ ಡೀಡ್' ಮೂಲಕ ಧೋಕಾ!

50:50ರ ಅನುಪಾತವಾಯಿತು, ಸೆಕ್ಯೂರಿಟಿ ಬಾಂಡ್ ಆಯಿತು, ಇದೀಗ 'ಸೆಟಲ್‌ಮೆಂಟ್ ಡೀಡ್' ಹೊಸ ಹಗರಣ ಮುಡಾದಲ್ಲಿ ಬೆಳಕಿಗೆ ಬಂದಿದೆ ಈ ಮೂಲಕವೂ ಜನರು ಹಾಗೂ ಸರ್ಕಾರಕ್ಕೆ ಮುಡಾ ಅಧಿಕಾರಿಗಳು ಧೋಕಾ ಮಾಡಿದ್ದಾರೆ.

ಚರಂಡಿ ಜಾಗಕ್ಕೆ ಬದಲಾಗಿ ನಿವೇಶನಗಳು: ಮೈಸೂರಿನ ದಟ್ಟಗಳ್ಳಿ ಬಳಿ ಬೆಂಗಳೂರಿನ ಡಾಲರ್ಸ್ ಕಾಲೋನಿ, 4ನೇ ಫೇಸ್, ಜೆಪಿ ನಗರ 7ನೇ ಮೇನ್ 4ನೇ ಕ್ರಾಸ್ ನಿವಾಸಿ ಲೇಟ್ ಎಸ್.ಎನ್. ನಾಗರಾಜರಾವ್ ಮಗ ಎನ್. ಮಂಜುನಾಥ ಎಂಬುವರು ಅಭಿವೃದ್ಧಿಪಡಿಸಿರುವ ಖಾಸಗಿ ಬಡಾವಣೆಯಲ್ಲಿ ರಸ್ತೆ, ಚರಂಡಿ ಹಾದು ಹೋಗಿರುವುದರಿಂದ ನಿವೇಶನಗಳ ಲಭ್ಯತೆ ವಿಸ್ತೀರ್ಣ, ಕಡಿಮೆಯಾಗಿದೆ ಎಂಬ ಕಾರಣಕ್ಕೆ ಹೈಕೋರ್ಟ್ ಆದೇಶ ಹಾಗೂ ಮುಡಾ ಸಭಾ ನಿರ್ಣಯದಂತೆ ವಿಜಯನಗರ 4ನೇ ಹಂತದಲ್ಲಿ ಬಡಾವಣೆಯಲ್ಲಿ ಅಭಿವೃದ್ಧಿಪಡಿಸಿದ ನಿವೇಶನಗಳನ್ನು ಪ್ರೋತ್ಸಾಹದಾಯಕ ಯೋಜನೆಯಡಿ ಪರಿಹಾರವಾಗಿ ಅಧಿಕಾರಿಗಳು ಮಂಜೂರು ಮಾಡಿದ್ದಾರೆ.

ಒಂದೇ ದಿನದಲ್ಲಿ ಟೈಟಲ್ ಡೀಡ್: ಮೈಸೂರು ತಾಲೂಕು, ಕಸಬಾ ಹೋಬಳಿ, ದಟ್ಟಗಳ್ಳಿ ಗ್ರಾಮದ ಸರ್ವೆ ನಂಬರ್‌ಗಳಿಗೆ ಸಂಬಂಧಿಸಿದಂತೆ 2024ರ ಮೇ 18ರಂದು ಮುಡಾ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ವಿಜಯನಗರ 4ನೇ ಹಂತ, 2ನೇ ಘಟ್ಟ ಬಡಾವಣೆಯಲ್ಲಿರುವ 40x60 ವಿಸ್ತೀರ್ಣದ ನಿವೇಶನ (ಸಂಖ್ಯೆ 11809/ಎ)ವನ್ನು ಎನ್. ಮಂಜುನಾಥರಿಗೆ ಮಂಜೂರು ಮಾಡಿದ್ದಾರೆ. ವಿಶೇಷವೆಂದರೆ, ಅದೇ ದಿನ (2024ರ ಮೇ 18ರಂದು) ಸದರಿ ನಿವೇಶನಕ್ಕೆ ಕ್ರಯಪತ್ರ (ಟೈಟಲ್ ಡೀಡ್) ಅನ್ನು ಕೇವಲ 3,000 ರೂ.ಗಳನ್ನು ಸಾಂಕೇತಿಕ ಮೊತ್ತವಾಗಿ ಸಂದಾಯ ಮಾಡಿಸಿಕೊಂಡು ಮಂಜುನಾಥರಿಗೆ ಮುಡಾ ಕಚೇರಿಯಲ್ಲಿರುವ ಹೆಚ್ಚುವರಿ ಜಿಲ್ಲಾ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಪ್ರಾಧಿಕಾರದ ವಿಶೇಷ ತಹಸೀಲ್ದಾರ್, ಮಂಜುನಾಥ ಹೆಸರಿಗೆ ನೋಂದಾಯಿಸಿಕೊಡುವ ಮೂಲಕ ನಿವೇಶನದ ಸಂಪೂರ್ಣ ಮಾಲೀಕತ್ವವನ್ನು ವಹಿಸಿಕೊಟ್ಟಿದ್ದಾರೆ.

ಹತ್ತೇ ದಿನದಲ್ಲಿ ಸೆಟಲ್‌ಮೆಂಟ್ ಡೀಡ್: ಟೈಟಲ್ ಡೀಡ್ ಸಿಗುತ್ತಿದ್ದಂತೆಯೇ ಕೇವಲ ಹತ್ತೇ ದಿನದಲ್ಲಿ 2024ರ ಮೇ 28ರಂದು ಎನ್. ಮಂಜುನಾಥ ಮೈಸೂರು ತಾಲೂಕು, ಕಡಕೊಳ ಅಂಚೆ, ಬೀರೇಗೌಡನಹುಂಡಿ ಗ್ರಾಮದ ಲೇಟ್ ಸಾವಂದಯ್ಯರ ಮಗನಾದ 56 ವರ್ಷದ ಎಸ್.ಶಿವಣ್ಣ ಎಂಬುವರಿಗೆ 'ಸೆಟಲ್‌ಮೆಂಟ್ ಡೀಡ್' ಅನ್ನು ಮೈಸೂರಿನ ದಕ್ಷಿಣ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿ ಶುಲ್ಕ, ಸೇವಾ ಶುಲ್ಕ, ಮುದ್ರಾಂಕ ಶುಲ್ಕ ಸೇರಿ ಒಟ್ಟು 90,205 ರೂ. ಪಾವತಿಸುವ ಮೂಲಕ ವಿಜಯನಗರ 4ನೇ ಹಂತದ 11809/ಎ ಸಂಖ್ಯೆಯ ನಿವೇಶನವನ್ನು ನೋಂದಾಯಿಸುವ ಮೂಲಕ ಮಾರಾಟ ಮಾಡಿದ್ದಾರೆ.

'ಸೆಟಲ್‌ಮೆಂಟ್ ಡೀಡ್'ನಿಂದಾಗಿ ಸರ್ಕಾರದ ಆದಾಯಕ್ಕೆ ಕತ್ತರಿ!

ಮೈಸೂರು, ಆ. 28(ಆರ್‌ಕೆ)– ಮುಡಾ ಹಂಚಿಕೆ ಮಾಡಿದ ನಿವೇಶನಗಳನ್ನು 'ಸೆಟಲ್‌ಮೆಂಟ್ ಡೀಡ್' ಮೂಲಕ ಬೇರೆಯವರಿಗೆ ಮಾರಾಟ ಮಾಡಿ ಸರ್ಕಾರಕ್ಕೆ ಸ್ಟ್ಯಾಂಪ್ ಡ್ಯೂಟಿ ವಂಚಿಸುತ್ತಿರುವ ಪ್ರಕರಣಗಳು ಬೆಳಕಿಗೆ ಬರುತ್ತಿವೆ. ಪ್ರಕರಣವೊಂದರಲ್ಲಿ ಎನ್. ಮಂಜುನಾಥ ಅವರು ಎಸ್. ಶಿವಣ್ಣ ಎಂಬುವರಿಗೆ 2024ರ ಮೇ 28ರಂದು ಮೈಸೂರು ದಕ್ಷಿಣ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಮುಡಾ ನಿವೇಶನ (ಸಂಖ್ಯೆ 11809/ಎ)ವನ್ನು ನೋಂದಾಯಿಸುವ ಮೂಲಕ ಅದರ ಸಂಪೂರ್ಣ ಹಕ್ಕು ಹಸ್ತಾಂತರಿಸಿದ್ದಾರೆ.

ಯಾವುದೇ ಆಸ್ತಿಯನ್ನು ಮಾರಾಟ ಮಾಡಬೇಕಾದರೆ ಕ್ರಯಪತ್ರ (ಸೇಲ್ ಡೀಡ್) ನೋಂದಣಿಯಾಗಬೇಕು. ಅದರಲ್ಲಿ ಖರೀದಿದಾರನು ಮಾರಾಟಗಾರನಿಗೆ ಪಾವತಿಸಿರುವ ಸ್ವತ್ತಿನ ಮೌಲ್ಯವನ್ನು ನಮೂದಿಸಿ ಅದರನ್ವಯ ತಗಲುವ ನೋಂದಣಿ ಶುಲ್ಕ, ಸೇವಾ ಶುಲ್ಕ, ಮೆಮೋ ಶುಲ್ಕ, ಪ್ರಮಾಣ ಪತ್ರದ ಮುದ್ರಾಂಕ ಶುಲ್ಕವನ್ನು ಸರ್ಕಾರಕ್ಕೆ ಪಾವತಿಸಬೇಕು.

ಆದರೆ ಸೆಟಲ್‌ಮೆಂಟ್ ಡೀಡ್‌ನಲ್ಲಿ ಒಂದೇ ಕುಟುಂಬದೊಂದಿಗೆ ಮಕ್ಕಳು, ಸಹೋದರ–ಸಹೋದರಿಯರು, ಸಂಬಂಧಿಕರ ನಡುವೆ ಆಸ್ತಿ ಪಾಲು ಮಾಡಿಕೊಳ್ಳುವ ಅಥವಾ ತಮ್ಮ ಭಾಗದ ಷೇರು, ಹಣ, ಸ್ವತ್ತನ್ನು ಬಿಟ್ಟುಕೊಡುವ ಸಂಬಂಧ ಅಥವಾ ಪಾಲುದಾರಿಕಾ ಸಂಸ್ಥೆಗಳಲ್ಲಿ ಪಾಲುದಾರರ ನಡುವೆ ವ್ಯಾಪಾರ–ವಹಿವಾಟು ಸಂಬಂಧ ಪರಸ್ಪರ ಒಪ್ಪಂದದ ಮೇರೆಗೆ ಮಾಡಿಕೊಳ್ಳುವ ಖಾತರಿ ಪತ್ರವೇ 'ಸೆಟಲ್‌ಮೆಂಟ್ ಡೀಡ್' ಹೊರತು, ಒಬ್ಬ ವ್ಯಕ್ತಿ ತನ್ನ ಮಾಲೀಕತ್ವದ ಸ್ವತ್ತನ್ನು ಬೇರೆಯವರಿಗೆ ಮಾರಾಟ ಮಾಡುವುದನ್ನು 'ಸೇಲ್ ಡೀಡ್' ಎನ್ನಲಾಗುತ್ತದೆಯೇ ಹೊರತು, ಸೆಟಲ್‌ಮೆಂಟ್ ಡೀಡ್ ಮೂಲಕವಲ್ಲ ಎಂಬುದಾಗಿ ತಜ್ಞರು ಅಭಿಪ್ರಾಯಿಸಿದ್ದಾರೆ. ಸರ್ಕಾರಕ್ಕೆ ಸ್ಟ್ಯಾಂಪ್ ಡ್ಯೂಟಿ ಕಟ್ಟುವುದನ್ನು ತಪ್ಪಿಸಲು ಹಲವರು ಸೆಟಲ್‌ಮೆಂಟ್ ಡೀಡ್ ಮೂಲಕ ನಿವೇಶನಗಳನ್ನು ಪರಭಾರೆ ಮಾಡುತ್ತಿದ್ದು, ಆ ರೀತಿ ಸೆಟಲ್‌ಮೆಂಟ್ ಡೀಡ್ ನೋಂದಣಿ ಮಾಡಿಸಿಕೊಂಡ ವ್ಯಕ್ತಿಯ ಹೆಸರಿಗೆ ಮುಡಾ ಅಧಿಕಾರಿಗಳು ಖಾತಾ, ಕಂದಾಯ ಮಾಡಿಕೊಡುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿವೆ. ಅದರಿಂದ ಸರ್ಕಾರದ ಬೊಕ್ಕಸಕ್ಕೆ ಭಾರೀ ಪ್ರಮಾಣದ ಆರ್ಥಿಕ ನಷ್ಟ ಉಂಟಾಗುತ್ತಿದೆ.

ಗೌಡ ಸಾರಸ್ವತ ಬ್ರಾಹ್ಮಣ ಸಭಾದ ನೂತನ ಪದಾಧಿಕಾರಿಗಳು



ಡಾ.ಜಗನ್ನಾಥ್ ಶೆಣೈ, ಸುರೇಶ್ ನಾಯಕ್, ಮಮತಾ ಕಿಣಿ, ಅಚ್ಯುತಾ ರಾಮಪ್ರಸಾದ್, ಗೋಕುಲ್‌ದಾಸ್ ಭಟ್, ಭಾಸ್ಕರ್ ಭಟ್



ಸತೀಶ್ ಪ್ರಭು, ಗುರುಪ್ರಸಾದ್, ದಾಮೋದರ ಪೈ, ಮಮತಾ, ವೆಂಕಟೇಶ್, ಸುರೇಖಾ

ಮೈಸೂರು,ಆ.28–ಮೈಸೂರಿನ ಗೌಡ ಸಾರಸ್ವತ ಬ್ರಾಹ್ಮಣ ಸಭಾದ 2024–26ನೇ ಸಾಲಿನ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಗೌರವ ಅಧ್ಯಕ್ಷರಾಗಿ ಡಾ.ಜಗನ್ನಾಥ್ ಶೆಣೈ, ಅಧ್ಯಕ್ಷರಾಗಿ ಸುರೇಶ್ ನಾಯಕ್, ಉಪಾಧ್ಯಕ್ಷರಾಗಿ ಮಮತಾ ಕಿಣಿ, ಕಾರ್ಯದರ್ಶಿಯಾಗಿ ಅಚ್ಯುತಾ ರಾಮಪ್ರಸಾದ್ ಕಾಮತ್, ಜಂಟಿ ಕಾರ್ಯದರ್ಶಿಯಾಗಿ ಗೋಕುಲ್‌ದಾಸ್ ಭಟ್ ಮತ್ತು ಖಜಾಂಚಿಯಾಗಿ ಭಾಸ್ಕರ್ ಭಟ್ ಆಯ್ಕೆಯಾದರು.

ಕಾರ್ಯಕಾರಿ ಸಮಿತಿ ಸದಸ್ಯರಾಗಿ ಸತೀಶ್ ಪ್ರಭು, ಗುರುಪ್ರಸಾದ್ ಹೆಗ್ಡೆ, ದಾಮೋದರ ಪೈ, ಮಮತಾ ರಾವ್, ವೆಂಕಟೇಶ್ ರಾವ್ ಮತ್ತು ಸುರೇಖಾ ಕಾಮತ್ ಆಯ್ಕೆಯಾದರು.

ಡಾ.ಮಲ್ಲಿಕಾ ತಾರಕನ್‌ಗೆ ಇಂಪ್ಯಾಕ್ಟ್ ಫೆಲೋಶಿಪ್



ಮೈಸೂರು, ಆ. 28– ಸೆಪ್ಟೆಂಬರ್ 22ರಿಂದ 28ರವರೆಗೆ ನ್ಯೂಯಾರ್ಕ್‌ನ ವಿಶ್ವಸಂಸ್ಥೆಯ ಜನರಲ್ ಅಸೆಂಬ್ಲಿಯಲ್ಲಿ ನಡೆಯಲಿರುವ ವಿಶ್ವ ಸಮ್ಮೇಳನದಲ್ಲಿ ಪಾಲ್ಗೊಳ್ಳಲು ಡಾ.ಮಲ್ಲಿಕಾ ತಾರಕನ್ (ನೀ ಐದಪ್ಪ) ಅವರಿಗೆ ಮೋಟ್ಸಾನಿ–ಜಡೇಜಾ ಫೌಂಡೇಶನ್ ಮುಂದ್ವಣಿಂದ ಇಂಪ್ಯಾಕ್ಟ್ ಫೆಲೋಶಿಪ್ ದೊರೆತಿದೆ. ಡಾ. ಮಲ್ಲಿಕಾ ಅವರ ಅಸಾಧಾರಣ ನಾಯಕತ್ವ ಮತ್ತು ಪರಿವರ್ತನೀಯ ಸಾಮಾಜಿಕ ಪ್ರಭಾವವನ್ನು ಬೆಳೆಸುವಲ್ಲಿ ಅಚಲವಾದ ಬದ್ಧತೆಯನ್ನು ಗುರುತಿಸಿ ಈ ಫೆಲೋಶಿಪ್ ನೀಡಲಾಗಿದೆ. ಈಕೆ ಐಟಿಸಿ ಲಿಮಿಟೆಡ್ ನಿವೃತ್ತ ಉಪಾಧ್ಯಕ್ಷ ಕಾಮೆಯಂಡ ಸುನೀಲ್ ಐದಪ್ಪ ದಂಪತಿ ಪುತ್ರಿ.

ಬೀದಿ ನಾಟಕ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ...



ಅಂತರರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಮೈಸೂರಿನ ಮಾನಸ ಗಂಗೋತ್ರಿ, ವಿಜ್ಞಾನ ಭವನದಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಸಹಯೋಗದೊಂದಿಗೆ ಗ್ರಾಮ್ ಸಂಸ್ಥೆ ಆಯೋಜಿಸಿದ್ದ ಬೀದಿ ನಾಟಕ ಸ್ಪರ್ಧೆಯಲ್ಲಿ ಮೈಸೂರಿನ ಜಿಎಸ್‌ಎಸ್‌ಎಸ್ ಸಿಂಹ ಸುಬ್ಬಮಹಾಲಕ್ಷ್ಮಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದುಕೊಂಡರು. ಕಾಲೇಜಿನ ಪ್ರಾಂಶುಪಾಲ ಡಾ.ರಾಕೇಶ್, ನಾಟಕ ನಿರ್ದೇಶಕ ಅಂಕರಾಜು ಉಪಸ್ಥಿತರಿದ್ದರು.

ಸಂತ ಫಿಲೋಮಿನಾ ಕಾಲೇಜಿನ 10ನೇ ಘಟಿಕೋತ್ಸವ

ಮೈಸೂರು, ಆ.28(ಎಸ್‌ಪಿಎನ್)– ಮೈಸೂರು ಸಂತ ಫಿಲೋಮಿನಾ ಕಾಲೇಜಿನ ಹತ್ತನೇ ಘಟಿಕೋತ್ಸವವನ್ನು ಆ.29ರಂದು ಬೆಳಗ್ಗೆ 10 ಗಂಟೆಗೆ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಘಟಿಕೋತ್ಸವದಲ್ಲಿ ಚೆನ್ನೈನ ಕಾಲೇಜು ಕನೆಕ್ಟ್, ಲಾರ್ಸನ್ & ಟೊಬ್ರೋ ಎಜುಕೇಶನ್ ಟೆಕ್ನಾಲಜಿ ಮುಖ್ಯಸ್ಥರಾದ ಎಂ.ಎಫ್.ಫೆಬಿನ್, ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮೈಸೂರು ಧರ್ಮಪ್ರಾಂತ್ಯದ ಆಡಳಿತಾಧಿಕಾರಿ ಡಾ.ಬರ್ನಾರ್ಡ್ ಮೊರಾಸ್ ಅಧ್ಯಕ್ಷತೆ ವಹಿಸಲಿದ್ದಾರೆ. ಘಟಿಕೋತ್ಸವದಲ್ಲಿ 611 ಅಭ್ಯರ್ಥಿಗಳು (409 ಪದವಿ ಮತ್ತು 202 ಸ್ನಾತಕೋತ್ತರ ಪದವಿ ಅಭ್ಯರ್ಥಿಗಳು) ಪದವಿ ಪ್ರಮಾಣ ಪತ್ರ ಸ್ವೀಕರಿಸಲಿದ್ದಾರೆ. ಇವರಲ್ಲಿ 78 ಪದವೀಧರರು ಚಿನ್ನದ ಪದಕಗಳನ್ನು ಪಡೆಯಲಿದ್ದಾರೆ.

ಚದುರಂಗ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಚದುರಂಗ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಮೈಸೂರು, ಆ. 28 – ಮೈಸೂರಿನ ಕುವೆಂಪುನಗರದಲ್ಲಿರುವ ಅಥರ್ವ ಲೈಫ್ ಸ್ಕಿಲ್ಸ್ ಫೌಂಡೇಶನ್ ವತಿಯಿಂದ ಮಕ್ಕಳಿಗೆ ಚದುರಂಗ ಸ್ಪರ್ಧೆಯನ್ನು ಏರ್ಪಡಿಸಿದ್ದು, 60ಕ್ಕೂ ಹೆಚ್ಚು ಮಕ್ಕಳು ಚದುರಂಗ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ವೈಷ್ಣವಿ ಎಲ್ (ಪ್ರಥಮ), ವೈಭವ ಎಚ್ ಆರ್ (ದ್ವಿತೀಯ), ಚಿರಾಗ್ ಹೆಗ್ಡೆ ಎಂ (ತೃತೀಯ) ಬಹುಮಾನ ಪಡೆದುಕೊಂಡರು.

ಅರ್ಪನ್ ಅರುಣ್, ಕಿಶಾನ್ ಭಾರದ್ವಾಜ್ ಸಿ, ಚಿರಂತ್ ಬಿ, ಹಿಮಗ್ನ ಆರ್, ದರ್ಶಿಲ್, ಹೃತ್ವಿಕ್ ಆರ್, ನವನೀತ್ ಎಂ.ಕೆ., ಆರ್ಯನ್ ಜಿ.ಕೆ., ನಕುಲ್, ಶ್ರೀಯನ್‌ಗೌಡ ಎನ್.ಎಸ್., ನೆಚ್ಚಿನ್ ಆರ್, ಕನಿಷ್ಕ, ಪ್ರಭವ್ ಭಟ್, ನೈನಿಕ ಮಕ್ಕಳಿಗೆ ವಿಶೇಷ ಬಹುಮಾನ ನೀಡಲಾಯಿತು.

ಅಥರ್ವ ಲೈಫ್ ಸ್ಕಿಲ್ಸ್ ಫೌಂಡೇಷನ್ ಅಧ್ಯಕ್ಷೆ ಪುಷ್ಪಲತಾ, ಚದುರಂಗ ತರಬೇತುದಾರ ಸನ್ನತ್, ಕರುಣೆ ಸೇವಾ ಟ್ರಸ್ಟ್‌ನ ಅಧ್ಯಕ್ಷೆ ರುಕ್ಮಿಣಿ, ನಿರ್ದೇಶಕರಾದ ಲಾವಣ್ಯ, ಚಾರುಲತಾ, ಅನುಷ, ಪ್ರಿಯಾಂಕಾ, ಆಕಾಶ್ ಹಾಗೂ ಇನ್ನಿತರರು ಹಾಜರಿದ್ದರು.

ಗಜಪಡೆ ತಾಲೀಮಿನಲ್ಲಿ 'ಏಕಲವ್ಯ' ಮುಂಚೂಣಿ



ದಸರಾ ಗಜಪಡೆ ಬುಧವಾರದ ತಾಲೀಮಿನಲ್ಲಿ ಬನ್ನಿಮಂಟಪದಿಂದ ಅರಮನೆಗೆ ಬರುವಾಗ ಹೊಸ ಆನೆ ಏಕಲವ್ಯ ಮುಂಚೂಣಿಯಲ್ಲಿ ಸಾಗುತ್ತಿರುವುದು.

ಮೈಸೂರು,ಆ.28(ಎಂಟಿವೈ)– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲು ಮೊದಲ ತಂಡದಲ್ಲಿ ಆಗಮಿಸಿರುವ ಅಂಬಾರಿ ಆನೆ ಅಭಿಮನ್ಯು ನೇತೃತ್ವದ ಗಜಪಡೆಗೆ ತಾಲೀಮು ಮುಂದುವರೆಸಲಾಗಿದ್ದು, ತಾಲೀಮಿನಲ್ಲಿ ಹೊಸ ಆನೆ 'ಏಕಲವ್ಯ' ನಿರೀಕ್ಷೆಗೂ ಮೀರಿದಂತೆ ವರ್ತಿಸುತ್ತಿದ್ದು ಅರಣ್ಯಾಧಿಕಾರಿಗಳ ಮೆಚ್ಚುಗೆಗೆ ಪಾತ್ರವಾಗಿದೆ.

ದಸರಾ ಮಹೋತ್ಸವದಲ್ಲಿ ಇದೇ ಮೊದಲ ಬಾರಿಗೆ ಪಾಲ್ಗೊಳ್ಳುತ್ತಿರುವ 38 ವರ್ಷದ ಏಕಲವ್ಯ ಸೆರೆ ಹಿಡಿದು 19 ತಿಂಗಳಲ್ಲೇ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಅವಕಾಶ ತನ್ನದಾಗಿಸಿಕೊಂಡಿದ್ದು, ಕಳೆದ ನಾಲ್ಕು ದಿನಗಳಿಂದ ಜಂಬೂಸವಾರಿ ಮಾರ್ಗದಲ್ಲಿ ತಾಲೀಮಿನಲ್ಲಿ ಪಾಲ್ಗೊಳ್ಳುತ್ತಿರುವ ಏಕಲವ್ಯ ಬುಧವಾರ ಬನ್ನಿಮಂಟಪದಿಂದ ಅರಮನೆಗೆ ವಾಪಸ್ಸಾಗುವಾಗ ತಾಲೀಮಿನ ಮುಂಚೂಣಿಯಲ್ಲಿ ಸಾಗುವ ಮೂಲಕ ಗಮನ ಸೆಳೆಯಿತು.

ಜಂಬೂಸವಾರಿ ಮಾರ್ಗದಲ್ಲಿ ಮಂಗಳವಾರ ಗಜಪಡೆಗೆ ನಡೆಸಿದ ತಾಲೀಮು ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಇಂದು ಬೆಳಿಗ್ಗೆ 7.10ಕ್ಕೆ ಕ್ಯಾಪ್ಟನ್ ಅಭಿಮನ್ಯು ನೇತೃತ್ವದಲ್ಲಿ ಗಜಪಡೆ ತಾಲೀಮು ಆರಂಭಿಸಿತು. ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆ, ಸರ್ಕಾರಿ ಆಯುರ್ವೇದ ಕಾಲೇಜು, ಆರ್‌ಎಂಸಿ ವೃತ್ತ ಜಂಬೂ ಬಜಾರ್, ಹೈವೆ ವೃತ್ತ, ನೆಲ್ಸನ್ ಮಂಡೇಲ ರಸ್ತೆಯ ಮೂಲಕ ಬನ್ನಿಮಂಟಪದ ಪಂಜಿನ ಕವಾಯತ್ ಮೈದಾನದ ಅಂಬಾರಿ ಬಿಚ್ಚುವ ಸ್ಥಳ ತಲುಪಿತು. ಅರಮನೆಯಿಂದ ಪಂಜಿನ ಕವಾಯತ್ ಮೈದಾನಕ್ಕೆ 1.08 ಗಂಟೆ ಅವಧಿಯಲ್ಲಿಯೇ ತಲುಪಿ ಗಮನ ಸೆಳೆಯಿತು.

ಏಕಲವ್ಯನಿಗೆ ಪರೀಕ್ಷೆ: ಕೆಲಕಾಲ ವಿಶ್ರಾಂತಿ ನೀಡಿದ ಬಳಿಕ ಬನ್ನಿಮಂಟಪದ ಪಂಜಿನ ಕವಾಯತ್ ಮೈದಾನದಿಂದ ಅರಮನೆಗೆ ವಾಪಸ್ಸಾಗುವ ವೇಳೆ ಹೊಸ ಆನೆ ಏಕಲವ್ಯನಿಗೆ ಗಜಪಡೆಯ ತಾಲೀಮಿನ ನಾಯಕತ್ವ ನೀಡಲಾಯಿತು. ಕಳೆದ ನಾಲ್ಕು ದಿನಗಳಿಂದ ಹಿರಿಯ ಆನೆಗಳನ್ನು ಹಿಂಬಾಲಿಸುತ್ತಿದ್ದ ಏಕಲವ್ಯ ಇಂದು ಅರಣ್ಯಾಧಿಕಾರಿಗಳು ಮಾಡಿದ ಪ್ರಯೋಗಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿತು. ತಾನೇ ಮುಂದೆ ಸಾಗುವ ಮೂಲಕ ಭವಿಷ್ಯದಲ್ಲಿ ಅಂಬಾರಿ ಆನೆಯಾಗುವ ಭರವಸೆ ಮೂಡಿಸಿತು. ಬನ್ನಿಮಂಟಪದಿಂದ ಅರಮನೆಗೆ 1.05 ಗಂಟೆ ಅವಧಿಯಲ್ಲೇ ತಲುಪಿತು. ಗಜಪಡೆಯ ಮುಂದಾಳತ್ವ ವಹಿಸಿದ್ದರೂ ಏಕಲವ್ಯ ವಿಚಲಿತನಾಗದೇ ಹೆಜ್ಜೆ ಹಾಕಿದ್ದು ವಿಶೇಷ.

ಭಕ್ತಿ ಸಂಕೇತ: ಪ್ರತಿದಿನವೂ ಸಯ್ಯಾಜಿರಾವ್ ರಸ್ತೆಯಲ್ಲಿ ಬೆಳಗ್ಗೆ ದಸರಾ ಗಜಪಡೆ ಆಗಮಿಸುತ್ತಿದ್ದಂತೆ ವ್ಯಾಪಾರಿಗಳು ಗಜಪಡೆಗೆ ನಮಿಸುವ ಮೂಲಕ ಭಕ್ತಿ ಪ್ರದರ್ಶಿಸುತ್ತಿದ್ದು, ಇಂದು ಹೂವಿನ ವ್ಯಾಪಾರಿಗಳು ಎಲ್ಲಾ ಆನೆಗಳಿಗೂ ಹೂವು ಸಮರ್ಪಿಸಿದರು. ಅಲ್ಲದೆ, ಅಂಬಾರಿ ಆನೆ ಅಭಿಮನ್ಯುಗೆ ತುಳಸಿ ಹಾರವನ್ನು ಹಾಕಿ ಭಕ್ತಿ ಪ್ರದರ್ಶಿಸಿದರು. ದಾರಿಯುದ್ದಕ್ಕೂ ಗಜಪಡೆಗೆ ವ್ಯಾಪಾರಿಗಳು ಕೈ ಮುಗಿಯುತ್ತಿದ್ದ ದೃಶ್ಯ ಕಂಡು ಬಂದಿತು.

ಬೆಳಗ್ಗೆ ಕಂಜನ್‌ಗೆ ವಿರಾಮ

ಗಜಪಡೆಯ ಮೊದಲ ತಂಡದ 9 ಆನೆಗಳಲ್ಲಿ ಕಂಜನ್ ಹೊರತುಪಡಿಸಿ 8 ಆನೆಗಳು ತಾಲೀಮಿನಲ್ಲಿ ಪಾಲ್ಗೊಂಡಿದ್ದವು. 2ನೇ ಬಾರಿಗೆ ಬನ್ನಿಮಂಟಪದ ಪಂಜಿನ ಕವಾಯತ್ ಮೈದಾನದವರೆಗೂ ತಾಲೀಮು ನಡೆಸಿದವು. ಕಾಲು ನೋವಿನ ಬಾಧೆಗೆ ಒಳಗಾಗಿದ್ದ ಕಂಜನ್ ಆನೆ ಚೇತರಿಸಿಕೊಳ್ಳುತ್ತಿದ್ದರೂ, ಬುಧವಾರ ಬೆಳಗ್ಗೆ ತಾಲೀಮಿಗೆ ಕರೆತಂದಿರಲಿಲ್ಲ. ಅರಮನೆಯಲ್ಲಿಯೇ ಆರೈಕೆ ಮಾಡಲಾಗುತ್ತಿತ್ತು. ಇದರಿಂದ ಇಂದು 8 ಆನೆಗಳನ್ನು ಮಾತ್ರ ತಾಲೀಮು ನಡೆಸಿದವು.

ಈ ಸಂದರ್ಭದಲ್ಲಿ ಡಿಸಿಎಫ್ ಡಾ.ಐ.ಬಿ. ಪ್ರಭುಗೌಡ, ಅರಣ್ಯ ಸಂಚಾರಿ ದಳದ ಡಿಸಿಎಫ್ ಚಂದ್ರಶೇಖರ್ ಪಾಟೀಲ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್, ಸಹಾಯಕರಾದ ರಂಗರಾಜು, ಅಕ್ರಮ್ ಇನ್ನಿತರರಿದ್ದರು.

ಸಂಜೆ ತಾಲೀಮಿನಲ್ಲಿ ಕಂಜನ್ ಭಾಗಿ: ಸಂಜೆ ನಡೆಸಿದ ತಾಲೀಮಿನಲ್ಲಿ ಗಜಪಡೆಯ ಮೊದಲ ತಂಡದ 9 ಆನೆಗಳೂ ಪಾಲ್ಗೊಂಡಿದ್ದವು. ಕಾಲು ನೋವಿನಿಂದ ಕಳೆದ ನಾಲ್ಕು ದಿನಗಳಿಂದ ಅರಮನೆ ಆವರಣದಲ್ಲೇ ಬೀಡು ಬಿಟ್ಟು ವಿಶ್ರಾಂತಿ ಪಡೆದಿದ್ದ ಕಂಜನ್ ಆನೆಯ ಆರೋಗ್ಯ ಸುಧಾರಿಸಿದ ಹಿನ್ನೆಲೆಯಲ್ಲಿ ಬುಧವಾರ ಸಂಜೆ ಅರಮನೆಯಿಂದ ಕೆ.ಆರ್. ಆಸ್ಪತ್ರೆ ವೃತ್ತದವರೆಗೂ ನಡೆಸಿದ ತಾಲೀಮಿನಲ್ಲಿ ಕರೆತರಲಾಯಿತು. ಜಂಬೂಸವಾರಿ ದಿನ ಮೆರವಣಿಗೆ ಸಂಜೆ ವೇಳೆ ನಡೆಯುವ ಹಿನ್ನೆಲೆಯಲ್ಲಿ ಆನೆಗಳು ಸಂಜೆ ವಾತಾವರಣಕ್ಕೆ ಹೊಂದಿಕೊಳ್ಳುವಂತೆ ತರಬೇತಿ ನೀಡಿ ಸಜ್ಜುಗೊಳಿಸಬೇಕಾಗಿರುವ ಹಿನ್ನೆಲೆಯಲ್ಲಿ ಪ್ರತಿದಿನ ಸಂಜೆ ತಾಲೀಮು ನಡೆಸಲಾಗುತ್ತದೆ. ಇಂದು ಸಂಜೆ ನಡೆಸಿದ ತಾಲೀಮಿನಲ್ಲಿ ಅಭಿಮನ್ಯು ನೇತೃತ್ವದಲ್ಲಿ ಎಲ್ಲಾ ಆನೆಗಳು ಗಜಗಾಂಭೀರ್ಯದಿಂದ ಹೆಜ್ಜೆ ಹಾಕಿ ಗಮನ ಸೆಳೆದವು.

ಸೆ.5 ಅಥವಾ 6ರಂದು ಎರಡನೇ ತಂಡದಲ್ಲಿ 5 ಆನೆಗಳ ಆಗಮನ

● ಪ್ರಶಾಂತ, ಮಹೇಂದ್ರ, ಸುಗ್ರೀವ, ಲಕ್ಷ್ಮೀ, ಹಿರಣ್ಯ ಆನೆಗಳು ಗಜಪಡೆಗೆ ಸೇರ್ಪಡೆ ● ಸೆ.8ರಿಂದ ತಾಲೀಮಿನಲ್ಲಿ ಪಾಲ್ಗೊಳ್ಳಲಿರುವ 14 ಆನೆಗಳು

ಮೈಸೂರು, ಆ.28(ಎಂಟಿವೈ)– ದಸರಾ ಮಹೋತ್ಸವ ಜಂಬೂಸವಾರಿಯಲ್ಲಿ ಪಾಲ್ಗೊಳ್ಳಲಿರುವ ಎರಡನೇ ತಂಡದ 5 ಆನೆಗಳನ್ನು ಸೆ.5 ಅಥವಾ 6ರಂದು ಮೈಸೂರು ಅರಮನೆ ಆವರಣಕ್ಕೆ ಕರೆತರಲು ನಿರ್ಧರಿಸಲಾಗಿದೆ.

ಪ್ರಸಕ್ತ ಸಾಲಿನ ದಸರಾ ಮಹೋತ್ಸವದ ನವರಾತ್ರಿ ಅ.3ರಂದು ಆರಂಭವಾಗಿ ಅ.12ರಂದು ಜಂಬೂಸವಾರಿ ನೆರವೇರಲಿದೆ. ಈ ಬಾರಿ ದಸರಾ ಮಹೋತ್ಸವಕ್ಕೆ 14 ಆನೆಗಳನ್ನು ಆಯ್ಕೆ ಮಾಡಲಾಗಿತ್ತು. ಅವುಗಳಲ್ಲಿ ಮೊದಲ ತಂಡದಲ್ಲಿ 9 ಆನೆಗಳು ಆ.21ರಂದು ಗಜಪಯಣದ ಮೂಲಕ ಮೈಸೂರಿಗೆ ಆಗಮಿಸಿದ್ದವು.

ಇದೀಗ ಎರಡನೇ ತಂಡದಲ್ಲಿ ಗುರುತಿಸಿದ್ದ ಪ್ರಶಾಂತ, ಮಹೇಂದ್ರ, ಸುಗ್ರೀವ, ದೊಡ್ಡಹರವೆ ಲಕ್ಷ್ಮೀ ಮತ್ತು ಹಿರಣ್ಯ ಆನೆಗಳನ್ನು ಸೆ.5 ಅಥವಾ 6ರಂದು ಕರೆತರಲು ನಿರ್ಧರಿಸಲಾಗಿದೆ. ಎರಡನೇ ತಂಡದಲ್ಲಿ ಆಗಮಿಸುವ ಮಹೇಂದ್ರ ಆನೆ ಕಳೆದ 2 ವರ್ಷದಿಂದ ಶ್ರೀರಂಗ ಪಟ್ಟಣ ದಸರಾ ಮಹೋತ್ಸವದಲ್ಲಿ ಯಶಸ್ವಿಯಾಗಿ ಪಾಲ್ಗೊಂಡು ಭರವಸೆ ಮೂಡಿಸಿತ್ತು.

ಕ್ಯಾಪ್ಟನ್ ಅಭಿಮನ್ಯುವಿನ ಉತ್ತರಾಧಿಕಾರಿ ಸಾಲಿನಲ್ಲಿರುವ ಮಹೇಂದ್ರ ಆನೆಯೂ ಉತ್ತಮ ಆನೆಯಾಗಿದ್ದು, ಜಂಬೂ ಸವಾರಿಯಲ್ಲಿ ನೀಡುವ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬಲ್ಲ ಗುಣ ಹೊಂದಿದ್ದಾನೆ. ಈ ಹಿನ್ನೆಲೆಯಲ್ಲಿ ಅದಕ್ಕೆ ಹೆಚ್ಚಿನ ತರಬೇತಿ ನೀಡುವ ಅವಶ್ಯಕತೆಯಿದ್ದು, ಮೊದಲ ತಂಡದಲ್ಲೇ ಕರೆತರಬೇಕಾಗಿತ್ತು. ಕೆಲ ಕಾರಣದಿಂದ ಮೊದಲ ತಂಡದಿಂದ ಕೈಬಿಟ್ಟು ಎರಡನೇ ತಂಡದಲ್ಲಿ ಕರೆತರಲು ಉದ್ದೇಶಿಸಲಾಗಿತ್ತು.

ಇದೀಗ ಸೆ.5ರಂದೇ ಮೈಸೂರಿಗೆ ಎರಡನೇ ತಂಡದ ಆನೆಗಳು ಬಂದರೆ ಜಂಬೂಸವಾರಿಗೆ ಸಜ್ಜುಗೊಳಿಸಲು ಸಹಕಾರಿಯಾಗಲಿದೆ.

ಸೆ.7ರಂದು ಗಣೇಶ ಹಬ್ಬದ ಪೂಜೆ ಮುಗಿಸಿದ ನಂತರ ಸೆ.8ರಿಂದ ಎಲ್ಲಾ 14 ಆನೆಗಳು ಪೂರ್ಣ ಪ್ರಮಾಣದಲ್ಲಿ ತಾಲೀಮಿನಲ್ಲಿ ಭಾಗಿಯಾಗಲಿವೆ.

ಕೋಲ್ಕತ್ತಾ ವೈದ್ಯೆ ಹತ್ಯೆ ಖಂಡಿಸಿ ಪ್ರತಿಭಟನೆ....



ಮೈಸೂರಿನ ಮಿಡ್‌ಟೌನ್‌ನ ಇನ್ನರ್‌ವ್ಹೀಲ್ ಕ್ಲಬ್ ಹಾಗೂ ಭಾರತೀಯ ವೈದ್ಯಕೀಯ ಸಂಘದ ವತಿಯಿಂದ ಕೋಲ್ಕತ್ತಾ ಆಸ್ಪತ್ರೆಯಲ್ಲಿ ವೈದ್ಯೆ ಮೇಲೆ ಅತ್ಯಾಚಾರ, ಹತ್ಯೆ ಖಂಡಿಸಿ ಪ್ರತಿಭಟನೆ ನಡೆಸಲಾಯಿತು. ಈ ವೇಳೆ ಮಾಜಿ ಅಧ್ಯಕ್ಷರಾದ ಉಮಾ ವಿವೇಕ್, ನಂದಿನಿ ಮೂರ್ತಿ, ಅನುರಾಧಾ ನಂದಕುಮಾರ್, ಪ್ರಭಾ ಪ್ರಹ್ಲಾದ್, ಕಾರ್ಯದರ್ಶಿ ಸಂಧ್ಯಾ ಸುರೇಶ್ ಇನ್ನಿತರರಿದ್ದರು.

'ಗುರುವೇ ನಿಮಗೆ ಶರಣು', 'ಹಚ್ಚೇವು ಕನ್ನಡದ ದೀಪ' ಕೃತಿಗಳ ಲೋಕಾರ್ಪಣೆ

ಮೈಸೂರು, ಆ.28(ಜಿಎ)–ತಾವು ರಚಿಸಿರುವ 'ಗುರುವೇ ನಿಮಗೆ ಶರಣು' ಹಾಗೂ 'ಹಚ್ಚೇವು ಕನ್ನಡದ ದೀಪ' ಕೃತಿಗಳ ಬಿಡುಗಡೆ ಸಮಾರಂಭ ಆ.30ರಂದು ಬೆಳಗ್ಗೆ 11 ಗಂಟೆಗೆ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು ಸಭಾಂಗಣದಲ್ಲಿ ನಡೆಯಲಿದೆ ಎಂದು ಲೇಖಕರಾದ ಡಾ.ಪಿ.ವಿ. ನಾಗರಾಜ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಹಿತಿ ನಾಡೋಜ ಬರಗೂರು ರಾಮಚಂದ್ರಪ್ಪ ಅವರು ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಅಲ್ಲದೆ, ಅಂದಿನ ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಪ್ರೊ.ಸೋಮಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರೊ.ಓ.ಎಲ್.ನಾಗಭೂಷಣಸ್ವಾಮಿ, ಡಾ.ರಾಜಪ್ಪ ದಳವಾಯಿ, ಡಾ.ಕೆ.ಇ.ಗೋವಿಂದೇಗೌಡ, ಪ್ರಕಾಶಕ ಓಂಕಾರಪ್ಪ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದರು.

ತಾವು ಬಾಲ್ಯದಿಂದಲೂ ದೃಷ್ಟಿ ದಿವ್ಯಾಂಗರಾಗಿದ್ದು, ಈಗ ಕನ್ನಡ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದೇವೆ. ಇತರರಿಗೆ ಪ್ರೇರಣೆ ಆಗಲೆಂದು ಈ ಕೃತಿಗಳನ್ನು ರಚಿಸಿರುವುದಾಗಿ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಎಂ.ಎನ್.ದಿನೇಶ್, ಓಂಕಾರಪ್ಪ, ಶಿವರಾಜ್ ಉಪಸ್ಥಿತರಿದ್ದರು.

ರಾಷ್ಟ್ರೀಯ ಕ್ರೀಡಾ ದಿನ: ನಾಳೆ ಮೈಸೂರಲ್ಲಿ ರಾಜ್ಯಮಟ್ಟದ ದೇಹದಾರ್ಢ್ಯ ಸ್ಪರ್ಧೆ

ಮೈಸೂರು, ಆ.28(ಜಿಎ)–ಮೈಸೂರಿನ ಜಿಎಚ್ ಫಿಟ್ನೆಸ್ ಅಂಡ್ ಜಿಮ್, ಮೈಸೂರು ಲಯನ್ಸ್ ಕ್ಲಬ್ ಗೋಲ್ಡನ್ ಸಿಟಿ ಹಾಗೂ ಭುವನ್‌ರಾಜ್ ಫೌಂಡೇಷನ್ ಸಂಯುಕ್ತಾಶ್ರಯದಲ್ಲಿ ಆ.30ರಂದು ಸಂಜೆ 5.30ಕ್ಕೆ ನಗರದ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ರಾಜ್ಯ ಮಟ್ಟದ ದೇಹದಾರ್ಢ್ಯ ಸ್ಪರ್ಧೆ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪರಿಸರ ಸ್ನೇಹಿ ತಂಡದ ಅಧ್ಯಕ್ಷ ಲೋಹಿತ್ ಈ ವಿಷಯ ತಿಳಿಸಿ, ಈ ಸ್ಪರ್ಧೆಗೆ ಒಡೆಯರ್ ಕಪ್ ಸ್ಪರ್ಧೆ ಎಂದು ಹೆಸರಿಟ್ಟಿದ್ದು, ಸಂಸದ ಯದುವೀರ್ ಒಡೆಯರ್, ಶಾಸಕರಾದ ಜಿ.ಟಿ.ದೇವೇಗೌಡ, ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ಸಿ.ಎನ್.ಮಂಜೇಗೌಡ, ಕವೀಶ್‌ಗೌಡ, ನಾಗರಾಜ್ ವಿ.ಭೈರಿ, ಭುವನ್‌ರಾಜ್, ಎನ್.ಚೇತನ್‌ರಾಜ್ ಇನ್ನಿತರರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಸ್ಪರ್ಧೆಯಲ್ಲಿ ಪಾಲ್ಗೊಳ್ಳುವವರಿಗೆ ಒಟ್ಟು 4 ವಿಭಾಗಗಳಲ್ಲಿ ಪ್ರತಿಯೊಂದಕ್ಕೂ 1ರಿಂದ 5ನೇ ಸ್ಥಾನದವರೆಗೆ ನಗದು ಬಹುಮಾನ ನೀಡಲಾಗುವುದು ಎಂದು ಮಾಹಿತಿ ನೀಡಿದರು. ಗೋಷ್ಠಿಯಲ್ಲಿ ಸುರೇಶ್‌ಗೋಲ್ಡ್, ಇ.ಹರೀಶ್, ನವೀನ್‌ಚಂದ್ರ, ಲಕ್ಷ್ಮೀಪತಿ ಬಾಲಾಜಿ ಉಪಸ್ಥಿತರಿದ್ದರು.

ಕೋಳಿ ಸಾಕಾಣಿಕೆ ಉಚಿತ ತರಬೇತಿ ಕಾರ್ಯಾಗಾರ

ಭಾರತದಲ್ಲಿ ಆಹಾರ ಉದ್ಯಮ ಎಂದಿಗೂ ಕುಸಿಯುವುದಿಲ್ಲ; ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ ಸಹಾಯಕ ನಿರ್ದೇಶಕ ಡಾ.ನಂಜೇಶ್ ಅಭಿಮತ

ಮೈಸೂರು, ಆ.28– ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ ಸಹಕಾರದೊಂದಿಗೆ ಶ್ರೀ ಗಂಗಾ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಎರಡು ದಿನಗಳ ಕೋಳಿ ಸಾಕಾಣಿಕೆ ಉಚಿತ ತರಬೇತಿ ಕಾರ್ಯಗಾರ ನಡೆಯಿತು.

ಮೈಸೂರಿನ ಡಿ.ದೇವರಾಜ ಅರಸು ರಸ್ತೆಯಲ್ಲಿರುವ ಟ್ರಸ್ಟ್ ಸಭಾಂಗಣದಲ್ಲಿ ಆಯೋಜಿಸಿದ್ದ ಕಾರ್ಯಾಗಾರ ಉದ್ಘಾಟಿಸಿದ ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ ಸಹಾಯಕ ನಿರ್ದೇಶಕ ಡಾ.ಬಿ.ಎಸ್.ನಂಜೇಶ್ ಮಾತನಾಡಿ, 140 ಕೋಟಿ ಜನಸಂಖ್ಯೆಯುಳ್ಳ ಭಾರತದಲ್ಲಿ ಆಹಾರ ಉದ್ಯಮ ಎಂದಿಗೂ ಕುಸಿಯುವುದಿಲ್ಲ. ಅಲ್ಲದೆ ಕೃಷಿಯನ್ನೇ ಪೂರ್ಣಪ್ರಮಾಣದಲ್ಲಿ ನಂಬಲು ಸಾಧ್ಯವಿಲ್ಲ. ಆದ್ದರಿಂದ ಕೃಷಿಯೊಂದಿಗೆ ಹೈನುಗಾರಿಕೆ ಮುಂತಾದ ಜಾನುವಾರುಗಳ ಸಾಕಾಣಿಕೆ ಮುಖ್ಯವಾಗುತ್ತದೆ ಎಂದರು.



ಮೈಸೂರಲ್ಲಿ ಆಯೋಜಿಸಿದ್ದ ಕೋಳಿ ಸಾಕಾಣಿಕೆ ಉಚಿತ ತರಬೇತಿ ಕಾರ್ಯಾಗಾರವನ್ನು ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ ಸಹಾಯಕ ನಿರ್ದೇಶಕ ಡಾ.ಬಿ.ಎಸ್. ನಂಜೇಶ್ ಉದ್ಘಾಟಿಸಿದರು.

ಜಾನುವಾರು ಸಾಕಾಣಿಕೆಯಲ್ಲಿ ಕೋಳಿ ಸಾಕಾಣಿಕೆ ಪ್ರಮುಖವಾಗಿದ್ದು, ಕರ್ನಾಟಕ ರಾಜ್ಯ ಮೊಟ್ಟೆ ಉತ್ಪಾದನೆಯಲ್ಲಿ ದೇಶದಲ್ಲಿಯೇ ಮೂರನೇ ಸ್ಥಾನದಲ್ಲಿದೆ. ದೇಶಕ್ಕೆ ಅಗತ್ಯವಿರುವ ಮೊಟ್ಟೆಯು ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ತೆಲಂಗಾಣ ಹಾಗೂ ಮಹಾರಾಷ್ಟ್ರದಿಂದಲೇ ಪೂರೈಕೆಯಾಗುತ್ತದೆ. ನಾಟಿಕೋಳಿ ವರ್ಷದಲ್ಲಿ ಸುಮಾರು 60 ಮೊಟ್ಟೆಗಳನ್ನಿಟ್ಟರೆ, ಗಿರಿರಾಜ ತಳಿ ಹಾಗೂ ಬಾಯ್ಲರ್ ಕೋಳಿ ವರ್ಷಕ್ಕೆ 300ಕ್ಕೂ ಹೆಚ್ಚು ಮೊಟ್ಟೆಗಳನ್ನಿಡಲಿವೆ ಎಂದು ಮಾಹಿತಿ ನೀಡಿದರು.

ಕೋಳಿ ಮಾಂಸ ಉತ್ಪಾದನೆಯಲ್ಲಿ ಪಶ್ಚಿಮ ಬಂಗಾಳ ಮೊದಲ ಸ್ಥಾನದಲ್ಲಿದೆ. ಈ ಉದ್ಯಮ ಆರಂಭಿಸಲು ಹಲವಾರು ಅವಕಾಶಗಳಿದ್ದು, ಸುಮಾರು 10 ಸಾವಿರ ಕೋಳಿಗಳ ಫಾರಂ ಮಾಡಲು ಸುಮಾರು 80 ಲಕ್ಷ ಖರ್ಚಾಗಲಿದೆ. ಅಲ್ಲದೆ ಕೋಳಿ ಸಾಕಾಣಿಕೆಗೆ ರಾಷ್ಟ್ರೀಯ ಜಾನುವಾರು ಯೋಜನೆಯಡಿ ಶೇ.50ರಷ್ಟು ಸಬ್ಸಿಡಿ ನೀಡಲಾಗುವುದು. 50 ಲಕ್ಷ ಸಾಲ ಪಡೆದರೆ, 25 ಲಕ್ಷ ಸಬ್ಸಿಡಿಯಾಗಿರುತ್ತದೆ. ಲಾಭದಾಯಕವಾದ ಕೋಳಿ ಸಾಕಾಣಿಕೆಯಿಂದ ಉದ್ಯಮಿಗಳಾಗಿ ಆರ್ಥಿಕವಾಗಿ ಸಬಲರಾಗಬಹುದು ಎಂದರು.

ಸಡಾಕ್ ಮೈಸೂರು ತರಬೇತಿ ಅಧಿಕಾರಿ ಮಿಥುನ್, ಕೃಷಿ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಶಿವರಾಮೇಗೌಡ, ಬೆಮೆಲ್ ನಿವೃತ್ತ ಕಾರ್ಯಪಾಲಕ ಇಂಜಿನಿಯರ್ ವಿ.ಶಂಕರ್, ಮುಖಂಡರಾದ ಮರೀಗೌಡ, ಕೃಷ್ಣೇಗೌಡ, ರಂಗಸ್ವಾಮಿ, ಅಖಿಲ ಭಾರತ ಮಹಿಳಾ ಉದ್ಯಮಿ, ತರಬೇತುದಾರರ ಸಂಘದ ಅಧ್ಯಕ್ಷೆ ದಿವ್ಯಶ್ರೀ, ಶ್ರೀ ಗಂಗಾ ಚಾರಿಟಬಲ್ ಟ್ರಸ್ಟ್ ನಿರ್ದೇಶಕ ಚಿಕ್ಕಲಿಂಗೇಗೌಡ, ಅಧ್ಯಕ್ಷ ರಾಜ್‌ಕಾಮಯ್ಯ, ರಾಜಣ್ಣ, ಚಾಂದಿನಿ ಮತ್ತಿತರರಿದ್ದರು.

ದೇಶ –

ಬಾಂಗ್ಲಾ ಟಿವಿ ಪತ್ರಕರ್ತೆಯ ಶವ ಕೆರೆಯಲ್ಲಿ ಪತ್ತೆ



ಢಾಕಾ: ರಾಜಧಾನಿ ಢಾಕಾದಲ್ಲಿ ಈ ಘಟನೆ ನಡೆದಿದ್ದು, ಗಾಜಿ ಸಮೂಹದ ಬಂಗಾಳಿ ಭಾಷೆಯ ಗಾಜಿ ಎಂಬ ಉಪಗ್ರಹ ಮತ್ತು ಕೇಬಲ್ ದೂರದರ್ಶನ ಚಾನೆಲ್‌ನ ಸಂಪಾದಕಿ ಸಾರಾ ರಹನುಮಾ ಮೃತ ಪತ್ರಕರ್ತೆಯಾಗಿದ್ದಾರೆ.

ಢಾಕಾದಲ್ಲಿರುವ ಹತಿರ್‌ಜೀಲ್ ಕೆರೆಯಲ್ಲಿ ಆಕೆಯ ಶವ ಪತ್ತೆಯಾಗಿದೆ ಎಂದು ದಿ ಢಾಕಾ ಟ್ರಿಬ್ಯೂನ್ ವರದಿ ಮಾಡಿದೆ. ಢಾಕಾ ಮೆಡಿಕಲ್ ಕಾಲೇಜು ಆಸ್ಪತ್ರೆ (ಡಿಎಂಸಿಎಚ್) ಪೊಲೀಸ್ ಹೊರಠಾಣೆ ಉಸ್ತುವಾರಿ ಇನ್ಸ್‌ಪೆಕ್ಟರ್ ಬಚ್ಚು ಮಿಯಾ ಆಕೆಯ ದೇಹ ಪತ್ತೆಯಾಗಿರುವುದನ್ನು ಖಚಿತಪಡಿಸಿದ್ದಾರೆ.

ಪಾದಚಾರಿಗಳು ಮೃತದೇಹವನ್ನು ಕೆರೆಯಿಂದ ಎಳೆದು ಢಾಕಾ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ (ಡಿಎಂಸಿಎಚ್) ಕೊಂಡೊಯ್ದರು, ಅಲ್ಲಿ ವೈದ್ಯರು ಬೆಳಿಗ್ಗೆ 2.00 ರ ಸುಮಾರಿಗೆ ಮೃತಪಟ್ಟಿದ್ದಾರೆ ಎಂದು ವೈದ್ಯರು ಘೋಷಿಸಿದ್ದಾರೆ.

ಆದರೆ, ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಪುತ್ರ ಅಮೆರಿಕ ಮೂಲದ ಸಜೀಬ್ ವಾಝೇದ್, ಪತ್ರಕರ್ತೆಯ ಸಾವಿನ ಬಗ್ಗೆ ಪ್ರತಿಕ್ರಿಯೆ ನೀಡಿದ್ದು, ಇದು ದೇಶದ ಅಭಿವ್ಯಕ್ತಿ ಸ್ವಾತಂತ್ರ್ಯದ ಮೇಲಿನ ಮತ್ತೊಂದು ಕ್ರೂರ ದಾಳಿ ಎಂದು ಹೇಳಿದ್ದಾರೆ.

ಮನೆಯ ಜಗಲಿ ಮೇಲೆ ಮಲಗಿದ್ದ ಅಪ್ರಾಪ್ತೆ ಹೊತ್ತೊಯ್ದು ಗ್ಯಾಂಗ್ ರೇಪ್

ಕೋಲ್ಕತ್ತಾ: ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿ




ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಟ್ರೈನಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಬಗ್ಗೆ ಜನರಲ್ಲಿ ಆಕ್ರೋಶ ಭುಗಿಲೆದ್ದಿದೆ.

ಇಂತಹುದೇ ಮತ್ತೊಂದು ಹೀನಕೃತ್ಯ ಬೆಳಕಿಗೆ ಬಂದಿದೆ. ಇದು ಉತ್ತರ ಪ್ರದೇಶದ ಕನ್ನೌಜ್‌ನ ಹಳ್ಳಿಯೊಂದರಲ್ಲಿ ನಡೆದಿದ್ದು, ಅಪ್ರಾಪ್ತೆ ಮೇಲೆ ಅವಳದೇ ಗ್ರಾಮದ ಇಬ್ಬರು ಯುವಕರು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ. ಈ ಘಟನೆ ಸುಮಾರು ಒಂದು ತಿಂಗಳ ಹಿಂದೆ ನಡೆದಿದ್ದು, ಇಷ್ಟು ದಿನ ಸಂತ್ರಸ್ತೆ ಭಯದಿಂದ ಮೌನವಾಗಿದ್ದಳು. ತಿಂಗಳು ಕಳೆದ ನಂತರ ಕೊನೆಗೆ ಈ ಘಟನೆಯನ್ನು ತಂದೆಗೆ ತಿಳಿಸಿದ್ದಾಳೆ. ಸುದ್ದಿ ಕೇಳಿ ದಿಗ್ಭ್ರಮೆಗೊಂಡ ತಂದೆ, ಆಕೆಯನ್ನು ಪೊಲೀಸ್ ಠಾಣೆಗೆ ಕರೆದೊಯ್ದು ಲಿಖಿತ ದೂರು ನೀಡಿದ್ದಾರೆ. ತಿಂಗಳ ಹಿಂದೆ ಈಕೆ ತನ್ನ ತಾಯಿಯೊಂದಿಗೆ ರಾತ್ರಿ ಮನೆಯ ಹೊರಗೆ ಮಲಗಿದ್ದಾಗ ಇಬ್ಬರು ಯುವಕರು ಆಕೆಯ ಬಾಯಿ ಬಿಗಿದು ಅಪಹರಿಸಿದ್ದಾರೆ. ಬಳಿಕ ನಿರ್ಜನ ಸ್ಥಳಕ್ಕೆ ಕರೆದೊಯ್ದು ಅಲ್ಲಿ ಇಬ್ಬರೂ ಸೇರಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ.

ಮಗನ ಕಟ್ಟಿ ಹಾಕಿ ಪಿಟ್‌ಬುಲ್ ನಾಯಿ ಛೂ ಬಿಟ್ಟ ಮಹಾತಾಯಿ


ಒಹಾಯೋ (ಅಮೆರಿಕ): ತನ್ನ 6 ವರ್ಷದ ಮಗನ



ಕೈ ಹಾಗೂ ಕಾಲುಗಳಿಗೆ ಬೇಡಿ ತೊಡಿಸಿದ ಮಹಾತಾಯಿಯೊಬ್ಬಳು ಆತನ ಮೇಲೆ ದಾಳಿ ನಡೆಸುವಂತೆ ಅತ್ಯುಗ್ರ ವರ್ತನೆ ತೋರುವ ಪಿಟ್ ಬುಲ್ ನಾಯಿಯನ್ನು ಛೂ ಬಿಟ್ಟಿದ್ದಾಳೆ. ಬಾಲಕನ ಮೇಲೆ ದಾಳಿ ನಡೆಸಿದ ನಾಯಿ, ಆತನ ಕುತ್ತಿಗೆ, ಕಿವಿ ಸೇರಿದಂತೆ ದೇಹದ ಹಲವೆಡೆ ಕಚ್ಚಿ ಗಾಯಗೊಳಿಸಿದೆ. ಬಾಲಕನ ಮೇಲೆ ದಾಳಿ ನಡೆಸುತ್ತಿದ್ದ ನಾಯಿಯನ್ನು ಓಡಿಸುವಲ್ಲಿ ಯಶಸ್ವಿಯಾದ ಸ್ಥಳೀಯರು ಆತನ ಕೈ ಮತ್ತು ಕಾಲಿಗೆ ತೊಡಿಸಿದ್ದ ಬೇಡಿ ಕಿತ್ತು ಹಾಕಿದ್ದಾರೆ. ರಕ್ತ ಸುರಿಯುತ್ತಿದ್ದ ಬಾಲಕನಿಗೆ ಪ್ರಾಥಮಿಕ ಚಿಕಿತ್ಸೆ ನೀಡಿದ್ದಾರೆ. ಪೊಲೀಸರು ಬಾಲಕನ ತಾಯಿ ಏಂಜಲೀನಾ ವಿಲಿಯಮ್ಸ್, ಆಕೆಯ ಸಂಬಂಧಿಕ ರಾಬರ್ಟ್ ಮೈಕಲ್ಸ್ ಹಾಗೂ ಏಂಜಲೀನಾ ಬಾಯ್ ಫ್ರೆಂಡ್ ಟೇಲರ್ ಡಿಸ್ಟೈರಿ ಮಾರ್ವಿನ್ ಬ್ರೌನ್‌ನನ್ನು ವಶಕ್ಕೆ ಪಡೆದಿದ್ದಾರೆ. ಬಾಲಕನ ತಂದೆಯಿಂದ ದೂರವಾಗಿದ್ದ ಮಹಿಳೆ, ಗೆಳೆಯನ ಜೊತೆಗೆ ಸ್ನೇಹ ಬೆಳೆಸಿದ್ದಳು. ಈ ವೇಳೆ ಮಗನ ಬಗ್ಗೆ ಕಿರಿಕಿರಿಯ ವರ್ತನೆ ಪ್ರದರ್ಶನ ಮಾಡುತ್ತಿದ್ದ ಆಕೆ, ಪುಟ್ಟ ಬಾಲಕ ಮಾಡುವ ಸಣ್ಣ ಸಣ್ಣ ತಪ್ಪಿಗೂ ಉಗ್ರ ಶಿಕ್ಷೆ ನೀಡುವ ಮೂಲಕ ಹಿಂಸೆ ಕೊಡುತ್ತಿದ್ದಳು ಎನ್ನಲಾಗಿದೆ.

ಪಾಸ್‌ಪೋರ್ಟ್ ಸೇವಾ ಪೋರ್ಟಲ್ ಇಂದಿನಿಂದ ಸೆಪ್ಟೆಂಬರ್ 2ರವರೆಗೆ ಸ್ಥಗಿತ

ನವದೆಹಲಿ: ಪಾಸ್‌ಪೋರ್ಟ್ ಸೇವಾ ಪೋರ್ಟಲ್ ಆ.29ರಂದು ರಾತ್ರಿ 8ರಿಂದ ಸೆಪ್ಟೆಂಬರ್ 2ರಂದು




ಬೆಳಗ್ಗೆ 6ರವರೆಗೆ ತಾಂತ್ರಿಕ ನಿರ್ವಹಣೆ ಕಾರಣದಿಂದ ನಾಗರಿಕರ ಸೇವೆಗೆ ಲಭ್ಯವಿರುವುದಿಲ್ಲ. ಈ ಅವಧಿಯಲ್ಲಿ ನಾಗರಿಕರು ಹಾಗೂ ಎಲ್ಲಾ ಎಂಇಎ, ಆರ್‌ಪಿಒ, ಬಿಒಐ, ಡಿಒಪಿ, ಪೊಲೀಸ್ ಪ್ರಾಧಿಕಾರಗಳಿಗೆ ಸಿಸ್ಟಂ ಲಭ್ಯ ಇರುವುದಿಲ್ಲ. ಆಗಸ್ಟ್ 30ಕ್ಕೆ ಬುಕ್ ಆಗಿರುವ ಅಪಾಯಿಂಟ್‌ಗಳನ್ನು ಬೇರೆ ದಿನಕ್ಕೆ ನಿಗದಿ ಮಾಡಿ, ಅರ್ಜಿದಾರರಿಗೆ ಅದರ ಮಾಹಿತಿ ಅಪ್‌ಡೇಟ್ ಮಾಡಲಾಗುತ್ತದೆ ಎಂದು ಅಡ್ವೈಸರಿ ಬಿಡುಗಡೆ ಮಾಡಲಾಗಿದೆ.

ದೃಢೀಕೃತ ಅಪಾಯಿಂಟ್‌ಮೆಂಟ್‌ಗಳನ್ನು ಹೊಂದಿರುವ ಅರ್ಜಿದಾರರು ತಮ್ಮ ಮರು ನಿಗದಿಪಡಿಸಿದ ಅಪಾಯಿಂಟ್‌ಮೆಂಟ್‌ಗಳ ಕುರಿತು SMS ಅಧಿಸೂಚನೆಗಳನ್ನು ಸ್ವೀಕರಿಸುತ್ತಾರೆ.ಅಪಾಯಿಂಟ್ಮೆಂಟ್ ಪಡೆದಿರುವ ಅಭ್ಯರ್ಥಿಗಳಿಗೆ ಮುಂದಿನ ದಾರಿಗಳ ಬಗ್ಗೆ ಎಸ್ಸೆಮ್ಮೆಸ್ ಮೂಲಕ ಮಾಹಿತಿ ನೀಡಲಾಗುತ್ತದೆ ಎಂದು ಪಾಸ್‌ಪೋರ್ಟ್ ಇಲಾಖೆ ಹೇಳಿದೆ.

ಮಲ ಮಗಳನ್ನು ಮದುವೆಯಾಗಲು ಹೆಂಡತಿಗೆ ಮದ್ಯದಲ್ಲಿ ಸ್ಲೋ ಪಾಯ್ಸನ್ ಹಾಕ್ತಿದ್ದ ಗಂಡ

ವಾಷಿಂಗ್ಟನ್: ಅಮೆರಿಕದ ಇಂಡಿಯಾನಾ ರಾಜ್ಯದ ಮುದುಕ, ಮಲಮಗಳನ್ನು ಮದುವೆಯಾಗಲು ಹೆಂಡತಿಗೆ ಮದ್ಯದಲ್ಲಿ 12 ಬಾರಿ ವಿಷ ಹಾಕಿ ಕೊಲೆ ಮಾಡಲು ಪ್ರಯತ್ನಿಸಿದ್ದಾನೆ. ಪತ್ನಿ ಕುಡಿಯುತ್ತಿದ್ದ ಮದ್ಯದಲ್ಲಿ ಕೊಕೇನ್, ಎಂಡಿಎಂಎ ಮಾದಕ ಪದಾರ್ಥದ ಜೊತೆ ವಿಷ ಸೇರಿಸಿ ಕೊಟ್ಟಿದ್ದಾನೆ. ಮಲಮಗಳನ್ನು



ಮದುವೆಯಾಗಲು ಅಡ್ಡಿಯಾಗಿದ್ದ ಪತ್ನಿಯನ್ನು ಕೊಲ್ಲಲು ಸಂಚು ರೂಪಿಸಿದ್ದ 71 ವರ್ಷದ ಅಲ್ಫ್ರೆಡ್ ಡಬ್ಲ್ಯೂ ರೂಫ್ ಪೊಲೀಸರ ಮುಂದೆ ತಪ್ಪೊಪ್ಪಿಕೊಂಡಿದ್ದಾನೆ. 2021ರಲ್ಲಿ ಪತ್ನಿಯನ್ನು ಕೊಲ್ಲಲು ಆಕೆಗೆ ಮದ್ಯದಲ್ಲಿ 12 ಬಾರಿ ವಿಷ ಹಾಗೂ ಮಾದಕ ಪದಾರ್ಥ ಬೆರೆಸಿರುವ ಸತ್ಯ ಬಾಯಿಬಿಟ್ಟಿದ್ದಾನೆ. ಅಲ್ಫ್ರೆಡ್ ನೀಡಿದ ಮಾದಕ ಹಾಗೂ ವಿಷ ಮಿಶ್ರಿತ ಮದ್ಯ ಸೇವಿಸಿದ 13 ಗಂಟೆ ಬಳಿಕ ಮಹಿಳೆ ಪ್ರಜ್ಞೆ ಕಳೆದುಕೊಂಡಿದ್ದಾಳೆ. ಆರಂಭದಲ್ಲಿ ಮಹಿಳೆಗೆ ಏನಾಗಿದೆ ಎಂಬುವುದು ಗೊತ್ತಾಗಿರಲಿಲ್ಲ. ಆಸ್ಪತ್ರೆಗೆ ದಾಖಲಾದ ನಂತರ ಮದ್ಯದಲ್ಲಿ ಮಾದಕ ವಿಷ ಬೆರೆತಿರುವ ಅಂಶ ವೈದ್ಯಕೀಯ ವರದಿಯಲ್ಲಿ ಗೊತ್ತಾಗಿದೆ. ಮಗಳು ಹಾಗೂ ಗಂಡನ ಮೇಲೆ ಅನುಮಾನಗೊಂಡ ಮಹಿಳೆ, ತಾನು ಮದ್ಯ ಸೇವಿಸಿದ್ದ ಗ್ಲಾಸ್ ಪೊಲೀಸರಿಗೆ ನೀಡಿದ್ದರು. ಇದಾದ ಕೆಲವೇ ದಿನಗಳ ಬಳಿಕ ಪೊಲೀಸರು ಅಲ್ಫ್ರೆಡ್ ರೂಫ್‌ನನ್ನು ಬಂಧಿಸಿದ್ದಾರೆ. ಮಲಮಗಳು ಮತ್ತು ಆಕೆಯ ಸ್ನೇಹಿತ ಪರಾರಿಯಾಗಿದ್ದಾರೆ. ಇನ್ನು ನ್ಯಾಯಾಲಯದಲ್ಲಿ ತಪ್ಪೊಪ್ಪಿಕೊಂಡಿರುವ ಅಲ್ಫ್ರೆಡ್‌ಗೆ 4 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ.

ಸರ್ಕಾರಿ ಸೌಲಭ್ಯ ಪಡೆಯಲು ಕೊಡಗಿನ ಜನರು ಹಿಂದೇಟು

• ಲೀಡ್ ಬ್ಯಾಂಕ್ ವ್ಯವಸ್ಥಾಪಕ ಗಂಗಾಧರ್ ನಾಯಕ್ ಮಾಹಿತಿ • ಉದ್ಯೋಗ ಸೃಜನ ಅರಿವು ಕಾರ್ಯಕ್ರಮ



ಮಡಿಕೇರಿ ಗಾಂಧಿ ಭವನದಲ್ಲಿ ನಡೆದ ಪ್ರಧಾನ ಮಂತ್ರಿ ಉದ್ಯೋಗ ಸೃಜನ ಅರಿವು ಕಾರ್ಯಕ್ರಮವನ್ನು ಲೀಡ್ ಬ್ಯಾಂಕ್ ವ್ಯವಸ್ಥಾಪಕ ಗಂಗಾಧರ್ ನಾಯಕ್ ಉದ್ಘಾಟಿಸಿದರು.

ಮಡಿಕೇರಿ, ಆ.28–ಸರ್ಕಾರಿ ಯೋಜನೆಗಳ ಸೌಲಭ್ಯ ಪಡೆಯಲು ಕೊಡಗಿನ ಜನರು ಹಿಂದೇಟು ಹಾಕುತ್ತಿದ್ದಾರೆ ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕ ಗಂಗಾಧರ್ ನಾಯಕ್ ತಿಳಿಸಿದರು.

ನಗರದ ಗಾಂಧಿ ಭವನದಲ್ಲಿ ರಾಜ್ಯ ಖಾದಿ ಗ್ರಾಮೋದ್ಯೋಗ ಆಯೋಗ ಮತ್ತು ಮೈಸೂರಿನ ಸರ್ವೋದಯ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ಬುಧವಾರ ನಡೆದ ಪ್ರಧಾನ ಮಂತ್ರಿ ಉದ್ಯೋಗ ಸೃಜನ ಅರಿವು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ 31 ಜಿಲ್ಲೆಗಳ ಪೈಕಿ ಕೊಡಗಿನಲ್ಲಿ ಜನಸಂಖ್ಯೆ ಕಡಿಮೆ ಇದ್ದರೂ ಸರ್ಕಾರಿ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಹಿಂದೇಟು ಹಾಕಲಾಗುತ್ತಿದೆ ಎಂದರು.

ಸ್ವ ಉದ್ಯೋಗ ಕೈಗೊಳ್ಳುವುದರಿಂದ ದೇಶಕೆ ಲಾಭವಿದೆ. ಜೊತೆಗೆ ಆರ್ಥಿಕ ಪ್ರಗತಿಗೂ ಕಾರಣವಾಗುತ್ತದೆ. ಬ್ಯಾಂಕ್ ನೊಂದಿಗೆ ವ್ಯವಹಾರ ಮಾಡುವಾಗ ಆರ್ಥಿಕ ಶಿಸ್ತು ಮುಖ್ಯ. ಸ್ವ ಉದ್ಯೋಗ ಕೈಗೊಳ್ಳುವುದರಿಂದ ಉದ್ಯಮಿಯಾಗಿ ಬೆಳೆದು ಆರ್ಥಿಕವಾಗಿ ಪ್ರಗತಿ ಹೊಂದಬಹುದು. ಪ್ರತಿಯೊಬ್ಬರೂ ಸರ್ಕಾರದ ಸೌಲಭ್ಯ ಪಡೆದುಕೊಂಡು ಸ್ವಾವಲಂಬಿಗಳಾಗಬೇಕು. ಸ್ವಂತ ಉದ್ಯಮದಿಂದ ಜನತೆಯ ಆರ್ಥಿಕ ಸ್ಥಿತಿ ಸುಧಾರಣೆಯಾದರೆ ವಿಕಸಿತ ಭಾರತ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಖಾದಿ ಗ್ರಾಮೋದ್ಯೋಗ ಇಲಾಖೆ ಅಧಿಕಾರಿ ರಾಮಕೃಷ್ಣಾಚಾರ್ ಮಾತನಾಡಿ, ಸೇವಾ ವಲಯ ಮತ್ತು ಉತ್ಪಾದನಾ ವಲಯದ ಎರಡು ವಿಧದಲ್ಲಿ ಸಾಲ ಸೌಲಭ್ಯ ನೀಡಲಾಗುವುದು. ಪ್ರಧಾನ ಮಂತ್ರಿ ಸ್ವ ಉದ್ಯೋಗ ಯೋಜನೆ ಯಿಂದ ಗ್ರಾಮೀಣ ಮತ್ತು ನಗರ ಪ್ರದೇಶದ ಜನತೆಗೆ ಅನುಕೂಲವಾಗಲಿದೆ ಎಂದರು.

ಬ್ಯಾಂಕ್ ನಿವೃತ್ತ ಅಧಿಕಾರಿ ಹಾಗೂ ಸೇವಾ ಭಾರತಿ ಕಾರ್ಯದರ್ಶಿ ಡಿ.ಎಚ್.ತಮ್ಮಪ್ಪ ಮಾತನಾಡಿ, ಕನಸಿದ್ದರೆ ಸಾಧನೆ ಮಾಡಲು ಸಾಧ್ಯ. ಜೊತೆಗೆ ಕೌಶಲವೂ ಇರಬೇಕು. ಕನಸು ಮತ್ತು ಕೌಶಲ ಇದ್ದಾಗ ಬ್ಯಾಂಕ್‌ಗಳು ಸಾಲ ಸೌಲಭ್ಯ ನೀಡುತ್ತವೆ. ಪ್ರಾಮಾಣಿಕತೆ ಪ್ರತಿಯೊಬ್ಬರಿಗೂ ಇರಬೇಕು ಎಂದರು.

ಕಾರ್ಯಕ್ರಮದಲ್ಲಿ ಸರ್ವೋದಯ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ರಾಜೇಶ್, ಕರ್ನಾಟಕ ರಿಪಬ್ಲಿಕ್ ಸೇನೆ ರೈತ ಘಟಕದ ಅಧ್ಯಕ್ಷ ಮಹಾದೇವ್, ನಿರ್ದೇಶಕಿ ಭಾಗ್ಯ ರಾಜೇಶ್, ನಾಗರತ್ನ, ದಿವ್ಯ ಹಾಜರಿದ್ದರು.

> ಪ್ರಧಾನ ಮಂತ್ರಿ ಸ್ವ ಉದ್ಯೋಗ ಯೋಜನೆಯ ಸೌಲಭ್ಯ ಕೊಡಗಿನಲ್ಲಿ ಕಾರ್ಯಗತಗೊಂಡಿರುವುದು ಕಡಿಮೆ ಪ್ರಮಾಣ. ಸ್ವಂತ ಉದ್ಯೋಗ ಮಾಡುವ ಕನಸು ಇದ್ದವರಿಗೆ ಪ್ರಧಾನ ಮಂತ್ರಿ ಸ್ವ ಉದ್ಯೋಗ ಯೋಜನೆಯಿಂದ ಪ್ರಯೋಜನವಾಗಲಿದೆ. ಅರ್ಜಿ ಸಲ್ಲಿಸುವ ಮೂಲಕ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು.
>
> –ವಿ.ಆರ್.ಮರಾಠಿ, ಬೆಂಗಳೂರಿನ ಖಾದಿ ಗ್ರಾಮೋದ್ಯೋಗ ಇಲಾಖೆ ಸಹಾಯಕ ನಿರ್ದೇಶಕ

ಗ್ರಾಮಸ್ಥರೇ ನಿರ್ಮಿಸಿದ ತಾತ್ಕಾಲಿಕ ಸೇತುವೆ



ಮಾವಿನಹಳ್ಳ ಗ್ರಾಮಸ್ಥರು ತಾತ್ಕಾಲಿಕವಾಗಿ ಅಡಕೆ ಮರದ ಕಿರು ಸೇತುವೆ ನಿರ್ಮಿಸಿರುವುದು.

ಮಡಿಕೇರಿ: ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯದಿಂದ ಬೇಸತ್ತ ಹಾರಂಗಿ ಸಮೀಪದ ಮಾವಿನಹಳ್ಳ ಗ್ರಾಮಸ್ಥರು ಸ್ವಂತ ಖರ್ಚಿನಿಂದ ತಾವೇ ತಾತ್ಕಾಲಿಕವಾಗಿ ಸೇತುವೆ ನಿರ್ಮಿಸಿಕೊಂಡಿದ್ದಾರೆ.

ಈ ಗ್ರಾಮದಲ್ಲಿದ್ದ ಕಿರು ಸೇತುವೆ 3 ವರ್ಷಗಳ ಹಿಂದೆ ಸುರಿದ ಅಧಿಕ ಮಳೆಯಿಂದ ನೀರಿನ ರಭಸಕ್ಕೆ ಕುಸಿದು ಹೋಗಿತ್ತು. ನಂತರ ಸಂಪರ್ಕ ಕಡಿತಗೊಂಡ ಕಾರಣ ಮಾವಿನಹಳ್ಳ, ಯಡವನಾಡು, ಐಗೂರು, ಹಾರಂಗಿ ಸೇರಿದಂತೆ 5 ಗ್ರಾಮಸ್ಥರು, ವಿದ್ಯಾರ್ಥಿಗಳು ಹಾಗೂ ಉದ್ಯೋಗಿಗಳು ಮುಖ್ಯ ರಸ್ತೆ ಸೇರಲು 5 ಕಿಮೀ ದೂರ ಬಳಸಿ ಬರಬೇಕಾಗಿತ್ತು. ಸೇತುವೆ ಕೊರತೆ ಮತ್ತು ಸಂಚಾರ ಸಂಕಷ್ಟ ಕುರಿತು ಹಿರಿಯ ಅಧಿಕಾರಿಗಳ ಗಮನ ಸೆಳೆದು 3 ವರ್ಷ ಕಳೆದರೂ ಯಾವುದೇ ಸ್ಪಂದನೆ ದೊರೆತಿರಲಿಲ್ಲ. ಸಂಬಂಧಪಟ್ಟ ಇಂಜಿನಿಯರ್‌ಗಳು ಸ್ಥಳ ಪರಿಶೀಲನೆ ಮಾತ್ರ ಮಾಡಿದರು. ಆದರೆ, ಇಲ್ಲಿಯವರೆಗೆ ಯಾರೂ ಸೇತುವೆ ನಿರ್ಮಿಸಿಕೊಡುವ ಇಚ್ಛಾಶಕ್ತಿ ಹೊಂದಿಲ್ಲ.

ಇದರಿಂದ ಅಸಮಾಧಾನಗೊಂಡ ಗ್ರಾಮಸ್ಥರು ತಾವೇ ತಾತ್ಕಾಲಿಕವಾಗಿ ಸೇತುವೆ ನಿರ್ಮಿಸಿಕೊಳ್ಳಲು ತೀರ್ಮಾನಿಸಿ, ಗ್ರಾಮಸ್ಥರೆಲ್ಲರೂ ಒಗ್ಗೂಡಿ ಹಣ ಸಂಗ್ರಹಿಸಿ ಅಡಕೆ ಮರದ ದಿಮ್ಮಿಗಳನ್ನು ತಂದು ಕಿರು ಸೇತುವೆ ನಿರ್ಮಿಸಿದ್ದಾರೆ ಇದೀಗ ತಾವೇ ನಿರ್ಮಿಸಿದ ಸೇತುವೆಯಲ್ಲಿ ಗ್ರಾಮಸ್ಥರು ಸಂಚಾರ ಆರಂಭಿಸಿದ್ದಾರೆ. ಮಾವಿನಹಳ್ಳ ಸುತ್ತಮುತ್ತಲ ಗ್ರಾಮಗಳ ಸಮಸ್ಯೆಗಳನ್ನು ಸ್ಥಳೀಯ ಜನಪ್ರತಿನಿಧಿಗಳು ಗಂಭೀರವಾಗಿ ಪರಿಗಣಿಸಬೇಕು ಮತ್ತು ಶೀಘ್ರ ಕಾಮಗಾರಿ ಪೂರ್ಣಗೊಳಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಮಹಿಳೆಯರಿಗೆ ಚಾಕು ತೋರಿಸಿ ನಗದು, ಚಿನ್ನಾಭರಣ ಕಳವು ಮಾಡಿದ್ದ

ನೇಪಾಳ ಮೂಲದ 6 ಮಂದಿಗೆ 3 ವರ್ಷ ಕಠಿಣ ಶಿಕ್ಷೆ

ಮಡಿಕೇರಿ: ರಾತ್ರಿ ವೇಳೆ ಮನೆಗೆ ನುಗ್ಗಿ ಮಹಿಳೆಯರಿಗೆ ಚಾಕು ತೋರಿಸಿ ಜೀವ ಬೆದರಿಕೆ ಒಡ್ಡಿ ನಗದು ಮತ್ತು ಚಿನ್ನಾಭರಣ ಕಳವು ಮಾಡಿದ್ದ ನೇಪಾಳ ಮೂಲದ 6 ಅಪರಾಧಿಗಳಿಗೆ ಮಡಿಕೇರಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 3 ವರ್ಷ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ.

ನೇಪಾಳ ಮೂಲದ ದಿಲ್ ಬಹದೂರ್ ರಾವುಲ್, ಈಶ್ವರ್ ಥಾಪಾ, ಪ್ರೇಮ್ ಬಹದೂರು ಖಡ್ಕಾ, ಸುದೀಪ್ ಜೇತಾರ, ಯಾಮ್ ಸಿಂಗ್ ಮತ್ತು ಈತನ ಪತ್ನಿ ಕಮಲಾ ಸಿಂಗ್ ಶಿಕ್ಷೆಗೆ ಒಳಗಾದವರು.

ಪ್ರಕರಣ ಹಿನ್ನೆಲೆ: ನಾಪೋಕ್ಲು ಪೊಲೀಸ್ ಠಾಣೆ ವ್ಯಾಪ್ತಿಯ ಕೊಳಕೇರಿ ಗ್ರಾಮದ ಮೂಟೇರಿಯಲ್ಲಿ ವಿ.ಜಿ.ಬೋಪಯ್ಯ ಅವರ ವಾಸದ ಮನೆ ಮತ್ತು ಕಾಫಿ ತೋಟವಿದ್ದು, ಮನೆಯಲ್ಲಿ ವಿ.ಜಿ.ಜಾನಕಿ ಮತ್ತು ವಿ.ಜಿ. ಅಮ್ಮಕ್ಕಿ ಅವರು ವಾಸವಿದ್ದರು. 2022ರ ಜನವರಿ 31ರಂದು ರಾತ್ರಿ 1 ಗಂಟೆಯಲ್ಲಿ ಮನೆಗೆ ನುಗ್ಗಿದ ಅಪರಾಧಿಗಳು, ಮಹಿಳೆಯರಿಗೆ ಚಾಕು ತೋರಿಸಿ ಬೆದರಿಸಿ ಕೈ–ಕಾಲು ಕಟ್ಟಿ ಹಾಕಿ ಮನೆಯ ಬೀರುವಿನಲ್ಲಿದ್ದ 2.50 ಲಕ್ಷ ರೂ. ನಗದು ಮತ್ತು ಚಿನ್ನಾಭರಣ ಕಳವು ಮಾಡಿದ್ದರು.

ಈ ಸಂಬಂಧ ಮಡಿಕೇರಿ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರ ಈ ಕುರಿತು ತನಿಖೆ ನಡೆಸಿದ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಮಡಿಕೇರಿಯ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಹೊಸಮನಿ ಪುಂಡಲೀಕ ಅಪರಾಧಿಗಳಿಗೆ 3 ವರ್ಷ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರಿ ಅಭಿಯೋಜಕಿ ಕೆ.ಜಿ. ಅಶ್ವಿನಿ ವಾದ ಮಂಡಿಸಿದ್ದರು.

ಕುಶಾಲನಗರದಲ್ಲಿ ಆಟೋ ಚಾಲಕರ ತಪಾಸಣೆ



ಕುಶಾಲನಗರ ಸಂಚಾರ ಠಾಣೆ ಪೊಲೀಸರು ಕಾಲೇಜುಗಳಿಗೆ ತೆರಳಿ ಕರ್ಕಶ ಶಬ್ದದ ಬೈಕ್‌ಗಳನ್ನು ಪರಿಶೀಲಿಸಿದರು.

ಕುಶಾಲನಗರ, ಆ.28–ಕುಶಾಲನಗರ ಸಂಚಾರ ಪೊಲೀಸ್ ಠಾಣಾಧಿಕಾರಿ ಗಣೇಶ್ ಮತ್ತು ಸಿಬ್ಬಂದಿ ಪಟ್ಟಣದ ಆಟೋ ನಿಲ್ದಾಣಗಳಿಗೆ ತೆರಳಿ ಚಾಲಕರನ್ನು ತಪಾಸಣೆಗೆ ಒಳಪಡಿಸಿದರು.

ಮದ್ಯ ಸೇವಿಸಿ ಆಟೋ ಚಲಾಯಿಸುವುದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ತಪಾಸಣೆ ಕಾರ್ಯ ಕೈಗೊಳ್ಳಲಾಯಿತು. ಇದೇ ವೇಳೆ ಕಾಲೇಜುಗಳಿಗೆ ತೆರಳಿ ವಿದ್ಯಾರ್ಥಿಗಳ ವಾಹನಗಳ ದಾಖಲಾತಿಗಳನ್ನು ಪರಿಶೀಲಿಸಿದರು. ಕರ್ಕಶ ಶಬ್ದದೊಂದಿಗೆ ಓಡಾಡುವ ವಾಹನಗಳನ್ನು ಪರಿಶೀಲಿಸಿ, ವಿದ್ಯಾರ್ಥಿಗಳಿಗೆ ತಿಳಿ ಹೇಳಲಾಯಿತು. ತಪಾಸಣೆ ನಿರಂತರವಾಗಿ ನಡೆಯಲಿದ್ದು, ಎಲ್ಲರೂ ಮೋಟಾರು ವಾಹನ ಕಾಯ್ದೆ ಮತ್ತು ಸಂಚಾರ ನಿಯಮ ಪಾಲನೆಗೆ ಮುಂದಾಗುವಂತೆ ಠಾಣಾಧಿಕಾರಿ ಗಣೇಶ್ ಮನವಿ ಮಾಡಿದರು.

ಕಾರು ಡಿಕ್ಕಿ: ಮೂವರಿಗೆ ಸಣ್ಣಪುಟ್ಟ ಗಾಯ



ಸುಂಟಿಕೊಪ್ಪ: ಚಾಲಕನ ನಿಯಂತ್ರಣ ತಪ್ಪಿ ಕಾರು ಡಿಕ್ಕಿ ಹೊಡೆದ ಪರಿಣಾಮ ಮೂವರು ಗಾಯಗೊಂಡು, 3 ದ್ವಿಚಕ್ರ ವಾಹನಗಳು ಜಖಂಗೊಂಡಿರುವ ಘಟನೆ ಕೊಡಗರಹಳ್ಳಿ ರಾಷ್ಟ್ರೀಯ ಹೆದ್ದಾರಿಯ ಹೋಟೆಲ್ ಮುಂಭಾಗ ಬುಧವಾರ ಸಂಭವಿಸಿದೆ.

ಮೈಸೂರು ಕಡೆಯಿಂದ ಮಡಿಕೇರಿಯತ್ತ ಬರುತ್ತಿದ್ದ ಕಾರು, ಚಾಲಕನ ನಿಯಂತ್ರಣ ತಪ್ಪಿ ಏಕಾಏಕಿ ಹೋಟೆಲ್ ಮುಂಭಾಗ ನಿಲ್ಲಿಸಿದ್ದ 3 ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಮೂವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ರಾಮಣ್ಣ, ವಿನೋದ್ ಹಾಗೂ ಮತ್ತೊರ್ವರ ದ್ವಿಚಕ್ರ ವಾಹನಗಳು ಜಖಂಗೊಂಡಿವೆ.

ಈ ಸಂಬಂಧ ಸುಂಟಿಕೊಪ್ಪ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಅಂಗನವಾಡಿ ಕೇಂದ್ರಕ್ಕೆ ನ್ಯಾಯಾಧೀಶೆ ಭೇಟಿ



ಮಡಿಕೇರಿ ಅಂಗನವಾಡಿ ಕೇಂದ್ರಗಳಿಗೆ ನ್ಯಾಯಾಧೀಶೆ ಶುಭ ಭೇಟಿ ನೀಡಿ, ಪರಿಶೀಲಿಸಿದರು.

ಮಡಿಕೇರಿ, ಆ.28–ಜಿಲ್ಲೆಯ ವಿವಿಧ ಅಂಗನವಾಡಿ ಕೇಂದ್ರಗಳಿಗೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶುಭ ಇತ್ತೀಚೆಗೆ ಭೇಟಿ ನೀಡಿ, ಪರಿಶೀಲಿಸಿದರು.

ನ್ಯಾಯಾಧೀಶರ ಭೇಟಿ ವೇಳೆ, ಕೆಲವು ಅಂಗನವಾಡಿ ಕೇಂದ್ರಗಳಲ್ಲಿ ತಡೆಗೋಡೆ, ಸೂಕ್ತ ಕಿಟಕಿ ವ್ಯವಸ್ಥೆ ಇಲ್ಲದಿರುವುದು, ಮಕ್ಕಳಿಗೆ ಒಳಾಂಗಣ ಮತ್ತು ಹೊರಾಂಗಣ ಮೈದಾನದಲ್ಲಿ ಆಟವಾಡಲು ಸೂಕ್ತ ಸ್ಥಳದ ಅಭಾವ ಕಂಡುಬಂದಿದೆ. ಕೆಲವೊಂದು ಅಂಗನವಾಡಿಗಳಲ್ಲಿ ಉತ್ತಮ ಅಡುಗೆ ಕೋಣೆ ಇದ್ದು, ಶುಚಿತ್ವಕ್ಕೆ ಒತ್ತು ನೀಡಿರುವುದು, ಅಂಗನವಾಡಿ ವ್ಯಾಪ್ತಿಯ ಗರ್ಭಿಣಿಯರು, ಬಾಣಂತಿಯರು, ಮಕ್ಕಳಿಗೆ ಸಮರ್ಪಕವಾಗಿ ಪೌಷ್ಟಿಕ ಆಹಾರ ಪೂರೈಕೆ ಮಾಡುವುದು ಕಂಡುಬಂದಿದೆ.

ಅಪೌಷ್ಟಿಕತೆ ನಿವಾರಣಾ ರಾಜ್ಯ ಸಲಹಾ ಸಮಿತಿ ಅಧ್ಯಕ್ಷ ವೇಣುಗೋಪಾಲಗೌಡ ನಿರ್ದೇಶನದಂತೆ ಇತ್ತೀಚೆಗೆ ಮಡಿಕೇರಿ ಸ್ಟೋನ್ ಹಿಲ್, ತ್ಯಾಗರಾಜ ಕಾಲೋನಿ, ಹಿಲ್ ರಸ್ತೆ, ಕಡಗದಾಳು, ಮಾದಾಪುರ, ಕೊಳತ್ತೋಡು ಸೇರಿದಂತೆ ವಿವಿಧ ಅಂಗನವಾಡಿಗಳಿಗೆ ಭೇಟಿ ನೀಡಿ, ವೀಕ್ಷಿಸಲಾಗಿದೆ ಎಂದು ಶುಭ ತಿಳಿಸಿದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ

ಮಡಿಕೇರಿ: ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಗೆ ಆಯೋಜಕರು ನಗರಸಭೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಅಗತ್ಯ ಸ್ಥಳ, ಪೆಂಡಾಲ್, ವಿದ್ಯುತ್ ಸಂಪರ್ಕ ಮುಂತಾದ ಕ್ರಮಗಳ ಬಗ್ಗೆ ಅನುಮತಿ ಪಡೆಯಬೇಕು. ರಾಸಾಯನಿಕ ಮೂರ್ತಿಗಳನ್ನು ಪ್ರತಿಷ್ಠಾಪಿಸಬಾರದು, ಪರಿಸರ ಸ್ನೇಹಿ ಮಣ್ಣಿನ ಮೂರ್ತಿಗಳನ್ನು ಬಳಸ ಬೇಕು. ಇದಕ್ಕೆ ನಗರಸಭೆಯಿಂದ ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಇಲ್ಲವಾದಲ್ಲಿ ಜಲ ಮಾಲಿನ್ಯ ನಿಯಂತ್ರಣ ಮಂಡಳಿ ಕಾಯ್ದೆಯಡಿ 10 ಸಾವಿರ ರೂ. ದಂಡ ವಿಧಿಸಲಾಗುವುದು.

ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಪ್ರತಿಷ್ಠಾಪಿಸಿ ಕಾರ್ಯಕ್ರಮ ಆಯೋಜಿಸಬೇಕು. ಗಣಪತಿ ಮೂರ್ತಿಗಳ ವಿಸರ್ಜನೆಗೆ ಓಂಕಾರೇಶ್ವರ ದೇವಸ್ಥಾನ ಮೂರ್ತಿಗಳನ್ನು ವಿಸರ್ಜಿಸಬೇಕು ಎಂದು ನಗರಸಭೆ ಪೌರಾಯುಕ್ತ ವಿಜಯ್ ತಿಳಿಸಿದ್ದಾರೆ.

ಸೆ.8, ಮೈಸೂರಲ್ಲಿ ಸಂತೋಷ ಕೂಟ

ಮಡಿಕೇರಿ, ಆ.28– 'ಕೈಲ್ ಪೊಳ್ದ್' ಹಬ್ಬದ ಪ್ರಯುಕ್ತ ಸೆ.8ರಂದು ಮೈಸೂರಿನ ವಿಜಯನಗರದ ಕೊಡವ ಸಮಾಜದಲ್ಲಿ ಸಂತೋಷ ಕೂಟ ಆಯೋಜಿಸಲಾಗಿದೆ. ಅಂದು ಬೆಳಗ್ಗೆ 10 ಗಂಟೆಗೆ ನಡೆಯುವ ಕಾರ್ಯಕ್ರಮದಲ್ಲಿ ಆಯುಧ ಪೂಜೆ, ಸಭೆ ಸೇರಿದಂತೆ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಗುವುದು. ಪ್ರೌಢಶಾಲೆ, ಎಸ್‌ಎಸ್‌ಎಲ್‌ಸಿ, ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ, ವೈದ್ಯಕೀಯ, ತಾಂತ್ರಿಕ ಶಿಕ್ಷಣ ಸೇರಿದಂತೆ ಶೈಕ್ಷಣಿಕ ಕ್ಷೇತ್ರದಲ್ಲಿ ಹೆಚ್ಚು ಅಂಕ ಪಡೆದ ಸಮಾಜದ ಸದಸ್ಯರ ಮಕ್ಕಳಿಗೆ ವಿದ್ಯಾರ್ಥಿ ವೇತನ ನೀಡಲಾಗುವುದು. ಇದೇ ವೇಳೆ ವಿವಿಧ ಆಟೋಟ ಸ್ಪರ್ಧೆ, ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಲಿದೆ.

ಗೋಪಾಲಸ್ವಾಮಿ ದೇಗುಲದ ಪ್ರಸಾದ ತಿಂದ 27 ಜನರಿಗೆ ವಾಂತಿ, ಭೇದಿ



ಪ್ರಸಾದ ತಿಂದು ವಾಂತಿ, ಬೇದಿ ಕಾಣಿಸಿಕೊಂಡವರು ಕೊಳ್ಳೇಗಾಲ ಆಸ್ಪತ್ರೆಯಲ್ಲಿ ದಾಖಲಾಗಿರುವುದು.

ಕೊಳ್ಳೇಗಾಲ,ಆ.28–ತಾಲೂಕಿನ ಪಾಳ್ಯ ಗ್ರಾಮದ ಗೋಪಾಲಸ್ವಾಮಿ ದೇಗುಲದಲ್ಲಿ ಮಂಗಳವಾರ ತಡರಾತ್ರಿ ತಯಾರಿಸಿದ್ದ ಪ್ರಸಾದವನ್ನು ಬುಧವಾರ ಬೆಳಗ್ಗೆ ಸೇವಿಸಿದ್ದ 27 ಜನ ವಾಂತಿ, ಭೇದಿಯಿಂದ ಆಸ್ಪತ್ರೆಗೆ ದಾಖಲಾಗಿರುವ ಘಟನೆ ಜರುಗಿದೆ.

ಮಂಗಳವಾರ ರಾತ್ರಿ ಗೋಪಾಲಸ್ವಾಮಿ ದೇಗುಲದಲ್ಲಿ ಕೃಷ್ಣ ಜನ್ಮಾಷ್ಟಮಿ ಹಿನ್ನೆಲೆಯಲ್ಲಿ ವಿಶೇಷ ಪೂಜೆ ನಡೆಯಿತು. ನಂತರ ಮೊದಲು ಪ್ರಸಾದವಾಗಿ ಬಾತ್ ಅನ್ನು ಭಕ್ತರಿಗೆ ನೀಡಲಾಗಿತ್ತು. ತಡರಾತ್ರಿ ಪುಳಿಯೊಗ್ಗರೆ ಮತ್ತು ಪಂಚಾಮೃತ ತಯಾರಿಸಲಾಗಿತ್ತು. ಆದರೆ, ಗ್ರಾಮದ ಸಿದ್ದಮ್ಮ, ಪುಣ್ಯವತಿ, ಲತಾ, ದೇವಿ, ಜ್ಯೋತಿ, ಪುಟ್ಟಮ್ಮ, ಸಿದ್ದಾರ್ಥ, ಗೋವಿಂದರಾಜು, ಸಿದ್ದಪ್ಪಾಜಿ ಸೇರಿದಂತೆ ಕೆಲ ಭಕ್ತರು ಈ ಪ್ರಸಾದವನ್ನು ಬುಧವಾರ ಬೆಳ್ಗಗೆ ಸೇವಿಸಿದ್ದಾರೆ. ಇವರಿಗೆ ಮಧ್ಯಾಹ್ನ ವಾಂತಿ, ಭೇದಿ ಕಾಣಿಸಿಕೊಂಡಿದೆ. ತಕ್ಷಣ ಇವರಿಗೆ ಪಾಳ್ಯ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಯಿತು.

ಬಳಿಕ ಕೊಳ್ಳೇಗಾಲ ಸಾರ್ವಜನಿಕ ಆಸ್ಪತ್ರೆಗೆ 15ಕ್ಕೂ ಹೆಚ್ಚು ಹಾಗೂ ಪಾಳ್ಯ ಆರೋಗ್ಯ ಕೇಂದ್ರಕ್ಕೆ 10 ಹೆಚ್ಚು ಜನರನ್ನು ದಾಖಲಿಸಲಾಗಿದೆ. ಡಿವೈಎಸ್ಪಿ ಧರ್ಮೇಂದ್ರ, ಸರ್ಕಲ್ ಇನ್ಸ್‌ಪೆಕ್ಟರ್ ಶಿವಮಾದಯ್ಯ, ಗ್ರಾಮಾಂತರ ಠಾಣೆ ಸಬ್ ಇನ್ಸ್‌ಪೆಕ್ಟರ್ ಸುಪ್ರೀತ್, ಪಟ್ಟಣ ಠಾಣೆ ವರ್ಷಾ ಆಸ್ಪತ್ರೆಗೆ ಭೇಟಿ ನೀಡಿ, ಆರೋಗ್ಯ ವಿಚಾರಿಸಿದರು.

ಸಿಎಂ ರೇಸ್‌ನಲ್ಲಿ ಡಜನ್‌ಗಟ್ಟಲೆ ಕೈ ನಾಯಕರು ಲಾಬಿ

- **ಸಿದ್ದರಾಮಯ್ಯ ರಾಜೀನಾಮೆ ಬಳಿಕ ಕಾಂಗ್ರೆಸ್ ಮನೆಯೊಂದು 12 ಬಾಗಿಲು**
- **ಚಾಮರಾಜನಗರದಲ್ಲಿ ಮಾಜಿ ಸಂಸದ ಮುನಿಸ್ವಾಮಿ ವ್ಯಂಗ್ಯ**



ಚಾಮರಾಜನಗರ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಸದಸ್ಯತ್ವ ಅಭಿಯಾನದ ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಮಾಜಿ ಸಂಸದ ಮುನಿಸ್ವಾಮಿ ಮಾತನಾಡಿದರು.

ಚಾಮರಾಜನಗರ, ಆ.28–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ನೀಡಿರುವ ಪ್ರಾಸಿಕ್ಯೂಷನ್‌ಗೆ ಹೈಕೋರ್ಟ್‌ನಲ್ಲಿ ಗುರುವಾರ (ಆ.29ರ) ಅನುಮತಿ ದೊರೆಯಲಿದ್ದು, ಸಿದ್ದರಾಮಯ್ಯ ರಾಜೀನಾಮೆ ಖಚಿತ ಎಂದು ಸ್ವತಃ ಕಾಂಗ್ರೆಸ್‌ನ ನಾಯಕರಿಗೆ ಗ್ಯಾರಂಟಿಯಾಗಿದೆ. ಹೀಗಾಗಿ ಡಜನ್‌ಗಟ್ಟಲೆ ಆ ಪಕ್ಷದ ನಾಯಕರು ಹೊಸ ಡ್ರೆಸ್ ಹೊಲಿಸಿಕೊಂಡು ಸಿಎಂ ರೇಸ್‌ನಲ್ಲಿದ್ದಾರೆ ಎಂದು ಮಾಜಿ ಸಂಸದ ಹಾಗೂ ಜಿಲ್ಲಾ ಬಿಜೆಪಿ ಉಸ್ತುವಾರಿ ಮುನಿಸ್ವಾಮಿ ವ್ಯಂಗ್ಯವಾಡಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಬಿಜೆಪಿ ಸದಸ್ಯತ್ವ ಅಭಿಯಾನದ ಜಿಲ್ಲಾ ಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ನ್ಯಾಯಾಲಯದ ತೀರ್ಪು ಹೊರಬರುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಲಿದ್ದಾರೆ. ನಂತರ ಕಾಂಗ್ರೆಸ್ ಮನೆಯೊಂದು ಮೂರು ಬಾಗಿಲಲ್ಲ, 12 ಬಾಗಿಲು ಆಗಲಿದೆ. ಕೇವಲ ಡಿ.ಕೆ.ಶಿವಕುಮಾರ್, ಮಲ್ಲಿಕಾರ್ಜುನ ಖರ್ಗೆ, ಜಿ.ಪರಮೇಶ್ವರ್ ಮಾತ್ರ ಸಿಎಂ ರೇಸ್‌ನಲ್ಲಿ ಇಲ್ಲ. ಇವರೊಂದಿಗೆ ಪ್ರಿಯಾಂಕ ಖರ್ಗೆ, ಸತೀಶ್ ಜಾರಕಿ ಹೊಳಿ, ಎಂ.ಬಿ.ಪಾಟೀಲ್, ಹೆಚ್.ಸಿ.ಮಹದೇವಪ್ಪ ಸೇರಿದಂತೆ ಡಜನ್‌ಗಟ್ಟಲೆ ನಾಯಕರು ಸಿಎಂ ರೇಸ್‌ನಲ್ಲಿದ್ದಾರೆ ಎಂದರು.

ಯಾವ ಸಂದರ್ಭದಲಾದರೂ ವಿಧಾನ ಸಭೆ ಚುನಾವಣೆ ಬರಬಹುದು. ಆದ್ದರಿಂದ ಬಿಜೆಪಿ ಕಾರ್ಯಕರ್ತರು ಜಾಗೃತರಾಗಿ ಸಂಘಟಿತರಾಗಬೇಕು. ಸದಸ್ಯತ್ವ ಅಭಿಯಾನವನ್ನು ಯಶಸ್ವಿಗೊಳಿಸಿ, ಕಾಂಗ್ರೆಸ್ ಜನ ವಿರೋಧಿ ನೀತಿ ವಿರುದ್ಧ ಹೋರಾಟ ನಿರಂತರವಾಗಿರಬೇಕು ಎಂದು ತಿಳಿಸಿದರು.

ದಲಿತರ ಪರ, ಹಿಂದುಳಿದ ವರ್ಗಗಳ ಮೇರು ನಾಯಕ ಎಂದು ಹೇಳಿಕೊಂಡು ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ಆ ವರ್ಗಗಳಿಗೆ ಮೀಸಲಿಟ್ಟಿದ್ದ ಹಣವನ್ನು ನುಂಗಿ ಹಾಕಿದ್ದಾರೆ. ಎಸ್‌ಇಪಿ, ಟಿಎಸ್‌ಪಿ ಯೋಜನೆಯ 27 ಸಾವಿರ ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗೆ ಬಳಸಿ, ಪರಿಶಿಷ್ಟ ಜಾತಿ, ಪಂಗಡ ಹಾಗೂ ಬಡವರಿಗೆ ದೊರೆಯಬೇಕಾಗಿದ್ದ ಸವಲತ್ತುಗಳಿಗೆ ಕತ್ತರಿ ಹಾಕಿದ್ದಾರೆ. ಇಂತಹವರಿಗೆ ಕಾಂಗ್ರೆಸ್‌ನ ಬಿಸ್ಕೆಟ್ ದಲಿತ ನಾಯಕರು ಅವರ ಪರವಾಗಿ ನಿಂತು ಆ ಸಮುದಾಯಕ್ಕೆ ಅನ್ಯಾಯ ಮಾಡುತ್ತಿದ್ದಾರೆ. ಆದರೂ ಸಿಎಂ ವಿರುದ್ಧ ದಲಿತರು ಜಾಗೃತರಾಗಿ ಪ್ರತಿಭಟನೆ ಮಾಡಿದ್ದಾರೆ. ಇಂತಹವರು ಅಧಿಕಾರದಲ್ಲಿ ಮುಂದುವರಿಯಬೇಕಾ ಎಂದು ಖಾರವಾಗಿ ಪ್ರಶ್ನಿಸಿದರು.

ಬಿಜೆಪಿ ಜಿಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ಪಕ್ಷವನ್ನು ಸದೃಢವಾಗಿ ಸಂಘಟಿಸಲು ಸದಸ್ಯತ್ವ ಅಭಿಯಾನ ಉತ್ತಮ ವೇದಿಕೆಯಾಗಿದೆ. ಸೆ.1 ರಂದು ಪ್ರಧಾನಿ ನರೇಂದ್ರ ಮೋದಿ ಬಿಜೆಪಿ ಸದಸ್ಯತ್ವ ಪಡೆದುಕೊಳ್ಳುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ನಂತರ ಸೆ.2ರಿಂದ ದೇಶಾದ್ಯಂತ ಅಭಿಯಾನ ಆರಂಭವಾಗಲಿದೆ. ಮಿಸ್ಡ್ ಕಾಲ್ ಮಾಡಿ, ಸದಸ್ಯತ್ವ ಪಡೆಯಬೇಕು. ಕಾರ್ಯಕರ್ತರು ಸಕ್ರಿಯ ಸದಸ್ಯರಾಗುವ ಮೂಲಕ ಹೊಸ ಮತದಾರರನ್ನು ಪಕ್ಷಕ್ಕೆ ನೋಂದಣಿ ಮಾಡಿಸಬೇಕು. ಪ್ರತಿ ಬೂತ್‌ನಲ್ಲಿ ಕನಿಷ್ಠ 300 ಸದಸ್ಯರನ್ನು ನೋಂದಣಿ ಮಾಡಬೇಕು. ಆ ಮೂಲಕ ಜಿಲ್ಲೆಯಲ್ಲಿ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸಲು ಮುಂದಾಗಬೇಕು ಎಂದರು.

ಅಭಿಯಾನ ಸಂಚಾಲಕ ಹೊನ್ನೂರು ಮಹದೇವಸ್ವಾಮಿ, ಸದಸ್ಯತ್ವ ಕುರಿತು ಮಾಹಿತಿ ನೀಡಿದರು. ಕಾರ್ಯಾಗಾರದಲ್ಲಿ ರಾಜ್ಯ ಬಿಜೆಪಿ ಉಪಾಧ್ಯಕ್ಷ ಎನ್.ಮಹೇಶ್, ಮಾಜಿ ಶಾಸಕ ಎಸ್.ಬಾಲರಾಜು, ವಿಧಾನ ಪರಿಷತ್ ಮಾಜಿ ಸದಸ್ಯ ಪ್ರೊ.ಕೆ.ಆರ್.ಮಲ್ಲಿಕಾರ್ಜುನಪ್ಪ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಒಬಿಸಿ ರಾಷ್ಟ್ರೀಯ ಕಾರ್ಯಕಾರಿ ಸದಸ್ಯ ನೂರೊಂದುಶೆಟ್ಟಿ, ಮಾಜಿ ಅಧ್ಯಕ್ಷರಾದ ನಾರಾಯಣಪ್ರಸಾದ್, ಆರ್.ಸುಂದರ್, ಚಾಮುಲ್ ಅಧ್ಯಕ್ಷ ವೈ.ಸಿ.ನಾಗೇಂದ್ರ, ಡಾ. ಎ.ಆರ್.ಬಾಬು, ಪ್ರಧಾನ ಕಾರ್ಯದರ್ಶಿ ಪಿ.ವೃಷಬೇಂದ್ರಪ್ಪ, ಪ್ರಕಾಶ್ ಇದ್ದರು.

ಮುದುಕು ಮಾರಮ್ಮ ದೇವಸ್ಥಾನದಲ್ಲಿ ಪೂಜೆ



ಮುದುಕು ಮಾರಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು.

ಚಾಮರಾಜನಗರ, ಆ.28–ನಗರದ ಗ್ರಾಮ ದೇವತೆ ಶ್ರೀ ಮುದುಕು ಮಾರಮ್ಮ ದೇವಸ್ಥಾನದಲ್ಲಿ ಬುಧವಾರ ವಿಶೇಷ ಪೂಜಾ ಕಾರ್ಯಕ್ರಮ ನಡೆಯಿತು.

ಶ್ರಾವಣ ಕೃಷ್ಣ ದಶಮಿ ನೂತನ ರಜತ ಪ್ರಭಾವಳಿ ಧಾರಣ ಪ್ರಯುಕ್ತ ದೇವಸ್ಥಾನದಲ್ಲಿ ಬೆಳಗ್ಗೆ ಗಣಪತಿ ಪೂಜಾ, ಪುಣ್ಯಾಹ, ದೇವ ನಾಂದಿ, ಪಂಚಗವ್ಯ, ಕಲಶ ಸ್ಥಾಪನೆ, ಗಣಪತಿ ಹೋಮ, ನವಗ್ರಹ, ದುರ್ಗಾ ಹೋಮ ಹಾಗೂ ದೇವಿಗೆ ರುದ್ರಾಭಿಷೇಕ ನೆರವೇರಿಸಲಾಯಿತು. ನಂತರ ಮಹಾಪೂರ್ಣಾಹುತಿಯೊಂದಿಗೆ ಸಂಪನ್ನಗೊಳಿಸಲಾಯಿತು. ಇದೇ ವೇಳೆ ಪ್ರಸಾದ ವಿತರಿಸಲಾಯಿತು.

ನಾರಾಯಣ ಗುರು ಭಾವಚಿತ್ರ ಮೆರವಣಿಗೆ...



ಚಾಮರಾಜನಗರ ಜಿಲ್ಲಾಡಳಿತ, ಜಿಪಂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಅಂಗವಾಗಿ ಅವರ ಭಾವಚಿತ್ರ ಮೆರವಣಿಗೆಗೆ ತೀರ್ಥಹಳ್ಳಿ ತಾಲೂಕಿನ ನಿಟ್ಟೂರು ಮಹಾಸಂಸ್ಥಾನ ಮಠದ ಶ್ರೀ ರೇಣುಕಾನಂದ ಸ್ವಾಮೀಜಿ ಹಾಗೂ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಚಾಲನೆ ನೀಡಿದರು. ಸಹಾಯಕ ಪ್ರಾಧ್ಯಾಪಕ ಡಾ.ಕೃಷ್ಣಮೂರ್ತಿ ಚಮರಂ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ನಗರಸಭೆ ಸದಸ್ಯೆ ಮಮತಾ ಬಾಲಸುಬ್ರಮಣ್ಯಂ, ಉದಯ್‌ಕುಮಾರ್ ಇದ್ದರು.

ಕರ್ನಾಟಕ ಸಂಭ್ರಮ ರಥಯಾತ್ರೆಗೆ ಅದ್ದೂರಿ ಸ್ವಾಗತ



ಚಾಮರಾಜನಗರಕ್ಕೆ ಆಗಮಿಸಿದ ಕರ್ನಾಟಕ ಸಂಭ್ರಮ ಜ್ಯೋತಿ ರಥಯಾತ್ರೆಯನ್ನು ಎಡಿಸಿ ಗೀತಾ ಹುಡೇದ ಕನ್ನಡದ ಬಾವುಟ ಹಿಡಿದು ಸ್ವಾಗತಿಸಿದರು.

ಚಾಮರಾಜನಗರ, ಆ.28–ಮೈಸೂರು ರಾಜ್ಯ ಕರ್ನಾಟಕ ಎಂದು ಮರು ನಾಮಕರಣಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕರ್ನಾಟಕ ಸಂಭ್ರಮ 50ರ ಜ್ಯೋತಿ ರಥಯಾತ್ರೆ ಬುಧವಾರ ನಗರಕ್ಕೆ ಆಗಮಿಸಿದ್ದು, ಈ ವೇಳೆ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ನಗರದ ಸಂತೇಮರಹಳ್ಳಿ ವೃತ್ತದ ಬಳಿ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಕನ್ನಡದ ಬಾವುಟ ಹಿಡಿದು ಜ್ಯೋತಿ ರಥ ಯಾತ್ರೆಗೆ ಸಂಭ್ರಮದಿಂದ ಸ್ವಾಗತಿಸಿದರು. ಬಳಿಕ ಚಾಮರಾಜೇಶ್ವರ ದೇವಾಲಯ ಬಳಿ ರಥಯಾತ್ರೆಯನ್ನು ತಹಸೀಲ್ದಾರ್ ಗಿರಿಜಾ, ಕನ್ನಡಪರ ಸಂಘಟನೆಗಳ ಮುಖಂಡರಾದ ಚಾ.ರಂ. ಶ್ರೀನಿವಾಸ ಗೌಡ, ಪಣ್ಯದಹುಂಡಿ ರಾಜು, ಕಸಾಪ ತಾಲೂಕು ಅಧ್ಯಕ್ಷ ಸುರೇಶ್ ಋಗ್ವೇದಿ ಹಾಗೂ ಅಧಿಕಾರಿಗಳು ಬರ ಮಾಡಿಕೊಂಡರು. ನಂತರ ಡೊಳ್ಳು ಕುಣಿತ, ವೀರಗಾಸೆ, ನಾದಸ್ವರ ಕಲಾತಂಡಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ರಥಯಾತ್ರೆ ಸಂಚರಿಸಿತು.

ತಹಸೀಲ್ದಾರ್ ಗಿರಿಜಾ ಹಾಗೂ ತಾಪಂ ಇಓ ಪೂರ್ಣಿಮಾ, ಸಂತೇಮರಹಳ್ಳಿ ಗ್ರಾಪಂ ಅಧ್ಯಕ್ಷೆ ರಾಜಮ್ಮ, ವಿವಿಧ ಕನ್ನಡಪರ ಸಂಘಟನೆ ಮುಖಂಡರು, ಗ್ರಾಮಸ್ಥರು ಮೆಲ್ಲಹಳ್ಳಿ ಗೇಟ್ ಬಳಿ ರಥಯಾತ್ರೆಯನ್ನು ಸಂಭ್ರಮದಿಂದ ಬರ ಮಾಡಿಕೊಂಡರು. ಅಲ್ಲಿಂದ ಸಂತೇಮರಹಳ್ಳಿಗೆ ಆಗಮಿಸುತ್ತಿದ್ದಂತೆ ಶಾಲಾ–ಕಾಲೇಜು ವಿದ್ಯಾರ್ಥಿಗಳು ವಾದನದೊಂದಿಗೆ ಸ್ವಾಗತಿಸಿದರು. ಮಹಿಳೆಯರು ಪೂರ್ಣಕುಂಭದೊಂದಿಗೆ ಸಾಂಪ್ರದಾಯಿಕವಾಗಿ ಸ್ವಾಗತಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಶೈಲಕುಮಾರ್, ಕನ್ನಡಪರ ಸಂಘಟನೆಗಳ ಮುಖಂಡರಾದ ನಾಗೇಶ್, ಲೋಕೇಶ್, ವಿವಿಯಾನ್, ನಾಗರಾಜು ರಥದ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದರು. ಇದಕ್ಕೂ ಮೊದಲು ಯಳಂದೂರು ತಹಸೀಲ್ದಾರ್ ಜಯಪ್ರಕಾಶ್ ಮತ್ತು ಕನ್ನಡ ಸಂಘಟನೆ ಪ್ರತಿನಿಧಿಗಳು, ಅಧಿಕಾರಿಗಳು ರಥಯಾತ್ರೆಗೆ ಬೀಳ್ಕೊಟ್ಟರು.

ಆಟೋ ಪಲ್ಟಿ

8 ಕಾರ್ಮಿಕರಿಗೆ ಗಾಯ

ಕೊಳ್ಳೇಗಾಲ, ಆ.28–ನಾಯಿ ಅಡ್ಡ ಬಂದ ಪರಿಣಾಮ ಆಟೋ ಪಲ್ಟಿಯಾಗಿ 8 ಕೂಲಿ ಕಾರ್ಮಿಕರು ಸಣ್ಣಪುಟ್ಟ ಗಾಯಗಳೊಂದಿಗೆ ಅಪಾಯದಿಂದ ಪಾರಾಗಿರುವ ಘಟನೆ ತಾಲೂಕಿನ ಹಂಪಾಪುರ ಬಳಿ ಬುಧವಾರ ನಡೆದಿದೆ.

ಪಟ್ಟಣದ ಬಾಪುನಗರದ ಕೂಲಿ ಕಾರ್ಮಿಕರಾದ ಚಿನ್ನವೆಂಕಟಮ್ಮ, ಸುಧಾ, ನಿಂಗಮ್ಮ, ನೀಲಮ್ಮ, ಚಿಕ್ಕ ಅರಸಮ್ಮ, ಅಶ್ವಿನಿ, ವೆಂಕಟಮ್ಮ, ಬಾಲಕ ಪೃಥ್ವಿಗೆ ಗಾಯಗಳಾಗಿವೆ. ಇವರು ಹೊಸಮಾಲಂಗಿ ಬಳಿಯ ಜಮೀನೊಂದರಲ್ಲಿ ಭತ್ತದ ನಾಟಿ ಮುಗಿಸಿ, ಆಟೋದಲ್ಲಿ ಬಾಪುನಗರಕ್ಕೆ ಬರುತ್ತಿದ್ದರು. ಈ ವೇಳೆ ಹಂಪಾಪುರ ಬಳಿ ನಾಯಿ ಅಡ್ಡ ಬಂದಿದೆ. ಪರಿಣಾಮ ಚಾಲಕನ ನಿಯಂತ್ರಣ ತಪ್ಪಿ ಆಟೋ ಪಲ್ಟಿಯಾಗಿದೆ. ಇದರಿಂದ 8 ಜನರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಜಾತಿ ಗಣತಿ ಮಾಡದೆ ಒಳ ಮೀಸಲಾತಿ ಹಂಚಿಕೆ ಹೇಗೆ ಸಾಧ್ಯ?

ಕಾಂಗ್ರೆಸ್ ಮುಖಂಡ ಎನ್.ಭಾಸ್ಕರ್ ಪ್ರಶ್ನೆ

ಮೈಸೂರು, ಆ.28(ಬಿಎಲ್‌ಯು)– ಜಾತಿ ಗಣತಿ ಮಾಡದೆ ಒಳ ಮೀಸಲಾತಿಯನ್ನು ಹೇಗೆ ಹಂಚಿಕೆ ಮಾಡಬೇಕು ಎಂದು ಕರ್ನಾಟಕ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ಪ್ರಶ್ನಿಸಿದ್ದಾರೆ.

ಹಿರಿಯ ವಕೀಲ ಅರುಣ್ ಕುಮಾರ್ ನಿನ್ನೆ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ, ಒಳ ಮೀಸಲಾತಿ ಸಂಬಂಧ ನೀಡಿದ ಹೇಳಿಕೆಗೆ ಭಾಸ್ಕರ್ ಈ ಪ್ರತಿಕ್ರಿಯೆ ನೀಡಿದ್ದಾರೆ.

ಸಹೋದರರಂತೆ ಇರುವ ನಮ್ಮನ್ನು ಎಡ, ಬಲ ಎಂದು ಬಿಂಬಿಸಿ, ಜಾತಿಗಳ ನಡುವೆ ಭಿನ್ನಾಭಿಪ್ರಾಯ ಮೂಡಿಸಬೇಡಿ. ನಾವು ಒಳ ಮೀಸಲಾತಿಯ ವಿರೋಧಿಗಳಲ್ಲ. ಈ ಮೀಸಲಾತಿ 101 ಸಮುದಾಯಕ್ಕೆ ಸೇರಬೇಕು ಎಂಬುದೇ ನಮ್ಮ ಆಶಯ ಎಂದು ಸ್ಪಷ್ಟಪಡಿಸಿದ್ದಾರೆ.

ಬ್ಯಾಕ್ ಲಾಗ್ ಹುದ್ದೆ ಭರ್ತಿ ಸ್ಥಗಿತಗೊಳಿಸಬೇಕು ಎಂಬ ನಿಮ್ಮ ಆಗ್ರಹ ಸರಿಯಲ್ಲ ಎಂದು ಅರುಣ್‌ಕುಮಾರ್‌ಗೆ ತಿಳಿಸಿರುವ ಭಾಸ್ಕರ್, ಬ್ಯಾಕ್ ಲಾಕ್ ಹುದ್ದೆ ಬರೀ ಬಲಗೈ ಸಮುದಾಯಕ್ಕೆ ಸೇರುತ್ತದೆ ಎಂಬ ಅರ್ಥವೇ ಎಂದು ಪ್ರಶ್ನಿಸಿದ್ದಾರೆ.

ಸರ್ಕಾರ ಈ ಆಗ್ರಹಕ್ಕೆ ಸ್ಪಂದಿಸದೆ ಬ್ಯಾಕ್ ಲಾಕ್ ಹುದ್ದೆ ನೇಮಕಾತಿ ಮಾಡಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ನಗರದ ಮಾನಸಗಂಗೋತ್ರಿಯ ಡಾ.ಬಿ.ಆರ್.ಅಂಬೇಡ್ಕರ್ ವಿಸ್ತರಣಾ ಹಾಗೂ ಸಂಶೋಧನಾ ಕೇಂದ್ರ ಅಂಬೇಡ್ಕರ್ ಆಶಯದಂತೆ ಕೆಲಸ ಮಾಡುತ್ತಿದೆ. ಬೌದ್ಧಿಕ ಚರ್ಚೆ ಮಾಡುವುದು ವಿಶ್ವವಿದ್ಯಾನಿಲಯದ ಕರ್ತವ್ಯ. ಮೊನ್ನೆ ನಡೆದ ಕಾರ್ಯಾಗಾರದಲ್ಲಿ ಮೀಸಲಾತಿ ವರ್ಗೀಕರಣಕ್ಕೆ ವಿರೋಧವಿಲ್ಲ ಎಂಬುದನ್ನು ಸಂಪನ್ಮೂಲ ವ್ಯಕ್ತಿಗಳು ಸ್ಪಷ್ಟಪಡಿಸಿದ್ದಾರೆ. ಇದರಿಂದ ಸಂಶೋಧನಾ ಕೇಂದ್ರ ಅಂಬೇಡ್ಕರ್ ಪರಿಕಲ್ಪನೆಯಲ್ಲಿ ಮೀಸಲಾತಿ ನೆಲೆಯಲ್ಲಿ ಆರೋಗ್ಯಕರ ಚರ್ಚೆ ಮಾಡುವ ಸ್ವಾತಂತ್ರ್ಯ ಹೊಂದಿದೆ ಎಂದು ಭಾಸ್ಕರ್ ತಿಳಿಸಿದ್ದಾರೆ.

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಅಶೋಕಪುರಂ ಸರ್ಕಾರಿ ಶಾಲೆಯನ್ನು ಮಾದರಿ ಶಾಲೆ ಮಾಡುವೆ

ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ ಮಾಡಿದ ಶಾಸಕ ದರ್ಶನ್ ಧ್ರುವನಾರಾಯಣ್



ಮಾಜಿ ಸಂಸದ ಆರ್.ಧ್ರುವನಾರಾಯಣ್ ಹುಟ್ಟುಹಬ್ಬದ ಸ್ಮರಣಾರ್ಥ ಶಾಸಕ ದರ್ಶನ್ ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಿಸಿದರು.

ನಂಜನಗೂಡು, ಆ.28– ಸರ್ಕಾರಿ ಶಾಲೆಗಳಲ್ಲೂ ಸಹ ಖಾಸಗಿ ಶಾಲೆಗಳಂತೆ ಕಲಿಕಾ ವಾತಾವರಣ ನಿರ್ಮಿಸಬೇಕು ಎಂಬ ಮನೋಭಾವನೆಯಿಂದ ಅಶೋಕ ಪುರಂ ಬಡಾವಣೆಯ ಯುವಕ ಮಿತ್ರರು ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ ಮಾಡುತ್ತಿರುವುದು ಉತ್ತಮ ಬೆಳವಣಿಗೆ ಯಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಮೆಚ್ಚುಗೆ ವ್ಯಕ್ತಪಡಿಸಿದರು.

ನಗರದ ಅಶೋಕಪುರಂ ಬಡಾವಣೆ ಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಶೋಕ ಪುರಂ ಯುವಕರ ಸಂಘದವರು ಮಾಜಿ ಸಂಸದ ಆರ್.ಧ್ರುವ ನಾರಾಯಣ್ ಹುಟ್ಟು ಹಬ್ಬದ ಸ್ಮರಣಾರ್ಥವಾಗಿ ಏರ್ಪಡಿಸಿದ್ದ ಸಮವಸ್ತ್ರ ವಿತರಣೆ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಿಸಿ ಅವರು ಮಾತನಾಡಿದರು.

ನನ್ನ ತಂದೆ ಆರ್.ಧ್ರುವನಾರಾಯಣ್ ಈ ಭಾಗದಲ್ಲಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ, ಕೆಲಸ ಮಾಡುವ ಮೂಲಕ ಜನರ ಪ್ರೀತಿ ವಿಶ್ವಾಸಕ್ಕೆ ಪಾತ್ರರಾಗಿದ್ದರು. ನಾನು ಸಹ ಅವರ ಹಾದಿಯಲ್ಲಿ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿದ್ದೇನೆ, ನಗರದ ಅಶೋಕಪುರಂ ಬಡಾವಣೆಯ ಶಾಲೆಯನ್ನು ಅಭಿವೃದ್ಧಿ ಪಡಿಸುವ ಮೂಲಕ ಮಾದರಿ ಶಾಲೆಯನ್ನಾಗಿ ರೂಪಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತೇನೆ ಎಂದರು.

ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೂ ಖಾಸಗಿ ಶಿಕ್ಷಣ ಸಂಸ್ಥೆಗಳಂತೆ ಸೌಕರ್ಯ ಗಳು ದೊರಕಬೇಕು, ಆ ಮೂಲಕ ಉತ್ತಮ ಕಲಿಕಾ ವಾತಾವರಣ ನಿರ್ಮಿಸುವ ಮೂಲಕ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿ ಕೊಡಬೇಕು ಎಂಬ ಹಿತದೃಷ್ಟಿಯಿಂದ ಯುವಕ ಮಿತ್ರರು ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ ಮಾಡಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಪ್ರಥಮ ದರ್ಜೆ ಗುತ್ತಿಗೆದಾರರಾದ ಯು.ಎನ್.ಪದ್ಮನಾಭರಾವ್ ಮಾತನಾಡಿ, ಚಾಮರಾಜನಗರ ಲೋಕಸಭಾ ಕ್ಷೇತ್ರವು ಹಿಂದಿನಿಂದಲೂ ಸಹ ಉತ್ತಮ ರಾಜಕಾರಣಿಗಳನ್ನು ನೀಡುತ್ತಾ ಬಂದಿದೆ. ಅಂತೆಯೇ ದಿ. ವಿ.ಶ್ರೀನಿವಾಸ ಪ್ರಸಾದ್, ಹಾಗೂ ಆರ್.ಧ್ರುವನಾರಾಯಣ್ ಅವರು ಶ್ರೇಷ್ಠ ರಾಜಕಾರಣಿಗಳಾಗಿದ್ದರು. ಯಾವುದೇ ರಾಜಕಾರಣಿಯೂ ದ್ವೇಷ ರಾಜಕಾರಣದಲ್ಲಿ ತೊಡಗಬಾರದು ಅದಕ್ಕೆ ನಿದರ್ಶನವೆಂಬಂತೆ ಆರ್.ಧ್ರುವ ನಾರಾಯಣ್ ಅವರು ಅಜಾತಶತ್ರು ಎನಿಸಿಕೊಂಡು ದಿನದ 24 ಗಂಟೆಯಲ್ಲೂ ಸಹ ಕಾಲಿಗೆ ಚಕ್ರ ಕಟ್ಟಿಕೊಂಡು ಕ್ಷೇತ್ರದ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ಭೇಟಿ ನೀಡಿ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸುತ್ತಿದ್ದರು. ಅವರ ವ್ಯಕ್ತಿತ್ವ ಎಲ್ಲಾ ರಾಜಕಾರಣಿಗಳಿಗೂ ಪ್ರೇರಣೆಯಂತಿದ್ದರು. ಶಾಸಕ ದರ್ಶನ್ ಧ್ರುವನಾರಾಯಣ್ ಸಹ ಎಲ್ಲರ ಜೊತೆ ಪ್ರೀತಿ ವಿಶ್ವಾಸದಿಂದ ಬೆರೆತು ತಂದೆಯಂತೆಯೇ ಉತ್ತಮ ರಾಜಕಾರಣಿ ಯಾಗಿ ರೂಪುಗೊಳ್ಳುತ್ತಿರುವುದು ಸಂತಸ ತಂದಿದೆ ಎಂದರು.

ಇದೇ ಸಂದರ್ಭದಲ್ಲಿ ಮುಖಂಡರಾದ ಚಂದ್ರು, ಸಿದ್ದಪ್ಪ, ಪ್ರಕಾಶ್, ಚೆನ್ನಪ್ಪ, ಲೋಕೇಶ, ಜಗದೀಶ, ದೇವು, ಕುಮಾರ, ಸ್ವಾಮಿ, ದೇವರಾಜು, ರಾಜೇಶ್, ಪುಟ್ಟಸ್ವಾಮಿ, ರವಿ, ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಧರ್ಮ ರತ್ನಾಕರ, ಮುದ್ದು ಮಾದೇಗೌಡ, ಎಸ್.ಡಿ.ಎಂ.ಸಿ ಅಧ್ಯಕ್ಷೆ ರಾಧಾ ಸೇರಿದಂತೆ ಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಇದ್ದರು.

ಕಾವೇರಿಪುರ ಕೃಷಿ ಪತ್ತಿನ ಸಹಕಾರ ಸಂಘಕ್ಕೆ 4.60 ಲಕ್ಷ ರೂ. ನಿವ್ವಳ ಲಾಭ



ತಿ.ನರಸೀಪುರ ತಾಲೂಕು ಕಾವೇರಿಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಹೆಳವರಹುಂಡಿ ಗ್ರಾಮದ ಸಂಘದ ಕಚೇರಿಯಲ್ಲಿ ನಡೆಯಿತು.

ತಿ.ನರಸೀಪುರ, ಆ.28– ಸಂಘದ ಸರ್ವ ಸದಸ್ಯರ ಸಹಕಾರದಿಂದ ಸಂಘವು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, 2023–24 ನೇ ಸಾಲಿಗೆ 4.60 ಲಕ್ಷ ರೂ.ಗಳ ನಿವ್ವಳ ಲಾಭ ಗಳಿಸಿ ಯಶಸ್ವಿಯಾಗಿ ಮುನ್ನೆಡೆದಿದೆ ಎಂದು ಕಾವೇರಿಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಎಂ. ಲೋಕೇಶ್ ಹೇಳಿದರು.

ಕಾವೇರಿಪುರ ಗ್ರಾಮದಲ್ಲಿರುವ ಸಂಘದ ಕಚೇರಿಯಲ್ಲಿ ಏರ್ಪಡಿಸಲಾಗಿದ್ದ ಸಂಘದ 2023–24 ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂಘದಿಂದ ಸಾಲ ಪಡೆದ ರೈತರು ಸುಸ್ತಿದಾರರಾಗದೇ ನಿಗದಿತ ಸಮಯಕ್ಕೆ ಸಾಲ ಮರುಪಾವತಿ ಮಾಡಿದಲ್ಲಿ ಸಂಘವು ಮತ್ತಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ.ಹಾಗಾಗಿ ಯಾರೂ ಕೂಡ ಸಾಲ ಬಾಕಿ ಉಳಿಸಿಕೊಳ್ಳದೇ ಸಂಘದ ಬೆಳವಣಿಗೆಗೆ ಸಹಕಾರ ನೀಡಿ ಎಂದು ಮನವಿ ಮಾಡಿದರು.

ಸಂಘದ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಿ.ಹರೀಶ್‌ಕುಮಾರ್ ಸಂಘದ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿ ಮಾತನಾಡಿ ಕೆಸಿಸಿ ಚಾಲ್ತಿ ಸಾಲ 2023/24ನೇ ಸಾಲಿನಲ್ಲಿ ಸದಸ್ಯರ ಸಂಖ್ಯೆ ಒಟ್ಟು 268, ಒಟ್ಟು 4,52,11000 ರೂ. ಹಾಗೂ ಡೈರಿ ಸಾಲ 2023/24ನೇ ಸಾಲಿಗೆ ಒಟ್ಟು 15 ಸದಸ್ಯರಿಗೆ ಒಟ್ಟು 3081275 ರೂ. ಸಾಲ ನೀಡಿದ್ದು ಮತ್ತು ನಮ್ಮ ರೈತರು ಹೆಚ್ಚಿನ ರೀತಿಯಲ್ಲಿ ಸ್ವಾವಲಂಬಿಯಾಗಲು ಹೈನುಗಾರಿಕೆಯಿಂದ ಅಭಿವೃದ್ಧಿ ಹೊಂದಲು 126 ರೈತರಿಗೆ 35,28,000 ರೂ. ಸಾಲವನ್ನು ನೀಡಿದ್ದೇವೆ ಎಂದರು ಮತ್ತು ಎಸ್‌ಹೆಚ್‌ಜಿ ಸುಸ್ತಿ ಸಾಲ. ನಾಲ್ವರಿಗೆ 542315 ರೂ. ನೀಡಿ ಹೆಚ್ಚಿನ ಲಾಭಾಂಶ ಬರುವಂತೆ ಮಾಡಿದ್ದೇವೆ ಎಂದು ಸಭೆಯಲ್ಲಿ ಮಾಹಿತಿ ನೀಡಿದರು

ಉಪಾಧ್ಯಕ್ಷ ಹೊಳೇಸಾಲು ಶಾಂತರಾಜ್, ನಿರ್ದೇಶಕರುಗಳಾದ ಕೆ.ಎಂ. ನಾಗರಾಜ ಮೂರ್ತಿ, ಕಪ್ಪಣ್ಣ, ಚಂದ್ರಶೇಖರ, ಮಂಟೇಸ್ವಾಮಿ, ಲಿಂಗರಾಜು, ಶ್ರೀಮತಿ ವಿನೋದ ದೊರೆಸ್ವಾಮಿ, ಮೇದಿನಿ ಚಂದ್ರಶೇಖರ, ಬಿ. ಜಯಮಹೇಶ್ವರ, ಕೆ.ಪಿ.ಗೋವಿಂದರಾಜು, ಗ್ರಾಮಪಂಚಾಯಿತಿ ಸದಸ್ಯರು ಗಂಗಾಧರ ಸ್ವಾಮಿ, ದುಂಡ ಮಾದಯ್ಯ, ಮುಖಂಡರಾದ ಮಹೇಂದ್ರ, ಕಾಳಿಹುಂಡಿ ಪುಟ್ಟಣ್ಣ, ಸತೀಶ್ ಇತರರು ಹಾಜರಿದ್ದರು.

ತೋಟಗಾರಿಕೆ ಸಹಾಯಕ ನಿರ್ದೇಶಕರಾಗಿ ನೇತ್ರಾವತಿ ಅಧಿಕಾರ ಸ್ವೀಕಾರ



ಹೆಚ್.ಡಿ.ಕೋಟೆ, ಆ.28– ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾಗಿ ತಾಲೂಕಿನ ಹೆಚ್.ಮಟಕೆರೆ ಗ್ರಾಮದ ನಿವಾಸಿ ನೇತ್ರಾವತಿ ಅಧಿಕಾರ ವಹಿಸಿಕೊಂಡಿದ್ದಾರೆ. ಪಟ್ಟಣದ ತೋಟಗಾರಿಕೆ ಇಲಾಖೆಯ ಕಚೇರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಶ್ರೀಧರಮೂರ್ತಿಯವರು ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧಿಕಾರಿಯಾಗಿ ವರ್ಗಾವಣೆಗೊಂಡಿದ್ದರು. ತೆರವಾಗಿದ್ದ ಈ ಸ್ಥಾನಕ್ಕೆ ಹುಣಸೂರಿನಲ್ಲಿ ಕೆಲಸ ನಿರ್ವಹಿಸುತ್ತಿದ್ದ ನೇತ್ರಾವತಿಯ ವರು ವರ್ಗಾವಣೆಗೊಂಡು ಅಧಿಕಾರ ವಹಿಸಿಕೊಂಡಿದ್ದಾರೆ.

ಬೈಕಿಗೆ ಅಡ್ಡ ಬಂದ ನಾಯಿ: ಆಯತಪ್ಪಿ ಬಿದ್ದು ಮಹಿಳೆ ಸಾವು



ದೀಪು

ತಿ.ನರಸೀಪುರ, ಆ.28– ಬೈಕಿಗೆ ಅಡ್ಡ ಬಂದ ನಾಯಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಯತ್ನಿಸಿದ ವೇಳೆ ನಿಯಂತ್ರಣ ತಪ್ಪಿ ಬಿದ್ದ ಪರಿಣಾಮ ಮಹಿಳೆಯೊಬ್ಬರು ಸಾವನ್ನಪ್ಪಿ, ಬೈಕ್ ಸವಾರ ಗಾಯಗೊಂಡಿರುವ ಘಟನೆ ತಾಲೂಕಿನ ಕೆಂಪಯ್ಯನಹುಂಡಿ ಗ್ರಾಮದ ಬಳಿ ಸಂಭವಿಸಿದೆ.

ತಾಲೂಕಿನ ಆಲಗೂಡು ಗ್ರಾಮದ ನಿವಾಸಿ ದೀಪು ಎಂಬುವರೇ ಅಪಘಾತದಲ್ಲಿ ಮೃತಪಟ್ಟ ಮಹಿಳೆ. ಮೈಸೂರಿನ ಕ್ಯಾತಮಾರನಹಳ್ಳಿಯಲ್ಲಿದ್ದ ದೀಪು ಅವರನ್ನು ಅದೇ ಬಡಾವಣೆಯ ನಿವಾಸಿ ಗೋಪಾಲಕೃಷ್ಣ ಎಂಬುವರು ತಮ್ಮ ಬೈಕಿನಲ್ಲಿ (ಕೆಎ55 ಡಬ್ಲ್ಯು 4322) ಊರಿಗೆ ಬಿಡಲು ಕರೆದುಕೊಂಡು ತಿ.ನರಸೀಪುರ ಕಡೆ ಬರುತ್ತಿದ್ದ ವೇಳೆ ಕೆಂಪಯ್ಯನಹುಂಡಿ ಗ್ರಾಮದ ಬಸ್ ನಿಲ್ದಾಣದ ಬಳಿ ನಾಯಿಯೊಂದು ರಸ್ತೆಗೆ ಅಡ್ಡಲಾಗಿ ಬಂದ ಪರಿಣಾಮ ನಾಯಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ನಿಯಂತ್ರಣ ತಪ್ಪಿ ಬೈಕ್‌ನಿಂದ ಕೆಳಗೆ ಬಿದ್ದಿದ್ದಾರೆ. ಪರಿಣಾಮ ಹಿಂಬದಿ ಕುಳಿತಿದ್ದ ದೀಪು ಅವರ ಬಾಯಿ ಹಾಗೂ ತಲೆಗೆ ತೀವ್ರ ಪೆಟ್ಟು ಬಿದ್ದು ರಕ್ತಸ್ರಾವವಾಗಿದೆ. ಕೂಡಲೇ ಆಕೆಯನ್ನು 108 ಆಂಬುಲೆನ್ಸ್‌ನಲ್ಲಿ ಮೈಸೂರಿನ ಕೆ.ಆರ್. ಆಸ್ಪತ್ರೆಗೆ ದಾಖಲು ಮಾಡಲಾಯಿತಾದರೂ ಅಷ್ಟರಲ್ಲಾಗಲೇ ಅವರು ಸಾವನ್ನಪ್ಪಿದ್ದರು. ಈ ಸಂಬಂಧ ಪಟ್ಟಣ ಠಾಣೆಗೆ ದೂರು ನೀಡಿರುವ ಮೃತೆ ದೀಪುರವರ ಪುತ್ರ ಎಸ್.ಬಿ.ಸುರೇಶ್ ತಮ್ಮ ತಾಯಿಯನ್ನು ಬೈಕಿನಲ್ಲಿ ಕೂರಿಸಿಕೊಂಡು ಅಜಾಗರೂಕತೆ ಮತ್ತು ಅತೀ ವೇಗದ ಚಾಲನೆಯಿಂದ ಅಪಘಾತ ಸಂಭವಿಸಿದ್ದು, ಗೋಪಾಲಕೃಷ್ಣ ಅವರ ಮೇಲೆ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದ್ದಾರೆ. ಪ್ರಕರಣ ದಾಖಲಿಸಿಕೊಂಡು ಪೊಲೀಸರು ಮುಂದಿನ ಕ್ರಮ ಜರುಗಿಸಿದ್ದಾರೆ.

ಅಪಾಯಕ್ಕೆ ಬಾಯ್ತೆರೆದು ನಿಂತಿರುವ ಮ್ಯಾನ್‌ಹೋಲ್



ಮ್ಯಾನ್‌ಹೋಲ್‌ನ ಮುಚ್ಚಳವಿಲ್ಲದೆ ಬಾಯ್ತೆರೆದು ಅಪಾಯಕ್ಕೆ ಆಹ್ವಾನ ನೀಡುತ್ತಿದೆ. ಸಾರ್ವಜನಿಕರು ಅಪಾಯದ ಸೂಚನೆ ಅರಿತು ಬ್ಯಾರಿಕೇಡ್ ಅಡ್ಡ ಇಟ್ಟಿದ್ದಾರೆ.

ಬನ್ನೂರು, ಆ.28– ಇಲ್ಲಿಗೆ ಸಮೀಪದ ಚಾಮನಹಳ್ಳಿ ಗ್ರಾಮದಲ್ಲಿ ಹಾದು ಹೋಗಿರುವ ಮಳವಳ್ಳಿ–ಮೈಸೂರು ಮುಖ್ಯ ರಸ್ತೆಯ ಮ್ಯಾನ್‌ಹೋಲ್ ಬಾಯ್ತೆರೆದಿದ್ದು, ಅಪಾಯಕ್ಕೆ ಆಹ್ವಾನ ನೀಡುತ್ತಿದೆ.

ಡಾ.ಹೆಚ್.ಸಿ.ಮಹದೇವಪ್ಪ ಲೋಕೋಪಯೋಗಿ ಸಚಿವರಾಗಿದ್ದಾಗ ಮಾಡಿದಂತ ರಸ್ತೆಯನ್ನು ಇತ್ತೀಚೆಗೆ ಅಂಡರ್ ಗ್ರೌಂಡ್ ಡ್ರೈನೇಜ್ ನೆಪದಲ್ಲಿ ಅಗೆಯಲಾಗಿತ್ತು. ನಂತರ ನಡೆದಂತ ಕಳಪೆ ಕಾಮಗಾರಿಯಿಂದಾಗಿ ರಸ್ತೆ ಸೇರಿದಂತೆ ಮ್ಯಾನ್‌ಹೋಲ್‌ಗಳ ಪರಿಸ್ಥಿತಿ ಶೋಚನೀಯವಾಗಿದ್ದು, ಅಲ್ಲಲ್ಲಿ ಕುಸಿದು ಅಪಾಯಕ್ಕೆ ಆಹ್ವಾನ ನೀಡುತ್ತಿದೆ.

ಈ ರಸ್ತೆಯಲ್ಲಿ ರಾತ್ರಿಯ ಸಮಯದಲ್ಲಿ ವಿದ್ಯುತ್ ಇರುವುದಿಲ್ಲ. ಇದೊಂದು ಮುಖ್ಯ ರಸ್ತೆ ಆಗಿರುವುದರಿಂದ ರಾತ್ರಿ–ಬೆಳಗ್ಗೆ ಎನ್ನದೆ, ಸಾವಿರಾರು ವಾಹನಗಳು ಸಂಚರಿಸುತ್ತವೆ. ರಸ್ತೆಯಲ್ಲಿ ಸಂಚರಿಸುವಂತ ಸಾರ್ವಜನಿಕರು ಮತ್ತು ನಾಗರಿಕರಿಗೆ ಇದರ ಪರಿವಿಲ್ಲದೆ ಅಪಾಯ ಸಂಭವಿಸಿದರೆ ಯಾರು ಹೊಣೆ?. ಇದನ್ನು ಅರಿತಂತ ನಾಗರಿಕರು ಅಲ್ಲಿಯೇ ಇದ್ದಂತ ಬ್ಯಾರಿಕೇಡ್‌ಗಳನ್ನು ರಸ್ತೆಗೆ ಹಾಕುವ ಮೂಲಕ ಸದ್ಯದ ಅಪಾಯವನ್ನು ತಪ್ಪಿಸಿದ್ದಾರೆ. ಸಂಬಂಧಿಸಿದವರು ಕೂಡಲೇ ಕ್ರಮ ಕೈಗೊಂಡು ಸಮಸ್ಯೆಯನ್ನು ಪರಿಹರಿಸಬೇಕಿದೆ.

ಅರಸು ಕಲ್ಲಹಳ್ಳಿ ಗ್ರಾಪಂಗೆ ರಾಜಶೇಖರ್ ಅಧ್ಯಕ್ಷರಾಗಿ ಆಯ್ಕೆ



ಹನಗೋಡು ಹೋಬಳಿಯ ಅರಸು ಕಲ್ಲಹಳ್ಳಿ ಗ್ರಾ.ಪಂ.ಗೆ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ರಾಜಶೇಖರ್ ಆಯ್ಕೆಯಾದರು.

ಹನಗೋಡು, ಆ.28– ಹನಗೋಡು ಹೋಬಳಿಯ ಅರಸು ಕಲ್ಲಹಳ್ಳಿ ಗ್ರಾಪಂಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ರಾಜಶೇಖರ್ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಅರಸು ಕಲ್ಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಮಂಗಳವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಅರಸು ಕಲ್ಲಹಳ್ಳಿಯ ರಾಜಶೇಖರ್ 8 ಮತಗಳನ್ನು ಪಡೆದರೆ, ಅವರ ಪ್ರತಿಸ್ಪರ್ಧಿ ಹುಣಸೇಗಾಲ ಗ್ರಾಮದ ತಮ್ಮೆಗೌಡ 5 ಮತ ಪಡೆದರು. ಮೂರು ಮತಗಳ ಅಂತರದಿಂದ ರಾಜಶೇಖರ್ ಗೆಲುವು ಸಾಧಿಸಿದ್ದಾರೆ. ಚುನಾವಣಾಧಿಕಾರಿಯಾಗಿ ಲೋಕೋಪಯೋಗಿ ಇಲಾಖೆಯ ಎಇಇ ಯು. ಆರ್. ಯತೀಶ್ ಕಾರ್ಯ ನಿರ್ವಹಿಸಿದರು. ಚುನಾವಣಾ ಫಲಿತಾಂಶ ಹೊರ ಬೀಳುತ್ತಿದ್ದಂತೆ ಕ್ರಾಂಗ್ರೇಸ್ ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಈ ವೇಳೆ ಗ್ರಾಪಂ ಸದಸ್ಯರಾದ ರೇಖಾ ಶಿವರಾಜ್, ಪ್ರಸನ್ನ ನಾಯಕ, ರವಿ, ನಾಗವೇಣಿ, ಪುಟ್ಟತಾಯಮ್ಮ, ಸಾವಿತ್ರಿಬಾಯಿ, ಗ್ರಾಮದ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

ಗ್ರಾಮ ಆಡಳಿತಾಧಿಕಾರಿಯನ್ನು ನಿಂದಿಸಿ, ಬೆದರಿಕೆ ಹಾಕಿದ ತಾಪಂ ಮಾಜಿ ಸದಸ್ಯ

ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು



ತಿಮ್ಮನಾಯಕ

ಹಿರೀಕ್ಯಾತನಹಳ್ಳಿ, ಆ.28– ಹುಣಸೂರು ತಾಲೂಕು ಪಂಚಾಯಿತಿ ಮಾಜಿ ಸದಸ್ಯರೊಬ್ಬರು ಗಾವಡಗೆರೆ ಹೋಬಳಿ ವ್ಯಾಪ್ತಿಯ ಗ್ರಾಮ ಆಡಳಿತಾಧಿಕಾರಿಗೆ ನಿಂದಿಸಿ, ಬೆದರಿಕೆ ಹಾಕಿರುವ ಘಟನೆ ಗಾವಡಗೆರೆ ಹೋಬಳಿ ಕೇಂದ್ರದಲ್ಲಿ ನಡೆದಿದೆ.

ಪ್ರಕರಣ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಗ್ರಾಮ ಆಡಳಿತಾಧಿಕಾರಿ ಸಿದ್ದರಾಮ ಯಳಸಂಗಿ ದೂರು ನೀಡಿದ್ದಾರೆ. ಆ.27ರ ಮಧ್ಯಾಹ್ನ 1.30 ರ ಸಮಯದಲ್ಲಿ ಜಾಬಗೆರೆ ಗ್ರಾಮದ ಮಾಜಿ ತಾಪಂ ಸದಸ್ಯ ತಿಮ್ಮನಾಯಕ ಎಂಬುವರು ತಾವು ಕರ್ತವ್ಯ ನಿರ್ವಹಿಸುತ್ತಿದ್ದಾಗ ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿ, ಏರುಧ್ವನಿಯಲ್ಲಿ ಮಾತನಾಡುತ್ತಾ ಅವಾಚ್ಯ ಪದಗಳಿಂದ ನಿಂದಿಸಿ, ಧಮಕಿ ಹಾಕಿ ಕೆಲಸಕ್ಕೆ ತೊಂದರೆಯನ್ನುಂಟು ಮಾಡಿದ್ದು, ಹಲ್ಲೆ ಮಾಡಲು ಯತ್ನಿಸಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣದ ದಾಖಲಾಗಿದೆ.

ಅತ್ತಿಗೋಡು: ಈಶ್ವರ ದೇವಾಲಯದಲ್ಲಿ ಇಂದು ಗಿರಿಜಾ ಕಲ್ಯಾಣ ಮಹೋತ್ಸವ

ಬೆಟ್ಟದಪುರ, ಆ.28– ಬೆಟ್ಟದಪುರ ಸಮೀಪದ ಅತ್ತಿಗೋಡು ಗ್ರಾಮದ ಶ್ರೀ ಈಶ್ವರ ದೇವಸ್ಥಾನದಲ್ಲಿ ಆ.29ರಂದು ಗಿರಿಜಾ ಕಲ್ಯಾಣ ಮಹೋತ್ಸವ ನಡೆಯಲಿದೆ.

ದೇವಸ್ಥಾನದ ಅರ್ಚಕ ಅಮರಯ್ಯ ಹಿರೇಮಠ ಹಾಗೂ ತಂಡದ ನೇತೃತ್ವದಲ್ಲಿ ಗುರುವಾರ ಮುಂಜಾನೆ ಐದು ಗಂಟೆಗೆ ಗಂಗಾ ಪೂಜೆಯಿಂದ ಪೂಜಾ ಮಹೋತ್ಸವ ಆರಂಭವಾಗಲಿದೆ. ಬಳಿಕ ಮಹಾ ಸಂಕಲ್ಪ, ಮಹಾಗಣಪತಿ ಪೂಜೆ, ಕಳಶ ಪೂಜೆ ನಡೆಯಲಿದೆ. ಉತ್ಸವ ಮೂರ್ತಿಗಳಿಗೆ ಕಳಾಕರ್ಷಣೆ ನಡೆಯಲಿದ್ದು, ಮಧ್ಯಾಹ್ನ 1 ರಿಂದ 1.30ರ ವೇಳೆ ಸಲ್ಲುವ ಶುಭಲಗ್ನದಲ್ಲಿ ಗಿರಿಜಾ ಕಲ್ಯಾಣ ಹಾಗೂ ಮಹಾಮಂಗಳಾರತಿ ಜರುಗಲಿದೆ. ಇದಾದ ನಂತರ ಬಂದಂತಹ ಭಕ್ತರಿಗೆ ಪ್ರಸಾದ ವಿನಿಯೋಗ ನಡೆಯಲಿದೆ.

ಸಂಜೆ 6 ಗಂಟೆ ವೇಳೆಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಉತ್ಸವ ಮೂರ್ತಿಗಳ ಮೆರವಣಿಗೆ ಸಾಗಲಿದೆ. ಈಗಾಗಲೇ ಪೂಜಾ ಕಾರ್ಯಕ್ರಮಕ್ಕೆ ವಿಶೇಷ ಸಿದ್ಧತೆಗಳು ಆರಂಭಗೊಂಡಿದ್ದು, ದೇವಸ್ಥಾನದ ಆವರಣದಲ್ಲಿ ವಿದ್ಯುತ್ ದೀಪದ ಅಲಂಕಾರ ಸೇರಿದಂತೆ ಕೇಸರಿ ಬಾವುಟಗಳು ರಾರಾಜಿಸುತ್ತಿವೆ. ಧಾರ್ಮಿಕ ಹಾಗೂ ಪೂಜಾ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿಯ ದರ್ಶನ ಪಡೆಯುವಂತೆ ದೇವಸ್ಥಾನದ ಸಮಿತಿಯವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ನಾಗರಹೊಳೆ ಮುಖ್ಯ ರಸ್ತೆಯಲ್ಲಿ ಹುಲಿ ಪ್ರತ್ಯಕ್ಷ



ಹುಣಸೂರು, ಆ.28– ನಾಗರಹೊಳೆ ಮುಖ್ಯ ರಸ್ತೆಯಲ್ಲಿ ಮದ್ಯಾಹ್ನದ ವೇಳೆ ಹುಲಿಯೊಂದು ಕಾಣಿಸಿಕೊಂಡಿದೆ. ರಸ್ತೆ ದಾಟುತ್ತಿರುವುದನ್ನು ಕಂಡ ವಾಹನ ಸವಾರರು ಕೆಲಹೊತ್ತು ನಿಂತು ಪೋಟೋ ಕ್ಲಿಕ್ಕಿಸಿ, ವಿಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದಾರೆ.

ಈ ಬಾರಿ ಎಲ್ಲೆಡೆ ಉತ್ತಮ ಮಳೆಯಿಂದಾಗಿ ನಾಗರಹೊಳೆ ಉದ್ಯಾನವನದಲ್ಲಿ ಎಲ್ಲೆಲ್ಲೂ ಹಚ್ಚ ಹಸಿರು ಕಂಗೊಳಿಸುತ್ತಿರುವುದರಿಂದ ವನ್ಯಪ್ರಾಣಿಗಳು ಸ್ವಚ್ಚಂಧವಾಗಿ ವಿಹರಿಸುವಂತಾಗಿದ್ದು, ನಾಗರಹೊಳೆ ಮುಖ್ಯ ರಸ್ತೆಯಲ್ಲೇ ಹುಲಿ, ಆನೆ, ಜಿಂಕೆ, ಕಡವೆಗಳ ದರ್ಶನವೂ ಆಗುತ್ತಿದೆ. ಮಂಗಳವಾರ ಮಧ್ಯಾಹ್ನ ಬಿರುಬಿಸಿಲಿನಲ್ಲಿ ಹುಣಸೂರು–ಕುಟ್ಟ ಮುಖ್ಯ ರಸ್ತೆಯ ನಾಗರಹೊಳೆ ಪಿಕಾಕ್ ಲೈನ್ ಬಳಿ ಹುಲಿ ರಾಜಗಾಂಭೀರ್ಯದಿಂದ ನಡೆದು ಹೋಗುತ್ತಿರುವುದನ್ನು ಕಂಡ ಪ್ರವಾಸಿಗರು ಗಾಬರಿಯಿಂದ ವಾಹನ ನಿಲ್ಲಿಸಿದ್ದಾರೆ. ನಂತರ ತಮ್ಮ ಮೊಬೈಲ್‌ನಲ್ಲಿ ಪೋಟೋ ಕ್ಲಿಕ್ಕಿಸಿ, ವೀಡಿಯೋ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಿದ್ದಾರೆ. ಹುಲಿ ಕಾಡಿನತ್ತ ಹೋದ ನಂತರ ಮತ್ತೆ ಪ್ರಯಾಣ ಮುಂದುವರೆಸಿದ್ದಾರೆ.

ಕಾನೂನು ಅರಿವು ಕಾರ್ಯಕ್ರಮ



ಬೈಲಕುಪ್ಪೆ ಸರ್ಕಾರಿ ಪ್ರೌಢಶಾಲೆಯಲ್ಲಿ ಬೈಲಕುಪ್ಪೆ ಪೊಲೀಸ್ ಠಾಣಾ ವತಿಯಿಂದ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಎಎಸ್‌ಐ ಸೋಮಶೇಖರ್ ಉದ್ಘಾಟಿಸಿದರು. ಕ್ರೈಂ ಸಬ್‌ಇನ್ಸ್‌ಪೆಕ್ಟರ್ ಮಹಾಲಿಂಗಯ್ಯ, ಶಾಲೆಯ ಮುಖ್ಯ ಶಿಕ್ಷಕ, ಶಿಕ್ಷಕರು, ಪೊಲೀಸ್ ಸಿಬ್ಬಂದಿಗಳು ಇದ್ದರು.

ಪ್ರತಿಭೆ ಅನಾವರಣಗೊಳಿಸಲು ಪ್ರತಿಭಾ ಕಾರಂಜಿ ವೇದಿಕೆ



ಹೋಬಳಿ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ. ಡಿ. ಲೋಕೇಶ್ ಉದ್ಘಾಟಿಸಿದರು.

ಮೂಗೂರು, ಆ.28– ಪ್ರತಿ ಮಕ್ಕಳಲ್ಲೂ ಪ್ರತಿಭೆ ಅಡಗಿದೆ, ಅದನ್ನು ಅನಾವರಣಗೊಳಿಸಲು ಪ್ರತಿಭಾ ಕಾರಂಜಿ ಕಾರ್ಯಕ್ರಮ ಉತ್ತಮ ವೇದಿಕೆಯಾಗಿದೆ ಎಂದು ಮೂಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ. ಡಿ. ಲೋಕೇಶ್ ಹೇಳಿದರು.

ಮೂಗೂರಿನ ಕರ್ನಾಟಕ ಪಬ್ಲಿಕ್ ಶಾಲೆಯ ಶ್ರೀ ತ್ರಿಪುರ ಸುಂದರಿ ರಂಗ ವೇದಿಕೆಯಲ್ಲಿ ಬುಧವಾರ ನಡೆದ ಪ್ರೌಢ ಶಾಲಾ ವಿಭಾಗದ ಹೋಬಳಿ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಕ್ಕಳು ಪ್ರಾಥಮಿಕ ಹಂತದಲ್ಲೇ ಕೆಲವು ಅಭ್ಯಾಸಗಳನ್ನು ರೂಢಿಸಿಕೊಂಡಿದ್ದರೆ, ಮುಂದಿನ ದಿನಗಳಲ್ಲಿ ಪ್ರತಿಭಾವಂತರಾಗಲು ಸಹಕಾರಿಯಾಗಲಿವೆ. ಪ್ರತಿಭೆಯನ್ನು ಪ್ರಾರಂಭದಲ್ಲೇ ಗುರುತಿಸುವುದರಿಂದ ಅವರನ್ನು ಉತ್ತಮ ಕಲಾವಿದನಾಗಿಸಲು ಸಾಧ್ಯವಾಗಲಿದೆ ಎಂದರು. ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಎಂ.ರಂಗಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಕೆಪಿಎಸ್ ಶಾಲೆಯ ಉಪಪ್ರಾಂಶುಪಾಲ ಸಿ.ಪುಟ್ಟಸ್ವಾಮಿ, ತಾ.ಸಹ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಸಾದ್, ಕಾರ್ಯದರ್ಶಿ ನಾಗರಾಜು, ತಾ.ದೈಹಿಕ ಶಿಕ್ಷಣ ಸಂಘದ ಅಧ್ಯಕ್ಷ ಪುಟ್ಟರಾಜು, ಉಪನ್ಯಾಸಕ ಬಿ.ಮಹೇಶ್, ಸಮಿತಿ ಸದಸ್ಯ ಎಂ.ಪಿ. ಮಹೇಶ್, ಶಾಲೆಯ ಶಿಕ್ಷಕರು ಉಪಸ್ಥಿತರಿದ್ದರು.

ಎಎಸ್‌ಐ ಮೇಲೆ ಹಲ್ಲೆಗೆ ಯತ್ನಿಸಿದ ಬಾಳೆಹಣ್ಣು ವ್ಯಾಪಾರಿ ಬಂಧನ



ಮಲ್ಲೇಶ್

ಹುಣಸೂರು, ಆ.28– ಬುದ್ಧಿವಾದ ಹೇಳಿದ ಎಎಸ್‌ಐ ಮೇಲೆ ಹರಿಹಾಯ್ದಿದ್ದಲ್ಲದೆ ಹಲ್ಲೆಗೆ ಯತ್ನಿಸಿದ ಬಾಳೆಹಣ್ಣು ವ್ಯಾಪಾರಿಯನ್ನು ಬಂಧಿಸಿದ ಪೊಲೀಸರು ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ನಗರದ ಬಜಾರ್ ರಸ್ತೆಯ ಬಾಳೆ ಹಣ್ಣು ವ್ಯಾಪಾರಿ ಮಲ್ಲೇಶ್ ಬಂಧನಕ್ಕೊಳಗಾದವ. ಈತನ ವಿರುದ್ಧ ಎಎಸ್‌ಐ ನಂಜೇಶ್ ನಗರ ಠಾಣೆಯಲ್ಲಿ ಕರ್ತವ್ಯಕ್ಕೆ ಅಡ್ಡಿ, ಹಲ್ಲೆ ನಡೆಸಲು ಮುಂದಾಗಿದ್ದರ ವಿರುದ್ದ ದೂರು ದಾಖಲಿಸಿದ್ದಾರೆ.

ಪಾನಮತ್ತನಾಗಿದ್ದ ಮಲ್ಲೇಶ್ ಬಜಾರ್ ರಸ್ತೆಯ ಲಕ್ಷ್ಮಿ ವಿಲಾಸ್ ವೃತ್ತದ ಬಳಿಯ ತನ್ನ ಅಂಗಡಿ ಎದುರಿನಲ್ಲಿ ಅವಾಚ್ಯ ಶಬ್ದಗಳಿಂದ ಬೈಯ್ಯುತ್ತಿರುವ ಬಗ್ಗೆ ಬಂದ ಸಾರ್ವಜನಿಕರ ಮಾಹಿತಿ ಮೇರೆಗೆ ಸ್ಥಳಕ್ಕೆ ತೆರಳಿದ್ದ ಎಎಸ್‌ಐ ನಂಜೇಶ್ ಹಾಗೂ ಮುಖ್ಯಪೇದೆ ಪ್ರಕಾಶ್ ತಿಳುವಳಿಕೆ ಹೇಳಿದ್ದಾರೆ. ಈ ವೇಳೆ ಎಎಸ್‌ಐ ನಂಜೇಶ್ ಹಾಗೂ ಬಾಳೆ ಹಣ್ಣು ವ್ಯಾಪಾರಿ ಮಲ್ಲೇಶ್ ನಡುವೆ ಮಾತಿನ ಚಕಮಕಿ ನಡೆದು ನಂಜೇಶ್ ಮೇಲೆ ಹಲ್ಲೆಗೆ ಮುಂದಾಗಿ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೂಗಾಟ ನಡೆಸಿದ್ದಾನೆ. ಈ ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು, ಕುಡುಕ ಮಲ್ಲೇಶ್ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ದೂರಿನ ಮೇರೆಗೆ ಎ.ಐ. ಜಮೀರ್ ಅಹಮದ್ ಪ್ರಕರಣ ದಾಖಲಿಸಿಕೊಂಡು ಆತನನ್ನು ಬಂಧಿಸಿ, ನ್ಯಾಯಾಧೀಶರ ಮುಂದೆ ಹಾಜರು ಪಡಿಸಿದ ವೇಳೆ ಆರೋಪಿನ್ನು ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದೆ.

ವರುಣ ಬಳಿ ಜ್ವರದಿಂದ ಹಸು ಸಾವು: ಕುಟುಂಬ ಕಂಗಾಲು

ವರುಣ, ಆ.28– ಜ್ವರದಿಂದ ಹಸುವೊಂದು ಸಾವನ್ನಪ್ಪಿದೆ. ಮೈಸೂರು ತಾಲೂಕು ವರುಣ ಹೋಬಳಿಯ ಮಹದೇವಿ ಕಾಲೋನಿಯ ವಾಸಿ ನಾಗರಾಜು ಎಂಬುವರಿಗೆ ಸೇರಿದ ಸುಮಾರು 50 ಸಾವಿರ ರೂ. ಬೆಲೆ ಬಾಳುವ ಈ ಹಸು ಮಂಗಳವಾರ ರಾತ್ರಿ ಜ್ವರದಿಂದ ಸಾವನ್ನಪ್ಪಿದೆ.

ಹಸು ಹಾಲಿನ ಮಾರಾಟದಿಂದ ಜೀವನ ನಿರ್ವಹಣೆ ಮಾಡುತ್ತಿದ್ದ ಈ ಕುಟುಂಬ ಹಸು ಸಾವಿನಿಂದ ಕಂಗಾಲಾಗಿದೆ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸೂಕ್ತ ಪರಿಹಾರ ನೀಡುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ. ಸ್ಥಳಕ್ಕೆ ಪಶುವೈದ್ಯಾಧಿಕಾರಿಗಳು ಮತ್ತು ಸ್ಥಳೀಯ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಭೂ ನ್ಯಾಯ ಮಂಡಳಿ ಸದಸ್ಯ ಕಕ್ಕೂರು ಗಣೇಶ್‌ಗೆ ಸನ್ಮಾನ



ತಿ.ನರಸೀಪುರ ಪಟ್ಟಣದಲ್ಲಿ ಭೂ ನ್ಯಾಯ ಮಂಡಳಿ ಸದಸ್ಯರನ್ನಾಗಿ ಸರ್ಕಾರ ನೇಮಕ ಮಾಡಿರುವ ಕುಕ್ಕೂರ್ ಗಣೇಶ್ ಅವರನ್ನು ಸೋಸಲೆ ಪ್ರಾಥಮಿಕ ಸಹಕಾರ ಸಂಘದ ಅಧ್ಯಕ್ಷ ಎಂ ಪರಶಿವಮೂರ್ತಿ ಬೆಂಬಲಿಗರು ಸನ್ಮಾನಿಸಿದರು

ತಿ.ನರಸೀಪುರ, ಆ.28– ತಾಲೂಕು ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿದ್ದರೂ ಸಹ ಇನ್ನು ಹೆಚ್ಚಿನ ರೀತಿಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ಒಂದೇ ಮಾಡಿಕೊಳ್ಳಬೇಕು ಎಂದು ತಾಪಂ ಸಾಮಾಜಿಕ ನ್ಯಾಯಸ್ಥಾಯಿ ಸಮಿತಿಯ ಮಾಜಿ ಅಧ್ಯಕ್ಷ ಹಾಗೂ ಭೂ ನ್ಯಾಯ ಮಂಡಳಿ ಸದಸ್ಯ ಕುಕ್ಕೂರು ಗಣೇಶ್ ಹೇಳಿದರು

ಪಟ್ಟಣದಲ್ಲಿ ಭೂ ನ್ಯಾಯ ಮಂಡಳಿ ಸದಸ್ಯರನ್ನಾಗಿ ಸರ್ಕಾರ ನೇಮಕ ಮಾಡಿರುವ ಹಿನ್ನೆಲೆಯಲ್ಲಿ ಕುಕ್ಕೂರ್ ಗಣೇಶ್ ಅವರನ್ನು ಸೋಸಲೆ ಪ್ರಾಥಮಿಕ ಸಹಕಾರ ಸಂಘದ ಅಧ್ಯಕ್ಷ ಎಂ ಪರಶಿವಮೂರ್ತಿ ಬೆಂಬಲಿಗರು ನೀಡಿದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪಕ್ಷವನ್ನು ಸಧೃಡವಾಗಿ ಕಟ್ಟುವ ಜೊತೆಗೆ ಕಾರ್ಯಕರ್ತರನ್ನು ಗುರುತಿಸಿ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದ್ದಾರೆ. ಅವರು ಹಾಕಿದ ಭದ್ರಬುನಾದಿಯಲ್ಲಿ ಜಿಲ್ಲೆಯ ಶಾಸಕರು ಹಾಗೂ ಸಚಿವರು, ಸಂಸದರು ಇನ್ನು ಹೆಚ್ಚಿನ ರೀತಿಯಲ್ಲಿ ಪಕ್ಷವನ್ನು ಬಲವರ್ಧನೆ ಮಾಡಬೇಕು. ಹಾಗೂ ಮುಖಂಡರು ಹಾಗೂ ಕಾರ್ಯಕರ್ತರನ್ನು ಬೆಳೆಸುವ ನಿಟ್ಟಿನಲ್ಲಿ ಚಿಂತನೆ ನಡೆಬೇಕು ಎಂದರು.

ಸೋಸಲೆ ಪ್ರಾಥಮಿಕ ಸಹಕಾರ ಸಂಘದ ಅಧ್ಯಕ್ಷ ಎಂ.ಪರಶಿವಮೂರ್ತಿ ಮಾತನಾಡಿ, ಚಾಮರಾಜನಗರ ಲೋಸಕಭಾ ಕ್ಷೇತ್ರದ ಚುನಾವಣೆಯ ಗೆಲುವು ಇತರೇ ಜಿಲ್ಲೆಗಳು ಹಾಗೂ ಕ್ಷೇತ್ರಗಳಿಗೆ ಮಾದರಿಯಾಗಿದೆ. ಎಂಟು ವಿಧಾನ ಸಭಾ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗೆ ಲೀಡ್ ಕೊಡಿಸುವ ಮೂಲಕ ಅಭೂತಪೂರ್ವ ಗೆಲುವು ತಂದುಕೊಟ್ಟಿದ್ದೀರಿ.

ಈ ಗೆಲುವು ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳು ಅನುಸರಿಸಿ ಕ್ರಮಗಳು ಮತ್ತು ಕಾರ್ಯ ವಿಧಾನಗಳನ್ನು ಹಂಚಿಕೊಳ್ಳಬೇಕು. ಎಂದರು. ಯುವ ಕಾಂಗ್ರೆಸ್ ಚುನಾವಣೆ ನಡೆಯುತ್ತಿದ್ದು, ಯುವಕರು ಸಕ್ರಿಯವಾಗಿ ಭಾಗವಹಿಸುವ ಮೂಲಕ ಸಕ್ರಿಯ ರಾಜ– ಕಾರಣಕ್ಕೆ ಬರಬೇಕು, ಮುಂಬರುವ ಜಿಪಂ, ತಾಪಂ ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಎಲ್ಲರು ಹೊಂದಾಣಿಕೆಯೊಂದಿಗೆ ಗೆಲ್ಲುವ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕು ಎಂದರು.

ಯುವ ಮುಖಂಡರಾದ ಕನಾಯಕನಹಳ್ಳಿ ಮಧು, ವಕೀಲ ಜಗದೀಶ್, ಮಹದೇವಸ್ವಾಮಿ, ರಾಜು, ಕೇತಹಳ್ಳಿ ರಘು, ಮಧು, ಹರೀಶ್, ಸುದರ್ಶನ್ ಮತ್ತಿತರರಿದ್ದರು

ಕೃಷ್ಣೇಗೌಡ ನಿಧನ



ಕೆ.ಆರ್.ನಗರ, ಆ.28– ತಾಲೂಕಿನ ಕೆಂಪನಕೊಪ್ಪಲು ಗ್ರಾಮದ ಕೃಷ್ಣೇಗೌಡ (80) ಮಂಗಳವಾರ ರಾತ್ರಿ ನಿಧನರಾದರು. ಮೃತರು ಪತ್ನಿ ಹಾಗೂ ಕೆ.ಆರ್.ನಗರ ತಾಲೂಕು ಪತ್ರಕರ್ತ ಸಂಘದ ಖಜಾಂಚಿ ನಾಗೇಶ್ ಮತ್ತು ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ.

ಬುಧವಾರ ಮಧ್ಯಾಹ್ನ ಸ್ವಗ್ರಾಮ ಕೆಂಪನಕೊಪ್ಪಲಿನ ಅವರ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಿತು. ಶಾಸಕ ಡಿ.ರವಿಶಂಕರ್, ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮೇಗೌಡ, ದೊಡ್ಡಕೊಪ್ಪಲು ಗ್ರಾಪಂ ಸದಸ್ಯ ಕೆ.ಪಿ.ಜಗದೀಶ್, ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ವಿನಯ್ ದೊಡ್ಡಕೊಪ್ಪಲು ಮತ್ತು ಸದಸ್ಯರುಗಳು ಮೃತರ ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದ್ದಾರೆ.

ಮೈಸೂರು ಗಾಂಧಿನಗರ ಆದಿಕರ್ನಾಟಕ ರುದ್ರಭೂಮಿಯ ಶೋಚನೀಯ ಸ್ಥಿತಿ

ಎಲ್ಲೆಡೆ ಕೊಳಚೆ ನೀರು; ಮೂಗು ಮುಚ್ಚಿ ಪ್ರವೇಶಿಸಬೇಕಾದ ದುಸ್ಥಿತಿ



ಮೃತದೇಹ ಹೂಳಲು ತೆಗೆದ ಗುಂಡಿಯಲ್ಲಿ ಕೊಳಚೆ ನೀರು

ರಾಜಕಾಲುವೆಗೆ ದೊಡ್ಡ ಪೈಪ್‌ಲೈನ್ ಅಳವಡಿಸಿ ಸ್ಮಶಾನ ಸಂರಕ್ಷಣೆ ಮಾಡಬೇಕು. ತಡೆಗೋಡೆಗಳನ್ನು ಎತ್ತರಿಸಿ, ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು. ರುದ್ರಭೂಮಿಯಲ್ಲಿ ವಿದ್ಯುತ್ ದೀಪಗಳಿಲ್ಲದೆ ಸಂಜೆ ವೇಳೆ ಶವ ಸಂಸ್ಕಾರಕ್ಕೆ ತೊಂದರೆಯಾಗುತ್ತಿದೆ. ಸೆಕ್ಯೂರಿಟಿ ಸಿಬ್ಬಂದಿ ನಿಯೋಜಿಸಬೇಕು.
– ಕರ್ನಾಟಕ ದಲಿತ ಪ್ಯಾಂಥರ್ ಹಾಗೂ ಗಾಂಧಿನಗರ ನಿವಾಸಿಗಳು

ಮೈಸೂರು, ಆ.28(ಎಂಕೆ)– ಮೈಸೂರಿನ ಗಾಂಧಿನಗರದಲ್ಲಿರುವ ಆದಿಕರ್ನಾಟಕ ಜನಾಂಗದ ರುದ್ರಭೂಮಿಯಲ್ಲಿ ಕೊಳಚೆ ನೀರು ಶೇಖರಣೆಯಾಗುತ್ತಿದ್ದು, ಅಂತ್ಯ ಸಂಸ್ಕಾರಕ್ಕೆ ಪರದಾಡುವಂತಾಗಿದೆ.

1870ರಲ್ಲಿ ಹತ್ತನೇ ಚಾಮರಾಜ ಒಡೆಯರ್ ಆಳ್ವಿಕೆಯ ಕಾಲಘಟ್ಟದಲ್ಲಿ ಅಂದಿನ ದಿವಾನರಾಗಿದ್ದ ಶೇಷಾದ್ರಿ ಅಯ್ಯರ್ ಅವರು ಆದಿಕರ್ನಾಟಕ ಜನಾಂಗಕ್ಕೆ ನೀಡಿದ ಸುಮಾರು 2.24 ಎಕರೆ ವಿಸ್ತೀರ್ಣದ ರುದ್ರಭೂಮಿಯಲ್ಲಿಂದು ಕೊಳಚೆ ನೀರು ಆವರಿಸಿದ್ದು, ಗುಂಡಿ ತೆಗೆದ ಕಡೆಯೆಲ್ಲಾ ಬೊಗ್ಗಡ ಮಿಶ್ರಿತ ನೀರು ಉಕ್ಕುವಂತಾಗಿದೆ.

ಪಕ್ಕದಲ್ಲೇ ಹಾದುಹೋಗಿರುವ ದೊಡ್ಡ ಮೋರಿ(ರಾಜಕಾಲುವೆ)ಯಲ್ಲಿ ಹರಿಯುವ ಕೊಳಚೆ ನೀರೆಲ್ಲಾ ಸ್ಮಶಾನಕ್ಕೆ ಹರಿಯುತ್ತಿರುವುದರಿಂದ ಮೃತದೇಹ ಹೂಳುವುದಕ್ಕೆ ತೊಂದರೆಯಾಗುತ್ತಿದೆ. ಅಲ್ಲದೆ ಸ್ಮಶಾನದೊಳಗೆ ಕಾಲಿಡುತ್ತಿದ್ದಂತೆ ಭಾರಿ ದುರ್ವಾಸನೆ ಬೀರಲಿದ್ದು, ಮೂಗು ಮುಚ್ಚಿಕೊಂಡು ಅಂತ್ಯಕ್ರಿಯೆ ನಡೆಸಬೇಕಾದ ಶೋಚನೀಯ ಸ್ಥಿತಿ ನಿರ್ಮಾಣವಾಗಿದೆ.

ಅಭಿವೃದ್ಧಿ ಕಾಣದ ಸ್ಮಶಾನದ ಗೋರಿಗಳ ಸುತ್ತೆಲ್ಲಾ ನೀರು ಆವೃತವಾಗಿದ್ದು, ಗುಂಡಿಯೊಳಗಿನ ನೀರು ತೆಗೆದು ಅಂತ್ಯಕ್ರಿಯೆ ನಡೆಸೋಣವೆಂದರೆ ಅದಕ್ಕೂ ಸಾಧ್ಯವಾಗುತ್ತಿಲ್ಲ. ಕೂಡಲೇ ಕೊಳಚೆ ನೀರಿನ ಸಮಸ್ಯೆಗೆ ಮುಕ್ತಿ ನೀಡುವಂತೆ ಕರ್ನಾಟಕ ದಲಿತ ಪ್ಯಾಂಥರ್ ಹಾಗೂ ಗಾಂಧಿನಗರ ನಿವಾಸಿಗಳು ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಿದ್ದಾರೆ.



ರುದ್ರಭೂಮಿಯಲ್ಲಿ ಕೊಳಚೆ ನೀರು ನಿಂತಿರುವುದು

ದೊಡ್ಡಮೋರಿಯೇ ಸಮಸ್ಯೆ: ಸ್ಮಶಾನಕ್ಕೆ ಹೊಂದಿಕೊಂಡಂತಿರುವ ರಾಜಕಾಲುವೆಯದ್ದೆ ಸಮಸ್ಯೆಯಾಗಿದೆ. ಮೋರಿಯ ಕಾಂಕ್ರೀಟ್ ಹಾಳಾಗಿರುವುದರಿಂದ ಕೊಳಚೆ ನೀರು ಸ್ಮಶಾನಕ್ಕೆ ಹರಿದು ಬರುತ್ತಿದ್ದು, ಮಳೆ ಬಂದಾಗಲ್ಲೆಲ್ಲಾ ಸ್ಮಶಾನ ಕೆರೆಯಂತಾಗುತ್ತದೆ ಎಂದು ಗಾಂಧಿನಗರ ನಿವಾಸಿಗಳಾದ ಕಿರಣ್‌ಕುಮಾರ್, ಅನುಪಮಾ, ಧನಂಜಯ, ಅಭಿಷೇಕ್ ಮತ್ತಿತರರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಕಳೆದ ಎರಡ್ಮೂರು ವರ್ಷಗಳಿಂದಲೂ ಸ್ಮಶಾನದಲ್ಲಿ ಅಂತ್ಯಸಂಸ್ಕಾರಕ್ಕೆ ತೊಂದರೆಯಾಗುತ್ತಿದೆ. ಈ ಕುರಿತು ಸಂಬಂಧಪಟ್ಟ ಪಾಲಿಕೆ ಅಧಿಕಾರಿ–ಸಿಬ್ಬಂದಿಗೆ ಸಾಕಷ್ಟು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇದೇ ಸಮಸ್ಯೆ ಬೇರೆ ಜನಾಂಗದ ರುದ್ರಭೂಮಿಯಲ್ಲಾಗಿದ್ದರೆ ಸುಮ್ಮನೆ ಇರುತ್ತಿದ್ದರೆ ಎಂದು ತೀವ್ರ ಬೇಸರ ವ್ಯಕ್ತಪಡಿಸಿದರು.

ಭದ್ರತೆ ಇಲ್ಲ: ಸ್ಮಶಾನಕ್ಕೆ ಯಾವುದೇ ಭದ್ರತೆ ಇಲ್ಲ. ಅಂತ್ಯಕ್ರಿಯೆಗೆ ಬರುವ ಮೃತ ವ್ಯಕ್ತಿ ಸಂಬಂಧಿಕರ ವಿಶ್ರಾಂತಿ ಸ್ಥಳದಲ್ಲಿ ಯಾರ್ಯಾರೋ ಮಲಗಿರುತ್ತಾರೆ. ರಾತ್ರಿ ವೇಳೆ ಪುಂಡರ ಹಾವಳಿ ಹೆಚ್ಚಾಗಿದ್ದು, ಸಂಜೆ 6 ಗಂಟೆಯ ನಂತರ ಅಂತ್ಯಸಂಸ್ಕಾರ ನಡೆಸುವುದೇ ಕಷ್ಟ, ಅನೈತಿಕ ಚಟುವಟಿಕೆಗಳ ತಾಣವೂ ಆಗಿದೆ. ಆದ್ದರಿಂದ ಕೂಡಲೇ ಸೆಕ್ಯೂರಿಟಿ ಗಾರ್ಡ್ ನೇಮಿಸಿ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಮಿ. ಬಚ್ಚನ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಭೀಮಾ (ಕ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ತಾಜ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಬೆ.11ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1ಕ್ಕೆ, ಸಂ.4.05ಕ್ಕೆ, ಸ್ತ್ರೀ 2 (ಹಿಂ): ರಾ.7.10ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಬೆ.10.45ಕ್ಕೆ, ಹೆರಾಲ್ಡ್ ಅಂಡ್ ದಿ ಪರ್ಪಲ್ ಕ್ರಯಾನ್ (ಇಂ): ಮ.2.10ಕ್ಕೆ, ಪೌಡರ್ (ಕ): ಸಂ.4.30ಕ್ಕೆ, ರಾ.7.15ಕ್ಕೆ, ವಾಝ್ಹಾ ಬಯೋಪಿಕ್ ಆಫ್ ಎ ಬಿಲಿಯನ್ ಬಾಯ್ಸ್ (ಮ): ರಾ.10ಕ್ಕೆ.
ಸ್ಕ್ರೀನ್ 3	ಏಲಿಯನ್ ರೊಮುಲಸ್ (ಇಂ): ಬೆ.10.55ಕ್ಕೆ, ಸಂ.4.50ಕ್ಕೆ, ರಾ.7.30ಕ್ಕೆ, ತಂಗಲಾನ್ (ತ): ಮ.1.25ಕ್ಕೆ, ಭೀಮಾ (ಕ): ರಾ.10ಕ್ಕೆ.
ಸ್ಕ್ರೀನ್ 4	ಸ್ತ್ರೀ 2 (ಹಿಂ): ಬೆ.10.20ಕ್ಕೆ, ಸಂ.4.10ಕ್ಕೆ, ಭೀಮಾ (ಕ): ಮ.1.15ಕ್ಕೆ, ಕೃಷ್ಣಂ ಪ್ರಣಯ ಸಖಿ (ತ): ರಾ.7.05ಕ್ಕೆ, ರಾ.10.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಭೀಮಾ (ಕ): ಬೆ.10.50ಕ್ಕೆ, ಪೌಡರ್ (ಕ): ಮ.1.45ಕ್ಕೆ, ಸಂ.4.20ಕ್ಕೆ, ಫೂಟೇಜ್ (ಮ): ಸಂ.6.55ಕ್ಕೆ, ನುನಕ್ಕುಳಿ (ಮ): ರಾ.9.25ಕ್ಕೆ.
ಸ್ಕ್ರೀನ್ 2	ಕೃಷ್ಣಂ ಪ್ರಣಯ ಸಖಿ (ಕ): ಮ.12.25ಕ್ಕೆ, ಸಂ.6.25ಕ್ಕೆ, ರಾ.9.30ಕ್ಕೆ, ಭೀಮಾ (ಕ): ಮ.3.50ಕ್ಕೆ.
ಸ್ಕ್ರೀನ್ 3	ಸ್ತ್ರೀ 2 (ಹಿಂ): ಬೆ.10ಕ್ಕೆ, ಮ.12.50ಕ್ಕೆ, ಸಂ.6.50ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.45ಕ್ಕೆ, ಹಂಟ್ (ಮ): ರಾ.9.40ಕ್ಕೆ.
ಸ್ಕ್ರೀನ್ 4	ಕೃಷ್ಣಂ ಪ್ರಣಯ ಸಖಿ (ಕ): ಬೆ.10.20ಕ್ಕೆ, ಭೀಮಾ (ಕ): ಮ.1.25ಕ್ಕೆ, ಸಂ.6.35ಕ್ಕೆ, ಹಂಟ್ (ಮ): ಸಂ.4.20ಕ್ಕೆ, ಸ್ತ್ರೀ 2 (ಹಿಂ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಏಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಜೀನಿಯಸ್ ಪದವಿ ಕಾಲೇಜಿನಲ್ಲಿ ಗ್ರ್ಯಾಜುಯೇಷನ್ ಡೇ





ಮೈಸೂರಿನ ಜೀನಿಯಸ್ ಪದವಿ ಕಾಲೇಜಿನ 10ನೇ ವರ್ಷದ ವಾರ್ಷಿಕೋತ್ಸವ ಹಾಗೂ ಗ್ರ್ಯಾಜುಯೇಷನ್ ಡೇ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದಲ್ಲಿ ಕಾಲೇಜಿನ ಕಾರ್ಯದರ್ಶಿ ಹಾಗೂ ಪ್ರಾಂಶುಪಾಲರಾದ ಸುರೇಖಾ ಪ್ರಭು, ಅಧ್ಯಕ್ಷ ಪ್ರಭು, ಉಪನ್ಯಾಸಕರಾದ ಪವಿತ್ರ, ರಶ್ಮಿ, ಶೋಭನಾ, ಸಿಂಧೂ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಯನಾಡ್ ಎಫೆಕ್ಟ್: ಕಸ್ತೂರಿ ರಂಗನ್ ವರದಿ ಜಾರಿ ಬಗ್ಗೆ ಸಂಪುಟ ಉಪ ಸಮಿತಿ ಗಂಭೀರ ಚರ್ಚೆ

ಬೆಂಗಳೂರು, ಆ.28– ಕೇರಳದ ವಯನಾಡ್‌ನಲ್ಲಿ ನಡೆದ ಗುಡ್ಡ ಕುಸಿತ ದುರಂತದ ಬೆನ್ನಲ್ಲೇ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡಿದೆ. ಈ ನಡುವೆ ಪಶ್ಚಿಮಘಟ್ಟದ ಕುರಿತಾದ ಕಸ್ತೂರಿ ರಂಗನ್ ವರದಿ ಸಾಧಕ ಬಾಧಕಗಳ ಬಗ್ಗೆ ಸಂಪುಟ ಉಪ ಸಮಿತಿ ಸಭೆಯಲ್ಲಿ ಗಂಭೀರ ಸ್ವರೂಪದ ಚರ್ಚೆ ನಡೆದಿದೆ.



ಈಶ್ವರ್ ಖಂಡ್ರೆ

ಅರಣ್ಯ ಸಚಿವ ಈಶ್ವರ್ ಖಂಡ್ರೆ ನೇತೃತ್ವದಲ್ಲಿ ನಡೆದ ಸಂಪುಟ ಉಪ ಸಮಿತಿ ಸಭೆಯಲ್ಲಿ ಪರಿಸರ ಸೂಕ್ಷ್ಮ ಪ್ರದೇಶ ಕೇಂದ್ರದ ಅಧಿಸೂಚನೆ ಕುರಿತಂತೆ ಪಶ್ಚಿಮಘಟ್ಟದ ಜನಪ್ರತಿನಿಧಿಗಳೊಂದಿಗೆ ಸಮಾಲೋಚಿಸಲು ನಿರ್ಧಾರ ಮಾಡಲಾಯಿತು. ಪಶ್ಚಿಮ ಘಟ್ಟ ಪ್ರದೇಶಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಆಗಸ್ಟ್ 2ರಂದು ಹೊರಡಿಸಿರುವ 6ನೇ ಅಧಿಸೂಚನೆ (ಕಸ್ತೂರಿ ರಂಗನ್ ಸಮಿತಿ ವರದಿ)ಗೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚಿಸಿ, 10 ಜಿಲ್ಲೆಗಳ ಜನಪ್ರತಿನಿಧಿಗಳ ಅಭಿಪ್ರಾಯ ಪಡೆದು ಸಂಪುಟಕ್ಕೆ ಅಭಿಪ್ರಾಯ ಮಂಡಿಸಲು ಸಚಿವ ಸಂಪುಟದ ಉಪಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ.

ಈ ಸಭೆಯಲ್ಲಿ ಸಚಿವರುಗಳಾದ ಡಾ.ಎಚ್.ಸಿ. ಮಹದೇವಪ್ಪ, ಕೆ.ಜೆ. ಜಾರ್ಜ್, ದಿನೇಶ್ ಗುಂಡೂರಾವ್, ಮಧು ಬಂಗಾರಪ್ಪ, ಮಾಂಕಾಳ್ ವೈದ್ಯ ಭಾಗಿಯಾಗಿ ಪರಿಸರ ಸೂಕ್ಷ್ಮ ಪ್ರದೇಶದ ಕುರಿತಂತೆ ಕೇಂದ್ರದ ಅಧಿಸೂಚನೆ ಒಪ್ಪಿಕೊಂಡರೆ ಪಶ್ಚಿಮಘಟ್ಟದ ಜನರ ಬದುಕಿನ ಮೇಲೆ ಆಗಬಹುದಾದ ಪರಿಣಾಮ, ಸಾಧಕ ಬಾಧಕಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು. ಈಶ್ವರ ಖಂಡ್ರೆ ಮಾತನಾಡಿ, ಕಸ್ತೂರಿ ರಂಗನ್ ಸಮಿತಿ ವರದಿಯಲ್ಲಿ ರಾಜ್ಯದ ಪಶ್ಚಿಮ ಘಟ್ಟದಲ್ಲಿ 20,668 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ ಎಂದು ಘೋಷಿಸುವಂತೆ ಸೂಚಿಸಿದೆ. ಆದರೆ ಈಗಾಗಲೇ ರಾಜ್ಯ ಸರ್ಕಾರ ವನ್ಯಜೀವಿ ಧಾಮ, ಅಭಯಾರಣ್ಯ, ಹುಲಿ ಸಂರಕ್ಷಿತ ಮೀಸಲು ಸೇರಿದಂತೆ ವಿವಿಧ ಅರಣ್ಯ ಪ್ರದೇಶದಲ್ಲಿ 16632 ಚದರ ಕಿ.ಮೀ.ಪ್ರದೇಶವು ಘೋಷಿತ ಅರಣ್ಯ, ಸಂರಕ್ಷಿತ ಪ್ರದೇಶ ಮತ್ತು ಸಂರಕ್ಷಿತ ಪ್ರದೇಶಗಳಿಗೆ ಹೊಂದಿಕೊಂಡಿರುವ ಪರಿಸರ ಸೂಕ್ಷ್ಮ ವಲಯ (ಇ.ಎಸ್.ಝಡ್) ಎಂದು ಘೋಷಿಸಿದ್ದು, ಈ ಎಲ್ಲ ಪ್ರದೇಶಗಳು ಸಂರಕ್ಷಿತವಾಗಿರುತ್ತದೆ. ಪಶ್ಚಿಮಘಟ್ಟ ಪ್ರದೇಶದಲ್ಲಿ 1533 ವಸತಿ ಪ್ರದೇಶಗಳಿದ್ದು, ಇಲ್ಲಿರುವ ಜನರ ಬದುಕಿಗೆ ಯಾವುದೇ ರೀತಿಯ ತೊಂದರೆ ಆಗದ ರೀತಿಯಲ್ಲಿ ನಿರ್ದಿಷ್ಟ ಷರತ್ತುಗಳನ್ನು ಮುಂದಿಟ್ಟು ಕೇಂದ್ರ ಸರ್ಕಾರಕ್ಕೆ ಸೆಪ್ಟೆಂಬರ್ ಅಂತ್ಯದೊಳಗೆ ರಾಜ್ಯದ ನಿಲುವು ತಿಳಿಸಬೇಕಾಗುತ್ತದೆ ಎಂದು ಹೇಳಿದರು.

ಅಂತಿಮವಾಗಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ನಂತರ ಪಶ್ಚಿಮಘಟ್ಟದ 10 ಜಿಲ್ಲೆಗಳ ಜನಪ್ರತಿನಿಧಿಗಳ ಅಭಿಪ್ರಾಯಪಡೆದು ಸಚಿವ ಸಂಪುಟಕ್ಕೆ ಅಂತಿಮ ಶಿಫಾರಸು ಸಲ್ಲಿಸಲು ತೀರ್ಮಾನಿಸಲಾಯಿತು.

2013 ಏಪ್ರಿಲ್ 15ರಂದು ಸಲ್ಲಿಕೆಯಾದ ಕಸ್ತೂರಿರಂಗನ್ ವರದಿಯನ್ನು ಕೇಂದ್ರ ಸರ್ಕಾರ ಸ್ವೀಕಾರ ಮಾಡಿದೆ. ಈ ವರದಿಯಲ್ಲಿ ಪಶ್ಚಿಮಘಟ್ಟದ ವ್ಯಾಪ್ತಿಯಲ್ಲಿ ಗಣಿಗಾರಿಕೆ, ಕ್ವಾರಿ, ಮರಳು ಗಣಿಗಾರಿಕೆ, ಕೈಗಾರಿಕೆಗಳು, ಜಲ ವಿದ್ಯುತ್ ಯೋಜನೆ, ಪವನ ವಿದ್ಯುತ್ ಯೋಜನೆ ಸೇರಿದಂತೆ ಎಲ್ಲಾ ರೀತಿಯ ಕಾರ್ಯಗಳನ್ನು ಸ್ಥಗಿತಗೊಳಿಸಬೇಕೆಂದು ಶಿಫಾರಸು ಮಾಡಿದೆ. 20 ಸಾವಿರ ಚದರ ಮೀಟರ್‌ಗಿಂತ ದೊಡ್ಡ ಕಟ್ಟಡ ನಿರ್ಮಾಣ ಮಾಡುವ ಹಾಗಿಲ್ಲ. ಅಲ್ಲದೆ, ಈ ಪ್ರದೇಶದಲ್ಲಿ ಸಿಮೆಂಟ್, ಕಲ್ಲು, ರಾಸಾಯನಿಕ ಬಳಕೆ ಹಾಗೂ ಜನವಸತಿ ಪ್ರದೇಶ ನಿರ್ಮಾಣಕ್ಕೂ ನಿಷೇಧ ವಿಧಿಸಬೇಕೆಂದು ಹೇಳಲಾಗಿದೆ. ಅದಕ್ಕೆ ವ್ಯಾಪಕವಾಗಿ ವಿರೋಧ ವ್ಯಕ್ತವಾಗುತ್ತಿದೆ.

ಕಿರಿಯ ವೈದ್ಯೆ ಅತ್ಯಾಚಾರ, ಕೊಲೆ ಪ್ರಕರಣ

ಆರ್‌ಜಿ ಕರ್ ಸಂಸ್ಥೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಐಎಂಎ ಸದಸ್ಯತ್ವ ಅಮಾನತು

ನವದೆಹಲಿ: ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಕಿರಿಯ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದಲ್ಲಿ ಸಿಬಿಐ ವಶದಲ್ಲಿರುವ ಸಂಸ್ಥೆಯ ಮಾಜಿ ಪ್ರಾಂಶುಪಾಲ ಡಾ. ಸಂದೀಪ್ ಘೋಷ್ ಅವರ ಸದಸ್ಯತ್ವವನ್ನು ಭಾರತೀಯ ವೈದ್ಯಕೀಯ ಸಂಘ (ಐಎಂಎ) ಬುಧವಾರ ಅಮಾನತುಗೊಳಿಸಿದೆ.



ಐಎಂಎ ಕೋಲ್ಕತ್ತಾ ಘಟಕದ ಉಪಾಧ್ಯಕ್ಷರಾಗಿರುವ ಘೋಷ್ ಅವರ ಸದಸ್ಯತ್ವ ವನ್ನು ಅಮಾನತುಗೊಳಿಸುವ ನಿರ್ಧಾರ ವನ್ನು ಸಂಘದ ಶಿಸ್ತು ಸಮಿತಿ ತೆಗೆದು ಕೊಂಡಿದೆ. ಐಎಂಎ ರಾಷ್ಟ್ರೀಯ ಅಧ್ಯಕ್ಷ ಡಾ.ಆರ್.ವಿ. ಅಶೋಕನ್ ಅವರು ರಚಿಸಿದ್ದ ಶಿಸ್ತು ಸಮಿತಿಯು ಬುಧವಾರ ಸ್ವಯಂಪ್ರೇರಿತ ವಾಗಿ ಸ್ನಾತಕೋತ್ತರ ನಿವಾಸಿ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣ, ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿನ ಬೆಳವಣಿಗೆಗಳನ್ನು ಪರಿಗಣಿಸಿ ಡಾ.ಸಂದೀಪ್ ಘೋಷ್ ಸದಸ್ಯತ್ವವನ್ನು ಅಮಾನತುಗೊಳಿಸಲಾಗಿದೆ ಎಂದು ಭಾರತೀಯ ವೈದ್ಯಕೀಯ ಸಂಘ ಆದೇಶದಲ್ಲಿ ತಿಳಿಸಿದೆ.

ತಿರುಪತಿ ಲಡ್ಡು ಪ್ರಸಾದಕ್ಕೆ ಮತ್ತೇ ನಂದಿನಿ ತುಪ್ಪ

ಬೆಂಗಳೂರು, ಆ.28– ತಿರುಮಲ ತಿರುಪತಿ ದೇವಸ್ಥಾನದ ಲಡ್ಡು ಪ್ರಸಾದಕ್ಕೆ ಮತ್ತೇ ರಾಜ್ಯದ ನಂದಿನಿ ತುಪ್ಪ ಪೂರೈಕೆ ಆರಂಭವಾಗಿದೆ. ಟ್ಯಾಂಕರ್ ಮೂಲಕ ತುಪ್ಪ ಸಾಗಣೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗೃಹ ಕಚೇರಿ ಕೃಷ್ಣದಲ್ಲಿ ಬುಧವಾರ ಚಾಲನೆ ನೀಡಿದರು.

ತಿರುಪತಿ ದೇವಸ್ಥಾನಕ್ಕೆ ಶ್ರೀವಾರಿ ಪ್ರಸಾದ ತಯಾರಿಕೆಗೆ ಹಲವು ವರ್ಷಗಳಿಂದ ಆಗ್ಮಾರ್ಕ್ ಸ್ಪೆಷಲ್ ಗ್ರೇಡ್ ಹೊಂದಿರುವ ನಂದಿನಿ ತುಪ್ಪವನ್ನು ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳ (ಕೆಎಂಎಫ್) ಪೂರೈಸುತ್ತಿದೆ.



ತಿರುಪತಿ ಲಡ್ಡು ಪ್ರಸಾದಕ್ಕೆ ಮತ್ತೆ ನಂದಿನಿ ತುಪ್ಪ ಸರಬರಾಜಾಗುತ್ತಿದ್ದು, ಬುಧವಾರ ತುಪ್ಪದ ಟ್ಯಾಂಕರ್‌ಗೆ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಿದರು.

2013–14ನೇ ಸಾಲಿನಿಂದ 2021–22ರವರೆಗೆ 5 ಸಾವಿರ ಟನ್ ತುಪ್ಪವನ್ನು ತಿರುಪತಿ ದೇವಸ್ಥಾನಕ್ಕೆ ಸರಬರಾಜು ಮಾಡಲಾಗಿದೆ. ಪ್ರಸಕ್ತ ಸಾಲಿನಲ್ಲಿ ಆರಂಭಿಕವಾಗಿ 350 ಟನ್ ತುಪ್ಪವನ್ನು ಸರಬರಾಜು ಮಾಡಲು ಟೆಂಡರ್ ಮೂಲಕ ಬೇಡಿಕೆ ಬಂದಿದೆ. ಬೇಡಿಕೆಗೆ ಅನುಗುಣವಾಗಿ ಹಸುವಿನ ತುಪ್ಪವನ್ನು ಟ್ಯಾಂಕರ್ ಮೂಲಕ ಸರಬರಾಜು ಮಾಡಲಾಗುವುದು ಎಂದು ಕೆಎಂಎಫ್ ತಿಳಿಸಿದೆ.

2022–23ನೇ ಸಾಲಿನಲ್ಲಿ ಟೆಂಡರ್ ಪ್ರಕ್ರಿಯೆ ವೇಳೆ ತೀವ್ರ ಸ್ಪರ್ಧೆ ಏರ್ಪಟ್ಟ ಕಾರಣ ತಿರುಪತಿ ದೇವಸ್ಥಾನಕ್ಕೆ ಕೆಎಂಎಫ್ ತುಪ್ಪ ಪೂರೈಸಿರಲಿಲ್ಲ. ಈ ಹಿಂದಿನಂತೆಯೇ ತಿರುಪತಿ ತಿರುಮಲ ದೇವಸ್ಥಾನಕ್ಕೆ ತುಪ್ಪ ಪೂರೈಸಲು ಉತ್ಸುಕವಾಗಿದ್ದೇವೆ ಎಂದು ಟಿಟಿಡಿ ಆಡಳಿತ ಮಂಡಳಿಗೆ ಕೆಎಂಎಫ್ ಇತ್ತೀಚೆಗೆ ಪತ್ರ ಬರೆದಿತ್ತು.

ಗಾಂಜಾ ಬೆಳೆ: ಆರೋಪಿಗೆ ಮೂರು ವರ್ಷ ಜೈಲು ಶಿಕ್ಷೆ

ಮೈಸೂರು, ಆ.28(ಎಸ್‌ಪಿಎನ್)– ತನ್ನ ಜಮೀನಿನಲ್ಲಿ 14 ಕೆಜಿ 150 ಗ್ರಾಂ ತೂಕದ 11 ಗಾಂಜಾ ಗಿಡಗಳನ್ನು ಬೆಳೆಸಿದ್ದ ಆರೋಪಿಗೆ ಮೂರು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಮತ್ತು 50 ಸಾವಿರ ರೂ. ದಂಡ ವಿಧಿಸಿ ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಬುಧವಾರ ತೀರ್ಪು ನೀಡಿದೆ.

ಪಿರಿಯಾಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯ ಚಿಕ್ಕವಡ್ಡರಕೇರಿ ಗ್ರಾಮದ ಕರೀಗೌಡರ ಪುತ್ರ ಹರೀಶ್ ಎಂಬಾತ ತನ್ನ ಜಮೀನಿನಲ್ಲಿ ಸಿಲ್ವರ್ ಮರ ಹಾಗೂ ಕನಕಾಂಬರ ಗಿಡಗಳನ್ನು ಹಾಕಿದ್ದು, ಇವುಗಳ ಮಧ್ಯದಲ್ಲಿರುವ ಬದುವಿನಲ್ಲಿ 11 ಗಾಂಜಾ ಗಿಡಗಳನ್ನು ಬೆಳೆಸಿದ್ದರು.

ಖಚಿತ ಮಾಹಿತಿ ಮೇರೆಗೆ 2020ರ ಸೆ.11ರಂದು ಹುಣಸೂರು ತಾಲೂಕು ಉಪ ಪೊಲೀಸ್ ಅಧೀಕ್ಷಕರ ಆದೇಶದ ಮೇರೆಗೆ ಪಿರಿಯಾಪಟ್ಟಣ ಪೊಲೀಸ್ ಠಾಣೆ ಪಿಐ ಜಗದೀಶ್ ಮತ್ತು ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಜಮೀನಿನಲ್ಲಿ ಬೆಳೆದಿದ್ದ 11 ಗಾಂಜಾ ಗಿಡಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿಕೊಂಡು, ಆರೋಪಿ ವಿರುದ್ಧ ಜಿಲ್ಲಾ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ ಪ್ರಧಾನ ನ್ಯಾಯಾಧೀಶ ರವೀಂದ್ರ ಹೆಗಡೆ, ಆರೋಪಿ ಹರೀಶ್ ವಿರುದ್ಧದ ಆರೋಪ ಸಾಬೀತಾದ ಹಿನ್ನಲೆಯಲ್ಲಿ ಆರೋಪಿಗೆ 3 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಮತ್ತು 50 ಸಾವಿರ ರೂ.ದಂಡ ವಿಧಿಸಿ ಬುಧವಾರ ತೀರ್ಪು ನೀಡಿದ್ದರು. ಪ್ರಕರಣದಲ್ಲಿ ಸರ್ಕಾರದ ಪರವಾಗಿ ಪಬ್ಲಿಕ್ ಪ್ರಾಸಿಕ್ಯೂಟರ್ ಎಂ.ಎನ್.ರಂಜನಾ ರಾವ್ ವಾದ ಮಂಡಿಸಿದ್ದರು.

ಕುಡಿಯುವ ನೀರು ಪೂರೈಕೆ; ಸ್ವಚ್ಛತೆ ಕಾಪಾಡಲು ಆಗ್ರಹಿಸಿ ನಿವಾಸಿಗಳ ಪ್ರತಿಭಟನೆ

ಮೈಸೂರು, ಆ.28(ಎಸ್‌ಪಿಎನ್)– ಪ್ರತಿದಿನ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ, ಅನೈರ್ಮಲ್ಯತೆ ಹಾಗೂ ಮೂಲಸೌಕರ್ಯ ಒದಗಿಸುವಲ್ಲಿ ವಿಫಲರಾಗಿರುವ ಪಾಲಿಕೆ ಅಧಿಕಾರಿಗಳ ವಿರುದ್ಧ ಮೈಸೂರು ನಗರಪಾಲಿಕೆ ವ್ಯಾಪ್ತಿಯ ವಾರ್ಡ್ ನಂ 59ರ ನಿವಾಸಿಗಳು (ಕುವೆಂಪುನಗರ) ಬುಧವಾರ ಪ್ರತಿಭಟನೆ ನಡೆಸಿದರು.

ಕುವೆಂಪುನಗರ ಕೆಎಸ್‌ಆರ್‌ಟಿಸಿ ಡಿಪೋ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದ ಇಲ್ಲಿನ ನಿವಾಸಿಗಳು, ಪಾಲಿಕೆ ಅಧಿಕಾರಿಗಳ ವಿರುದ್ಧ ವಿವಿಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶ ಹೊರಹಾಕಿದರು.

ವಾರ್ಡ್ ನಂ.59ರ ಕುವೆಂಪುನಗರ ಸುತ್ತಮುತ್ತಲ ಬಡಾವಣೆಗಳಲ್ಲಿ ಚರಂಡಿಗಳು ಸಂಪೂರ್ಣ ಮುಚ್ಚಿ ಹೋಗಿದ್ದು, ಮಳೆಗಾಲದಲ್ಲಿ ಮಳೆ ನೀರು ರಸ್ತೆಗೆ ನುಗ್ಗಿ ಮಿನಿ ನದಿಗಳಾಗಿ ಮಾರ್ಪಾಡಾಗುತ್ತವೆ. ಯುಜಿಡಿ ಪೈಪ್‌ಲೈನ್ ಅಳವಡಿಕೆ ಸೇರಿದಂತೆ ಇತರೆ ಕಾಮಗಾರಿಗೆ ಅಗೆದಿರುವ ರಸ್ತೆಗಳಲ್ಲಿ ಗುಂಡಿಬಿದ್ದು, ವಾಹನ ಸವಾರರು ಆ ಮಾರ್ಗದಲ್ಲಿ ಸಂಚರಿಸಲು ಪರದಾಡುವ ಪರಿಸ್ಥಿತಿಯಿದೆ. ಈ ಅವ್ಯವಸ್ಥೆಯನ್ನು ಸರಿಪಡಿಸುವಂತೆ ಹಲವು ಬಾರಿ ಅಧಿಕಾರಿಗಳಲ್ಲಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.



ಮೈಸೂರು ನಗರ ಪಾಲಿಕೆ ವಾರ್ಡ್ ನಂ.59ರ ವ್ಯಾಪ್ತಿಯ ನಿವಾಸಿಗಳು ಮೂಲಸೌಕರ್ಯಕ್ಕೆ ಆಗ್ರಹಿಸಿ ಕುವೆಂಪುನಗರ ಕೆಎಸ್‌ಆರ್‌ಟಿಸಿ ಡಿಪೋ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರು.

ಮೋರಿಗಳಲ್ಲಿ ಸ್ವಚ್ಛತೆ ಇಲ್ಲದ ಕಾರಣ ಕುವೆಂಪುನಗರ ಕೆಎಸ್‌ಆರ್‌ಟಿಸಿ ಡಿಪೋ ರಸ್ತೆಯ ಆಸು–ಪಾಸಿನಲ್ಲಿ ಸೊಳ್ಳೆಗಳು ಹೆಚ್ಚಾಗಿದ್ದು, ಸಾಂಕ್ರಾಮಿಕ ರೋಗಗಳು ವೃದ್ಧರು, ಮಕ್ಕಳು, ಮಹಿಳೆಯರಲ್ಲಿ ಕಾಣಿಸಿಕೊಂಡು ಅವರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಸೊಳ್ಳೆಗಳ ನಿಯಂತ್ರಣಕ್ಕೆ ಫಾಗಿಂಗ್ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಲ್ಲಿ ಪ್ರತಿಭಟನಾಕಾರರು ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಕುವೆಂಪುನಗರ ನಿವಾಸಿಗಳಾದ ರಾಜೇಶ್, ದಾಕ್ಷಾಯಿಣಿ, ನವೀನ್‌ಕುಮಾರ್, ಪ್ರಮೀಣ್, ರಾಜು, ಮಂಜುನಾಥ್ ಸೇರಿದಂತೆ ಇತರರಿದ್ದರು.

ಕೇಂದ್ರ ವಾರ್ತಾ ಶಾಖೆ ನಿರ್ದೇಶಕ ಡಾ. ಎಚ್.ಆರ್.ಕೇಶವಮೂರ್ತಿ ನಿಧನ

ಮೈಸೂರು, ಆ.28– ನವದೆಹಲಿಯ ಕೇಂದ್ರ ವಾರ್ತಾ ಶಾಖೆಯಲ್ಲಿ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿರುವ ಕರ್ನಾಟಕದ ಡಾ. ಎಚ್.ಆರ್. ಕೇಶವಮೂರ್ತಿ ಅವರು ಇಂದು ನಿಧನರಾದರು.



ಡಾ. ಎಚ್.ಆರ್.ಕೇಶವಮೂರ್ತಿ ಅವರಿಗೆ 59 ವರ್ಷ ವಯಸ್ಸಾಗಿತ್ತು. 1995ರ ಶ್ರೇಣಿಯ ಭಾರತೀಯ ಸಮಾಚಾರ ಸೇವಾ ಅಧಿಕಾರಿಯಾಗಿದ್ದ ಕೇಶವಮೂರ್ತಿ ಅವರು ಕಳೆದ ಕೆಲವು ದಿನಗಳಿಂದ ಅಸ್ವಸ್ಥರಾಗಿದ್ದರು. ಮೈಸೂರಿನಲ್ಲಿ ಕೊನೆಯುಸಿರೆಳೆದರು ಎಂದು ಕುಟುಂಬದ ಸದಸ್ಯರು ಮಾಹಿತಿ ನೀಡಿದ್ದಾರೆ. ಡಾ. ಎಚ್.ಆರ್. ಕೇಶವಮೂರ್ತಿ ಅವರು ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರನನ್ನು ಅಗಲಿದ್ದಾರೆ. ಕೇಶವಮೂರ್ತಿ ಅವರು ಹಲವಾರು ಹುದ್ದೆಗಳನ್ನು ಯಶಸ್ವಿಯಾಗಿ ನಿಭಾಯಿಸಿದ್ದರು.

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ನಗರಾಭಿವೃದ್ಧಿ ಸಚಿವಾಲಯ, ಕೃಷಿ ಸಚಿವಾಲಯ, ದೂರ ಸಂಪರ್ಕ ಸಚಿವಾಲಯ ಹಾಗೂ ಈಶಾನ್ಯದ ಅರುಣಾಚಲ ಪ್ರದೇಶದ ಇಟಾ ನಗರದಲ್ಲಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಕೇಶವಮೂರ್ತಿ ಅವರ ನಿಧನಕ್ಕೆ ಪಿ.ಐ.ಬಿ. ಕರ್ನಾಟಕ ವಲಯದ ಹೆಚ್ಚುವರಿ ಮಹಾ ನಿರ್ದೇಶಕರಾದ ಎಸ್.ಜಿ. ರವೀಂದ್ರ ಹಾಗೂ ಕೇಂದ್ರ ಸಂವಹನ ಇಲಾಖೆಯ ಹಿರಿಯ ಅಧಿಕಾರಿಗಳು, ಸಿಬ್ಬಂದಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಸಂಜೆ ಗೋಕುಲಂ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗೆ ಆಯ್ಕೆ

ಮೈಸೂರು, ಆ.28– ಎನ್.ಆರ್. ಮೊಹಲ್ಲಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿಯಾದ ಶಿವಲಿಂಗಯ್ಯ ಕೆ.ಜೆ ಅವರು ಭಾರತ ಸರ್ಕಾರದ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಇಲಾಖೆಯ ವತಿಯಿಂದ ನೀಡುವ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ–2024ಕ್ಕೆ ಆಯ್ಕೆಯಾಗಿದ್ದು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಗೋವಿಂದರಾಜು.ಜೆ, ಜಿಲ್ಲಾ ಕೌಶಲಾಭಿವೃದ್ಧಿ ಇಲಾಖೆ ತಾಂತ್ರಿಕ ನೌಕರರ ಸಂಘದ ಜಿಲ್ಲಾಧ್ಯಕ್ಷ ಬೋಪಯ್ಯ.ಸಿ.ಯು, ಕಾರ್ಯದರ್ಶಿಯಾದ ಭಾಸ್ಕರ.ಪಿ.ಬಿ, ಪದಾಧಿಕಾರಿಗಳು ಹಾಗೂ ಜಿಲ್ಲಾ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಅಧಿಕಾರಿಗಳು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಬೆಂಗಳೂರು ವಿವಿಗಳಿಗೆ ಮೂವರು ಸಿಂಡಿಕೇಟ್ ಸದಸ್ಯರ ನೇಮಕ

ಮೈಸೂರು, ಆ.28(ಎಂಟಿವೈ)– ಬೆಂಗಳೂರು ವಿಶ್ವವಿದ್ಯಾಲಯ (ಜ್ಞಾನಭಾರತಿ) ಸಿಂಡಿಕೇಟ್ ಸದಸ್ಯರನ್ನಾಗಿ ವರುಣ ಹೋಬಳಿಯ ದಂಡಿಕೆರೆ ಗ್ರಾಮದ ದಂಡಿಕೆರೆ ನಾಗರಾಜ್ ಅವರನ್ನು ನಾಮನಿರ್ದೇಶನ ಮಾಡಿ ಕರ್ನಾಟಕ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. ನಾಗರಾಜ್ ಸಂವಹನ ಮತ್ತು ಪತ್ರಿಕೋದ್ಯಮ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದು, 25 ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರನ್ನಾಗಿ ಮೈಸೂರು ತಾಲೂಕು ಜಯಪುರ ಹೋಬಳಿ ಡಿ.ಸಾಲುಂಡಿ ಗ್ರಾಮದ ಡಾ.ಹೆಚ್.ಬೀರಪ್ಪ, ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯ (ಕೋಲಾರ)ದ ಸಿಂಡಿಕೇಟ್ ಸದಸ್ಯರನ್ನಾಗಿ ನಂಜನಗೂಡು ತಾಲೂಕು ಚಿಕ್ಕಯ್ಯನಛತ್ರ ಹೋಬಳಿ ಹೊಸಕೋಟೆ ಗ್ರಾಮದ ಕೆ.ಬಸವರಾಜು ಅವರನ್ನು ನಾಮ ನಿರ್ದೇಶನ ಮಾಡಲಾಗಿದೆ.



ದಂಡಿಕೆರೆ ನಾಗರಾಜು

ಸ್ವದೇಶಿ ದರ್ಶನ್ ಯೋಜನೆಯಡಿ ಮೈಸೂರು ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಎರಡನೇ ಹಂತದ ಡಿಪಿಆರ್

ಮೈಸೂರು ಪರಂಪರೆ, ಇತಿಹಾಸ ಬಿಂಬಿಸುವ ಪ್ರವಾಸೋದ್ಯಮಕ್ಕೆ ಹೆಚ್ಚು ಒತ್ತು ನೀಡಲು ಡಿಸಿ ಸೂಚನೆ

ಮೈಸೂರು, ಆ.28– ಮೈಸೂರು ಕರ್ನಾಟಕದಲ್ಲಿ ಉತ್ತಮವಾಗಿ ನಿರ್ವಹಿಸಲ್ಪಟ್ಟ, ಸ್ವಚ್ಛ, ಸಾಂಸ್ಕೃತಿಕವಾಗಿ ಮತ್ತು ಪರಂಪರೆಯ ಶ್ರೀಮಂತ ನಗರವಾಗಿದ್ದು ಸ್ವದೇಶ್ ದರ್ಶನ್ 2.0 ಯೋಜನೆಯಡಿ ಮೈಸೂರು ನಗರದ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಡಿಪಿಆರ್ ಸಿದ್ಧಪಡಿಸಲಾಗುತ್ತಿದ್ದು, ಮೈಸೂರು ಪರಂಪರೆ ಹಾಗೂ ಇತಿಹಾಸದ ಬಿಂಬಿಸುವ ಪ್ರವಾಸೋದ್ಯಮಕ್ಕೆ ಹೆಚ್ಚು ಗಮನಹರಿಸಿ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಮೈಸೂರು ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಸ್ವದೇಶ್ ದರ್ಶನ್ 2.0 ಯೋಜನೆ ಡಿಪಿಆರ್ 2 ಸಿದ್ಧಪಡಿಸುವ ಸಂಬಂಧ ನಡೆದ ಸಭೆಯಲ್ಲಿ ಮಾತನಾಡಿದರು.

ಈ ಯೋಜನೆಯಡಿ ಮೈಸೂರು ಸೇರಿದಂತೆ ಸುತ್ತಲಿನ ಕ್ಷೇತ್ರಗಳ ಅಭಿವೃದ್ಧಿಗೆ ಕೇಂದ್ರ ಸರಕಾರದಿಂದ 70 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಸ್ವದೇಶ್ ದರ್ಶನ್ ಯೋಜನೆಯಡಿ ಮೊದಲನೇ ಹಂತದಲ್ಲಿ ಟಾಂಗ್ ರೈಡ್ ಹಾಗೂ ಎಕೋಲಜಿಕಲ್ ಎಕ್ಸ್‌ಪಿರಿಯನ್ಸ್ ವಲಯಕ್ಕೆ ರೂ.21.17 ಕೋಟಿ ಅನುದಾನಕ್ಕೆ ಡಿಪಿಆರ್ ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಈಗ ಎರಡನೇ ಹಂತದಲ್ಲಿ ಮೈಸೂರಿನ ನಗರದ ಹೃದಯ ಭಾಗದಲ್ಲಿರುವ ಹಳೆಯ ಪಾರಂಪರಿಕ ಜಿಲ್ಲಾಧಿಕಾರಿ ಕಚೇರಿಯನ್ನು ವಸ್ತು ಸಂಗ್ರಹಾಲಯವಾಗಿ ಅಭಿವೃದ್ಧಿ ಮಾಡಲು ಮೈಸೂರು ಇತಿಹಾಸ, ಗತವೈಭವ ಹಾಗೂ ಪಾರಂಪರಿಕತೆ ಬಿಂಬಿಸುವ ರೀತಿಯಲ್ಲಿ ಡಿಪಿಆರ್ ಸಿದ್ಧಪಡಿಸಿ ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಮೈಸೂರು ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಸ್ವದೇಶ್ ದರ್ಶನ್ 2.0 ಯೋಜನೆ ಡಿಪಿಆರ್ 2 ಸಿದ್ಧಪಡಿಸುವ ಸಂಬಂಧ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಎಂ.ಕೆ. ಸವಿತಾ, ಸ್ಥಳೀಯ ಪ್ರವಾಸೋದ್ಯಮ ಸರ್ಕ್ಯೂಟ್ ಮತ್ತು ಪ್ರವಾಸೋದ್ಯಮಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಈ ಯೋಜನಾ ವರದಿ ಸಿದ್ಧಪಡಿಸಲಾಗುತ್ತಿದ್ದು ಹಳೇ ಜಿಲ್ಲಾಧಿಕಾರಿಗಳ ಕಚೇರಿಯನ್ನು ಮೈಸೂರಿನ ಗತ ವೈಭವ, ಹಾಗೂ ಪರಂಪರೆ ಬಿಂಬಿಸುವ ಅನುಸಾರ ಡಿಪಿಆರ್ ಸಿದ್ಧಪಡಿಸಲು ಕ್ರಮವಹಿಸಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಅರಣ್ಯಾಧಿಕಾರಿ ಬಸವರಾಜು, ವಸ್ತುಪ್ರದರ್ಶನ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧಿಕಾರಿ ರುದ್ರೇಶ್, ಅರಮನೆ ಮಂಡಳಿಯ ಉಪ ನಿರ್ದೇಶಕರಾದ ಸುಬ್ರಹ್ಮಣ್ಯ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಭಾರತದಲ್ಲಿ ರೈಲು ಹಳಿ ತಪ್ಪಿಸಲು ರಾಮೇಶ್ವರಂ ಕೆಫೆ ಬ್ಲಾಸ್ಟ್ ಸೂತ್ರಧಾರ

ಪಾಕ್ ಉಗ್ರನಿಂದ ಅನುಯಾಯಿಗಳಿಗೆ ಕರೆ

ನವದೆಹಲಿ,ಆ.28– ಬೆಂಗಳೂರಿನ ರಾಮೇಶ್ವರಂ ಕೆಫೆ ಸ್ಫೋಟದ ಸಂಚುಕೋರ ಎನ್ನಲಾದ ಪಾಕಿಸ್ತಾನ ಮೂಲದ ಭಯೋತ್ಪಾದಕ ಫರ್ಹತ್ತುಲ್ಲಾ ಗೋರಿ ಟೆಲಿಗ್ರಾಮ್‌ನಲ್ಲಿ ಬಿಡುಗಡೆಯಾದ ವಿಡಿಯೋದಲ್ಲಿ ಕಾಣಿಸಿಕೊಂಡು ದೆಹಲಿ ಮತ್ತು ಮುಂಬೈ ಸೇರಿದಂತೆ ಪ್ರಮುಖ ಭಾರತೀಯ ನಗರಗಳಲ್ಲಿ ಬೃಹತ್ ಪ್ರಮಾಣದಲ್ಲಿ ರೈಲು ಹಳಿ ತಪ್ಪಿಸುವಂತೆ ತನ್ನ ಅನುಯಾಯಿಗಳಿಗೆ ಕರೆ ನೀಡಿದ್ದಾನೆ.

ಒಂದೆರಡು ವಾರಗಳಿಂದ ವೈರಲ್ ಆಗಿರುವ ಈ ವಿಡಿಯೋ ಭಾರತೀಯ ಗುಪ್ತಚರ ಸಂಸ್ಥೆಗೆ ಆತಂಕ ತಂದಿದೆ. ಗೋರಿಯ ಕರೆಯಿಂದ ಭಾರತೀಯ ರೈಲ್ವೇಗಳ ಮೇಲಿನ ಸಂಭಾವ್ಯ ದಾಳಿ ನಡೆಯದಂತೆ ಗುಪ್ತಚರ ಸಂಸ್ಥೆ ಪರಿಶೀಲಿಸುತ್ತಿದೆ. ಪ್ರಸ್ತುತ ಭಾರತಕ್ಕೆ ಬೇಕಾಗಿರುವ ಉಗ್ರರ ಪಟ್ಟಿಯಲ್ಲಿ ಫರ್ಹತ್ತುಲ್ಲಾ ಗೋರಿ ಟಾಪ್‌ನಲ್ಲಿದ್ದಾನೆ. ತನ್ನ ಅನುಯಾಯಿಗಳಿಗೆ ಬಂದೂಕುಗಳ ಬಳಕೆಯನ್ನು ಮೀರಿ ಅಡಚಣೆಗಳನ್ನು ಉಂಟು ಮಾಡುವ ವಿವಿಧ ವಿಧಾನಗಳನ್ನು ತನ್ನ ಅನುಯಾಯಿಗಳಿಗೆ ವಿವರಿಸಿದ್ದಾನೆ. ದೇಶದಲ್ಲಿ "ಅವ್ಯವಸ್ಥೆಯನ್ನು ಉಂಟುಮಾಡುವ" ಗುರಿಯೊಂದಿಗೆ ರೈಲು ಮಾರ್ಗಗಳು, ಪೆಟ್ರೋಲ್ ಪೈಪ್‌ಲೈನ್‌ಗಳು ಮತ್ತು ಲಾಜಿಸ್ಟಿಕಲ್ ಸರಪಣಿಗಳ ಮೇಲೆ ದಾಳಿ ಮಾಡುವಂತೆ ಆತ ಕರೆ ನೀಡಿರುವುದು ವಿಡಿಯೋದಲ್ಲಿ ಕಾಣುತ್ತಿದೆ.



ಫರ್ಹತ್ತುಲ್ಲಾ ಗೋರಿ

ಪೆಟ್ರೋಲ್ ಪೈಪ್‌ಲೈನ್‌ಗಳು, ಅವುಗಳ ಲಾಜಿಸ್ಟಿಕ್ಸ್ ಸರಪಳಿ ಮತ್ತು ಸಹಯೋಗಗಳನ್ನು ಗುರಿಯಾಗಿಸಿಕೊಳ್ಳಿ. ರೈಲು ಮಾರ್ಗಗಳು, ಅವುಗಳ ಸಾರಿಗೆ ವ್ಯವಸ್ಥೆಯನ್ನು ಅಡ್ಡಿಪಡಿಸಿ. ಇವು ಅವ್ಯವಸ್ಥೆಯನ್ನು ಉಂಟು ಮಾಡುತ್ತವೆ ಎಂದು ಗೋರಿ ಘೋಷಿಸಿದ್ದಾನೆ. ಭಾರತ ಸರ್ಕಾರವು ED ಮತ್ತು NIA ಮೂಲಕ ನಮ್ಮ ಅಸ್ತಿತ್ವವನ್ನು ಗುರಿಯಾಗಿಸುತ್ತಿದೆ, ಆದರೆ ದೃಢವಾಗಿರಿ, ನಾವು ಬೇಗ ಅಥವಾ ನಿಧಾನವಾಗಿಯಾದರು ಅಧಿಕಾರವನ್ನು ಕಸಿದುಕೊಳ್ಳುತ್ತೇವೆ" ಎಂದು ಭಾರತೀಯ ಗುಪ್ತಚರ ಸಂಸ್ಥೆಯ ಪಟ್ಟಿಯಲ್ಲಿರುವ ಭಯೋತ್ಪಾದಕ ಹೇಳಿದ್ದಾನೆ.

ಮೂರು ನಿಮಿಷಗಳ ವೀಡಿಯೊದಲ್ಲಿ, ಗೋರಿ 'ಫಿದಾಯೀನ್ ಯುದ್ಧ' ಅಥವಾ ಆತ್ಮಹತ್ಯಾ ದಾಳಿಗೆ ಕರೆ ನೀಡಿದ್ದಾನೆ, ಆತನ ಅನುಯಾಯಿಗಳು ಹಿಂದೂ ಮುಖಂಡರು ಮತ್ತು ಪೊಲೀಸ್ ಸಿಬ್ಬಂದಿಗಳನ್ನು ಗುರಿಯಾಗಿಸಿಕೊಳ್ಳುವಂತೆ ಹೇಳಿದ್ದಾನೆ. ಅವರು ಹೆಚ್ಚು ದುರ್ಬಲರಾಗಿರುವಲ್ಲಿ ಹೇಗೆ ಕೆಲಸ ಮಾಡಬೇಕು ಎಂಬುದನ್ನು ಖಚಿತಪಡಿಸಿಕೊಳ್ಳಲು ವಿಭಿನ್ನ ತಂತ್ರಗಳೊಂದಿಗೆ ಪ್ರಯೋಗಿಸಿ ಎಂದಿದ್ದಾನೆ. ಭಾರತದಲ್ಲಿ ಅಶಾಂತಿ ಮತ್ತು ಕೋಮು ಉದ್ವಿಗ್ನತೆಯನ್ನು ಹುಟ್ಟುಹಾಕಲು ಪಾಕಿಸ್ತಾನದ ಇಂಟರ್-ಸರ್ವೀಸಸ್ ಇಂಟೆಲಿಜೆನ್ಸ್ ತಂತ್ರದ ಭಾಗ ಎಂದ ವೀಡಿಯೊವನ್ನು ನೋಡಲಾಗುತ್ತಿದೆ.

ಮೂಲತಃ ಹೈದರಾಬಾದ್‌ನವನಾದ ಗೋರಿಯನ್ನು 2022 ರಲ್ಲಿ ಭಾರತೀಯ ಗೃಹ ಸಚಿವಾಲಯವು ಭಯೋತ್ಪಾದಕ ಎಂದು ಗೊತ್ತುಪಡಿಸಿತು. ಇದರ ಹೊರತಾಗಿಯೂ, ಆತ ಪಾಕಿಸ್ತಾನದ ಲಾಹೋರ್‌ನಿಂದ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾನೆ. ಭಾರತದಲ್ಲಿ ಅಸ್ಥಿರತೆಯನ್ನು ಸೃಷ್ಟಿಸಲು ವಿಧ್ವಂಸಕ ಕೃತ್ಯಕ್ಕೆ ISI ತಂತ್ರದ ಭಾಗವಾಗಿ ಗೋರಿಯ ಈ ವಿಡಿಯೋ ಇರಬಹುದು ಎಂದು ಗುಪ್ತಚರ ಮೂಲಗಳು ನಂಬಿವೆ, ಆದರೆ ಪಾಕಿಸ್ತಾನವು ತನ್ನ ಮಣ್ಣಿನಲ್ಲಿ ಉಗ್ರ ಗೋರಿಯ ಉಪಸ್ಥಿತಿಯನ್ನು ನಿರಾಕರಿಸುವ ಮೂಲಕ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುತ್ತಿದೆ. ಗೋರಿ ಈಗ ಟೆಲಿಗ್ರಾಮ್ ನಂತಹ ಸಾರ್ವಜನಿಕ ವೇದಿಕೆಗಳ ಮೂಲಕ ಬಹಿರಂಗವಾಗಿ ಹಿಂಸಾಚಾರವನ್ನು ಪ್ರಚೋದಿಸುತ್ತಿರುವ ಕಾರಣ, ಭಾರತೀಯ ಗುಪ್ತಚರ ಮತ್ತು ಕಾನೂನು ಜಾರಿ ಸಂಸ್ಥೆಗಳು ಹೆಚ್ಚಿನ ಜಾಗರೂಕತೆಯಲ್ಲಿದೆ.

ವಿನಾಯಕ ಕನ್ವೆನ್ಷನ್ ಹಾಲ್ ಉದ್ಘಾಟನೆ....



ಮೈಸೂರಿನ ವಿನಾಯಕನಗರ(ಪಡುವಾರಹಳ್ಳಿ)ದಲ್ಲಿ ನೂತನವಾಗಿ ನಿರ್ಮಿಸಿರುವ 'ವಿನಾಯಕ ಕನ್ವೆನ್ಷನ್ ಹಾಲ್' ಬುಧವಾರ ಉದ್ಘಾಟನೆಗೊಂಡಿತು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಕೆ.ಹರೀಶ್‌ಗೌಡ, ಮಾಜಿ ಶಾಸಕ ಎಲ್.ನಾಗೇಂದ್ರ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಬಿಜೆಪಿ ಮುಖಂಡ ಕವೀಶ್‌ಗೌಡ, ಮೈಸೂರು ಮಹಾನಗರ ಪಾಲಿಕೆ ಮಾಜಿ ಸದಸ್ಯೆ ಭಾಗ್ಯ ಮಾದೇಶ್, ಪಡುವಾರಹಳ್ಳಿ(ವಿನಾಯಕನಗರ) ಗ್ರಾಮಾಭ್ಯುದಯ ಟ್ರಸ್ಟ್‌ನ ಅಧ್ಯಕ್ಷ ಮಹದೇವಸ್ವಾಮಿ, ಖಜಾಂಚಿ ಸೋಮಣ್ಣ, ಭೈರಪ್ಪ, ರಾಮಣ್ಣ, ಯೋಗೀಶ್, ಯೋಗಾನಂದ, ಲಾರಿ ಸೋಮು ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಕೋಲ್ಕತ್ತಾ ವೈದ್ಯೆಯ ಹತ್ಯೆ, ಅತ್ಯಾಚಾರ ಸಹಿಸಲು ಅಸಾಧ್ಯ

ಕೋಲ್ಕತ್ತ, ಆ.28– ಕೋಲ್ಕತ್ತಾದಲ್ಲಿ ನಡೆದ ವೈದ್ಯೆಯ ಹತ್ಯೆ, ಅತ್ಯಾಚಾರ ಪ್ರಕರಣವನ್ನು ಸಹಿಸುವುದು ಅಸಾಧ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಪಿಟಿಐ ನೊಂದಿಗೆ ಮಾತನಾಡಿರುವ ರಾಷ್ಟ್ರಪತಿಗಳು, ಪ್ರಕರಣದ ಬಗ್ಗೆ ತಮ್ಮ ದಿಗ್ಭ್ರಮೆಯನ್ನು ವ್ಯಕ್ತಪಡಿಸಿದ್ದಾರೆ. ಇಂತಹ ಪ್ರಕರಣಗಳನ್ನು ಸಹಿಸಲು ಸಾಧ್ಯವಿಲ್ಲ ಎಂದು ಹೇಳಿರುವ ರಾಷ್ಟ್ರಪತಿಗಳು, ಮಹಿಳೆಯರ ವಿರುದ್ಧದ ಇಂತಹ ಘೋರ ಅಪರಾಧಗಳನ್ನು ತಡೆಗಟ್ಟಲು ಸಾಮಾಜಿಕ ಪರಿಷ್ಕರಣೆಯ ತುರ್ತು ಅಗತ್ಯವಿದೆ ಎಂದು ಹೇಳಿದ್ದಾರೆ.



ದ್ರೌಪದಿ ಮುರ್ಮು

ಕೋಲ್ಕತ್ತಾ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಕುರಿತು ಮೊದಲ ಬಾರಿಗೆ ಸಾರ್ವಜನಿಕವಾಗಿ ಪ್ರತಿಕ್ರಿಯೆ ನೀಡಿರುವ ರಾಷ್ಟ್ರಪತಿಗಳು, ಕೋಲ್ಕತ್ತಾದಲ್ಲಿ ನಡೆಯುತ್ತಿರುವ ಪ್ರತಿಭಟನೆಗಳಿಗೆ ತನ್ನ ಬೆಂಬಲವನ್ನು ವ್ಯಕ್ತಪಡಿಸಿದರು ಮತ್ತು ತ್ವರಿತ ನ್ಯಾಯಕ್ಕಾಗಿ ಕರೆ ನೀಡಿದರು. ಮಹಿಳೆಯರ ಬಗೆಗಿನ ಸಾಮಾಜಿಕ ಧೋರಣೆಗಳನ್ನು ಬದಲಾಯಿಸುವ ಮತ್ತು ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಅವರ ಸುರಕ್ಷತೆ ಮತ್ತು ಘನತೆಯನ್ನು ಖಾತ್ರಿಪಡಿಸುವ ಪ್ರಾಮುಖ್ಯತೆಯನ್ನು ಅವರು ಪುನರುಚ್ಚರಿಸಿದರು.

ಇತ್ತೀಚಿನ ಅಪರಾಧಕ್ಕೆ ಪ್ರತಿಕ್ರಿಯೆಯಾಗಿ ವಿದ್ಯಾರ್ಥಿಗಳು, ವೈದ್ಯರು ಮತ್ತು ನಾಗರಿಕರು ಕೋಲ್ಕತ್ತಾದಲ್ಲಿ ಪ್ರತಿಭಟನೆ ನಡೆಸುತ್ತಿದ್ದರೆ, ಅಪರಾಧಿಗಳು ಬೇರೆಡೆ ಮುಕ್ತವಾಗಿ ತಿರುಗಾಡುವುದನ್ನು ಮುಂದುವರೆಸಿದ್ದಾರೆ ಎಂದು ರಾಷ್ಟ್ರಪತಿ ಮುರ್ಮು ಸಂದರ್ಶನದಲ್ಲಿ ಬೇಸರ ವ್ಯಕ್ತಪಡಿಸಿದ್ದಾರೆ.

ಯಾವುದೇ ಸುಸಂಸ್ಕೃತ ಸಮಾಜ ಹೆಣ್ಣುಮಕ್ಕಳು ಮತ್ತು ಸಹೋದರಿಯರನ್ನು ಇಂತಹ ದೌರ್ಜನ್ಯಕ್ಕೆ ಒಳಪಡಲು ಬಿಡುವುದಿಲ್ಲ ಎಂದು ಅವರು ಒತ್ತಿ ಹೇಳಿದರು.

ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲ ಡಾ.ಬಿ.ಸದಾಶಿವೇಗೌಡರಿಗೆ ರಾಷ್ಟ್ರೀಯ ಪ್ರಶಸ್ತಿ

ಮೈಸೂರು,ಆ.28(ಪಿಎಂ)– ವಿಟಿಯು ಡೀನ್ ಫ್ಯಾಕಲ್ಟಿ ಮತ್ತು ವಿದ್ಯಾವರ್ಧಕ ಕಾಲೇಜ್ ಆಫ್ ಇಂಜಿನಿಯರಿಂಗ್ ಪ್ರಾಂಶುಪಾಲ ಡಾ.ಬಿ.ಸದಾಶಿವೇಗೌಡ ಅವರಿಗೆ ಇಂಡಿಯನ್ ಸೊಸೈಟಿ ಫಾರ್ ಟೆಕ್ನಿಕಲ್ ಎಜುಕೇಷನ್ (ಐಎಸ್‌ಟಿಇ) ವತಿಯಿಂದ ಭಾರತೀಯ ವಿದ್ಯಾಭವನದ ಅತ್ಯುತ್ತಮ ಎಂಜಿನಿಯರಿಂಗ್ ಕಾಲೇಜು ಪ್ರಾಂಶುಪಾಲರ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಇತ್ತೀಚೆಗೆ ಕಲ್ಬುರ್ಗಿಯಲ್ಲಿ ನಡೆದ 52ನೇ ಐಎಸ್‌ಟಿಇ ರಾಷ್ಟ್ರೀಯ ವಾರ್ಷಿಕ ಸಮಾವೇಶದಲ್ಲಿ ದೇಶದ ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಡಾ.ಬಿ.ಸದಾಶಿವೇಗೌಡ ಅವರ ಅತ್ಯುತ್ತಮ ಸೇವೆ ಗುರುತಿಸಿ ಸದರಿ ಪ್ರಶಸ್ತಿ ನೀಡಲಾಯಿತು. ಅವರಿಗೆ ವಿಟಿಯು ಉಪಕುಲಪತಿ ಡಾ.ಎಸ್.ವಿದ್ಯಾಶಂಕರ್



ಡಾ.ಬಿ.ಸದಾಶಿವೇಗೌಡ

ಪ್ರಶಸ್ತಿ ಪ್ರದಾನ ಮಾಡಿದರು. ಸಾಂಸ್ಥಿಕ ಅಭಿವೃದ್ಧಿ ಮತ್ತು ನಿರ್ವಹಣೆಯಲ್ಲಿ ಅತ್ಯುತ್ತಮ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ಮತ್ತು ಎಲ್ಲಾ ಕಾರ್ಯಕ್ರಮಗಳಲ್ಲಿ ಗುಣಮಟ್ಟ ಮತ್ತು ಬದ್ಧತೆ ಹೆಚ್ಚಿಸಲು ಎಂಜಿನಿಯರಿಂಗ್ ಕಾಲೇಜುಗಳ ಮುಖ್ಯಸ್ಥರನ್ನು ಪ್ರೋತ್ಸಾಹಿಸುವುದು ಸದರಿ ಪ್ರಶಸ್ತಿಯ ಮುಖ್ಯ ಉದ್ದೇಶವಾಗಿದೆ.

ಡಾ.ಬಿ.ಸದಾಶಿವೇಗೌಡ ಅವರು 2007ರ ಜೂನ್‌ನಲ್ಲಿ ವಿದ್ಯಾವರ್ಧಕ ಕಾಲೇಜ್ ಆಫ್ ಇಂಜಿನಿಯರಿಂಗ್‌ನಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್ ಪ್ರಾಧ್ಯಾಪಕರಾಗಿ ಸೇವೆಗೆ ಸೇರಿದರು. ನಂತರ ಅವರು ಮೆಕ್ಯಾನಿಕಲ್ ಇಂಜಿನಿಯರಿಂಗ್ ಮುಖ್ಯಸ್ಥರಾದರು. 2008ರಲ್ಲಿ ಉಪ ಪ್ರಾಂಶುಪಾಲರಾಗಿ, 2010ರ ಮೇನಲ್ಲಿ ಪ್ರಾಂಶುಪಾಲರಾಗಿ ಬಡ್ತಿ ಪಡೆದರು. 2013ರಿಂದ 2016ರವರೆಗೆ ವಿಟಿಯು ಶೈಕ್ಷಣಿಕ ಸೆನೆಟ್ ಸದಸ್ಯರಾಗಿ ಸೇವೆ ಸಲ್ಲಿಸಿದರು. ಇಂಜಿನಿಯರ್ಸ್ ಸಂಸ್ಥೆಯ ಫೆಲೋ ಹಾಗೂ ಐಎಸ್‌ಹೆಚ್‌ಆರ್‌ಎಇ ಕಾರ್ಯನಿರ್ವಾಹಕ ಸದಸ್ಯರಾಗಿದ್ದು (ಮೈಸೂರು ಘಟಕ), ಐಎಸ್‌ಟಿಇ ಆಜೀವ ಸದಸ್ಯರೂ ಆಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ರಸ್ತೆ ಅಪಘಾತಗಳಿಗೆ ಪ್ರಮುಖ ಕಾರಣ ಎಂಜಿನಿಯರ್‌ಗಳೇ ಹೊರತು ಚಾಲಕರಲ್ಲ

ನವದೆಹಲಿ, ಆ.28– ಯುದ್ಧ, ಭಯೋತ್ಪಾದನೆ ಮತ್ತು ನಕ್ಸಲೀಯರ ವಿಧ್ವಂಸಕ ಕೃತ್ಯದಿಂದ ಸಂಭವಿಸುವ ಸಾವುಗಳಿಗಿಂತಲೂ ದೇಶದಲ್ಲಿ ರಸ್ತೆ ಅಪಘಾತಗಳಲ್ಲಿ ಮೃತಪಡುವವರ ಸಂಖ್ಯೆ ಹೆಚ್ಚಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿಗಳ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಎಫ್‌ಐಸಿಸಿಐನಿಂದ ಬುಧವಾರ ಹಮ್ಮಿಕೊಂಡಿದ್ದ 6ನೇ ವರ್ಷದ ರಸ್ತೆ ಸುರಕ್ಷತೆ ಪ್ರಶಸ್ತಿ ಪ್ರದಾನ ಮತ್ತು ಸಮಾವೇಶದಲ್ಲಿ ಅವರು ಮಾತನಾಡಿದರು. ಹೆದ್ದಾರಿ ಅಭಿವೃದ್ಧಿಗೆ ಸಂಬಂಧಿಸಿದಂತೆ ಅವೈಜ್ಞಾನಿಕವಾಗಿ ಸಿದ್ಧಪಡಿಸುವ ವಿಸ್ತೃತ ಯೋಜನಾ ವರದಿಗಳಿಂದ ಹೆದ್ದಾರಿ ಗಳಲ್ಲಿ ಬ್ಲಾಕ್ ಸ್ಪಾಟ್ (ಅಪಘಾತ ವಲಯ) ಸಂಖ್ಯೆ ಹೆಚ್ಚುತ್ತಿದೆ. ಇದರಿಂದ ಅಪಘಾತಗಳ ಸಂಖ್ಯೆಯೂ ಏರಿಕೆಯಾಗುತ್ತಿದೆ ಎಂದರು. ದೇಶದಲ್ಲಿ ವಾರ್ಷಿಕವಾಗಿ 5 ಲಕ್ಷ ರಸ್ತೆ ಅಪಘಾತಗಳು ಸಂಭವಿಸುತ್ತಿದ್ದು, 1.5 ಲಕ್ಷ ಜನರು ಮೃತಪಡುತ್ತಿದ್ದಾರೆ. 3 ಲಕ್ಷ ಜನರು ಗಾಯಗೊಳ್ಳುತ್ತಿದ್ದಾರೆ. ಇದರಿಂದ ದೇಶದ ಜಿಡಿಪಿಗೆ ಶೇ. 3ರಷ್ಟು ನಷ್ಟವಾಗುತ್ತಿದೆ ಎಂದು ಹೇಳಿದರು.



ನಿತಿನ್ ಗಡ್ಕರಿ

ಪ್ರತಿ ರಸ್ತೆ ಅಪಘಾತಕ್ಕೂ ಚಾಲಕರನ್ನು ಹರಕೆಯ ಕುರಿ ಮಾಡುತ್ತೇವೆ. ಈ ಬಗ್ಗೆ ನಾನು ಸೂಕ್ಷ್ಮವಾಗಿ ಗಮನಿಸಿದ್ದು, ರಸ್ತೆ ಎಂಜಿನಿಯರ್‌ಗಳ ತಪ್ಪು ಎದ್ದು ಕಾಣುತ್ತದೆ ಎಂದು ಹೇಳಿದರು. ಸುರಕ್ಷತೆಗೆ ಸಂಬಂಧಿಸಿದಂತೆ ಎಲ್ಲಾ ಹೆದ್ದಾರಿಗಳ ಬಗ್ಗೆ ಪರಿಶೀಲನೆ ನಡೆಸುವ ಅಗತ್ಯವಿದೆ. ರಸ್ತೆ ಸಂಚಾರ ನಿಯಮ ಪಾಲಿಸುವ ಮೂಲಕ ಅಪಘಾತಗಳ ಸಂಖ್ಯೆಯನ್ನು ಕಡಿಮೆ ಮಾಡಬೇಕಿದೆ ಎಂದು ಸಲಹೆ ನೀಡಿದರು.

ವಿಶ್ವ ಕೌಶಲ ಸ್ಪರ್ಧೆ: ಭಾರತೀಯ ತಂಡಕ್ಕೆ ರಾಜ್ಯದ 9 ವಿದ್ಯಾರ್ಥಿಗಳು ಆಯ್ಕೆ

ಬೆಂಗಳೂರು, ಆ.28– ಫ್ರಾನ್ಸ್‌ನ ಲಿಯಾನ್‌ನಲ್ಲಿ ನಡೆಯುತ್ತಿರುವ 47ನೇ ವಿಶ್ವ ಕೌಶಲ್ಯ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸಲು ಕರ್ನಾಟಕ ಕೌಶಲ ಅಭಿವೃದ್ಧಿ ನಿಗಮ(ಕೆಎಸ್‌ಡಿಸಿ) ರಾಜ್ಯದ ಒಂಬತ್ತು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿದೆ ಎಂದು ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ಈ ವಿದ್ಯಾರ್ಥಿಗಳು ಫ್ರಾನ್ಸ್‌ಗೆ ಪ್ರಯಾಣ ಬೆಳೆಸುವ ಮೊದಲು ವೈದ್ಯಕೀಯ ಶಿಕ್ಷಣ ಮತ್ತು ಕೌಶಲಾಭಿವೃದ್ಧಿ ಸಚಿವ ಶರಣ ಪ್ರಕಾಶ್ ಪಾಟೀಲ್ ಅವರನ್ನು ಭೇಟಿಯಾದರು. ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಕೌಶಲವನ್ನು ಪ್ರದರ್ಶಿಸಿ ಪದಕಗಳನ್ನು ಗೆಲ್ಲುವ ಮೂಲಕ ರಾಜ್ಯ ಮತ್ತು ರಾಷ್ಟ್ರಕ್ಕೆ ಕೀರ್ತಿ ತರುವಂತೆ ಶರಣ ಪ್ರಕಾಶ್ ಪಾಟೀಲ್ ಅವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

ಆಯ್ಕೆಯಾದ ವಿದ್ಯಾರ್ಥಿಗಳು ಪ್ರಸ್ತುತ ಕರ್ನಾಟಕದ ವಿವಿಧ ಪ್ರದೇಶಗಳಲ್ಲಿ ಐಟಿಐ, ಡಿಪ್ಲೊಮಾ ಮತ್ತು ಎಂಜಿನಿಯರಿಂಗ್ ಕೋರ್ಸ್‌ಗಳನ್ನು ಮಾಡುತ್ತಿದ್ದಾರೆ ಎಂದು ಸಚಿವರ ಕಚೇರಿಯ ಪ್ರಕಟಣೆ ತಿಳಿಸಿದೆ.

ರಾಷ್ಟ್ರೀಯ ಕೌಶಲ ಅಭಿವೃದ್ಧಿ ನಿಗಮವು(NSDC) ವಿಶ್ವ ಕೌಶಲ ಸ್ಪರ್ಧೆಯಲ್ಲಿ ಭಾರತವನ್ನು ಪ್ರತಿನಿಧಿಸುವ ಅಭ್ಯರ್ಥಿಗಳನ್ನು ಭಾರತ ಕೌಶಲ ಸ್ಪರ್ಧೆಯನ್ನು ಆಯೋಜಿಸುತ್ತದೆ. ಅದರಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ವಿಶ್ವ ಕೌಶಲ ಸ್ಪರ್ಧೆಯಲ್ಲಿ ಭಾಗವಹಿಸುತ್ತಾರೆ. ಕಳೆದ ಮೇ 15ರಿಂದ 19ರವರೆಗೆ ದೆಹಲಿಯಲ್ಲಿ ನಡೆದ ಭಾರತ ಕೌಶಲ್ಯ ಸ್ಪರ್ಧೆಯಲ್ಲಿ ಕರ್ನಾಟಕ ಎರಡನೇ ಸ್ಥಾನವನ್ನು ಪಡೆದುಕೊಂಡಿದೆ ಎಂದು ಪ್ರಕಟಣೆ ತಿಳಿಸಿದೆ. ಫ್ರಾನ್ಸ್‌ನ ಲಿಯಾನ್‌ನಲ್ಲಿ ಸೆಪ್ಟೆಂಬರ್ 10 ರಿಂದ 15ರವರೆಗೆ ನಡೆಯಲಿರುವ ವಿಶ್ವ ಕೌಶಲ ಸ್ಪರ್ಧೆಯಲ್ಲಿ 22 ವರ್ಷಕ್ಕಿಂತ ಕಡಿಮೆ ವಯಸ್ಸಿನ 1,000ಕ್ಕೂ ಹೆಚ್ಚು ವಿದ್ಯಾರ್ಥಿಗಳು 61ಕ್ಕೂ ಹೆಚ್ಚು ಕೌಶಲ ವಿಭಾಗಗಳಲ್ಲಿ ಸ್ಪರ್ಧಿಸುತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

ಸಿಎ ನಿವೇಶನ ಹಂಚಿಕೆಯಲ್ಲಿಯೂ ಅಕ್ರಮ

ಬೆಂಗಳೂರು, ಆ.28– ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಲೋಕಸಭಾ ಚುನಾವಣೆಗೂ ಮುನ್ನ 12 ಜಿಲ್ಲೆಗಳ ಕೈಗಾರಿಕಾ ಪ್ರದೇಶಗಳಲ್ಲಿ ಸಿ.ಎ (ನಾಗರೀಕ ಸೌಲಭ್ಯ) ನಿವೇಶನಗಳನ್ನು ಹಂಚಿಕೆ ಮಾಡಿದ್ದು, ಇದರಲ್ಲಿ ವ್ಯಾಪಕ ಅಕ್ರಮ ನಡೆದಿದೆ ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಈ ಅಕ್ರಮದಿಂದ ಸರ್ಕಾರಕ್ಕೆ ಸುಮಾರು 1,000 ಕೋಟಿ ನಷ್ಟವಾಗಿದೆ ಎಂದು ಅವರು ಬುಧವಾರ ಸುದ್ದಿಗೋಷ್ಠಿಯಲ್ಲಿ ದೂರಿದರು.

12 ಜಿಲ್ಲೆಗಳಲ್ಲಿ ಒಟ್ಟು 193 ಸಿಎ ನಿವೇಶನಗಳಿದ್ದವು. ಇವುಗಳ ಒಟ್ಟು ವಿಸ್ತೀರ್ಣ 377.69 ಎಕರೆ. ಇದಕ್ಕಾಗಿ 283 ಅರ್ಜಿಗಳು ಬಂದಿದ್ದವು. 30 ದಿನಗಳ ಕಾಲಾವಕಾಶ ನೀಡಿದ್ದರೆ ಇನ್ನಷ್ಟು ಅರ್ಜಿಗಳು ಬರುತ್ತಿದ್ದವು. ಆದರೆ, ಈ ಸಂಬಂಧ ಅಧಿಸೂಚನೆ ಹೊರಡಿಸಿದ್ದೇ ಜನರ ಗಮನಕ್ಕೆ ಬರಲಿಲ್ಲ. ಎಲ್ಲವನ್ನೂ ಗುಟ್ಟಾಗಿ ಮಾಡಿದ್ದಾರೆ. ಹಿಂದೆಲ್ಲ ಆನ್‌ಲೈನ್ ಮೂಲಕ ಈ ಪ್ರಕ್ರಿಯೆ ನಡೆಯುತ್ತಿತ್ತು. ಈ ಬಾರಿ ಆನ್‌ಲೈನ್ ಬಳಕೆ ಮಾಡಲಿಲ್ಲ. 14 ದಿನಗಳಲ್ಲಿ ಅರ್ಜಿ ಸ್ವೀಕರಿಸಿ, 15ನೇ ದಿನ ಪರಿಶೀಲಿಸಿ, 16ನೇ ದಿನವೇ ಮಂಜೂರಾತಿ ಮಾಡಲಾಗಿದೆ ಎಂದು ಹೇಳಿದರು.

ಸ್ಟಾರ್ ಹೋಟೆಲ್, ಅಪಾರ್ಟ್‌ಮೆಂಟ್‌ಗೂ ಸಿಎ ನಿವೇಶನ: ವಿಜಯಪುರದ ಹಲಗನಿಯ ಈಶ್ವರ ಸಂಗಪ್ಪ ಬದ್ರಿ ಅವರ ತ್ರೀಸ್ಟಾರ್ ಹೋಟೆಲ್‌ಗೆ ಸಿ.ಎ ನಿವೇಶನ ಕೊಡಲಾಗಿದೆ. ಇದು ವಾಣಿಜ್ಯ ಉದ್ದೇಶದ್ದಾಗಿದ್ದು, ನಿವೇಶನ ಹರಾಜು ಮಾಡಬೇಕಿತ್ತು. ವಾಣಿಜ್ಯ ಉದ್ದೇಶದ ಜಮೀನು 2.5 ಎಕರೆಗೆ ದುಪ್ಪಟ್ಟು ದರ ಕನಿಷ್ಠ 12.5 ಕೋಟಿಗೆ ನಿಗದಿ ಮಾಡಬೇಕಿತ್ತು. ಇದರಿಂದ ಸರ್ಕಾರಕ್ಕೆ ಹೆಚ್ಚಿನ ಆದಾಯ ಸಿಗುತ್ತಿತ್ತು ಎಂದು ನಾರಾಯಣಸ್ವಾಮಿ ಹೇಳಿದರು.



ನಾರಾಯಣಸ್ವಾಮಿ

ಬಿಡದಿಯಲ್ಲಿ ಸುನಿತಾ ರಾಜಶೇಖರ್ ಎಂಬುವರಿಗೆ ಅಪಾರ್ಟ್‌ಮೆಂಟ್ ನಿರ್ಮಿಸಲು ಸಿಎ ನಿವೇಶನ ಮಂಜೂರು ಮಾಡಲಾಗಿದೆ. ಅಪಾರ್ಟ್‌ಮೆಂಟ್ ನಿರ್ಮಾಣ ಸಿ.ಎ ಸೌಲಭ್ಯದಡಿ ಬರುವುದೇ ಅಥವಾ ವಾಣಿಜ್ಯ ಉದ್ದೇಶದಡಿ ಬರುತ್ತದೆಯೆ ಎಂಬುದನ್ನು ಸಾರ್ವಜನಿಕರಿಗೆ ಸರ್ಕಾರ ಸ್ಪಷ್ಟಪಡಿಸಬೇಕು. ಹಾರೋಹಳ್ಳಿಯಲ್ಲಿ ಸ್ಕಿಲ್ ಡೆವಲಪ್‌ಮೆಂಟ್ ಸಂಸ್ಥೆಗೆ 2.5 ಎಕರೆ ಕೊಟ್ಟಿದ್ದಾರೆ. ಪರಿಶಿಷ್ಟರ ಅರ್ಜಿದಾರರಿಗೆ ಕೇವಲ ಕಾಲು ಎಕರೆ ಜಾಗ ಕೊಟ್ಟಿರುವ ಉದಾಹರಣೆಯೂ ಇದೆ ಎಂದರು. ವಿಜಯಪುರ ಮತ್ತು ಬಾಗಲಕೋಟೆಯಲ್ಲಿ ಒಬ್ಬರೇ ಅರ್ಜಿದಾರರಿಗೆ ಮೂರು ಸಿ.ಎ ನಿವೇಶನಗಳನ್ನು ನೀಡಲಾಗಿದೆ. ಇವರು ಪ್ರಭಾವಿ ಆಗಿರುವುದರಿಂದಲೇ ಮೂರು ನಿವೇಶನಗಳನ್ನು ವಿತರಿಸಲಾಗಿದೆ ಎಂದು ಆರೋಪಿಸಿದರು.

ಕೈಗಾರಿಕಾ ಪ್ರದೇಶದ ಸಿ.ಎ ನಿವೇಶನಗಳಿಗಾಗಿ ಪರಿಶಿಷ್ಟ ಜಾತಿಗೆ ಸೇರಿದ 72 ಮಂದಿ 2–3 ವರ್ಷಗಳ ಹಿಂದೆಯೇ ಅರ್ಜಿ ಸಲ್ಲಿಸಿದ್ದರು. ಕೆಐಎಡಿಬಿ ಅವರಿಂದ ಲಕ್ಷಾಂತರ ರೂಪಾಯಿ ವಸೂಲಿ ಮಾಡಿದೆ. ಆದರೆ, ಖರ್ಗೆ ಕುಟುಂಬಕ್ಕೆ ನಿಯಮಗಳನ್ನು ಬದಿಗೊತ್ತಿ ಕೆಲವೇ ದಿನಗಳಲ್ಲಿ ನಿವೇಶನ ಹಂಚಿಕೆ ಮಾಡಿದೆ. ಉಳಿದ ದಲಿತ ಅರ್ಜಿದಾರರಿಗೆ ಇನ್ನೂ ಜಮೀನು ನೀಡಿಲ್ಲ ಎಂದು ದೂರಿದರು.

ಕೌಶಲ ಅಭಿವೃದ್ಧಿ ಕೇಂದ್ರ ಮಾಡಿ ಯುವಕರಿಗೆ ಉದ್ಯೋಗ ನೀಡುವುದು ತಪ್ಪಾ ಎಂದು ಸಚಿವ ಪ್ರಿಯಾಂಕ ಖರ್ಗೆ ಕೇಳಿದ್ದಾರೆ. ಆದರೆ, ಅವರದೇ ಟ್ರಸ್ಟ್ ಕಲಬುರಗಿಯಲ್ಲಿ 19 ಎಕರೆ ಬಳಸಿಕೊಂಡು ವಿಶ್ವವಿದ್ಯಾಲಯದ ಜಾಗದಲ್ಲಿ ತರಬೇತಿ ಕೇಂದ್ರ ತೆರೆದಿದೆ. ಅಲ್ಲಿ ಒಂದು ಕಟ್ಟಡವೂ ನಿರ್ಮಾಣವಾಗಿದೆ. ಆದರೆ, ಟ್ರಸ್ಟ್‌ನವರು ಎಷ್ಟು ಯುವಕರಿಗೆ ತರಬೇತಿ ನೀಡಿದ್ದಾರೆ ಎಂಬುದು ಬಹಿರಂಗಪಡಿಸಬೇಕು. ನನಗಿರುವ ಮಾಹಿತಿ ಪ್ರಕಾರ ಅಲ್ಲಿ ಒಬ್ಬರಿಗೂ ಪ್ರವೇಶ ನೀಡಿಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಆರೋಪಿಸಿದರು.